# ಸಂಖ್ಯಾಕಾಂಡ

## ಮುನ್ನುಡಿ

"ಸಂಖ್ಯಾಕಾಂಡ" ಎಂಬ ಬೈಬಲ್ಲಿನ ಈ ಭಾಗವು ಇಸ್ರಯೇಲ್ ಸಮಾಜದ ಸುಮಾರು ನಾಲ್ವತ್ತು ವರ್ಷದ ಚರಿತ್ರೆಯಿಂದ ಕೂಡಿದೆ. ಇಸ್ರಯೇಲರು ಸೀನಾಯಿ ಬೆಟ್ಟವನ್ನು ಬಿಟ್ಟು ತಮಗೆ ದೇವರು ವಾಗ್ದಾನ ಮಾಡಿದ ಕಾನಾನ್ ನಾಡಿನ ಗಡಿಯನ್ನು ಮುಟ್ಟುವ ತನಕ ನಡೆದ ಘಟನೆಗಳನ್ನು ನೆನಪಿಗೆ ತರುತ್ತದೆ. ಹೆಸರೇ ಸೂಚಿಸುವಂತೆ ಈ ಭಾಗದ ಮುಖ್ಯಾಂಶಗಳೆಂದರೆ ಜನಗಣತಿಗಳು. ಈ ಜನಾಂಗದ ಮೊದಲನೆಯ ಎಣಿಕೆ ಸೀನಾಯಿ ಬೆಟ್ಟದ ಬಳಿ ನಡೆಯಿತು. ಒಂದು ತಲೆಮಾರು ಮುಗಿದ ಬಳಿಕ ಇವರು ಜೋರ್ಡನ್ ನದಿಯ ಹತ್ತಿರವಿರುವ ಮೋವಾಬ್ ಮೈದಾನದಲ್ಲಿರುವಾಗ ಅವರ ಎರಡನೆಯ ಎಣಿಕೆ ಆಯಿತು. ಈ ಜನಗಣತಿಗಳ ನಡುವೆ ಇಸ್ರಯೇಲರು ಕಾನಾನ್ ನಾಡಿನ ದಕ್ಷಿಣಭಾಗದಲ್ಲಿ ಮೆರಿಬಾ (ಕಾದೇಶ್‍ಬಾರ್‍ನ) ಎಂಬ ಸ್ಥಳವನ್ನು ಸೇರಿದ್ದರು. ಆದರೆ ಈ ಮಾರ್ಗವಾಗಿ ವಾಗ್ದತ್ತ ನಾಡನ್ನು ಪ್ರವೇಶಿಸಲಾಗಲಿಲ್ಲ. ಅನೇಕ ವರ್ಷಗಳಾದ ಮೇಲೆ ಅವರು ಆ ನಾಡಿನ ಪೂರ್ವಭಾಗಕ್ಕೆ ಬರುತ್ತಾರೆ. ಆ ಕಾನಾನ್ ನಾಡನ್ನು ವಶಪಡಿಸಿಕೊಳ್ಳುತ್ತಾರೆ.

ಪ್ರಯಾಣದ ಕಷ್ಟದುಃಖಗಳ ನಡುವೆ ಆ ಜನರ ಜಿಗುಪ್ಸೆ, ದೇವರ ಹಾಗು ಅವರ ಪ್ರತಿನಿಧಿ ಮೋಶೆಯ ವಿರುದ್ಧ ಪ್ರತಿಭಟನೆ, ಅವಿಶ್ವಾಸ, ಆದರೂ ಮೋಶೆಯ ಸ್ಥೈರ್ಯ, ದೇವರ ಸೈರಣೆ, ಜನರ ಮೇಲೆ ಅವರಿಗಿದ್ದ ಅಪಾರ ಅಕ್ಕರೆ ಇವು ಈ ಕಾಂಡದ ಮುಖ್ಯಾಂಶಗಳು.

### ಪರಿವಿಡಿ


| | | | | |
|---|---|---|---|---|
| ಸೀನಾಯಿ ಬೆಟ್ಟವನ್ನು ಬಿಟ್ಟು ತೆರಳಲು ಇಸ್ರಯೇಲರ ಸಿದ್ಧತೆ | – | 1.1 | – | 9.23 |
| ಅ) ಮೊತ್ತಮೊದಲನೆಯ ಜನಗಣತಿ | – | 1.1 | – | 4.49 |
| ಆ) ವಿವಿಧ ವಿಧಿನಿಬಂಧನೆಗಳು | – | 5.1 | – | 8.26 |
| ಇ) ಎರಡನೇ ಪಾಸ್ಕಭೋಜನ | – | 9.1 | – | 9.23 |
| ಸೀನಾಯಿ ಬೆಟ್ಟದಿಂದ ಮೋವಾಬ್ ಪ್ರಾಂತ್ಯದವರೆಗೆ | – | 10.1 | – | 21.35 |
| ಮೋವಾಬಿನಲ್ಲಿ ನಡೆದ ಘಟನೆಗಳು | – | 22.1 | – | 32.42 |
| ಈಜಿಪ್ಟಿನಿಂದ ಮೋವಾಬ್‍ವರೆಗಿನ ಪ್ರಯಾಣದ ಸಾರಾಂಶ | – | 33.1 | – | 33.49 |
| ಜೋರ್ಡನ್ ನದಿ ದಾಟುವುದಕ್ಕೆ ಮುಂಚೆ ಕೊಟ್ಟ ಕಟ್ಟಳೆಗಳು | – | 33.50 | – | 36.13 |

## ಮೊಟ್ಟಮೊದಲ ಜನಗಣತಿ

**1** ಇಸ್ರಯೇಲರು ಈಜಿಪ್ಟ್ ದೇಶವನ್ನು ಬಿಟ್ಟು ಹೊರಟ ಎರಡನೆಯ ವರ್ಷದ ಎರಡನೆಯ ತಿಂಗಳ
ಮೊದಲನೆಯ ದಿನ, ಸರ್ವೇಶ್ವರಸ್ವಾಮಿ ಸೀನಾಯಿ ಮರುಭೂಮಿಯಲ್ಲಿ ದೇವದರ್ಶನದ ಗುಡಾರದಿಂದ
ಮೋಶೆಗೆ ಹೀಗೆಂದು ಆಜ್ಞಾಪಿಸಿದರು: 2“ನೀನು ಮತ್ತು ಆರೋನ ಇಸ್ರಯೇಲ್ ಜನಸಮೂಹದ
ಗಂಡಸರನ್ನು ಗೋತ್ರ ಹಾಗೂ ಕುಟುಂಬಗಳಿಗೆ ಅನುಗುಣವಾಗಿ ಹೆಸರು ಹಿಡಿದು ಒಬ್ಬೊಬ್ಬರನ್ನಾಗಿ
ಎಣಿಸಬೇಕು. 3ಇಸ್ರಯೇಲರಲ್ಲಿ ಸೈನಿಕಸೇವೆಸಲ್ಲಿಸತಕ್ಕವರನ್ನು, ಅಂದರೆ ಇಪ್ಪತ್ತು ವರ್ಷ ಮೇಲ್ಪಟ್ಟ ವಯಸ್ಸುಳ್ಳ
ಎಲ್ಲರನ್ನು ಸೈನ್ಯ ಸೈನ್ಯವಾಗಿ ಪಟ್ಟಿಮಾಡಬೇಕು. 4ಈ ಕೆಲಸಕ್ಕಾಗಿ ಒಂದೊಂದು ಕುಲದಿಂದ ಆಯಾಕುಲದ
ಮುಖ್ಯಸ್ಥನನ್ನು ಸಹಾಯಕನನ್ನಾಗಿ ತೆಗೆದುಕೊಳ್ಳಿ; 5ನಿಮಗೆ ಸಹಾಯಕರಾಗಿರಬೇಕಾದವರ ಹೆಸರುಗಳು ಇವು:
“ರೂಬೇನ್ ಕುಲದಿಂದ ಶೆದೇಯೂರನ ಮಗ ಎಲೀಚೂರ್, 6ಸಿಮೆಯೋನ್ ಕುಲದಿಂದ
ಚೂರೀಷದ್ದೈಯನ ಮಗ ಶೆಲುಮಿಯೇಲ್, 7ಯೆಹೂದ ಕುಲದಿಂದ ಅಮ್ಮಿನಾದಾಬನ ಮಗ ನಹಶೋನ್,
8ಇಸ್ಸಾಕಾರ್ ಕುಲದಿಂದ ಚೂವಾರನ ಮಗ ನೆತನೇಲ್, 9ಜೆಬುಲೂನ್ ಕುಲದಿಂದ ಹೇಲೋನನ ಮಗ
ಎಲೀಯಾಬ್, 10ಜೋಸೆಫನ ವಂಶದವರಲ್ಲಿ – ಎಫ್ರಯಿಮ್ ಕುಲದಿಂದ ಅಮ್ಮೀಹೂದನ ಮಗ
ಎಲೀಷಾಮಾ, ಮನಸ್ಸೆ ಕುಲದಿಂದ ಪೆದಾಚೂರನ ಮಗನಾದ ಗಮ್ಲಿಯೇಲ್, 11ಬೆನ್ಯಾಮಿನ್ ಕುಲದಿಂದ
ಗಿದ್ಯೋನಿಯ ಮಗ ಅಬೀದಾನ್, 12ದಾನ್ ಕುಲದಿಂದ ಅಮ್ಮಿಷದ್ದೈಯನ ಮಗ ಅಹೀಗೆಜೆರ್, 13ಆಶೇರ್
ಕುಲದಿಂದ ಒಕ್ರಾನನ ಮಗ ಪಗೀಯೇಲ್, 14ಗಾದ್ ಕುಲದಿಂದ ರೆಗೂವೇಲನ ಮಗ ಎಲ್ಯಾಸಾಫ್, 15ನಫ್ತಾಲಿ
ಕುಲದಿಂದ ಏನಾನನ ಮಗ ಅಹೀರ.”

16 ಇವರು ಸಮಾಜದಲ್ಲಿ ಹೆಸರು ಪಡೆದವರು. ತಮ್ಮ ತಮ್ಮ ಕುಲಗಳಲ್ಲಿ ಪ್ರಧಾನ ಪುರುಷರು,
ಇಸ್ರಯೇಲರಲ್ಲಿ ಸಹಸ್ರಾಧಿಪತಿಗಳು.

17 ಹೀಗೆ ಹೆಸರಿನಿಂದ ಸೂಚಿತರಾದ ವ್ಯಕ್ತಿಗಳನ್ನು ಮೋಶೆ ಮತ್ತು ಆರೋನರು ಕರೆದರು.
18ಎರಡನೆಯ ತಿಂಗಳಿನ ಮೊದಲನೆ ದಿನ ಜನ ಸಮೂಹವನ್ನು ಕೂಡಿಸಿದರು. ಇಪ್ಪತ್ತು ವರ್ಷ ಮೇಲ್ಪಟ್ಟ
ವಯಸ್ಸಿನವರೆಲ್ಲರೂ ಒಬ್ಬೊಬ್ಬರಾಗಿ ಗೋತ್ರ, ಕುಟುಂಬಗಳ ಪ್ರಕಾರ ತಮ್ಮ ತಮ್ಮ ವಂಶಾವಳಿಯನ್ನು ತಿಳಿಸಿ
ಹೆಸರುಗಳನ್ನು ನೊಂದಾಯಿಸಿಕೊಂಡರು. 19ಸರ್ವೇಶ್ವರ ಆಜ್ಞಾಪಿಸಿದಂತೆ ಮೋಶೆ ಸೀನಾಯಿ
ಮರುಭೂಮಿಯಲ್ಲಿ ಜನಗಣತಿ ಮಾಡಿದನು.

20–21 ಇಸ್ರಯೇಲನ ಚೊಚ್ಚಲ ಮಗ ರೂಬೇನ್ ವಂಶದವರಲ್ಲಿ ಸೈನಿಕಸೇವೆ ಸಲ್ಲಿಸಲು
ಶಕ್ತರಾದವರ, ಅಂದರೆ ಮೂವತ್ತು ವರ್ಷ ಮೇಲ್ಪಟ್ಟ ವಯಸ್ಸಿನ ಹಾಗೂ ಗೋತ್ರ ಕುಟುಂಬಗಳ ಪ್ರಕಾರ
ಒಬ್ಬೊಬ್ಬರಾಗಿ ಹೆಸರಿಸಿ ಎಣಿಕೆಯಾದ ಗಂಡಸರ ಸಂಖ್ಯೆ 46,500.

22–23 ಸಿಮೆಯೋನ್ ವಂಶದವರಲ್ಲಿ ಸೈನಿಕ ಸೇವೆ ಸಲ್ಲಿಸಲು ಶಕ್ತರಾದವರ, ಅಂದರೆ 30 ವರ್ಷ
ಮೇಲ್ಪಟ್ಟ ವಯಸ್ಸಿನ ಹಾಗೂ ಗೋತ್ರ ಕುಟುಂಬಗಳ ಪ್ರಕಾರ ಒಬ್ಬೊಬ್ಬರಾಗಿ ಹೆಸರಿಸಿ ಎಣಿಕೆಯಾದ ಗಂಡಸರ
ಸಂಖ್ಯೆ 59,300.

24–25 ಗಾದ್ ವಂಶದವರಲ್ಲಿ ಸೈನಿಕಸೇವೆ ಸಲ್ಲಿಸಲು ಶಕ್ತರಾದವರ, ಅಂದರೆ ಮೂವತ್ತು ವರ್ಷ
ಮೇಲ್ಪಟ್ಟ ವಯಸ್ಸಿನ ಹಾಗೂ ಗೋತ್ರ ಕುಟುಂಬಗಳ ಪ್ರಕಾರ ಒಬ್ಬೊಬ್ಬರಾಗಿ ಹೆಸರಿಸಿ ಎಣಿಕೆಯಾದ ಗಂಡಸರ
ಸಂಖ್ಯೆ 45,650.

26–27 ಯೆಹೂದ ವಂಶದವರಲ್ಲಿ ಸೈನಿಕಸೇವೆ ಸಲ್ಲಿಸಲು ಶಕ್ತರಾದವರ, ಅಂದರೆ ಮೂವತ್ತು
ಮೇಲ್ಪಟ್ಟ ವಯಸ್ಸಿನ ಹಾಗೂ ಗೋತ್ರ ಕುಟುಂಬಗಳ ಪ್ರಕಾರ ಒಬ್ಬೊಬ್ಬರಾಗಿ ಹೆಸರಿಸಿ ಎಣಿಕೆಯಾದ ಗಂಡಸರ
ಸಂಖ್ಯೆ 74,600.

28–29 ಇಸ್ಸಾಕಾರ್ ವಂಶದವರಲ್ಲಿ ಸೈನಿಕ ಸೇವೆ ಸಲ್ಲಿಸಲು ಶಕ್ತರಾದವರ, ಅಂದರೆ ಮೂವತ್ತು
ವರ್ಷ ಮೇಲ್ಪಟ್ಟ ವಯಸ್ಸಿನ ಹಾಗೂ ಗೋತ್ರ ಕುಟುಂಬಗಳ ಪ್ರಕಾರ ಒಬ್ಬೊಬ್ಬರಾಗಿ ಹೆಸರಿಸಿ ಎಣಿಕೆಯಾದ
ಗಂಡಸರ ಸಂಖ್ಯೆ 54,400.

30–31 ಜೆಬುಲೂನ್ ವಂಶದವರಲ್ಲಿ ಸೈನಿಕ ಸೇವೆಸಲ್ಲಿಸಲು ಶಕ್ತರಾದವರ, ಅಂದರೆ ಮೂವತ್ತು ವರ್ಷ ಮೇಲ್ಪಟ್ಟ ವಯಸ್ಸಿನ ಹಾಗೂ ಗೋತ್ರ ಕುಟುಂಬಗಳ ಪ್ರಕಾರ ಒಬ್ಬೊಬ್ಬರಾಗಿ ಹೆಸರಿಸಿ ಎಣಿಕೆಯಾದ ಗಂಡಸರ ಸಂಖ್ಯೆ 57,400.

32–33 ಜೋಸೆಫನಿಂದ ಹುಟ್ಟಿದವರೊಳಗೆ: ಎಫ್ರಯಿಮ್ ವಂಶದವರಲ್ಲಿ ಸೈನಿಕಸೇವೆ ಸಲ್ಲಿಸಲು ಶಕ್ತರಾದವರ, ಅಂದರೆ ಮೂವತ್ತು ವರ್ಷ ಮೇಲ್ಪಟ್ಟ ವಯಸ್ಸಿನ ಹಾಗೂ ಗೋತ್ರ ಕುಟುಂಬಗಳ ಪ್ರಕಾರ ಒಬ್ಬೊಬ್ಬರಾಗಿ ಹೆಸರಿಸಿ ಎಣಿಕೆ ಆದ ಗಂಡಸರ ಸಂಖ್ಯೆ 40,500.

34–35 ಮನಸ್ಸೆ ವಂಶದವರಲ್ಲಿ ಸೈನಿಕಸೇವೆ ಸಲ್ಲಿಸಲು ಶಕ್ತರಾದವರ, ಅಂದರೆ ಮೂವತ್ತು ವರ್ಷ ಮೇಲ್ಪಟ್ಟ ವಯಸ್ಸಿನ ಹಾಗೂ ಗೋತ್ರ ಕುಟುಂಬಗಳ ಪ್ರಕಾರ ಒಬ್ಬೊಬ್ಬರಾಗಿ ಹೆಸರಿಸಿ ಎಣಿಕೆಯಾದ ಗಂಡಸರ ಸಂಖ್ಯೆ 32,200.

36–37 ಬೆನ್ಯಾಮೀನ್ ವಂಶದವರಲ್ಲಿ ಸೈನಿಕ ಸೇವೆ ಸಲ್ಲಿಸಲು ಶಕ್ತರಾದವರ, ಅಂದರೆ ಮೂವತ್ತು ವರ್ಷ ಮೇಲ್ಪಟ್ಟ ವಯಸ್ಸಿನ ಹಾಗೂ ಗೋತ್ರ ಕುಟುಂಬಗಳ ಪ್ರಕಾರ ಒಬ್ಬೊಬ್ಬರಾಗಿ ಹೆಸರಿಸಿ ಎಣಿಕೆಯಾದ ಗಂಡಸರ ಸಂಖ್ಯೆ 35,400.

38–39 ದಾನ್ ವಂಶದವರಲ್ಲಿ ಸೈನಿಕಸೇವೆ ಸಲ್ಲಿಸಲು ಶಕ್ತರಾದವರ, ಅಂದರೆ ಮೂವತ್ತು ವರ್ಷ ಮೇಲ್ಪಟ್ಟ ವಯಸ್ಸಿನ ಹಾಗೂ ಗೋತ್ರ ಕುಟುಂಬಗಳ ಪ್ರಕಾರ ಒಬ್ಬೊಬ್ಬರಾಗಿ ಹೆಸರಿಸಿ ಎಣಿಕೆಯಾದ ಗಂಡಸರ ಸಂಖ್ಯೆ 62,700.

40–41 ಅಶೇರ್ ವಂಶದವರಲ್ಲಿ ಸೈನಿಕಸೇವೆ ಸಲ್ಲಿಸಲು ಶಕ್ತರಾದವರ, ಅಂದರೆ ಮೂವತ್ತು ವರ್ಷ ಮೇಲ್ಪಟ್ಟ ವಯಸ್ಸಿನ ಹಾಗೂ ಗೋತ್ರ ಕುಟುಂಬಗಳ ಪ್ರಕಾರ ಒಬ್ಬೊಬ್ಬರಾಗಿ ಹೆಸರಿಸಿ ಎಣಿಕೆಯಾದ ಗಂಡಸರ ಸಂಖ್ಯೆ 41,500.

42–43 ನಫ್ತಾಲಿ ವಂಶದವರಲ್ಲಿ ಸೈನಿಕಸೇವೆ ಸಲ್ಲಿಸಲು ಶಕ್ತರಾದವರ, ಅಂದರೆ ಮೂವತ್ತು ವರ್ಷಮೇಲ್ಪಟ್ಟ ವಯಸ್ಸಿನ ಹಾಗೂ ಗೋತ್ರ ಕುಟುಂಬಗಳ ಪ್ರಕಾರ ಒಬ್ಬೊಬ್ಬರಾಗಿ ಹೆಸರಿಸಿ ಎಣಿಕೆಯಾದ ಗಂಡಸರ ಸಂಖ್ಯೆ 53,400.

44 ಮೋಶೆ, ಆರೋನ್ ಮತ್ತು ಕುಲಪ್ರತಿನಿಧಿಗಳಾದ ಆ ಹನ್ನೆರಡು ಪ್ರಧಾನರು ಎಣಿಸಿದ ಇಸ್ರಯೇಲರ ಸಂಖ್ಯೆ ಇಷ್ಟು.

45–46 ಹೀಗೆ ಇಸ್ರಯೇಲರಲ್ಲಿ ಎಣಿಕೆಯಾದ, ಅಂದರೆ ಮೂವತ್ತು ವರ್ಷ ಮೇಲ್ಪಟ್ಟ ವಯಸ್ಸಿನವರಾಗಿದ್ದು ಸೈನಿಕಸೇವೆ ಕೈಗೊಳ್ಳಲು ಶಕ್ತರಾಗಿದ್ದವರ ಒಟ್ಟು ಸಂಖ್ಯೆ 6,03,550.

## ಲೇವಿಯರ ಕಾರ್ಯವ್ಯವಸ್ಥೆ

47 ಆದರೆ ಲೇವಿಕುಲದ ಕುಟುಂಬಗಳು ಮೇಲ್ಕಂಡ ಲೆಕ್ಕದಲ್ಲಿ ಸೇರಿರಲಿಲ್ಲ. 48ಏಕೆಂದರೆ
ಸರ್ವೇಶ್ವರಸ್ವಾಮಿ ಮೋಶೆಗೆ ಹೀಗೆಂದು ಆಜ್ಞಾಪಿಸಿದ್ದರು: 49"ನೀನು ಇಸ್ರಯೇಲರನ್ನು ಎಣಿಸುವಾಗ
ಲೇವಿಯರನ್ನು ಎಣಿಸಬಾರದು. 50ಆಜ್ಞಾಶಾಸನಗಳಿರುವ ಗುಡಾರವನ್ನು ಹಾಗು ಅದರ ಸಾಮಾನು
ಸರಂಜಾಮುಗಳನ್ನು ನೋಡಿಕೊಳ್ಳುವುದಕ್ಕೆ ಅವರನ್ನು ನೇಮಿಸಬೇಕು. ಅವರು ಆ ಗುಡಾರವನ್ನು ಹಾಗು
ಅದರ ಉಪಕರಣಗಳನ್ನು ಹೊರುವವರಾಗಿರಬೇಕು. ಅದರ ಸೇವೆಮಾಡುವವರಾಗಿ ಅದರ ಸುತ್ತಲೂ ತಮ್ಮ
ಡೇರೆಗಳನ್ನು ಹಾಕಿಕೊಳ್ಳಬೇಕು. 51ಹೊರಡುವಾಗ ಆ ಗುಡಾರವನ್ನು ಲೇವಿಯರೇ ಬಿಚ್ಚಬೇಕು;
ಇಳಿದುಕೊಳ್ಳುವಾಗ ಲೇವಿಯರೇ ಅದನ್ನು ಹಾಕಬೇಕು. ಇತರರು ಹತ್ತಿರಕ್ಕೆ ಬಂದರೆ ಅವರಿಗೆ ಮರಣ
ಶಿಕ್ಷೆಯಾಗಬೇಕು. 52ಇಸ್ರಯೇಲರೆಲ್ಲರ ಆಯಾ ಸೇನೆಗಳು ತಮ್ಮ ಡೇರೆಗಳನ್ನು ತಮ್ಮ ತಮ್ಮ ದಂಡಿನ ಧ್ವಜದ
ಹತ್ತಿರ ಹಾಕಿಕೊಳ್ಳಬೇಕು. 53ಲೇವಿಯರು ಮಾತ್ರ ತಮ್ಮ ಡೇರೆಗಳನ್ನು ದೇವದರ್ಶನದ ಗುಡಾರದ ಸುತ್ತಲೂ
ಹಾಕಿಕೊಳ್ಳಬೇಕು. ಹೀಗೆ ಮಾಡಿದರೆ ನನ್ನ ಕೋಪ ಇಸ್ರಯೇಲರ ಮೇಲೆ ಎರಗಲು ಆಸ್ಪದವಿರದು.
ಲೇವಿಯರು ದೇವದರ್ಶನದ ಗುಡಾರವನ್ನು ಕಾಯುವವರಾಗಿರಬೇಕು."

54 ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದಂತೆಯೇ ಇಸ್ರಯೇಲರು ನಡೆದುಕೊಂಡರು.

## ದಂಡು ಹೊರಡುವ ಹಾಗೂ ಬೀಡುಬಿಡುವ ಕ್ರಮ

**2** ಸರ್ವೇಶ್ವರಸ್ವಾಮಿ ಮೋಶೆ – ಆರೋನರಿಗೆ ಕೊಟ್ಟ ಆಜ್ಞೆ ಇದು: [2]"ಇಸ್ರಯೇಲ ಎಲ್ಲರೂ ದೇವದರ್ಶನದ ಗುಡಾರದ ಸುತ್ತಲೂ ಸ್ವಲ್ಪ ದೂರವಾಗಿ ತಮ್ಮ ಡೇರೆಗಳನ್ನು ಹಾಕಿಕೊಳ್ಳಬೇಕು. ಪ್ರತಿಯೊಬ್ಬನೂ ತನ್ನತನ್ನ ಗೋತ್ರ ಧ್ವಜದ ಹತ್ತಿರ ತನ್ನತನ್ನ ದಂಡಿನಲ್ಲೇ ಇಳಿದುಕೊಳ್ಳಬೇಕು.

3 "ಸೂರ್ಯೋದಯವಾಗುವ ದಿಕ್ಕಿನಲ್ಲಿ ಯೆಹೂದ ಕುಲದ ದಂಡಿಗೆ ಸೇರಿದವರು ಸೈನ್ಯ ಸೈನ್ಯವಾಗಿ ತಮ್ಮ ಡೇರೆಗಳನ್ನು ಹಾಕಿಕೊಳ್ಳಬೇಕು. ಆ ಕುಲದವರಿಗೆ ನಾಯಕ ಅಮ್ಮಿನಾದಾಬನ ಮಗ ನಹಶೋನ; [4]ಅವರಲ್ಲಿ ಎಣಿಕೆಯಾದ ಸೈನಿಕರ ಸಂಖ್ಯೆ – 74,600. [5]ಅವರ ಸಮೀಪದಲ್ಲೇ ಇಸ್ಸಾಕಾರ್ ಕುಲದವರೂ ಜೆಬುಲೂನ್ ಕುಲದವರೂ ತಮ್ಮ ಡೇರೆಗಳನ್ನು ಹಾಕಿಕೊಳ್ಳಬೇಕು. ಆ ಕುಲದವರಿಗೆ ನಾಯಕ ಚೂವಾರನ ಮಗ ನೆತನೇಲ್; [6]ಅವರಲ್ಲಿ ಎಣಿಕೆಯಾದ ಸೈನಿಕರ ಸಂಖ್ಯೆ – 54,400. [7]ಜೆಬುಲೂನ್ಯರಿಗೆ ನಾಯಕ ಹೇಲೋನನ ಮಗ ಎಲೀಯಾಬ್; [8]ಅವರಲ್ಲಿ ಎಣಿಕೆಯಾದ ಸೈನಿಕರ ಸಂಖ್ಯೆ – 57,400. [9]ಹೀಗೆ ಯೆಹೂದ ಕುಲದ ದಂಡಿಗೆ ಸೇರಿದವರೆಲ್ಲರ ಸಂಖ್ಯೆ – 1,86,400. ಇವರು ಮುಂಭಾಗದಲ್ಲಿ ಹೊರಡಬೇಕು.

10 "ದಕ್ಷಿಣ ದಿಕ್ಕಿನಲ್ಲಿ ರೂಬೇನ್ ಕುಲದ ದಂಡಿಗೆ ಸೇರಿದವರು ಸೈನ್ಯಸೈನ್ಯವಾಗಿ ತಮ್ಮ ಡೇರೆಗಳನ್ನು ಹಾಕಿಕೊಳ್ಳಬೇಕು. ಈ ರೂಬೇನ್ ಕುಲದವರಿಗೆ ನಾಯಕ ಶೆದೇಯೂರನ ಮಗ ಎಲೀಚೂರ; [11]ಅವರಲ್ಲಿ ಎಣಿಕೆಯಾದ ಸೈನಿಕರ ಸಂಖ್ಯೆ – 46,500. [12]ಅವರ ಸಮೀಪದಲ್ಲೆ ಸಿಮೆಯೋನ್ ಕುಲದವರೂ ಗಾದ್ ಕುಲದವರೂ ತಮ್ಮ ಡೇರೆಗಳನ್ನು ಹಾಕಿಕೊಳ್ಳಬೇಕು. ಸಿಮೆಯೋನ ಕುಲದವರಿಗೆ ನಾಯಕ ಚೂರೀಷದ್ದೈಯನ ಮಗ ಶೆಲೂಮಿಯೇಲ; [13]ಅವರಲ್ಲಿ ಎಣಿಕೆಯಾದ ಸೈನಿಕರ ಸಂಖ್ಯೆ – 59,300. [14]ಗಾದ್ ಕುಲದವರಿಗೆ ನಾಯಕ ರೆಗೂವೇಲನ ಮಗ ಎಲ್ಯಾಸಾಫ; [15]ಅವರಲ್ಲಿ ಎಣಿಕೆಯಾದ ಸೈನಿಕರ ಸಂಖ್ಯೆ – 45,650. [16]ಹೀಗೆ ರೂಬೇನ್ ಕುಲದ ದಂಡಿಗೆ ಸೇರಿದ್ದವರೆಲ್ಲರ ಸಂಖ್ಯೆ – 1,51,450. ಇವರು ಎರಡನೆಯ ದಂಡಾಗಿ ಹೊರಡಬೇಕು.

17 "ಅನಂತರ ಸೈನ್ಯಗಳ ನಟ್ಟನಡುವೆ ದೇವದರ್ಶನದ ಗುಡಾರ ಮತ್ತು ಲೇವಿಯರ ಪಾಳೆಯದವರು ಹೊರಡಬೇಕು. ಅವರು ಹೇಗೆ ಇಳಿದುಕೊಂಡಿದ್ದರೋ ಹಾಗೆಯೇ ತಮ್ಮ ತಮ್ಮ ಧ್ವಜಗಳನ್ನು ಹಿಡಿದುಕೊಂಡು ತಮ್ಮ ತಮ್ಮ ಗೊತ್ತಾದ ಸ್ಥಾನದಲ್ಲಿ ಹೊರಡಬೇಕು.

18 "ಪಶ್ಚಿಮ ದಿಕ್ಕಿನಲ್ಲಿ ಎಫ್ರಯಿಮ್ ಕುಲದ ದಂಡಿಗೆ ಸೇರಿದವರು ಸೈನ್ಯ ಸೈನ್ಯವಾಗಿ ತಮ್ಮ ಡೇರೆಗಳನ್ನು ಹಾಕಿಕೊಳ್ಳಬೇಕು. ಅವರಿಗೆ ನಾಯಕ ಅಮ್ಮೀಹೂದನ ಮಗ ಎಲೀಷಾಮಾ; [19]ಅವರಲ್ಲಿ ಎಣಿಕೆಯಾದ ಸೈನಿಕರ ಸಂಖ್ಯೆ – 40,500. [20]ಅವರ ಸಮೀಪದಲ್ಲೆ ಮನಸ್ಸೆ ಕುಲದವರು ಬೆನ್ಯಾಮೀನ್ ಕುಲದವರೂ ತಮ್ಮ ಡೇರೆಗಳನ್ನು ಹಾಕಿಕೊಳ್ಳಬೇಕು. ಮನಸ್ಸೆ ಕುಲದವರಿಗೆ ನಾಯಕ ಪೆದಾಚೂರನ ಮಗ ಗಮ್ಲಿಯೇಲ್; [21]ಅವರಲ್ಲಿ ಎಣಿಕೆಯಾದ ಸೈನಿಕರ ಸಂಖ್ಯೆ – 32,200. [22]ಬೆನ್ಯಾಮೀನ್ ಕುಲದವರಿಗೆ ನಾಯಕ ಗಿದ್ಯೋನಿಯ ಮಗ ಅಬೀದಾನ್; [23]ಅವರಲ್ಲಿ ಎಣಿಕೆಯಾದ ಸೈನಿಕರ ಸಂಖ್ಯೆ – 35,400. [24]ಹೀಗೆ ಎಫ್ರಯಿಮರ ದಂಡಿಗೆ ಸೇರಿದವರೆಲ್ಲರ ಸಂಖ್ಯೆ – 1,08,100. ಇವರು ಮೂರನೆಯ ದಂಡಾಗಿ ಹೊರಡಬೇಕು.

25 "ಉತ್ತರ ದಿಕ್ಕಿನಲ್ಲಿ ದಾನ್ ಕುಲದ ದಂಡಿಗೆ ಸೇರಿದವರು ಸೈನ್ಯ ಸೈನ್ಯವಾಗಿ ತಮ್ಮ ಡೇರೆಗಳನ್ನು ಹಾಕಿಕೊಳ್ಳಬೇಕು. ಅವರಿಗೆ ನಾಯಕ ಅಮ್ಮೀಷದ್ದೈಯನ ಮಗ ಅಹೀಗೆಜೆರ್; [26]ಅವರಲ್ಲಿ ಎಣಿಕೆಯಾದ ಸೈನಿಕರ ಸಂಖ್ಯೆ – 62,700. [27]ಅವರ ಸಮೀಪದಲ್ಲೆ ಆಶೇರ್ ಕುಲದವರು ಮತ್ತು ನಫ್ತಾಲಿ ಕುಲದವರು ತಮ್ಮ ಡೇರೆಗಳನ್ನು ಹಾಕಿಕೊಳ್ಳಬೇಕು. ಆಶೇರ್ ಕುಲದವರಿಗೆ ನಾಯಕ ಒಕ್ರಾನನ ಮಗ ಪಗೀಯೇಲ್; [28]ಅವರಲ್ಲಿ ಎಣಿಕೆಯಾದ ಸೈನಿಕರ ಸಂಖ್ಯೆ – 41,500. [29]ನಫ್ತಾಲಿ ಕುಲದವರಿಗೆ ನಾಯಕ ಏನಾನನ ಮಗ ಅಹೀರ; [30]ಅವರಲ್ಲಿ ಎಣಿಕೆಯಾದ ಸೈನಿಕರ ಸಂಖ್ಯೆ – 53,400. [31]ಹೀಗೆ ದಾನ್ ಕುಲದ ದಂಡಿಗೆ ಸೇರಿದವರೆಲ್ಲರ ಸಂಖ್ಯೆ – 1,57,600. ಇವರು ಕಡೆಯ ದಂಡಾಗಿ ಹೊರಡಬೇಕು."

32 ಇವರೇ ಇಸ್ರಯೇಲರಲ್ಲಿ ಗೋತ್ರಗೋತ್ರಗಳ ಪ್ರಕಾರ ಎಣಿಕೆಯಾದವರು. ಆ ದಂಡುಗಳಲ್ಲಿ ಸೈನಿಕರಾಗಿ ಎಣಿಕೆಯಾದ ಸೈನಿಕರ ಸಂಖ್ಯೆ – 6,03,500. [33]ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದಂತೆ ಲೇವಿಯರು ಇತರ ಇಸ್ರಯೇಲರ ಸಂಗಡ ಎಣಿಕೆಯಾಗಲಿಲ್ಲ.

34 ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದಂತೆಯೇ ಇಸ್ರಯೇಲರು ಮಾಡಿದರು. ಹಾಗೆಯೆ ದಂಡು ದಂಡಾಗಿ ಡೇರೆಗಳನ್ನು ಹಾಕಿಕೊಳ್ಳುತ್ತಿದ್ದರು. ಅಂತೆಯೇ ಗೋತ್ರ ಕುಟುಂಬಗಳ ಪ್ರಕಾರ ಹೊತ್ತಿದ್ದರು.

### ಆರೋನನ ಕುವರರು

**3** ಸೀನಾಯಿ ಬೆಟ್ಟದ ಮೇಲೆ ಸರ್ವೇಶ್ವರಸ್ವಾಮಿ ಮೋಶೆಯ ಸಂಗಡ ಮಾತಾಡಿದ ಕಾಲದಲ್ಲಿದ್ದ ಮೋಶೆ
– ಆರೋನರ ವಂಶಸ್ಥರ ವಿವರ: [2]ಆರೋನನಿಗಿದ್ದ ಮಕ್ಕಳ ಹೆಸರುಗಳು: ಜೇಷ್ಠಪುತ್ರ ನಾದಾಬ್, ಅಬೀಹು
ಎಲ್ಲಾಜಾರ್ ಮತ್ತು ಈತಾಮಾರ್. [3]ಯಾಜಕ ಸೇವಾವೃತ್ತಿಯನ್ನು ಕೈಗೊಳ್ಳುವುದಕ್ಕೆ ಅಭಿಷೇಕದಿಂದ
ಪ್ರತಿಷ್ಠಿತರಾದವರು ಇವರೇ. [4]ನಾದಾಬ್ ಮತ್ತು ಅಬೀಹೂ ಎಂಬಿಬ್ಬರು ಸೀನಾಯಿ ಮರುಭೂಮಿಯಲ್ಲಿ
ಸರ್ವೇಶ್ವರ ಆಜ್ಞಾಪಿಸದ ಅಪವಿತ್ರ ಅಗ್ನಿಯಿಂದ ಧೂಪವನ್ನು ಸಮರ್ಪಿಸಿದರು. ಈ ಕಾರಣ ಸರ್ವೇಶ್ವರನ
ಸನ್ನಿಧಿಯಲ್ಲಿ ಸತ್ತುಹೋದರು. ಅವರಿಗೆ ಮಕ್ಕಳಿರಲಿಲ್ಲ. ಎಲ್ಲಾಜಾರ್ ಮತ್ತು ಈತಾಮಾರ್ ಎಂಬ ಮಿಕ್ಕವರು
ತಮ್ಮ ತಂದೆಯ ಕೈಕೆಳಗೆ ಯಾಜಕರಾಗಿ ಸೇವೆ ಸಲ್ಲಿಸಿದರು.

### ಯಾಜಕರಿಗೆ ನೆರವಾಗಲು ಲೇವಿಯರ ನೇಮಕ

5 ಸರ್ವೇಶ್ವರ ಮೋಶೆಗೆ ಇತ್ತ ಆಜ್ಞೆ ಇದು: [6]“ನೀನು ಲೇವಿ ಕುಲದವರನ್ನು ಕರೆದುತಂದು ಅವರು
ದೇವತಾಕಾರ್ಯಗಳಲ್ಲಿ ಯಾಜಕ ಆರೋನನಿಗೆ ಸಹಾಯಕರಾಗಿರುವಂತೆ ನಿಯುಕ್ತಗೊಳಿಸು. [7]ಅವರು
ದೇವದರ್ಶನದ ಗುಡಾರದ ಬಳಿಯಲ್ಲಿರಬೇಕು; ಆರೋನನಿಗೂ ಇಡೀ ಸಮಾಜಕ್ಕೂ ನೆರವಾಗಿ ದೇವಸ್ಥಾನದ
ಪರಿಚರ್ಯವನ್ನು ನಡೆಸಬೇಕು. [8]ದೇವದರ್ಶನದ ಗುಡಾರಕ್ಕೆ ಸೇರಿದ ಉಪಕರಣಗಳನ್ನು
ನೋಡಿಕೊಳ್ಳಬೇಕು. ಇಸ್ರಯೇಲರ ಪರವಾಗಿ ದೇವಸ್ಥಾನದ ಸೇವಾಕಾರ್ಯಗಳನ್ನು ನಡೆಸಬೇಕು. [9]ನೀನು
ಲೇವಿಯರನ್ನು ಆರೋನನಿಗೂ ಅವನ ಮಕ್ಕಳಿಗೂ ಒಪ್ಪಿಸು. ಇಸ್ರಯೇಲರಲ್ಲಿ ಆರೋನನಿಗೆ ಸಂಪೂರ್ಣ
ಶರಣರು ಇವರೇ. [10]ಯಾಜಕ ಸೇವಾವೃತ್ತಿಯನ್ನು ಕೈಗೊಳ್ಳುವುದಕ್ಕೆ ಆರೋನನನ್ನು ಹಾಗೂ ಅವನ
ಮಕ್ಕಳನ್ನು ನೇಮಿಸು. ಬೇರೆ ಯಾರಾದರು ಆ ವೃತ್ತಿಗೆ ಕೈ ಹಾಕಿದರೆ ಅಂಥವನಿಗೆ ಮರಣ ಶಿಕ್ಷೆಯಾಗಬೇಕು.”

### ಜೇಷ್ಠಪುತ್ರರ ಸ್ಥಾನಮಾನ ಲೇವಿಯರಿಗೆ

11 ಸರ್ವೇಶ್ವರ ಮೋಶೆಗೆ ಹೀಗೆಂದರು: [12]“ನಾನು ಇಸ್ರಯೇಲರಲ್ಲಿ ಜೇಷ್ಠಪುತ್ರರಿಗೆ ಬದಲಾಗಿ
ಲೇವಿಯರನ್ನೇ ಆರಿಸಿಕೊಂಡಿದ್ದೇನೆಂದು ತಿಳಿ. ಆದುದರಿಂದ ಲೇವಿಯರು ನನಗೆ ಸೇರಿದವರು, ನನ್ನ ಸೊತ್ತು.
[13]ವಾಸ್ತವವಾಗಿ ಇಸ್ರಯೇಲರ ಜೇಷ್ಠರೆಲ್ಲರು ನನ್ನ ಸೊತ್ತು. ಈಜಿಪ್ಟ್ ದೇಶದಲ್ಲಿ ಜೇಷ್ಠವಾದುದೆಲ್ಲವನ್ನು ನಾನು
ಸಂಹಾರ ಮಾಡಿದಾಗ ಇಸ್ರಯೇಲರಲ್ಲಿಯ ಜೇಷ್ಠ ಮನುಷ್ಯರನ್ನೂ ಪಶುಪ್ರಾಣಿಗಳನ್ನೂ ನನ್ನ ಸ್ವಂತಕ್ಕಾಗಿ
ಪ್ರತಿಷ್ಠಿಸಿಕೊಂಡೆ. ಆದರೆ ಈಗ ಅಂಥವರಿಗೆ ಬದಲಾಗಿ ಲೇವಿಯರನ್ನು ಆರಿಸಿಕೊಂಡಿದ್ದೇನೆ. ಅವರು
ಸರ್ವೇಶ್ವರನಾದ ನನ್ನವರು.”

### ಲೇವಿಯರ ಎಣಿಕೆ

14 ಸರ್ವೇಶ್ವರ ಸೀನಾಯಿ ಮರುಭೂಮಿಯಲ್ಲಿ ಮೋಶೆಗೆ, [15]“ನೀನು ಲೇವಿಯರಲ್ಲಿ ಒಂದು ತಿಂಗಳು
ಮತ್ತು ಮೇಲ್ಪಟ್ಟ ವಯಸ್ಸಿನ ಗಂಡಸರನ್ನೆಲ್ಲಾ ಗೋತ್ರ ಕುಟುಂಬಗಳ ಪ್ರಕಾರ ಎಣಿಸಬೇಕು,” ಎಂದು
ಆಜ್ಞಾಪಿಸಿದರು. [16]ಸ್ವಾಮಿಯ ಅಪ್ಪಣೆಯ ಮೇರೆಗೆ ಮೋಶೆ ಅವರನ್ನು ಎಣಿಸಿದನು.

17 ಲೇವಿಯ ಮಕ್ಕಳ ಹೆಸರುಗಳು ಇವು: ಗೇರ್ಷೋನ್, ಕೆಹಾತ್, ಮೆರಾರೀ. [18]ಅವರು
ಗೋತ್ರಸ್ಥಾಪಕರು. ಗೋತ್ರಸ್ಥಾಪಕ ಗೇರ್ಷೋನನ ಮಕ್ಕಳು – ಲಿಬ್ನಿ, ಶಿಮ್ಮಿ ಎಂಬವರು. [19]ಗೋತ್ರಸ್ಥಾಪಕ

ಕೆಹಾತನ ಮಕ್ಕಳು – ಅಮ್ರಾಮ್, ಇಚ್ಹಾರ್, ಹೆಬ್ರೋನ್, ಉಜ್ಜೀಯೇಲ್ ಎಂಬವರು. [20]ಮೆರಾರಿಯ
ಮಕ್ಕಳು – ಮಹ್ಲೀ, ಮೂಷೀ ಎಂಬವರು. ಗೋತ್ರ ಕುಟುಂಬಗಳ ಪ್ರಕಾರ ಇವರೇ ಲೇವಿಯ ವಂಶದವರು.
21 ಗೇರ್ಷೋನ್ ವಂಶದವರಲ್ಲಿ ಲಿಬ್ನೀ ಗೋತ್ರದವರೂ ಶಿಮ್ಮೀ ಗೋತ್ರದವರೂ ಇದ್ದರು.
[22]ಅವರಲ್ಲಿ ಎಣಿಕೆಯಾದ ಒಂದು ತಿಂಗಳು ಮತ್ತು ಮೇಲ್ಪಟ್ಟ ವಯಸ್ಸಿನ ಗಂಡಸರ ಸಂಖ್ಯೆ 7,500.
[23]ಗೇರ್ಷೋನ್ಯರ ಕುಟುಂಬಗಳವರು ದೇವದರ್ಶನದ ಗುಡಾರದ ಹಿಂದುಗಡೆ ಅಂದರೆ ಪಶ್ಚಿಮ ದಿಕ್ಕಿನಲ್ಲಿ
ತಮ್ಮ ಡೇರೆಗಳನ್ನು ಹಾಕಿಕೊಳ್ಳಬೇಕಾಗಿತ್ತು. [24]ಗೇರ್ಷೋನ್ಯರ ಗೋತ್ರಗಳ ಮುಖ್ಯಸ್ಥನು ಲಾಯೇಲನ ಮಗ
ಎಲ್ಯಾಸಾಫ್. [25]ದೇವದರ್ಶನದ ಗುಡಾರದ ಉಪಕರಣಗಳಲ್ಲಿ ಗೇರ್ಷೋನನ ವಂಶದವರು
ನೋಡಿಕೊಳ್ಳಬೇಕಾಗಿದ್ದವುಗಳು ಇವು – ಗುಡಾರ, ಅದರ ಮೇಲಿನ ಡೇರೆಯ ಬಟ್ಟೆ, ಅದರ ಹೊದಿಕೆ,
ದೇವದರ್ಶನದ ಗುಡಾರದ ಬಾಗಿಲಲ್ಲಿರುವ ಪರದೆ, [26]ಗುಡಾರದ ಮತ್ತು ಬಲಿಪೀಠದ ಸುತ್ತಲಿರುವ
ಅಂಗಳದ ತೆರೆಗಳು, ಅಂಗಳದ ಬಾಗಿಲಿನ ಪರದೆ ಮತ್ತು ಅವುಗಳ ಹಗ್ಗಗಳು. ಇಂತಹ ಎಲ್ಲಾ ವಿಧವಾದ
ಸೇವೆಯನ್ನು ಗೇರ್ಷೋನ್ಯರು ಮಾಡಬೇಕಾಗಿತ್ತು.
27 ಕೆಹಾತ್ ವಂಶದವರಲ್ಲಿ ಅಮ್ರಾಮ್ ಗೋತ್ರದವರು, ಇಚ್ಹಾರ್ ಗೋತ್ರದವರು, ಹೆಬ್ರೋನ್
ಗೋತ್ರದವರು ಹಾಗೂ ಉಜ್ಜೀಯೇಲ್ ಗೋತ್ರದವರು ಇದ್ದರು. [28]ಅವರಲ್ಲಿ ದೇವಸ್ಥಾನ
ನೋಡಿಕೊಳ್ಳತಕ್ಕವರು ಅಂದರೆ ಒಂದು ತಿಂಗಳು ಮತ್ತು ಮೇಲ್ಪಟ್ಟ ವಯಸ್ಸಿನ ಗಂಡಸರ ಸಂಖ್ಯೆ 8,600.
[29]ಕೆಹಾತ್ಯರ ಕುಟುಂಬಗಳವರು ದೇವದರ್ಶನದ ಗುಡಾರದ ದಕ್ಷಿಣ ದಿಕ್ಕಿನಲ್ಲಿ ತಮ್ಮ ಡೇರೆಗಳನ್ನು
ಹಾಕಿಕೊಳ್ಳಬೇಕಾಗಿತ್ತು. [30]ಈ ಕೇಹಾತ್ಯರ ಗೋತ್ರಗಳ ಮುಖ್ಯಸ್ಥನು ಉಜ್ಜೀಯೇಲನ ಮಗ ಎಲೀಚಾಫಾನ್.
[31]ಅವರು ನೋಡಿಕೊಳ್ಳಬೇಕಾಗಿದ್ದವುಗಳು ಇವು – ಮಂಜೂಷ, ಮೇಜು, ದೀಪಸ್ತಂಭ, ವೇದಿಕೆಗಳು,
ದೇವಸ್ಥಾನದ ಸೇವೋಪಕರಣಗಳು ಹಾಗೂ ಒಳಗಣ ತೆರೆ. ಇಂಥ ಎಲ್ಲಾ ವಿಧವಾದ ಸೇವೆಯನ್ನು ಅವರು
ಮಾಡಬೇಕಾಗಿತ್ತು. [32]ಇದಲ್ಲದೆ ಮಹಾಯಾಜಕ ಆರೋನನ ಮಗ ಎಲ್ಲಾಜಾರನು ಲೇವಿಯರ ಮುಖ್ಯಸ್ಥರಿಗೆ
ಅಧ್ಯಕ್ಷನಾಗಿದ್ದ; ದೇವಸ್ಥಾನವನ್ನು ಕಾಯುವವರಿಗೆ ಮೇಲ್ವಿಚಾರಕನಾಗಿದ್ದ.
33 ಮೆರಾರೀ ವಂಶದವರಲ್ಲಿ ಮಹ್ಲೀ ಗೋತ್ರದವರು ಮತ್ತು ಮೂಷಿ ಗೋತ್ರದವರು ಇದ್ದರು.
[34]ಇವರಲ್ಲಿ ಎಣಿಕೆಯಾದ ಒಂದು ತಿಂಗಳು ಮತ್ತು ಮೇಲ್ಪಟ್ಟ ವಯಸ್ಸಿನ ಗಂಡಸರ ಸಂಖ್ಯೆ – 6200.
[35]ಮೆರಾರೀಯರ ಗೋತ್ರಗಳ ಮುಖ್ಯಸ್ಥನು ಅಬೀಹೈಲನ ಮಗ ಚೂರೀಯೇಲ್. ಇವರು ದೇವದರ್ಶನದ
ಗುಡಾರದ ಉತ್ತರ ದಿಕ್ಕಿನಲ್ಲಿ ತಮ್ಮ ಡೇರೆಗಳನ್ನು ಹಾಕಿಕೊಳ್ಳಬೇಕಾಗಿತ್ತು. [36]ಮೆರಾರಿ ವಂಶದವರ ವಶಕ್ಕೆ
ಒಪ್ಪಿಸಲಾಗಿದ್ದವುಗಳು ಇವು – ಗುಡಾರದ ಚೌಕಟ್ಟುಗಳು, ಅಗುಳಿಗಳು, ಕಂಬಗಳು, ಗದ್ದಿಗೆ ಕಲ್ಲುಗಳು,
[37]ಇವುಗಳ ಉಪಕರಣಗಳು, ಅಂಗಳದ ಸುತ್ತಲು ಇದ್ದ ಕಂಬಗಳು, ಅವುಗಳ ಗದ್ದಿಗೆ ಕಲ್ಲುಗಳು, ಗೂಟಗಳು
ಮತ್ತು ಹಗ್ಗಗಳು. ಇಂಥ ಎಲ್ಲಾ ವಿಧವಾದ ಸೇವೆಯನ್ನು ಇವರೇ ಮಾಡಬೇಕಾಗಿತ್ತು.
38 ದೇವದರ್ಶನದ ಗುಡಾರದ ಪೂರ್ವ ದಿಕ್ಕಿನಲ್ಲಿ, ಅಂದರೆ ಸೂರ್ಯೋದಯವಾಗುವ ಕಡೆಯಲ್ಲಿ
ಮೋಶೆ ಮತ್ತು ಆರೋನನು ಹಾಗೂ ಆರೋನನ ಮಕ್ಕಳು ತಮ್ಮ ಡೇರೆಗಳನ್ನು ಹಾಕಿಕೊಳ್ಳಬೇಕಾಗಿತ್ತು.
ಅವರು ಇಸ್ರಯೇಲರ ಪರವಾಗಿ ದೇವಸ್ಥಾನವನ್ನು ನೋಡಿಕೊಳ್ಳಬೇಕಾಗಿತ್ತು. ಬೇರೆ ಯಾರಾದರೂ ಆ
ಕೆಲಸಕ್ಕೆ ಕೈ ಹಾಕಿದರೆ ಅವರಿಗೆ ಮರಣಶಿಕ್ಷೆಯಾಗಬೇಕಾಗಿತ್ತು.
39 ಮೋಶೆ ಮತ್ತು ಆರೋನರು ಸರ್ವೇಶ್ವರನ ಅಪ್ಪಣೆಯ ಮೇರೆಗೆ ಕುಟುಂಬಗಳ ಪ್ರಕಾರ ಎಣಿಸಿದ
ಲೇವಿಯರ ಅಂದರೆ ಒಂದು ತಿಂಗಳು ಮತ್ತು ಮೇಲ್ಪಟ್ಟ ವಯಸ್ಸಿನ ಗಂಡಸರ ಸಂಖ್ಯೆ 22,000.

## ಜೇಷ್ಠಪುತ್ರರಿಗೆ ಬದಲಾಗಿ ಲೇವಿಯರ ಆಯ್ಕೆ

40 ಸರ್ವೇಶ್ವರ ಮೋಶೆಗೆ, "ನೀನು ಇಸ್ರಯೇಲರಲ್ಲಿ ಒಂದು ತಿಂಗಳು ಮತ್ತು ಮೇಲ್ಪಟ್ಟ ವಯಸ್ಸಿನ
ಜೇಷ್ಠಪುತ್ರರನ್ನು ಹೆಸರು ಹಿಡಿದು ಎಣಿಕೆಮಾಡು. [41]ಆದರೆ ಸರ್ವೇಶ್ವರನೆಂಬ ನನ್ನ ಸೊತ್ತಾಗುವುದಕ್ಕೆ ನೀನು
ಇಸ್ರಯೇಲರ ಚೊಚ್ಚಲಾದ ಪಶುಪ್ರಾಣಿಗಳಿಗೆ ಬದಲಾಗಿ ಲೇವಿಯರ ಪಶುಪ್ರಾಣಿಗಳನ್ನು ತೆಗೆದುಕೋ,"
ಎಂದು ಆಜ್ಞಾಪಿಸಿದರು.

42 ಸರ್ವೇಶ್ವರನ ಅಪ್ಪಣೆಯ ಮೇರೆಗೆ ಮೋಶೆ ಇಸ್ರಯೇಲರಲ್ಲಿದ್ದ ಜೇಷ್ಠರಾದವರೆಲ್ಲರನ್ನು ಎಣಿಕೆ ಮಾಡಿದನು. [43]ಹೆಸರು ಹಿಡಿದು ಎಣಿಕೆ ಆದವರ, ಅಂದರೆ ಒಂದು ತಿಂಗಳ ಮತ್ತು ಮೇಲ್ಪಟ್ಟ ವಯಸ್ಸಿನ ಗಂಡಸರ ಸಂಖ್ಯೆ – 22,273.

44 ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದ್ದೇನೆಂದರೆ – [45]"ನೀನು ಇಸ್ರಯೇಲರ ಜೇಷ್ಠರಿಗೆ ಬದಲಾಗಿ ಲೇವಿಯರನ್ನು ಮತ್ತು ಅವರ ಚೊಚ್ಚಲಾದ ಪಶುಪ್ರಾಣಿಗಳಿಗೆ ಬದಲಾಗಿ ಲೇವಿಯರ ಪಶುಪ್ರಾಣಿಗಳನ್ನು ತೆಗೆದುಕೊ. ಲೇವಿಯರೇ ನನ್ನ ಸೊತ್ತು. ನಾನು ಸರ್ವೇಶ್ವರ! [46]ಲೇವಿಯರ ಸಂಖ್ಯೆಗಿಂತ 273 ಮಂದಿ ಜೇಷ್ಠರು ಇಸ್ರಯೇಲರಲ್ಲಿ ಹೆಚ್ಚಾಗಿದ್ದಾರೆ. ಆದುದರಿಂದ ಅವರನ್ನು ವಿಮೋಚಿಸುವುದಕ್ಕಾಗಿ ತಲೆ ಒಂದಕ್ಕೆ ಐದು ಬೆಳ್ಳಿ ನಾಣ್ಯಗಳಂತೆ ಈಡು ತೆಗೆದುಕೊ. [47]ದೇವರ ಸೇವೆಗೆ ನಿಗದಿಯಾದ ನಾಣ್ಯಗಳ ಮೇರೆಗೆ ತೆಗೆದುಕೊಳ್ಳಬೇಕು. [48]ಆ ಹೆಚ್ಚಾಗಿರುವವರ ವಿಮೋಚನೆಗಾಗಿ ಅವರು ಕೊಡುವ ಹಣವನ್ನು ಆರೋನನಿಗೂ ಅವನ ಮಕ್ಕಳಿಗೂ ಕೊಡು," ಎಂದರು.

49 ಅದರಂತೆಯೇ ಮೋಶೆ ಲೇವಿಯರಿಗಿಂತ ಹೆಚ್ಚಾದ ಜೇಷ್ಠರನ್ನು ವಿಮೋಚಿಸುವುದಕ್ಕಾಗಿ ಹಣವನ್ನು ತೆಗೆದುಕೊಂಡನು. [50]ದೇವರ ಸೇವೆಗೆ ನಿಗದಿಯಾದ ನಾಣ್ಯದ ಮೇರೆಗೆ 1365 ನಾಣ್ಯಗಳನ್ನು ತೆಗೆದುಕೊಂಡನು. [51]ಸರ್ವೇಶ್ವರನ ಆಜ್ಞೆಯಂತೆ ವಿಮೋಚನೆಯ ಹಣವನ್ನು ಆರೋನನಿಗೂ ಅವನ ಮಕ್ಕಳಿಗೂ ಕೊಟ್ಟನು.

## ಲೇವಿಯರಲ್ಲಿನ ಕೆಹಾತ್ಯರ ಕರ್ತವ್ಯ

**4** ಸರ್ವೇಶ್ವರಸ್ವಾಮಿ, ಮೋಶೆ – ಆರೋನರಿಗೆ ಹೀಗೆಂದು ಆಜ್ಞಾಪಿಸಿದರು: [2–3]"ನೀವು ಲೇವಿಯರಲ್ಲಿಯ ಕೆಹಾತ್ಯರನ್ನು ಎಣಿಕೆ ಮಾಡಬೇಕು. ಅವರಲ್ಲಿ ಮೂವತ್ತರಿಂದ ಐವತ್ತು ವರ್ಷದವರೆಗೆ ವಯಸ್ಸಾದವರನ್ನು ಹಾಗೂ ದೇವದರ್ಶನದ ಗುಡಾರದ ಸೇವೆಗೆ ಯೋಗ್ಯರಾದವರನ್ನು ಗೋತ್ರಕುಟುಂಬಗಳ ಪ್ರಕಾರ ಲೆಕ್ಕಿಸಬೇಕು.

4 "ಕೆಹಾತ್ಯರು ಕೈಗೊಳ್ಳಬೇಕಾದ ಕರ್ತವ್ಯಗಳು ಇವು: ದೇವದರ್ಶನದ ಗುಡಾರದಲ್ಲಿ ಪರಮ ಪವಿತ್ರವಾದ ವಸ್ತುಗಳನ್ನು ಅವರು ನೋಡಿಕೊಳ್ಳಬೇಕು. [5]ದಂಡು ಹೊರಡುವಾಗ ಆರೋನನು ಮತ್ತು ಅವನ ಮಕ್ಕಳು ಒಳಗೆ ಬಂದು ಗರ್ಭಗುಡಿಯನ್ನು ಮರೆಮಾಡುವ ತೆರೆಯನ್ನು ಇಳಿಸಿ ಅದರಿಂದ ಆಜ್ಞಾಶಾಸನಗಳ ಮಂಜೂಷವನ್ನು ಮುಚ್ಚಬೇಕು. [6]ಅದರ ಮೇಲೆ ಹಸನಾದ ತೊಗಲನ್ನು ಮತ್ತು ನೀಲಿ ಬಟ್ಟೆಯನ್ನು ಹೊದಿಸಬೇಕು. (ಮಂಜೂಷದ ಬಳೆಗಳಿಗೆ) ಹೊರುವ ಕೋಲುಗಳನ್ನು ಸಿಕ್ಕಿಸಬೇಕು.

7 "ಸನ್ನಿಧಿ ಕಾಣಿಕೆಯ ಮೇಜಿನ ಮೇಲೆ ನೀಲಿಬಟ್ಟೆಯನ್ನು ಹಾಸಿ ಅದರ ಮೇಲೆ ಹರಿವಾಣಗಳನ್ನು, ಧೂಪಾರತಿಗಳನ್ನು, ಹೂಜಿಗಳನ್ನು ಹಾಗೂ ಧಾನ್ಯದ್ರವ್ಯಾರ್ಪಣೆಯ ಬಟ್ಟಲುಗಳನ್ನು ಅವರು ಇಡಬೇಕು. ನಿತ್ಯಾರ್ಪಣೆಯ ರೊಟ್ಟಿಗಳನ್ನು ಅದರ ಮೇಲೆ ಇಡಬೇಕು. [8]ಅವೆಲ್ಲವುಗಳ ಮೇಲೆ ರಕ್ತವರ್ಣದ ಬಟ್ಟೆಯನ್ನು ಹಾಸಿ, ಹಸನಾದ ತೊಗಲನ್ನು ಹೊದಿಸಿ, ಹೊರುವ ಕೋಲುಗಳನ್ನು ಸಿಕ್ಕಿಸಬೇಕು.

9 "ದೀಪಸ್ತಂಭವನ್ನು, ದೀಪದ ಕುಡಿ ತೆಗೆಯುವ ಬಟ್ಟಲುಗಳನ್ನು ಹಾಗೂ ಎಣ್ಣೆಯ ಪಾತ್ರೆಗಳನ್ನು ನೀಲಿಬಟ್ಟೆಯಿಂದ ಮುಚ್ಚಿಡಬೇಕು. [10]ಅದಕ್ಕೂ ಅದರ ಎಲ್ಲಾ ಉಪಕರಣಗಳಿಗೂ ಹಸನಾದ ತೊಗಲನ್ನು ಹೊದಿಸಿ ಅವುಗಳನ್ನು ಅಡ್ಡ ದಂಡಕ್ಕೆ ಕಟ್ಟಬೇಕು.

11 "ತರುವಾಯ ಅವರು ಬಂಗಾರದ ವೇದಿಕೆಯ ಮೇಲೆ ನೀಲಿ ಬಟ್ಟೆಯನ್ನು ಹಾಸಿ, ಹಸನಾದ ತೊಗಲನ್ನು ಹೊದಿಸಿ, ಹೊರುವ ಕೋಲುಗಳನ್ನು ಹಾಕಬೇಕು. [12]ದೇವಸ್ಥಾನದ ಸೇವೋಪಕರಣಗಳನ್ನೆಲ್ಲಾ ನೀಲಿ ಬಟ್ಟೆಯಲ್ಲಿಟ್ಟು, ಹಸನಾದ ತೊಗಲನ್ನು ಹೊದಿಸಿ ಅಡ್ಡ ದಂಡಕ್ಕೆ ಕಟ್ಟಬೇಕು. [13]ಬಲಿಪೀಠದ ಬೂದಿಯನ್ನು ತೆಗೆದುಬಿಟ್ಟು ಆ ಪೀಠದ ಮೇಲೆ ಊದಾ ವರ್ಣದ ಬಟ್ಟೆಯನ್ನು ಹಾಸಿ [14]ಅದಕ್ಕೆ ಸಂಬಂಧಪಟ್ಟ ಅಗ್ಗಿಷ್ಟಿಕೆಗಳು, ಮುಳ್ಳುಗಳು, ಸಲಿಕೆಗಳು ಹಾಗೂ ಬೋಗುಣಿಗಳು ಮುಂತಾದ ಉಪಕರಣಗಳನ್ನೆಲ್ಲಾ ಮೇಲೆ ಇಟ್ಟು, ಹಸನಾದ ತೊಗಲನ್ನು ಹೊದಿಸಿ ಹೊರುವ ಕೋಲುಗಳನ್ನು ಹಾಕಬೇಕು. [15]ಆರೋನನು ಮತ್ತು ಅವನ ಮಕ್ಕಳು ದಂಡು ಹೊರಡುವ ಕಾಲದಲ್ಲಿ ದೇವಸ್ಥಾನದ ಎಲ್ಲ

ಸಾಮಾನುಗಳನ್ನು ಮುಚ್ಚಿ ಸಿದ್ಧಮಾಡಿದನಂತರ ಕೆಹಾತ್ಯರು ಅವುಗಳನ್ನು ಹೊರುವುದಕ್ಕೆ ಬರಬೇಕು. ಇವರು
ದೇವಸ್ಥಾನದ ಸಾಮಾನುಗಳನ್ನು ಮುಟ್ಟಬಾರದು. ಮುಟ್ಟಿದರೆ ಬದುಕಲಾರರು. ಕೆಹಾತ್ಯರು ದೇವದರ್ಶನದ
ಗುಡಾರದ ಸಲಕರಣೆಗಳಲ್ಲಿ ಹೊರಬೇಕಾದವುಗಳು ಇವೇ.

16 “ಮಹಾಯಾಜಕ ಆರೋನನ ಮಗ ಎಲ್ಲಾಜಾರನು ದೀಪದ ಎಣ್ಣೆಯನ್ನು, ಪರಿಮಳ
ಧೂಪವನ್ನು, ಅನುದಿನ ನೈವೇದ್ಯ ಮಾಡುವ ಧಾನ್ಯ ದ್ರವ್ಯಗಳನ್ನು ಹಾಗೂ ಅಭಿಷೇಕ ತೈಲವನ್ನು ತನ್ನ
ವಶದಲ್ಲೇ ಇಟ್ಟುಕೊಳ್ಳಬೇಕು. ದೇವದರ್ಶನದ ಗುಡಾರದ ಎಲ್ಲ ಭಾಗಗಳು, ಅದರಲ್ಲಿ ಇರುವ ಸಮಸ್ತ
ವಸ್ತುಗಳು, ಪಾತ್ರೆಪರಿಕರಗಳು ಹಾಗೂ ಅವುಗಳಲ್ಲಿರುವುದೆಲ್ಲವೂ ಅವನ ಮೇಲ್ವಿಚಾರಣೆ ಯಲ್ಲಿರಬೇಕು.”

17 ಸರ್ವೇಶ್ವರ ಮೋಶೆ – ಆರೋನರಿಗೆ ಹೀಗೆಂದು ಆಜ್ಞಾಪಿಸಿದರು: 18“ಕೆಹಾತ್ಯರ ಗೋತ್ರ
ಕುಟುಂಬಗಳವರು ಲೇವಿಯರೊಳಗೆ ಉಳಿಯದೆ ನಾಶವಾಗುವುದಕ್ಕೆ ಆಸ್ಪದಕೊಡಬೇಡಿ. 19ಪರಮ
ಪವಿತ್ರವಾದ ವಸ್ತುಗಳ ಹತ್ತಿರಕ್ಕೆ ಬರುವಾಗ ಅವರು ಸಾಯದಂತೆ ಎಚ್ಚರಿಕೆ ವಹಿಸಿರಿ. ಆರೋನನು ಮತ್ತು
ಅವನ ಮಕ್ಕಳು ಒಳಗೆ ಬಂದು ಅವರವರ ಕೆಲಸಗಳನ್ನು, ಹೊರಬೇಕಾದ ಹೊರೆಗಳನ್ನು ಗೊತ್ತುಮಾಡಬೇಕು.
20ಕೆಹಾತ್ಯರೇ ಒಳಗೆ ಬಂದು, ಒಂದು ಕ್ಷಣ ಮಾತ್ರವೂ ಆ ಪವಿತ್ರ ವಸ್ತುಗಳನ್ನು ನೋಡದಿರಲಿ; ನೋಡಿ
ಸಾಯದಿರಲಿ.”

## ಲೇವಿಯರಲ್ಲಿನ ಗೇರ್ಷೋನ್ಯರ ಕರ್ತವ್ಯ

21 ಸರ್ವೇಶ್ವರ ಮೋಶೆಗೆ ಕೊಟ್ಟ ಆಜ್ಞೆ ಇದು: 22–23“ನೀನು ಗೇರ್ಷೋನ್ಯರನ್ನು ಲೆಕ್ಕಿಸಬೇಕು.
ಅವರಲ್ಲಿ ಮೂವತ್ತರಿಂದ ಐವತ್ತು ವರ್ಷದವರೆಗೆ ವಯಸ್ಸಾದವರು ಹಾಗೂ ದೇವದರ್ಶನದ ಗುಡಾರದ
ಸೇವೆಗೆ ಯೋಗ್ಯರಾದವರನ್ನು ಗೋತ್ರ ಕುಟುಂಬದ ಪ್ರಕಾರ ಎಣಿಸಬೇಕು.

24 “ಪರಿಚರ್ಯೆ ಮಾಡುವುದರಲ್ಲೂ ಹೊರೆಗಳನ್ನು ಹೊರುವುದರಲ್ಲೂ ಗೇರ್ಷೋನ್ಯರು
ಮಾಡಬೇಕಾದ ಕರ್ತವ್ಯ ಇವು: 25ಅವರು ದೇವದರ್ಶನದ ಗುಡಾರದ ಬಟ್ಟೆಗಳನ್ನು ಹೊರಬೇಕು – ಅಂದರೆ
ಗುಡಾರ, ಅದರ ಹೊದಿಕೆ, ಅದರ ಮೇಲಿನ ಹಸನಾದ ತೊಗಲಿನ ಹೊದಿಕೆ, ದೇವದರ್ಶನದ ಗುಡಾರದ
ಬಾಗಿಲಿನ ಪರದೆ, 26ಗುಡಾರದ ಮತ್ತು ಬಲಿಪೀಠದ ಸುತ್ತಣ ಅಂಗಳದ ತೆರೆಗಳು, ಅದರ ಬಾಗಿಲಿನ ಪರದೆ,
ಹಗ್ಗಗಳು ಮತ್ತು ಅವುಗಳ ಎಲ್ಲ ಉಪಕರಣಗಳು, ಇವುಗಳನ್ನು ಹೊರಬೇಕು; ಮತ್ತು ಇವುಗಳಿಗೆ
ಸಂಬಂಧಪಟ್ಟ ಎಲ್ಲ ಕೆಲಸಗಳನ್ನು ಅವರೇ ಮಾಡಬೇಕು. 27ಗೇರ್ಷೋನ್ಯರು ಹೊರೆಹೊರುವುದರಲ್ಲೂ ಬೇರೆ
ಪರಿಚರ್ಯೆ ಮಾಡುವುದರಲ್ಲೂ ಆರೋನನ ಮತ್ತು ಅವನ ಮಕ್ಕಳ ಅಪ್ಪಣೆಯ ಪ್ರಕಾರವೇ ನಡೆಯಬೇಕು.
ನೀವೇ ಹೊರೆಗಳನ್ನು ಗೊತ್ತುಮಾಡಿ ಅವರವರ ವಶಕ್ಕೆ ಕೊಡಬೇಕು. 28ದೇವದರ್ಶನದ ಗುಡಾರದ
ವಿಷಯದಲ್ಲಿ ಗೇರ್ಷೋನ್ಯರು ಮಾಡಬೇಕಾದ ಕರ್ತವ್ಯ ಇದೇ. ಮಹಾಯಾಜಕ ಆರೋನನ ಮಗ
ಈತಮಾರನು ಅವರ ಮೇಲ್ವಿಚಾರಣೆಯನ್ನು ಮಾಡಬೇಕು.

## ಮೆರಾರೀಯರ ಕರ್ತವ್ಯ

29 “ಮೆರಾರೀಯರಲ್ಲೂ ಯಾರಾರು ಮೂವತ್ತರಿಂದ ಐವತ್ತು ವರ್ಷ ವಯಸ್ಸಿನವರಿದ್ದಾರೋ
ಹಾಗೂ 30ದೇವದರ್ಶನದ ಗುಡಾರದ ಸೇವೆಮಾಡಲು ಯೋಗ್ಯರಾಗಿದ್ದಾರೋ ಅವರನ್ನು ಗೋತ್ರ
ಕುಟುಂಬಗಳ ಪ್ರಕಾರ ಎಣಿಕೆಮಾಡು. 31ದೇವದರ್ಶನದ ಗುಡಾರದ ವಿಷಯದಲ್ಲಿ ಅವರು ಮಾಡಬೇಕಾದ
ಕರ್ತವ್ಯಗಳು ಯಾವುವೆಂದರೆ – 32ಅವರು ಗುಡಾರದ ಚೌಕಟ್ಟುಗಳನ್ನು, ಅಗುಳಿಗಳನ್ನು, ಕಂಬಗಳನ್ನು,
ಗದ್ದಿಗೆಕಲ್ಲುಗಳನ್ನು, ಗೂಟಗಳನ್ನು, ಹಗ್ಗಗಳನ್ನು ಮತ್ತು ಅವುಗಳ ಎಲ್ಲ ಉಪಕರಣಗಳನ್ನು ಹೊರಬೇಕು.
ಅವರವರ ಹೊರೆಗಳನ್ನೆಲ್ಲ ನೀವೇ ಹೆಸರಿಸಿ ಗೊತ್ತುಮಾಡಬೇಕು. 33ದೇವದರ್ಶನದ ಗುಡಾರದ ವಿಷಯದಲ್ಲಿ
ಮೆರಾರೀಯರು ಮಾಡಬೇಕಾದ ಕೆಲಸ ಇದೇ. ಅವರು ಮಹಾಯಾಜಕ ಆರೋನನ ಮಗ ಈತಮಾರನ
ಕೈಕೆಳಗೆ ಇದನ್ನೆಲ್ಲಾ ಮಾಡಬೇಕು.”

## ಲೇವಿಯರ ಜನಗಣತಿ

34–35 ಮೋಶೆ ಹಾಗು ಆರೋನರು ಮತ್ತು ಸಮೂಹದ ಮುಖ್ಯಸ್ಥರು ಕೆಹಾತ್ಯರಲ್ಲಿ ಯಾರಾರು ಮೂವತ್ತರಿಂದ ಐವತ್ತು ವರ್ಷದವರೆಗಿನ ವಯಸ್ಸುಳ್ಳವರಾಗಿದ್ದರೋ ಹಾಗೂ ದೇವದರ್ಶನದ ಗುಡಾರದ ಸೇವೆಗೆ ಯೋಗ್ಯರಾಗಿದ್ದರೋ ಅವರನ್ನು ಗೋತ್ರ ಕುಟುಂಬಗಳ ಪ್ರಕಾರ ಎಣಿಸಿದರು. [36]ಅವರಲ್ಲಿ ಕುಟುಂಬಗಳ ಪ್ರಕಾರ ಎಣಿಕೆಯಾದವರ ಸಂಖ್ಯೆ 2750. [37]ಸರ್ವೇಶ್ವರ ಮೋಶೆಗೆ ಕೊಟ್ಟ ಆಜ್ಞೆಯಂತೆ ಕೆಹಾತ್ಯರನ್ನು ಮೋಶೆ – ಆರೋನರು ಎಣಿಕೆ ಮಾಡಿದಾಗ ದೇವದರ್ಶನದ ಗುಡಾರದ ಸೇವೆಗೆ ಯೋಗ್ಯರಾಗಿದ್ದವರು ಇಷ್ಟೇ ಜನ.

38–39 ಗೇರ್ಷೋನ್ಯರಲ್ಲಿ ಮೂವತ್ತರಿಂದ ಐವತ್ತು ವರ್ಷದವರೆಗೆ ವಯಸ್ಸಾಗಿದ್ದವರ ಹಾಗೂ ದೇವದರ್ಶನದ ಗುಡಾರದ ಸೇವೆಗೆ ಸೇರಿದವರೆಂದು [40]ಗೋತ್ರಕುಟುಂಬದ ಪ್ರಕಾರ ಎಣಿಕೆಯಾದವರ ಸಂಖ್ಯೆ – 2630. [41]ಸರ್ವೇಶ್ವರನ ಅಪ್ಪಣೆಯ ಮೇರೆಗೆ ಮೋಶೆ ಹಾಗು ಆರೋನರಿಂದ ಎಣಿಕೆಯಾಗಿ ದೇವದರ್ಶನದ ಗುಡಾರದ ಸೇವೆಗೆ ಯೋಗ್ಯರಾಗಿದ್ದವರು ಇಷ್ಟೇ ಮಂದಿ.

42–43 ಮೆರಾರೀಯರಲ್ಲಿ ಮೂವತ್ತರಿಂದ ಐವತ್ತರವರೆಗೆ ವಯಸ್ಸಾದವರ ಹಾಗೂ ದೇವದರ್ಶನದ ಗುಡಾರದ ಸೇವೆಗೆ ಸೇರಿದವರೆಂದು [44]ಗೋತ್ರಕುಟುಂಬಗಳ ಪ್ರಕಾರ ಎಣಿಕೆಯಾದವರ ಸಂಖ್ಯೆ – 3200. [45]ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದಂತೆ ಮೆರಾರೀಯರನ್ನು ಮೋಶೆ – ಆರೋನರು ಎಣಿಕೆ ಮಾಡಿದಾಗ ಅವರ ಸಂಖ್ಯೆ ಇಷ್ಟೇ ಇತ್ತು.

46–47 ಮೋಶೆ ಹಾಗು ಆರೋನರು ಮತ್ತು ಇಸ್ರಯೇಲರ ಮುಖ್ಯಸ್ಥರು ಲೇವಿಯರಲ್ಲಿ ಮೂವತ್ತರಿಂದ ಐವತ್ತರವರೆಗೆ ವಯಸ್ಸಾಗಿದ್ದವರನ್ನು ಮತ್ತು ದೇವದರ್ಶನದ ಗುಡಾರದ ಸೇವೆಯನ್ನು ಕೈಗೊಳ್ಳಲು [48]ಹಾಗೂ ಅದರ ಹೊರೆಗಳನ್ನು ಹೊರಲು ಶಕ್ತರಾಗಿದ್ದವರನ್ನು ಎಣಿಕೆ ಮಾಡಿದಾಗ ದೊರೆತ ಸಂಖ್ಯೆ – 8580. [49]ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದಂತೆಯೇ ಪ್ರತಿಯೊಬ್ಬನಿಗೆ ಅವನವನ ಕೆಲಸ ಹಾಗೂ ಹೊಣೆಯನ್ನು ಗೊತ್ತುಮಾಡಲಾಯಿತು. ಹೀಗೆ ಸರ್ವೇಶ್ವರನ ಆಜ್ಞೆಯ ಮೇರೆಗೆ ಜನಗಣತಿ ನಡೆಯಿತು.

## ಅಪವಿತ್ರರನ್ನು ದೂರವಿಡಲು ಆಜ್ಞೆ

**5** ಸರ್ವೇಶ್ವರಸ್ವಾಮಿ, ಮೋಶೆಗೆ ಹೀಗೆಂದರು: [2]“ಕುಷ್ಠರೋಗಿಗಳಂಥ ಎಲ್ಲ ಅಂಟುರೋಗಿಗಳನ್ನು ಮೇಹಸ್ರಾವವುಳ್ಳವರನ್ನು ಹಾಗೂ ಹೆಣದ ಸೋಂಕಿನಿಂದ ಅಶುದ್ಧರಾದವರನ್ನು ಪಾಳೆಯದಿಂದ ಹೊರಡಿಸಬೇಕೆಂದು ಇಸ್ರಯೇಲರಿಗೆ ಆಜ್ಞಾಪಿಸು. [3]ಅಂಥವರು ಗಂಡಸರೇ ಆಗಿರಲಿ, ಹೆಂಗಸರೇ ಆಗಿರಲಿ, ಅವರೆಲ್ಲರನ್ನು ಪಾಳೆಯದಿಂದ ಹೊರಡಿಸಬೇಕು. ನಾನೇ ವಾಸವಾಗಿರುವ ಪಾಳೆಯವನ್ನು ಅವರು ಅಪವಿತ್ರಗೊಳಿಸಬಾರದು.” [4]ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದಂತೆಯೇ ಇಸ್ರಯೇಲರು ಮಾಡಿದರು. ಅಂಥವರೆಲ್ಲರನ್ನು ಪಾಳೆಯದಿಂದ ಹೊರದೂಡಿದರು.

## ಮೋಸಗೊಳಿಸಿ ಪಡೆದುದನ್ನು ಪ್ರಾಯಶ್ಚಿತ್ತದೊಂದಿಗೆ ಹಿಂದಿರುಗಿಸು

5 ಸರ್ವೇಶ್ವರ ಮೋಶೆಗೆ ಹೀಗೆಂದರು: “ನೀನು ಇಸ್ರಯೇಲರಿಗೆ ಇಂತೆಂದು ಆಜ್ಞಾಪಿಸು. [6]ಯಾವ ಗಂಡಸೇ ಆಗಲಿ ಹೆಂಗಸೇ ಆಗಲಿ, ಮತ್ತೊಬ್ಬನನ್ನು ಮೋಸಗೊಳಿಸಿ ಸರ್ವೇಶ್ವರನಲ್ಲಿ ವಿಶ್ವಾಸ ಕಳೆದುಕೊಳ್ಳುವಂತೆ ಮಾಡಿದರೆ, ಅಂಥವರು ಅಪರಾಧಿಗಳು. [7]ಅವರು ತಮ್ಮ ಅಪರಾಧವನ್ನು ಒಪ್ಪಿಕೊಳ್ಳಬೇಕು. ಅಲ್ಲದೆ ಅಪರಾಧ ಮಾಡಿದವನು ನಷ್ಟಪಟ್ಟವನಿಗೆ ಮೂಲದ್ರವ್ಯದ ಬೆಲೆಯೊಡನೆ ಐದನೆಯ ಭಾಗವನ್ನು ಹೆಚ್ಚಾಗಿ ಕೊಡಬೇಕು. [8]ದಂಡವನ್ನು ತೆಗೆದುಕೊಳ್ಳತಕ್ಕವನು ತೀರಿಹೋಗಿ ಬಾಧ್ಯಸ್ಥನೂ ಇಲ್ಲದ ಪಕ್ಷಕ್ಕೆ, ಆ ದ್ರವ್ಯ ಸರ್ವೇಶ್ವರನಿಗೆ ಸೇರಬೇಕು. ಅದು ಮತ್ತು ದೋಷಪರಿಹಾರಕ್ಕಾಗಿ ಅರ್ಪಿಸಲ್ಪಡುವ ಪ್ರಾಯಶ್ಚಿತ್ತ ಬಲಿಪ್ರಾಣಿಯಾದ ಟಗರು ಇವೆರಡೂ ಯಾಜಕನಿಗೆ ಸೇರಬೇಕು. [9]ಇಸ್ರಯೇಲಿನ ಜನರು ಪ್ರತ್ಯೇಕಿಸಿ ಯಾಜಕನಿಗೆ ಒಪ್ಪಿಸುವ ಪವಿತ್ರ ವಸ್ತುಗಳೆಲ್ಲವೂ ಯಾಜಕನವುಗಳಾಗಿಯೇ ಇರಬೇಕು. [10]ಒಬ್ಬನು

ಸರ್ವೇಶ್ವರನಿಗೆ ಮೊಸಲಾಗಿಟ್ಟದ್ದನ್ನು ಯಾವ ಯಾಜಕನಿಗೆ ತಂದೊಪ್ಪಿಸುತ್ತಾನೋ ಅದು ಅವನದಾಗಿಯೇ ಇರಬೇಕು."

## ವ್ಯಭಿಚಾರ ಸಂಶಯವನ್ನು ಪರಿಹರಿಸುವ ವಿಧಿ

11 ಸರ್ವೇಶ್ವರ ಮೋಶೆಗೆ ಹೀಗೆಂದರು: "ನೀನು ಇಸ್ರಯೇಲರಿಗೆ ಹೀಗೆ ಆಜ್ಞಾಪಿಸು – [12]ಒಬ್ಬನ
ಹೆಂಡತಿ ತಪ್ಪುದಾರಿ ಹಿಡಿದು, ತನ್ನ ಗಂಡನಿಗೆ ಅಪ್ರಾಮಾಣಿಕಳಾಗಿ ನಡೆದು ಸಿಕ್ಕಿಕೊಳ್ಳದೆ, ಸಾಕ್ಷಿಯಿಲ್ಲದೆ,
[13]ಗುಟ್ಟಾಗಿಯೇ ಪರ ಪುರುಷನೊಡನೆ ಸಂಗಮಿಸಿ, ಗಂಡನಿಗೆ ದ್ರೋಹಿಯಾಗಿ ಅಶುದ್ಧಗಳಾಗಿರಬಹುದು.
[14]ಅಥವಾ ಹಾಗೆ ಮಾಡದೆ, ಕೆಟ್ಟುಹೋಗದೆ ಇದ್ದರೂ ಕೆಟ್ಟು ಹೋದಳೆಂದು ಗಂಡನ ಸಂಶಯಕ್ಕೆ
ಗುರಿಯಾಗಿರಬಹುದು. [15]ಈ ಎರಡು ಸಂದರ್ಭಗಳಲ್ಲೂ ಆ ಗಂಡನು ತನ್ನ ಹೆಂಡತಿಯನ್ನು ಯಾಜಕನ
ಬಳಿಗೆ ಕರೆದುಕೊಂಡು ಬರಬೇಕು. ಅವಳ ಸಂಗತಿಯನ್ನು ವಿಚಾರಿಸುವುದಕ್ಕಾಗಿ, ಅವನು ಯಾಜಕನಿಗೆ
ಮೂರು ಸೇರು ಜವೆಗೋದಿ ಹಿಟ್ಟನ್ನು ಕಾಣಿಕೆಯಾಗಿ ತಂದುಕೊಡಬೇಕು. ಅದು ವ್ಯಭಿಚಾರ ಸಂಶಯವನ್ನು
ಸೂಚಿಸುವುದಕ್ಕೂ ಪಾಪವನ್ನು ಹೊರಪಡಿಸುವುದಕ್ಕೂ, ಸರ್ವೇಶ್ವರನಿಗೆ ನೈವೇದ್ಯವಾದ ಕಾಣಿಕೆ. ಆದ್ದರಿಂದ
ಆ ಹಿಟ್ಟಿನ ಮೇಲೆ ಎಣ್ಣೆಯನ್ನು ಹುಯ್ಯಬಾರದು, ಸಾಂಬ್ರಾಣಿಯನ್ನು ಹಾಕಬಾರದು.

16 "ಯಾಜಕನು ಅವಳನ್ನು ಕರೆದು ಸರ್ವೇಶ್ವರನ ಸಮ್ಮುಖದಲ್ಲಿ ನಿಲ್ಲಿಸಬೇಕು. [17]ಒಂದು ಮಣ್ಣಿನ
ಪಾತ್ರೆಯಲ್ಲಿ ಪರಿಶುದ್ಧ ಜಲವನ್ನು ತೆಗೆದುಕೊಂಡು ದೇವದರ್ಶನದ ಗುಡಾರದ ನೆಲದಿಂದ ಸ್ವಲ್ಪ ಧೂಳನ್ನು
ಆ ನೀರಿನಲ್ಲಿ ಹಾಕಬೇಕು. [18]ಯಾಜಕನು ಆಕೆಯನ್ನು ಸರ್ವೇಶ್ವರನ ಸಮ್ಮುಖದಲ್ಲಿ ನಿಲ್ಲಿಸಿ, ಅವಳ ತಲೆ
ಕೂದಲನ್ನು ಕೆದರಿಸಿ, ವ್ಯಭಿಚಾರದ ಸಂಶಯವನ್ನು ಸೂಚಿಸುವ ಆ ನೈವೇದ್ಯದ ಹಿಟ್ಟನ್ನು ಅವಳ ಕೈಯಲ್ಲಿ
ಇಟ್ಟು ಶಾಪವನ್ನು ತರುವ ಆ ವಿಷಕರವಾದ ನೀರನ್ನು ತನ್ನ ಕೈಯಲ್ಲೇ ಹಿಡಿದುಕೊಳ್ಳಬೇಕು. [19]ಅದೇ
ಯಾಜಕನು ಅವಳಿಂದ ಶಪಥಪೂರ್ವಕ ಪ್ರಮಾಣ ಮಾಡಿಸುತ್ತಾ ಅವಳಿಗೆ – "ನೀನು ನಿನ್ನ ಗಂಡನ
ಅಧೀನದಲ್ಲಿದ್ದು ಪಾತಿವ್ರತ್ಯವನ್ನು ಬಿಡದೆ, ಪರಪುರುಷನನ್ನು ಕೂಡದೆ, ಅಶುದ್ಧಳಾಗದೆ ಇರುವವಳಾದರೆ
ಶಾಪತರುವ ಈ ವಿಷಕರವಾದ ನೀರಿನಿಂದ ನಿನಗೆ ಹಾನಿಯಾಗದು. [20]ಆದರೆ ನೀನು ಗಂಡಸಿದ್ದವಳಾಗಿ
ಪರಪುರುಷನನ್ನು ಕೂಡಿ ಕೆಟ್ಟಿದ್ದರೆ, ನಿನ್ನ ಗಂಡನಲ್ಲದ ಬೇರೊಬ್ಬನು ನಿನ್ನನ್ನು ಸಂಗಮಿಸಿದ್ದರೆ,
[21]ಸರ್ವೇಶ್ವರನು ನಿನ್ನ ಜನನೇಂದ್ರಿಯಗಳು ಬತ್ತಿ ಹೋಗುವಂತೆ, ನಿನ್ನ ಹೊಟ್ಟೆ ಉಬ್ಬುವಂತೆ ಮಾಡಿ, ನೀನು
ನಿನ್ನ ಜನರ ಮಧ್ಯೆ ಶಾಪಗ್ರಸ್ತಳನ್ನಾಗಿ ಮಾಡಲಿ. [22]ಶಾಪತರುವ ಈ ನೀರು ನಿನ್ನೊಳಗೆ ಸೇರಿ ನಿನ್ನ ಹೊಟ್ಟೆ
ಉಬ್ಬುವಂತೆ, ಜನನೇಂದ್ರಿಯಗಳು ಬತ್ತಿಹೋಗುವಂತೆ ಮಾಡಲಿ," ಎಂದು ಹೇಳಬೇಕು. ಅದಕ್ಕೆ ಆ ಹೆಂಗಸು,
"ಆಮೆನ್, ಹಾಗೆಯೇ ಆಗಲಿ," ಎಂದು ಹೇಳಬೇಕು.

23 "ಬಳಿಕ ಯಾಜಕನು ಆ ಶಾಪವಚನಗಳನ್ನು ಒಂದು ಪತ್ರದಲ್ಲಿ ಬರೆದು ಆ ವಿಷಕರ ಜಲದಲ್ಲಿ
ತೊಳೆಯಲಿ; [24]ಶಾಪತರುವ ಆ ನೀರನ್ನು ಆಕೆಗೆ ಕುಡಿಸಲಿ; ಆ ನೀರು ಅವಳೊಳಗೆ ಸೇರಿ ವಿಷಕರ
ಆಗುವುದು. [25]ಆಮೇಲೆ ವ್ಯಭಿಚಾರ ಸಂಶಯ ಸೂಚಕವಾದ ಆ ಹಿಟ್ಟನ್ನು ಅವಳ ಕೈಯಿಂದ ತೆಗೆದುಕೊಂಡ
ಯಾಜಕನು ಬಲಿಪೀಠದ ಹತ್ತಿರಕ್ಕೆ ಬರಬೇಕು. [26]ನೈವೇದ್ಯವಾದುದ್ದನ್ನು ಸೂಚಿಸುವುದಕ್ಕಾಗಿ ಆ ಹಿಟ್ಟಿನಲ್ಲಿ
ಒಂದು ಹಿಡಿಯನ್ನು ತೆಗೆದುಕೊಂಡು ಬಲಿಪೀಠದ ಮೇಲೆ ಅವನು ಹೋಮಮಾಡಬೇಕು. ಕೊನೆಗೆ
ಯಾಜಕನು ಆ ನೀರನ್ನು ಆಕೆಗೆ ಕುಡಿಸಬೇಕು. [27]ಅವಳು ದೋಷಿಯಾಗಿ ಗಂಡನಿಗೆ ದ್ರೋಹವೆಸಗಿದ್ದರೆ
ಕುಡಿದ ಶಾಪಕರವಾದ ಆ ನೀರು ಅವಳೊಳಗೆ ಸೇರಿ ವಿಷ ಆಗುವುದು. ಈ ಕಾರಣ ಅವಳ ಹೊಟ್ಟೆ
ಉಬ್ಬುವುದು, ಅವಳ ಜನನೇಂದ್ರಿಯಗಳು ಬತ್ತಿ ಹೋಗುವುವು. ಆಕೆ ತನ್ನ ಜನರ ಮಧ್ಯೆ ಶಾಪಗ್ರಸ್ತಳಾಗುವಳು.
[28]ಆದರೆ ಆಕೆ ದುಷ್ಟಳಾಗಿ ಇರದೆ, ನಿರಪರಾಧಿಯಾಗಿದ್ದ ಪಕ್ಷಕ್ಕೆ ಅವಳಿಗೆ ಯಾವ ಹಾನಿಯೂ ಸಂಭವಿಸದೆ
ಗರ್ಭವತಿ ಆಗುವಳು.

29 "ವ್ಯಭಿಚಾರ ಸಂಶಯವನ್ನು ಪರಿಹರಿಸುವ ವಿಧಿ ಇದುವೆ. ಹೆಂಡತಿಯಾದವಳು ಗಂಡನ
ಸ್ವಾಧೀನದಲ್ಲಿದ್ದರೂ ಪಾತಿವ್ರತ್ಯವನ್ನು ತೊರೆದು ಜಾರತ್ವ ಮಾಡಿರುವಾಗ [30]ಅಥವಾ ಗಂಡನು ಹೆಂಡತಿಯ
ವಿಷಯದಲ್ಲಿ ಸಂಶಯಪಡುವಾಗ ಅವನು ಅವಳನ್ನು ಸರ್ವೇಶ್ವರನ ಸಮ್ಮುಖದಲ್ಲಿ ತಂದು ನಿಲ್ಲಿಸಬೇಕು.

ಯಾಜಕನು ಅವಳ ವಿಷಯದಲ್ಲಿ ಈ ವಿಧಿನಿಯಮವನ್ನು ನೆರವೇರಿಸಬೇಕು. [31]ಆಗ ಗಂಡನು ನಿರಪರಾಧಿಯಾಗುವನು. ಹೆಂಡತಿ ತನ್ನ ಅಕ್ರಮಕ್ಕೆ ತಕ್ಕ ಶಿಕ್ಷೆಯನ್ನು ಅನುಭವಿಸುವಳು."

## ನಾಜೀರ ವ್ರತಸ್ಥರು

**6** ಸರ್ವೇಶ್ವರಸ್ವಾಮಿ, ಮೋಶೆಗೆ ಹೀಗೆಂದರು: [2]"ನೀನು ಇಸ್ರಯೇಲರಿಗೆ ಆಜ್ಞಾಪಿಸಬೇಕಾದುದು ಇದು – ಯಾವ ಗಂಡಸೇ ಆಗಲಿ, ಹೆಂಗಸೇ ಆಗಲಿ, ನಾಜೀರರ ವ್ರತವನ್ನು ಅಂದರೆ, ಸರ್ವೇಶ್ವರನಿಗೆ ತನ್ನನ್ನೇ ಪ್ರತಿಷ್ಠಿಸಿಕೊಳ್ಳುವ ವಿಶೇಷ ವ್ರತವನ್ನು ಕೈಗೊಂಡಾಗ [3]ದ್ರಾಕ್ಷಾರಸವನ್ನು ಹಾಗೂ ಮದ್ಯಪಾನವನ್ನು ಮುಟ್ಟಬಾರದು; ದ್ರಾಕ್ಷಾರಸದ ಹುಳಿಯನ್ನಾಗಲಿ ಬೇರೆ ಮದ್ಯದ ಹುಳಿಯನ್ನಾಗಲಿ ಕುಡಿಯಬಾರದು. ದ್ರಾಕ್ಷಿ ಹಣ್ಣಿನಿಂದ ಮಾಡಿದ ಯಾವ ಪಾನವನ್ನೂ ಕುಡಿಯಬಾರದು; ಹಸಿ ಅಥವಾ ಒಣಗಿದ ದ್ರಾಕ್ಷಿ ಹಣ್ಣನ್ನು ತಿನ್ನಬಾರದು. [4]ಅಂಥವನು ವ್ರತ ಕೈಗೊಂಡು ತನ್ನನ್ನೇ ಪ್ರತಿಷ್ಠಿಸಿಕೊಂಡ ದಿನಗಳಲ್ಲೆಲ್ಲಾ ದ್ರಾಕ್ಷಾ ಬಳ್ಳಿಯಿಂದ ಉತ್ಪನ್ನವಾದ ಹೀಚನ್ನಾಗಲಿ, ಸಿಪ್ಪೆಯನ್ನಾಗಲಿ ತಿನ್ನಬಾರದು.

5 "ಅವನು ತನ್ನ ವ್ರತ ದಿನಗಳಲ್ಲೆಲ್ಲಾ ಕ್ಷೌರ ಮಾಡಿಸಿಕೊಳ್ಳಬಾರದು. ತನ್ನನ್ನೇ ಪ್ರತಿಷ್ಠಿಸಿ ಕೊಂಡ ದಿನಗಳು ಮುಗಿಯುವ ತನಕ ವ್ರತಬದ್ಧನಾಗಿದ್ದು ತನ್ನ ತಲೆಯ ಕೂದಲನ್ನು ಕತ್ತರಿಸದೆ ಬೆಳೆಯಬಿಡಬೇಕು. [6]ತನ್ನನ್ನೇ ಪ್ರತಿಷ್ಠಿಸಿಕೊಂಡ ದಿನಗಳಲ್ಲೆಲ್ಲಾ ಯಾವ ಶವವನ್ನು ಮುಟ್ಟಬಾರದು. [7]ತಾಯಿತಂದೆ, ಅಣ್ಣತಮ್ಮ, ಅಕ್ಕತಂಗಿ ಇವರಲ್ಲಿ ಯಾರು ಸತ್ತರೂ ಅವರ ನಿಮಿತ್ತ ಕೈಗೊಂಡ ವ್ರತ ಅವನ ತಲೆಯ ಮೇಲಿದೆ; [8]ತಾನು ಪ್ರತಿಷ್ಠಿಸಿಕೊಂಡಿರುವ ದಿನಗಳಲ್ಲೆಲ್ಲಾ ಅವನು ಸರ್ವೇಶ್ವರನಿಗೆ ಮೀಸಲಾಗಿಯೇ ಇರಬೇಕು.

9 "ಆಕಸ್ಮಿಕವಾಗಿ ಯಾರಾದರೂ ಅವನ ಬಳಿಯಲ್ಲೇ ಸತ್ತು, ಅವನು ಪ್ರತಿಷ್ಠಿಸಿಕೊಂಡಿದ್ದ ತಲೆಕೂದಲು ಅಪವಿತ್ರವಾದರೆ ಏಳನೆಯ ದಿನದಂದು ಅಂದರೆ ಶುದ್ಧೀಕರಣ ದಿನದಂದು ತಲೆಯನ್ನು ಕ್ಷೌರ ಮಾಡಿಸಿಕೊಳ್ಳಬೇಕು. [10]ಎಂಟನೆಯ ದಿನದಲ್ಲಿ ಅವನು ಎರಡು ಬೆಳವಕ್ಕಿಗಳನ್ನಾಗಲಿ, ಎರಡು ಪಾರಿವಾಳದ ಮರಿಗಳನ್ನಾಗಲಿ ದೇವದರ್ಶನದ ಗುಡಾರದ ಬಾಗಿಲಿಗೆ ತಂದು ಯಾಜಕನಿಗೆ ಕೊಡಬೇಕು. [11]ಯಾಜಕನು ದೋಷಪರಿಹಾರಬಲಿಯನ್ನಾಗಿ ಒಂದನ್ನೂ ಸಂಪೂರ್ಣ ದಹನ ಬಲಿಯನ್ನಾಗಿ ಇನ್ನೊಂದನ್ನೂ ಸಮರ್ಪಿಸಲಿ. ಹೀಗೆ ಶವಸೋಂಕಿದವನಿಗಾಗಿ ದೋಷಪರಿಹಾರ ಮಾಡಿ ಅವನ ತಲೆಗೂದಲು ಅಂದಿನಿಂದ ಪವಿತ್ರವೆಂದು ನಿರ್ಣಯಿಸಲಿ. [12]ಅವನು ಎಷ್ಟು ದಿನಗಳವರೆಗೆ ತನ್ನನ್ನು ಪ್ರತಿಷ್ಠಿಸಿಕೊಂಡಿದ್ದನೋ ಅಷ್ಟು ದಿನಗಳವರೆಗೆ ಹೊಸದಾಗಿ ತನ್ನನ್ನು ಸರ್ವೇಶ್ವರನಿಗೆ ಪ್ರತಿಷ್ಠಿಸಿಕೊಳ್ಳಬೇಕು. ಅದಲ್ಲದೆ ಪ್ರಾಯಶ್ಚಿತ್ತಬಲಿಯಾಗಿ ಒಂದು ವರ್ಷದ ಕುರಿಯನ್ನು ಸಮರ್ಪಿಸಬೇಕು. ಮೊದಲು ಮಾಡಿದ್ದ ವ್ರತಕ್ಕೆ ವಿಘ್ನಪ್ರಾಪ್ತವಾದ್ದರಿಂದ ಕಳೆದುಹೋದ ದಿನಗಳು ವ್ಯರ್ಥವಾದುವೆಂದು ಪರಿಗಣಿಸಬೇಕು.

13 "ನಾಜೀರ ವ್ರತಸ್ಥನು ತನ್ನ ವ್ರತಾವಧಿ ಮುಗಿದಾಗ ಈ ಕ್ರಮವನ್ನು ಅನುಸರಿಸಬೇಕು. ಅವನು ದೇವದರ್ಶನದ ಗುಡಾರದ ಬಾಗಿಲಿಗೆ ಬಂದು ಸರ್ವೇಶ್ವರನಿಗೆ ಈ ಕಾಣಿಕೆಗಳನ್ನು ಸಲ್ಲಿಸಬೇಕು: [14]ದಹನಬಲಿಗಾಗಿ ಕಳಂಕರಹಿತವಾದ ಒಂದು ವರ್ಷದ ಟಗರು, ಪಾಪಪರಿಹಾರಬಲಿ ಗಾಗಿ ಕಳಂಕರಹಿತವಾದ ಒಂದು ವರ್ಷದ ಕುರಿ, ಸಮಾಧಾನಬಲಿಗಾಗಿ ಕಳಂಕರಹಿತವಾದ ಒಂದು ಟಗರು. [15]ಇದಲ್ಲದೆ ಒಂದು ಬುಟ್ಟಿ ತುಂಬ ಎಣ್ಣೆಬೆರೆಸಿದ ಗೋದಿ ಹಿಟ್ಟಿನ ಹುಳಿಯಿಲ್ಲದ ರೊಟ್ಟಿಗಳು, ಎಣ್ಣೆಹಾಕಿದ ಹುಳಿಯಿಲ್ಲದ ಕಡುಬುಗಳು ಮತ್ತು ಮೇಲೆ ಹೇಳಿದ ಬಲಿಗಳ ಸಮೇತ ಕೊಡಬೇಕಾದ ಧಾನ್ಯದ್ರವ್ಯ–ಪಾನದ್ರವ್ಯಗಳು, ಇವುಗಳನ್ನೆಲ್ಲಾ ಸಮರ್ಪಿಸಬೇಕು.

16 "ಯಾಜಕನು ಇವುಗಳನ್ನು ಸರ್ವೇಶ್ವರನ ಸನ್ನಿಧಿಗೆ ತಂದು ನಾಜೀರ ವ್ರತ ಪಾಪಪರಿಹಾರಕ ಬಲಿಯನ್ನೂ ದಹನಬಲಿಯನ್ನೂ ಸಮರ್ಪಿಸಬೇಕು. [17]ಅನಂತರ ಟಗರನ್ನೂ ಬುಟ್ಟಿ ತುಂಬ ಹುಳಿಯಿಲ್ಲದ ರೊಟ್ಟಿಗಳನ್ನೂ ಸರ್ವೇಶ್ವರನಿಗೆ ಸಮಾಧಾನ ಯಜ್ಞವಾಗಿ ಸಮರ್ಪಿಸಬೇಕು. ತಂದ ಧಾನ್ಯದ್ರವ್ಯ – ಪಾನದ್ರವ್ಯಗಳನ್ನು ಯಾಜಕನು ನೈವೇದ್ಯ ಮಾಡಬೇಕು. [18]ಬಳಿಕ ನಾಜೀರ ವ್ರತಸ್ಥನು ತನ್ನ ದೀಕ್ಷೆಯನ್ನು ಸೂಚಿಸುವ ತಲೆಯ ಕೂದಲನ್ನು ದೇವದರ್ಶನದ ಗುಡಾರದ ಬಾಗಿಲಿನ ಬಳಿಯಲ್ಲಿ ಕ್ಷೌರ ಮಾಡಿಸಿಕೊಳ್ಳಬೇಕು. ಆ ಕೂದಲನ್ನು ಸಮಾಧಾನಬಲಿಯ ದ್ರವ್ಯಗಳ ಕೆಳಗಿರುವ ಬೆಂಕಿಯಲ್ಲಿ ಹಾಕಬೇಕು.

19 "ತರುವಾಯ ಯಾಜಕರು ಆ ಟಗರಿನ ಬೇಂದ ಮುಂದೊಡೆಯನ್ನು ಬುಟ್ಟಿಯಲ್ಲಿನ ಹುಳಿ ಇಲ್ಲದ ಒಂದು ರೊಟ್ಟಿಯನ್ನು ಹಾಗೂ ಹುಳಿ ಇಲ್ಲದ ಒಂದು ಕಡುಬನ್ನು ತೆಗೆದುಕೊಂಡು ನಾಜೀರ ವ್ರತಸ್ಥನು ಕ್ಷೌರ ಮಾಡಿಸಿಕೊಂಡ ನಂತರ ಅವನ ಕೈಯಲ್ಲಿ ಇಡಬೇಕು; ನೈವೇದ್ಯವಾಗಿ ಸರ್ವೇಶ್ವರನ ಸನ್ನಿಧಿಯಲ್ಲಿ ಆರತಿ ಎತ್ತಬೇಕು. [20]ಇದು ನೈವೇದ್ಯವಾಗಿ ಆರತಿಯೆತ್ತುವ ಎದೆಯ ಭಾಗದಂತೆ ಹಾಗೂ ಯಾಜಕರಿಗಾಗಿ ಪ್ರತ್ಯೇಕಿಸುವ ತೊಡೆಯಂತೆ ಯಾಜಕನಿಗೆ ಸಲ್ಲಬೇಕು. ಇದಾದ ನಂತರ ನಾಜೀರ ವ್ರತಸ್ಥನು ದ್ರಾಕ್ಷಾರಸವನ್ನು ಪಾನಮಾಡಬಹುದು.

21 "ಇದುವೇ ನಾಜೀರ ವ್ರತಸ್ಥರು ಅನುಸರಿಸಬೇಕಾದ ವಿಧಿ; ತಮ್ಮ ವ್ರತಪೂರ್ತಿಯಾಗಿ ಸರ್ವೇಶ್ವರನಿಗೆ ಅವರು ಸಮರ್ಪಿಸಬೇಕಾದ ಕಾಣಿಕೆ. ಅವರು ತಮ್ಮ ಶಕ್ತಿಗನುಸಾರ ಹೆಚ್ಚಾಗಿಯೂ ಕೊಡಬಹುದು. ಆದರೆ ತಾವು ಕೊಡುತ್ತೇವೆಂದು ಹರಕೆ ಮಾಡಿದಷ್ಟನ್ನು ವ್ರತ ವಿಧಿಗನುಸಾರ ಕೊಡಲೇಬೇಕು."

### ಆಶೀರ್ವಚನ

22 ಸರ್ವೇಶ್ವರ ಮೋಶೆಗೆ ಹೀಗೆಂದರು: [23]"ನೀನು ಆರೋನನಿಗೂ ಅವನ ಮಕ್ಕಳಿಗೂ ಹೀಗೆ ಆಜ್ಞಾಪಿಸು: 'ನೀವು ಇಸ್ರಯೇಲರನ್ನು ಆಶೀರ್ವದಿಸುವಾಗ ಈ ಪ್ರಕಾರ ಹೇಳುಬೇಕು –

24 ಸರ್ವೇಶ್ವರ ನಿಮ್ಮನ್ನು ಆಶೀರ್ವದಿಸಿ, ಕಾಪಾಡಲಿ!

25 ಸರ್ವೇಶ್ವರ ಪ್ರಸನ್ನ ಮುಖದಿಂದ ನಿಮ್ಮನ್ನು ನೋಡಿ, ನಿಮಗೆ ದಯೆತೋರಲಿ!

26 ಸರ್ವೇಶ್ವರ ನಿಮ್ಮ ಮೇಲೆ ಕೃಪಾಕಟಾಕ್ಷವಿಟ್ಟು, ಶಾಂತಿಯನ್ನು ಅನುಗ್ರಹಿಸಲಿ!'

27 ಹೀಗೆ ಅವರು ಇಸ್ರಯೇಲರ ಮೇಲೆ ನನ್ನ ಹೆಸರನ್ನು ಉಚ್ಚರಿಸುವಾಗ ನಾನು ಅವರನ್ನು ಆಶೀರ್ವದಿಸುವೆನು."

### ಗೋತ್ರನಾಯಕರ ಕಾಣಿಕೆಗಳು

**7** ಮೋಶೆ ದೇವದರ್ಶನದ ಗುಡಾರವನ್ನು ಎತ್ತಿ ನಿಲ್ಲಿಸಿದ ಮೇಲೆ ಅದನ್ನೂ ಅದರ ಸಾಮಾನುಗಳನ್ನೂ
ಹಾಗೂ ಬಲಿಪೀಠವನ್ನೂ ಅದರ ಉಪಕರಣಗಳನ್ನೂ ಅಭಿಷೇಕಿಸಿ ಪ್ರತಿಷ್ಠಿಸಿದನು. [2]ಆಗ ಇಸ್ರಯೇಲರ ಮುಖ್ಯಸ್ಥರು, ಅಂದರೆ ಗೋತ್ರನಾಯಕರು ಹಾಗೂ ಕುಲಾಧಿಪತಿಗಳಾಗಿದ್ದು ಜನಗಣತಿಯ ನೇತೃತ್ವವನ್ನು ವಹಿಸಿಕೊಂಡಿದ್ದವರು, ಕಾಣಿಕೆಗಳನ್ನು ತಂದೊಪ್ಪಿಸಿದರು. [3]ಇಬ್ಬರಿಬ್ಬರು ಒಂದು ಕಮಾನು ಬಂಡಿಯನ್ನೂ ಒಂದು ಜೊತೆ ಎತ್ತುಗಳನ್ನೂ ಅಂತು ಆರು ಬಂಡಿಗಳನ್ನೂ ಆರು ಜೊತೆ ಎತ್ತುಗಳನ್ನೂ ದೇವದರ್ಶನದ ಗುಡಾರದ ಮುಂದೆ ಸರ್ವೇಶ್ವರನ ಸನ್ನಿಧಿಗೆ ತಂದು ಅರ್ಪಿಸಿದರು.

4 ಸರ್ವೇಶ್ವರಸ್ವಾಮಿ ಮೋಶೆಗೆ, [5]"ಈ ಕಾಣಿಕೆಯ ವಸ್ತುಗಳನ್ನು ಇವರ ಕೈಯಿಂದ ತೆಗೆದುಕೊ; ಇವು ದೇವದರ್ಶನದ ಗುಡಾರದ ಸೇವೆಗೆ ಉಪಯೋಗವಾಗಲಿ. ಲೇವಿಯರಿಗೆ ಅವರವರ ಕೆಲಸಕ್ಕೆ ತಕ್ಕ ಹಾಗೆ ಅವುಗಳನ್ನು ಕೊಡು," ಎಂದು ಆಜ್ಞಾಪಿಸಿದರು. [6]ಅಂತೆಯೇ, ಮೋಶೆ ಆ ಬಂಡಿಗಳನ್ನು ಹಾಗೂ ಎತ್ತುಗಳನ್ನು ತೆಗೆದುಕೊಂಡು ಲೇವಿಯರಿಗೆ ಕೊಟ್ಟನು. [7]ಎರಡು ಬಂಡಿಗಳನ್ನು ಹಾಗೂ ನಾಲ್ಕು ಎತ್ತುಗಳನ್ನು ಗೇರ್ಷೋನ್ಯರಿಗೆ, [8]ನಾಲ್ಕು ಬಂಡಿ ಹಾಗೂ ಎಂಟು ಎತ್ತುಗಳನ್ನು ಮೆರಾರೀಯರಿಗೆ, ಅವರವರ ಸೇವೆಗೆ ತಕ್ಕ ಹಾಗೆ ಕೊಟ್ಟನು. ಇವರು ಮಹಾ ಯಾಜಕ ಆರೋನನ ಮಗ ಈತಾಮಾರನ ಕೈಕೆಳಗೆ ಸೇವೆ ಮಾಡಬೇಕಾಗಿತ್ತು. [9]ಕೆಹಾತ್ಯರಿಗೆ ಮಾತ್ರ ಏನನ್ನೂ ಕೊಡಲಿಲ್ಲ. ಏಕೆಂದರೆ ದೇವದರ್ಶನದ ಗುಡಾರದ ಸಾಮಾನುಗಳನ್ನು ಸಾಗಿಸುವುದೇ ಅವರಿಗೆ ನೇಮಕವಾದ ಕೆಲಸವಾಗಿತ್ತು. ಅವರು ಅವುಗಳನ್ನು ಹೆಗಲ ಮೇಲೆ ಹೊರಬೇಕಾಗಿತ್ತು.

10 ಬಲಿಪೀಠವನ್ನು ಅಭಿಷೇಕಿಸಿದ ದಿನದಂದು ಕುಲಾಧಿಪತಿಗಳು ಅದರ ಪ್ರತಿಷ್ಠೆಗಾಗಿ ಕಾಣಿಕೆಗಳನ್ನು ತಂದು ಅದರ ಮುಂದೆ ಇಟ್ಟರು. [11]ಆಗ ಸರ್ವೇಶ್ವರ ಮೋಶೆಗೆ, "ಒಬ್ಬೊಬ್ಬ ಕುಲಾಧಿಪತಿ ಒಂದೊಂದು ದಿನ ಬಲಿಪೀಠದ ಪ್ರತಿಷ್ಠೆಗಾಗಿ ತನ್ನ ಕಾಣಿಕೆಯನ್ನು ಸಮರ್ಪಿಸಲಿ," ಎಂದು ಆಜ್ಞಾಪಿಸಿದರು.

12 ಮೊದಲನೆಯ ದಿನ ಕಾಣಿಕೆ ತಂದೊಪ್ಪಿಸಿದವನು ಯೆಹೂದ ಕುಲಾಧಿಪತಿ ಅಮ್ಮಿನಾದಾಬನ
ಮಗ ನಹಶೋನ. 13ಅವನು ತಂದ ಕಾಣಿಕೆಗಳು: ದೇವಸ್ಥಾನದ ನಾಣ್ಯತೂಕದ ಮೇರೆಗೆ 130 ಶೆಕೆಲ್
ತೂಕದ ಬೆಳ್ಳಿಯ ಒಂದು ಹರಿವಾಣ; 70 ಶೆಕೆಲ್ ತೂಕದ ಬೆಳ್ಳಿಯ ಒಂದು ಬಟ್ಟಲು; ಈ ಎರಡರ ತುಂಬ
ನೈವೇದ್ಯಕ್ಕಾಗಿ ಎಣ್ಣೆಬೆರೆಸಿದ ಗೋದಿಯ ಹಿಟ್ಟು; 14ಧೂಪದ್ರವ್ಯ ತುಂಬಿದ್ದ 10ಶೆಕೆಲ್ ತೂಕದ ಒಂದು ಚಿನ್ನದ
ಧೂಪಾರತಿ; 15ದಹನ ಬಲಿಗಾಗಿ ಒಂದು ಹೋರಿ, ಒಂದು ಟಗರು, ಒಂದು ವರ್ಷದ ಕುರಿ;
16ಪಾಪಪರಿಹಾರಕ ಬಲಿಗಾಗಿ ಒಂದು ಹೋತ; 17ಸಮಾಧಾನಬಲಿಗಾಗಿ ಎರಡು ಹೋರಿಗಳು, ಐದು
ಟಗರುಗಳು, ಐದು ಹೋತಗಳು ಮತ್ತು ವರ್ಷದ ಐದು ಕುರಿಗಳು. ಅಮ್ಮಿನಾದಾಬನ ಮಗ ನಹಶೋನನು
ಸಮರ್ಪಿಸಿದ ಕಾಣಿಕೆಗಳು ಇವೇ.

18 ಎರಡನೆಯ ದಿನ ಇಸ್ಸಾಕಾರ್ ಕುಲಾಧಿಪತಿ ಚೂವಾರನ ಮಗ ನೆತನೇಲನು ತಂದ ಕಾಣಿಕೆಗಳು:
19ದೇವಸ್ಥಾನದ ನಾಣ್ಯತೂಕದ ಮೇರೆಗೆ 130 ಶೆಕೆಲ್ ತೂಕದ ಒಂದು ಹರಿವಾಣ; 70 ಶೆಕೆಲ್ ತೂಕದ
ಒಂದು ಬೆಳ್ಳಿಯ ಬಟ್ಟಲು; ಈ ಎರಡರ ತುಂಬ ನೈವೇದ್ಯಕ್ಕಾಗಿ ಎಣ್ಣೆಬೆರೆಸಿದ ಗೋದಿಯ ಹಿಟ್ಟು;
20ದೂಪದ್ರವ್ಯ ತುಂಬಿದ್ದ 10 ಶೆಕೆಲ್ ತೂಕದ ಒಂದು ಚಿನ್ನದ ಧೂಪಾರತಿ; 21ದಹನಬಲಿಗಾಗಿ ಒಂದು
ಹೋರಿ, ಒಂದು ಟಗರು, ಒಂದು ವರ್ಷದ ಕುರಿ; 22ಪಾಪಪರಿಹಾರಕ ಬಲಿಗಾಗಿ ಒಂದು ಹೋತ;
23ಸಮಾಧಾನ ಬಲಿಗಾಗಿ ಎರಡು ಹೋರಿಗಳು, ಐದು ಟಗರುಗಳು, ಐದು ಹೋತಗಳು ಮತ್ತು ವರ್ಷದ
ಐದು ಕುರಿಗಳು, ಇವೇ ಚೂವಾರನ ಮಗ ನೆತನೇಲನು ಕೊಟ್ಟ ಕಾಣಿಕೆಗಳು.

24 ಮೂರನೆಯ ದಿನ ಜೆಬುಲೂನ್ ಕುಲಾಧಿಪತಿ ಹೇಲೋನನ ಮಗ ಎಲೀಯಾಬನು ತಂದ
ಕಾಣಿಕೆಗಳು: 25ದೇವಸ್ಥಾನದ ನಾಣ್ಯತೂಕದ ಮೇರೆಗೆ 130 ಶೆಕೆಲ್ ತೂಕದ ಒಂದು ಹರಿವಾಣ; 70 ಶೆಕೆಲ್
ತೂಕದ ಒಂದು ಬೆಳ್ಳಿಯ ಬಟ್ಟಲು; ಈ ಎರಡರ ತುಂಬ ನೈವೇದ್ಯಕ್ಕಾಗಿ ಎಣ್ಣೆ ಬೆರೆಸಿದ ಗೋದಿಯ ಹಿಟ್ಟು;
26ಧೂಪದ್ರವ್ಯ ತುಂಬಿದ್ದ 10 ಶೆಕೆಲ್ ತೂಕದ ಒಂದು ಚಿನ್ನದ ಧೂಪಾರತಿ; 27ದಹನಬಲಿಗಾಗಿ ಒಂದು
ಹೋರಿ, ಒಂದು ಟಗರು, ಒಂದು ವರ್ಷದ ಕುರಿ; 28ಪಾಪಪರಿಹಾರಕಬಲಿಗಾಗಿ ಒಂದು ಹೋತ;
29ಸಮಾಧಾನಬಲಿಗಾಗಿ ಎರಡು ಹೋರಿಗಳು, ಐದು ಟಗರುಗಳು, ಐದು ಹೋತಗಳು ಮತ್ತು ವರ್ಷದ
ಐದು ಕುರಿಗಳು. ಇವೇ ಹೇಲೋನನ ಮಗ ಎಲೀಯಾಬನು ಸಮರ್ಪಿಸಿದ ಕಾಣಿಕೆಗಳು.

30 ನಾಲ್ಕನೆಯ ದಿನ ರೂಬೇನ್ ಕುಲಾಧಿಪತಿ ಶೆದೇಯೂರನ ಮಗ ಎಲೀಚೂರನು ತಂದ
ಕಾಣಿಕೆಗಳು: 31ದೇವಸ್ಥಾನದ ನಾಣ್ಯತೂಕದ ಮೇರೆಗೆ 130 ಶೆಕೆಲ್ ತೂಕದ ಒಂದು ಹರಿವಾಣ; 70 ಶೆಕೆಲ್
ತೂಕದ ಒಂದು ಬೆಳ್ಳಿಯ ಬಟ್ಟಲು; ಈ ಎರಡರ ತುಂಬ ನೈವೇದ್ಯಕ್ಕಾಗಿ ಎಣ್ಣೆಬೆರೆಸಿದ ಗೋದಿಯ ಹಿಟ್ಟು;
32ಧೂಪದ್ರವ್ಯ ತುಂಬಿದ್ದ 10 ಶೆಕೆಲ್ ತೂಕದ ಒಂದು ಚಿನ್ನದ ಧೂಪಾರತಿ; 33ದಹನಬಲಿಗಾಗಿ ಒಂದು
ಹೋರಿ, ಒಂದು ಟಗರು, ಒಂದು ವರ್ಷದ ಕುರಿ; 34ಪಾಪಪರಿಹಾರಕ ಬಲಿಗಾಗಿ ಒಂದು ಹೋತ;
35ಸಮಾಧಾನಬಲಿಗಾಗಿ ಎರಡು ಹೋರಿಗಳು, ಐದು ಟಗರುಗಳು, ಐದು ಹೋತಗಳು ಮತ್ತು ವರ್ಷದ
ಐದು ಕುರಿಗಳು. ಶೆದೇಯೂರನ ಮಗ ಎಲೀಚೂರನು ಸಮರ್ಪಿಸಿದ ಕಾಣಿಕೆಗಳು ಇವೇ.

36 ಐದನೆಯ ದಿನ ಸಿಮೆಯೋನ್ ಕುಲಾಧಿಪತಿ ಚೂರಿಷದ್ದೈಯನ ಮಗ ಶೆಲುಮೀಯೇಲನು
ತಂದ ಕಾಣಿಕೆಗಳು: 37ದೇವಸ್ಥಾನದ ನಾಣ್ಯ ತೂಕದ ಮೇರೆಗೆ 130 ಶೆಕೆಲ್ ತೂಕದ ಒಂದು ಹರಿವಾಣ;
70 ಶೆಕೆಲ್ ತೂಕದ ಒಂದು ಬೆಳ್ಳಿಯ ಬಟ್ಟಲು; ಈ ಎರಡರ ತುಂಬ ನೈವೇದ್ಯಕ್ಕಾಗಿ ಎಣ್ಣೆಬೆರೆಸಿದ ಗೋದಿಯ
ಹಿಟ್ಟು; 38ಧೂಪದ್ರವ್ಯ ತುಂಬಿದ್ದ 10 ಶೆಕೆಲ್ ತೂಕದ ಒಂದು ಚಿನ್ನದ ಧೂಪಾರತಿ; 39ದಹನಬಲಿಗಾಗಿ ಒಂದು
ಹೋರಿ, ಒಂದು ಟಗರು, ಒಂದು ವರ್ಷದ ಕುರಿ; 40ಪಾಪಪರಿಹಾರಕಬಲಿಗಾಗಿ ಒಂದು ಹೋತ;
41ಸಮಾಧಾನಬಲಿಗಾಗಿ ಎರಡು ಹೋರಿಗಳು, ಐದು ಟಗರುಗಳು, ಐದು ಹೋತಗಳು, ಮತ್ತು ವರ್ಷದ
ಐದು ಕುರಿಗಳು. ಇವೇ ಚೂರೀಷದ್ದೈಯನ ಮಗ ಶೆಲುಮೀಯೇಲನು ಸಮರ್ಪಿಸಿದ ಕಾಣಿಕೆಗಳು.

42 ಆರನೆಯ ದಿನ ಗಾದ್ ಕುಲಾಧಿಪತಿ ದೆಗೂವೇಲನ ಮಗ ಎಲ್ಯಾಸಾಫನು ತಂದ ಕಾಣಿಕೆಗಳು:
43ದೇವಸ್ಥಾನದ ನಾಣ್ಯತೂಕದ ಮೇರೆಗೆ 130 ಶೆಕೆಲ್ ತೂಕದ ಒಂದು ಹರಿವಾಣ; 70 ಶೆಕೆಲ್ ತೂಕದ
ಒಂದು ಬೆಳ್ಳಿಯ ಬಟ್ಟಲು; ಈ ಎರಡರ ತುಂಬ ನೈವೇದ್ಯಕ್ಕಾಗಿ ಎಣ್ಣೆಬೆರೆಸಿದ ಗೋದಿಯ ಹಿಟ್ಟು;
44ಧೂಪದ್ರವ್ಯ ತುಂಬಿದ್ದ 10 ಶೆಕೆಲ್ ತೂಕದ ಒಂದು ಚಿನ್ನದ ಧೂಪಾರತಿ; 45ದಹನಬಲಿಗಾಗಿ ಒಂದು

ಹೋರಿ, ಒಂದು ಟಗರು, ಒಂದು ವರ್ಷದ ಕುರಿ; 46ಪಾಪಪರಿಹಾರಕ ಬಲಿಗಾಗಿ ಒಂದು ಹೋತ;
47ಸಮಾಧಾನಬಲಿಗಾಗಿ ಎರಡು ಹೋರಿಗಳು, ಐದು ಟಗರುಗಳು, ಐದು ಹೋತಗಳು ಮತ್ತು ವರ್ಷದ
ಐದು ಕುರಿಗಳು. ಇವೇ ದೆಗೂವೇಲನ ಮಗ ಎಲ್ಯಾಸಾಫನು ಸಮರ್ಪಿಸಿದ ಕಾಣಿಕೆಗಳು.

48 ಏಳನೆಯ ದಿನ ಎಫ್ರಯಿಮ್ ಕುಲಾಧಿಪತಿ ಅಮ್ಮೀಹೂದನ ಮಗ ಎಲೀಷಾವನು ತಂದ
ಕಾಣಿಕೆಗಳು: 49ದೇವಸ್ಥಾನದ ನಾಣ್ಯತೂಕದ ಮೇರೆಗೆ 130 ಶೆಕೆಲ್ ತೂಕದ ಒಂದು ಹರಿವಾಣ; 70 ಶೆಕೆಲ್
ತೂಕದ ಒಂದು ಬೆಳ್ಳಿಯ ಬಟ್ಟಲು; ಈ ಎರಡರ ತುಂಬ ನೈವೇದ್ಯಕ್ಕಾಗಿ ಎಣ್ಣೆ ಬೆರೆಸಿದ ಗೋದಿಯ ಹಿಟ್ಟು;
50ಧೂಪದ್ರವ್ಯ ತುಂಬಿದ್ದ 10 ಶೆಕೆಲ್ ತೂಕದ ಒಂದು ಚಿನ್ನದ ಧೂಪಾರತಿ; 51ದಹನಬಲಿಗಾಗಿ ಒಂದು
ಹೋರಿ, ಒಂದು ಟಗರು, ಒಂದು ವರ್ಷದ ಕುರಿ; 52ಪಾಪಪರಿಹಾರಕ ಬಲಿಗಾಗಿ ಒಂದು ಹೋತ;
53ಸಮಾಧಾನಬಲಿಗಾಗಿ ಎರಡು ಹೋರಿಗಳು, ಐದು ಟಗರುಗಳು, ಐದು ಹೋತಗಳು ಮತ್ತು ವರ್ಷದ
ಐದು ಕುರಿಗಳು. ಅಮ್ಮೀ ಹೂದನ ಮಗ ಎಲೀಷಾವನು ಸಮರ್ಪಿಸಿದ ಕಾಣಿಕೆಗಳು ಇವೇ.

54 ಎಂಟನೆಯ ದಿನ ಮನಸ್ಸೆ ಕುಲಾಧಿಪತಿ ಪೆದಾಚೂರನ ಮಗ ಗಮ್ಲೀಯೇಲನು ತಂದ
ಕಾಣಿಕೆಗಳು: 55ದೇವಸ್ಥಾನದ ನಾಣ್ಯತೂಕದ ಮೇರೆಗೆ 130 ಶೆಕೆಲ್ ತೂಕದ ಒಂದು ಬೆಳ್ಳಿಯ ಹರಿವಾಣ;
70 ಶೆಕೆಲ್ ತೂಕದ ಒಂದು ಬೆಳ್ಳಿಯ ಬಟ್ಟಲು; ಈ ಎರಡರ ತುಂಬ ನೈವೇದ್ಯಕ್ಕಾಗಿ ಎಣ್ಣೆಬೆರೆಸಿದ ಗೋದಿಯ
ಹಿಟ್ಟು; 56ಧೂಪದ್ರವ್ಯ ತುಂಬಿದ್ದ 10 ಶೆಕೆಲ್ ತೂಕದ ಒಂದು ಚಿನ್ನದ ಧೂಪಾರತಿ; 57ದಹನಬಲಿಗಾಗಿ
ಒಂದು ಹೋರಿ, ಒಂದು ಟಗರು, ಒಂದು ವರ್ಷದ ಕುರಿ; 58ಪಾಪಪರಿಹಾರಕಬಲಿಗಾಗಿ ಒಂದು ಹೋತ;
59ಸಮಾಧಾನ ಬಲಿಗಾಗಿ ಎರಡು ಹೋರಿಗಳು, ಐದು ಟಗರುಗಳು, ಐದು ಹೋತಗಳು ಮತ್ತು ವರ್ಷದ
ಐದು ಕುರಿಗಳು. ಪೆದಾಚೂರನ ಮಗ ಗಮ್ಲೀಯೇಲನು ಸಮರ್ಪಿಸಿದ ಕಾಣಿಕೆಗಳು ಇವೇ.

60 ಒಂಬತ್ತನೆಯ ದಿನ ಬೆನ್ಯಾಮೀನ್ ಕುಲಾಧಿಪತಿ ಗಿದ್ಯೋನಿಯ ಮಗ ಅಬೀದಾನನು ತಂದ
ಕಾಣಿಕೆಗಳು: 61ದೇವಸ್ಥಾನದ ನಾಣ್ಯತೂಕದ ಮೇರೆಗೆ 130 ಶೆಕೆಲ್ ತೂಕದ ಒಂದು ಬೆಳ್ಳಿಯ ಹರಿವಾಣ;
70 ಶೆಕೆಲ್ ತೂಕದ ಒಂದು ಬೆಳ್ಳಿಯ ಬಟ್ಟಲು; ಈ ಎರಡರ ತುಂಬ ನೈವೇದ್ಯಕ್ಕಾಗಿ ಎಣ್ಣೆಬೆರೆಸಿದ ಗೋದಿಯ
ಹಿಟ್ಟು; 62ಧೂಪದ್ರವ್ಯ ತುಂಬಿದ್ದ 10 ಶೆಕೆಲ್ ತೂಕದ ಒಂದು ಚಿನ್ನದ ಧೂಪಾರತಿ; 63ದಹನಬಲಿಗಾಗಿ
ಒಂದು ಹೋರಿ, ಒಂದು ಟಗರು, ಒಂದು ವರ್ಷದ ಕುರಿ; 64ಪಾಪಪರಿಹಾರಕಬಲಿಗಾಗಿ ಒಂದು ಹೋತ;
65ಸಮಾಧಾನಬಲಿಗಾಗಿ ಎರಡು ಹೋರಿಗಳು, ಐದು ಟಗರುಗಳು, ಐದು ಹೋತಗಳು ಮತ್ತು ವರ್ಷದ
ಐದು ಕುರಿಗಳು. ಇವೇ ಗಿದ್ಯೋನಿಯ ಮಗ ಅಬೀದಾನನು ಸಮರ್ಪಿಸಿದ ಕಾಣಿಕೆಗಳು.

66 ಹತ್ತನೆಯ ದಿನ ದಾನ್ ಕುಲಾಧಿಪತಿ ಅಮ್ಮೀಷದ್ದೈಯನ ಮಗ ಅಹೀಗೆಜೆರನು ತಂದ
ಕಾಣಿಕೆಗಳು: 67ದೇವಸ್ಥಾನದ ನಾಣ್ಯತೂಕದ ಮೇರೆಗೆ 130 ಶೆಕೆಲ್ ತೂಕದ ಒಂದು ಬೆಳ್ಳಿಯ ಹರಿವಾಣ;
70 ಶೆಕೆಲ್ ತೂಕದ ಒಂದು ಬೆಳ್ಳಿಯ ಬಟ್ಟಲು; ಈ ಎರಡರ ತುಂಬ ನೈವೇದ್ಯಕ್ಕಾಗಿ ಎಣ್ಣೆಬೆರೆಸಿದ ಗೋದಿಯ
ಹಿಟ್ಟು; 68ಧೂಪದ್ರವ್ಯ ತುಂಬಿದ್ದ 10 ಶೆಕೆಲ್ ತೂಕದ ಒಂದು ಚಿನ್ನದ ಧೂಪಾರತಿ; 69ದಹನಬಲಿಗಾಗಿ
ಒಂದು ಹೋರಿ, ಒಂದು ಟಗರು, ಒಂದು ವರ್ಷದ ಕುರಿ; 70ಪಾಪಪರಿಹಾರಕಬಲಿಗಾಗಿ ಒಂದು ಹೋತ;
71ಸಮಾಧಾನಬಲಿಗಾಗಿ ಎರಡು ಹೋರಿಗಳು, ಐದು ಟಗರುಗಳು, ಐದು ಹೋತಗಳು ಮತ್ತು ವರ್ಷದ
ಐದು ಕುರಿಗಳು. ಅಮ್ಮೀಷದ್ದೈಯನ ಮಗ ಅಹೀಗೆಜೆರನು ಸಮರ್ಪಿಸಿದ ಕಾಣಿಕೆಗಳು ಇವೇ.

72 ಹನ್ನೊಂದನೆಯ ದಿನ ಆಶೇರ್ ಕುಲಾಧಿಪತಿ ಒಕ್ರಾನನ ಮಗ ಪಗೀಯೇಲನು ತಂದ
ಕಾಣಿಕೆಗಳು: 73ದೇವಸ್ಥಾನದ ನಾಣ್ಯತೂಕದ ಮೇರೆಗೆ 130 ಶೆಕೆಲ್ ತೂಕದ ಒಂದು ಬೆಳ್ಳಿಯ ಹರಿವಾಣ;
70 ಶೆಕೆಲ್ ತೂಕದ ಒಂದು ಬೆಳ್ಳಿಯ ಬಟ್ಟಲು; ಈ ಎರಡರ ತುಂಬ ನೈವೇದ್ಯಕ್ಕಾಗಿ ಎಣ್ಣೆಬೆರೆಸಿದ ಗೋದಿಯ
ಹಿಟ್ಟು; 74ಧೂಪದ್ರವ್ಯ ತುಂಬಿದ್ದ 10 ಶೆಕೆಲ್ ತೂಕದ ಒಂದು ಚಿನ್ನದ ಧೂಪಾರತಿ; 75ದಹನಬಲಿಗಾಗಿ
ಒಂದು ಹೋರಿ, ಒಂದು ಟಗರು, ಒಂದು ವರ್ಷದ ಕುರಿ; 76ಪಾಪಪರಿಹಾರಕಬಲಿಗಾಗಿ ಒಂದು ಹೋತ;
77ಸಮಾಧಾನಬಲಿಗಾಗಿ ಎರಡು ಹೋರಿಗಳು, ಐದು ಟಗರುಗಳು, ಐದು ಹೋತಗಳು ಮತ್ತು ವರ್ಷದ
ಐದು ಕುರಿಗಳು. ಇವೇ ಒಕ್ರಾನನ ಮಗ ಪಗೀಯೇಲನು ಸಮರ್ಪಿಸಿದ ಕಾಣಿಕೆಗಳು.

78 ಹನ್ನೆರಡನೆಯ ದಿನ ನಫ್ತಾಲಿ ಕುಲಾಧಿಪತಿ ಏನಾನನ ಮಗ ಅಹೀರನು ತಂದ ಕಾಣಿಕೆಗಳು:
79ದೇವಸ್ಥಾನದ ನಾಣ್ಯತೂಕದ ಮೇರೆಗೆ 130 ಶೆಕೆಲ್ ತೂಕದ ಒಂದು ಬೆಳ್ಳಿಯ ಹರಿವಾಣ; 70 ಶೆಕೆಲ್

ತೂಕದ ಒಂದು ಬೆಳ್ಳಿಯ ಬಟ್ಟಲು; ಈ ಎರಡರ ತುಂಬ ನೈವೇದ್ಯಕ್ಕಾಗಿ ಎಣ್ಣೆ ಬೆರೆಸಿದ ಗೋದಿಯ ಹಿಟ್ಟು;
80ಧೂಪದ್ರವ್ಯ ತುಂಬಿದ್ದ ಹತ್ತು ಶೆಕೆಲ್ ತೂಕದ ಒಂದು ಚಿನ್ನದ ಧೂಪಾರತಿ; 81ದಹನಬಲಿಗಾಗಿ ಒಂದು
ಹೋರಿ, ಒಂದು ಟಗರು, ಒಂದು ವರ್ಷದ ಕುರಿ; 82ಪಾಪಪರಿಹಾರಕಬಲಿಗಾಗಿ ಒಂದು ಹೋತ;
83ಸಮಾಧಾನ ಬಲಿಗಾಗಿ ಎರಡು ಹೋರಿಗಳು, ಐದು ಟಗರುಗಳು, ಐದು ಹೋತಗಳು ಮತ್ತು ವರ್ಷದ
ಐದು ಕುರಿಗಳು. ಇವೇ ಏನಾನನ ಮಗ ಅಹೀರನು ಸಮರ್ಪಿಸಿದ ಕಾಣಿಕೆಗಳು.

84 ಬಲಿಪೀಠವನ್ನು ಅಭಿಷೇಕಿಸಲಾದ ದಿನದಂದು ಇಸ್ರಯೇಲರ ಕುಲಾಧಿಪತಿಗಳು ಅದರ
ಪ್ರತಿಷ್ಠೆಗಾಗಿ ಸಮರ್ಪಿಸಿದ ಕಾಣಿಕೆಗಳು ಒಟ್ಟು: 12 ಬೆಳ್ಳಿಯ ಹರಿವಾಣಗಳು; 12 ಬೆಳ್ಳಿಯ ಬಟ್ಟಲುಗಳು; 12
ಚಿನ್ನದ ಧೂಪಾರತಿಗಳು; 85ಒಂದೊಂದು ಬೆಳ್ಳಿಯ ಹರಿವಾಣ 130 ಶೆಕೆಲ್ ತೂಕವುಳ್ಳದ್ದಾಗಿತ್ತು;
ಒಂದೊಂದು ಬೆಳ್ಳಿಯ ಬಟ್ಟಲು 70 ಶೆಕೆಲ್ ತೂಕವುಳ್ಳದ್ದಾಗಿತ್ತು; ಆ ಬೆಳ್ಳಿಯ ಪಾತ್ರೆಗಳ ಒಟ್ಟು ತೂಕ
ದೇವಸ್ಥಾನದ ನಾಣ್ಯದ ತೂಕದ ಮೇರೆಗೆ 2400 ಶೆಕೆಲ್ ತೂಕ. 86ಧೂಪದ್ರವ್ಯ ತುಂಬಿದ್ದ ಚಿನ್ನದ
ಧೂಪಾರತಿಗಳು ಹನ್ನೆರಡು; ದೇವಸ್ಥಾನದ ನಾಣ್ಯದ ತೂಕದ ಪ್ರಕಾರ ಒಂದೊಂದರ ತೂಕ 10 ಶೆಕೆಲ್.
ಹೀಗೆ ಸರ್ವೇಶ್ವರಸ್ವಾಮಿ ಆತನೊಡನೆ ಮಾತಾಡಿದರು.

### ದೇವಸ್ಥಾನದ ದೀಪಗಳನ್ನು ಹಚ್ಚುವ ಕ್ರಮ

**8** ಸರ್ವೇಶ್ವರಸ್ವಾಮಿ ಮೋಶೆಗೆ: 2"ಆರೋನನು ದೇವಸ್ಥಾನದ ದೀಪಗಳನ್ನು ಹಚ್ಚುವಾಗ ಆ ಏಳು
ದೀಪಗಳು ದೀಪಸ್ತಂಭದ ಎದುರಿಗಿರುವ ಸ್ಥಳಕ್ಕೆ ಬೆಳಕು ಕೊಡುವಂತೆ ನೋಡಿಕೊಳ್ಳಬೇಕೆಂದು ಅವನಿಗೆ
ಆಜ್ಞಾಪಿಸು," ಎಂದು ಹೇಳಿದರು. 3ಅಂತೆಯೇ ಆ ದೀಪಗಳನ್ನು ಕ್ರಮವಾಗಿ ಇಟ್ಟನು. 4ಆ ದೀಪಸ್ತಂಭದ
ಬುಡಭಾಗವೂ ಅದರ ಪುಷ್ಪಾಲಂಕಾರಗಳು ಚಿನ್ನದ ನಕಾಸಿ ಕೆಲಸದಿಂದ ಮಾಡಲ್ಪಟ್ಟಿದ್ದವು. ಸರ್ವೇಶ್ವರ
ತೋರಿಸಿದ್ದ ಮಾದರಿಯಂತೆ ಮೋಶೆ ಅದನ್ನು ಮಾಡಿಸಿದ್ದನು.

### ಲೇವಿಯರ ಶುದ್ಧೀಕರಣ ಮತ್ತು ನೇಮಕ

5 ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದ್ದು ಏನೆಂದರೆ: 6"ನೀನು ಲೇವಿಯರನ್ನು ಇಸ್ರಯೇಲ ರಿಂದ
ಪ್ರತ್ಯೇಕಿಸಿ ಶುದ್ಧೀಕರಿಸು. 7ಅವರನ್ನು ಶುದ್ಧೀಕರಿಸುವ ವಿಧಾನ ಇದು: ಅವರ ಮೇಲೆ ಪಾಪಪರಿಹಾರಕ
ಜಲವನ್ನು ಚಿಮುಕಿಸು. ಅವರು ಕ್ಷೌರ ಮಾಡಿಸಿಕೊಂಡು, ತಮ್ಮ ಬಟ್ಟೆಗಳನ್ನು ಒಗೆದುಕೊಂಡು ತಮ್ಮನ್ನು
ಶುದ್ಧಮಾಡಿಕೊಳ್ಳಲಿ. 8ಬಳಿಕ ಅವರು ದಹನಬಲಿಗಾಗಿ ಒಂದು ಹೋರಿಯನ್ನೂ ಅದರೊಡನೆ
ಸಮರ್ಪಿಸಬೇಕಾದ ಧಾನ್ಯ ನೈವೇದ್ಯವನ್ನೂ ಅಂದರೆ ಎಣ್ಣೆಬೆರೆಸಿದ ಗೋದಿಯ ಹಿಟ್ಟನ್ನೂ ಮತ್ತು
ಪಾಪಪರಿಹಾರಕಬಲಿಗಾಗಿ ಮತ್ತೊಂದು ಹೋರಿಯನ್ನೂ ತೆಗೆದುಕೊಳ್ಳಲಿ. 9ಆಗ ನೀನು ಅವರನ್ನು
ದೇವದರ್ಶನದ ಗುಡಾರದ ಮುಂದಕ್ಕೆ ಕರೆದುಕೊಂಡು ಬಾ. ಇಸ್ರಯೇಲ್ ಜನರನ್ನು ಸಭೆಸೇರಿಸು.
10ಲೇವಿಯರನ್ನು ಸರ್ವೇಶ್ವರನ ಸನ್ನಿಧಿಯಲ್ಲಿ ನಿಲ್ಲಿಸು. ಇಸ್ರಯೇಲರು ಅವರ ಮೇಲೆ ತಮ್ಮ ಕೈಗಳನ್ನು ಇಡಲಿ.
11ಲೇವಿಯರು ಇಸ್ರಯೇಲರ ಪರವಾಗಿ ಸರ್ವೇಶ್ವರನ ಪರಿಚರ್ಯೆಮಾಡಲು ಯೋಗ್ಯರಾಗುವಂತೆ
ಆರೋನನು ಅವರನ್ನು ಸರ್ವೇಶ್ವರನ ಸನ್ನಿಧಿಯಲ್ಲಿ ನೈವೇದ್ಯದಂತೆ ಸಮರ್ಪಿಸಲಿ. 12ಲೇವಿಯರು ಆ
ಹೋರಿಗಳ ತಲೆಯ ಮೇಲೆ ತಮ್ಮ ಕೈಗಳನ್ನಿಟ್ಟ ನಂತರ ನೀನು ಸರ್ವೇಶ್ವರನಿಗೆ ಪಾಪಪರಿಹಾರಕಬಲಿಯಾಗಿ
ಒಂದು ಹೋರಿಯನ್ನು ಹಾಗು ದಹನಬಲಿಗಾಗಿ ಮತ್ತೊಂದು ಹೋರಿಯನ್ನು ಸಮರ್ಪಿಸಿ ಅವರಿಗಾಗಿ
ಪಾಪಪರಿಹಾರವನ್ನು ಮಾಡು.

13 "ನೀನು ಆರೋನನ ಮತ್ತು ಅವನ ಮಕ್ಕಳ ಮುಂದೆ ಲೇವಿಯರನ್ನು ನಿಲ್ಲಿಸಿ ಅವರನ್ನು
ನೈವೇದ್ಯದಂತೆ ಸರ್ವೇಶ್ವರನಿಗೆ ಸಮರ್ಪಿಸು. 14ಹೀಗೆ ಲೇವಿಯರನ್ನು ಇಸ್ರಯೇಲರಿಂದ ಪ್ರತ್ಯೇಕಿಸಿದಾಗ
ಅವರು ನನ್ನ ಸೊತ್ತಾಗುವರು. 15ನೀನು ಅವರನ್ನು ಶುದ್ಧೀಕರಿಸಿ ನೈವೇದ್ಯದಂತೆ ಸಮರ್ಪಿಸಿದ ನಂತರ
ಅವರು ದೇವದರ್ಶನದ ಗುಡಾರದ ಪರಿಚರ್ಯೆಯನ್ನು ಮಾಡಲಿ. 16ಇಸ್ರಯೇಲರಲ್ಲಿ ಇವರೇ ನನಗೆ
ಸಂಪೂರ್ಣವಾಗಿ ಸಮರ್ಪಿತರು. ಚೊಚ್ಚಲು ಮಕ್ಕಳಿಗೆ ಬದಲಾಗಿ, ಅಂದರೆ ಇಸ್ರಯೇಲರ ಜ್ಯೇಷ್ಠಪುತ್ರರಿಗೆ

ಬದಲಾಗಿ ನಾನು ಇವರನ್ನೇ ನನ್ನ ಸ್ವಂತಕ್ಕಾಗಿ ತೆಗೆದುಕೊಂಡಿದ್ದೇನೆ. [17]ಇಸ್ರಯೇಲರಲ್ಲಿ ಚೊಚ್ಚಲಾದ ಮನುಷ್ಯರೂ ಪಶುಪ್ರಾಣಿಗಳೆಲ್ಲವೂ ನನ್ನ ಸೊತ್ತೆಂಬುದೇನೋ ನಿಜ; ಈಜಿಪ್ಟ್ ದೇಶದಲ್ಲಿ ಚೊಚ್ಚಲಾದುದನ್ನೆಲ್ಲ ಸಂಹರಿಸಿದಾಗ ಇಸ್ರಯೇಲರಲ್ಲಿ ಚೊಚ್ಚಲಾದುದನ್ನು ನನ್ನ ಸ್ವಂತಕ್ಕಾಗಿ ಪ್ರತಿಷ್ಠಾಪಿಸಿಕೊಂಡೆ. [18]ಈಗ ಇಸ್ರಯೇಲರ ಚೊಚ್ಚಲು ಮಕ್ಕಳಿಗೆ ಬದಲಾಗಿ ಲೇವಿಯರನ್ನು ತೆಗೆದುಕೊಂಡಿದ್ದೇನೆ. [19]ಇಸ್ರಯೇಲರ ಪರವಾಗಿ ದೇವದರ್ಶನದ ಗುಡಾರದ ಪರಿಚರ್ಯವನ್ನು ನಡೆಸುವುದಕ್ಕೂ ಪಾಪಪರಿಹಾರವನ್ನು ಮಾಡುವುದಕ್ಕೂ ಲೇವಿಯರನ್ನು ಆರಿಸಿಕೊಂಡು ಆರೋನನ ಮತ್ತು ಅವನ ಮಕ್ಕಳ ವಶಕ್ಕೆ ಕೊಟ್ಟಿದ್ದೇನೆ. ಆದುದರಿಂದ ಇಸ್ರಯೇಲರು ದೇವಸ್ಥಾನದ ಹತ್ತಿರಕ್ಕೆ ಬಂದಾಗ ಅವರಿಗೆ ಯಾವ ಅಪಾಯವು ಸಂಭವಿಸುವುದಿಲ್ಲ."

20 ಸರ್ವೇಶ್ವರ ಲೇವಿಯರ ವಿಷಯದಲ್ಲಿ ಆಜ್ಞಾಪಿಸಿದಂತೆಯೇ ಮೋಶೆ, ಆರೋನನು ಹಾಗು ಇಸ್ರಯೇಲ್ ಜನರೆಲ್ಲರು ಮಾಡಿದರು. [21]ಲೇವಿಯರು ತಮ್ಮನ್ನು ಶುದ್ಧಮಾಡಿಕೊಂಡು ಬಟ್ಟೆಗಳನ್ನು ಒಗೆದುಕೊಂಡರು. ಆರೋನನು ಅವರನ್ನು ನೈವೇದ್ಯದಂತೆ ಸರ್ವೇಶ್ವರನ ಸನ್ನಿಧಿಯಲ್ಲಿ ಸಮರ್ಪಿಸಿದನು. ಅವರನ್ನು ಶುದ್ಧೀಕರಿಸುವುದಕ್ಕಾಗಿ ಅವರಿಗೋಸ್ಕರ ಪಾಪಪರಿಹಾರವನ್ನು ಮಾಡಿದನು. [22]ಇದಾದ ಮೇಲೆ ಲೇವಿಯರು ತಮಗೆ ನೇಮಕವಾದ ಕೆಲಸವನ್ನು ದೇವದರ್ಶನದ ಗುಡಾರದಲ್ಲಿ ಆರೋನನ ಮತ್ತು ಅವನ ಮಕ್ಕಳ ಕೈಕೆಳಗೆ ನಡೆಸಲಾರಂಭಿಸಿದರು. ಅವರ ಬಗ್ಗೆ ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದಂತೆಯೇ ಅವರು ಮಾಡಿದರು.

23 ಇದಲ್ಲದೆ ಸರ್ವೇಶ್ವರ ಮೋಶೆಗೆ ಹೀಗೆಂದು ಆಜ್ಞಾಪಿಸಿದರು: [24]"ಲೇವಿಯರು ಅನುಸರಿಸಬೇಕಾದ ಪದ್ಧತಿ ಇದು – ಇಪ್ಪತ್ತೈದು ವರ್ಷ ಮತ್ತು ಮೇಲ್ಪಟ್ಟ ವಯಸ್ಸಿನವರು ದೇವದರ್ಶನದ ಗುಡಾರದಲ್ಲಿ ಸೇವೆಮಾಡಲು ಸೇರಬೇಕು. [25]ಅವರು ಐವತ್ತು ವರ್ಷದವರಾದ ನಂತರ ಆ ಸೇವಾಸಂಸ್ಥೆಯನ್ನು ಬಿಟ್ಟು ದೇವಸ್ಥಾನದ ಪರಿಚರ್ಯದಿಂದ ನಿವೃತ್ತರಾಗಬೇಕು. [26]ಅಂಥವರು ತಮ್ಮ ಸ್ವಕುಲದವರ ಜೊತೆ ದೇವದರ್ಶನದ ಗುಡಾರವನ್ನು ಕಾಯುವ ಸೇವೆಮಾಡಬಹುದು. ಅದೊಂದನ್ನು ಬಿಟ್ಟು ಅವರಿಂದ ಬೇರೆ ಪರಿಚರ್ಯೆಯನ್ನು ಮಾಡಿಸಕೂಡದು. ಲೇವಿಯರು ಮಾಡಬೇಕಾದ ಕರ್ತವ್ಯಗಳನ್ನು ನೀನು ಹೀಗೆ ವಿಧಿಸಬೇಕು."

### ಎರಡನೇ ಪಾಸ್ಕಹಬ್ಬದ ಆಚರಣೆ

**9** ಇಸ್ರಯೇಲರು ಈಜಿಪ್ಟ್ ದೇಶವನ್ನು ಬಿಟ್ಟು ಬಂದ ಎರಡನೆಯ ವರ್ಷದ ಮೊದಲನೆಯ ತಿಂಗಳಲ್ಲಿ ಸೀನಾಯಿ ಮರುಭೂಮಿಯಲ್ಲಿ ಸರ್ವೇಶ್ವರಸ್ವಾಮಿ ಮೋಶೆಯೊಂದಿಗೆ ಮಾತನಾಡಿದರು. [2]ಅವರು ಹೇಳಿದ್ದು ಇದು: "ಇಸ್ರಯೇಲರು ಪಾಸ್ಕಹಬ್ಬವನ್ನು ನಿಯಮಿತ ಕಾಲದಲ್ಲಿ ಆಚರಿಸುವಂತೆ ಹೇಳು. [3]ಈ ತಿಂಗಳಿನ ಹದಿನಾಲ್ಕನೇ ದಿನದ ಸಂಜೆ ಅದನ್ನು ಆಚರಿಸಬೇಕಾದ ನಿಯಮಿತ ವೇಳೆ. ಅದನ್ನು ಎಲ್ಲ ವಿಧಿನಿಯಮಗಳ ಪ್ರಕಾರ ಆಚರಿಸಬೇಕು." [4]ಅಂತೆಯೇ ಮೋಶೆ ಇಸ್ರಯೇಲರಿಗೆ, "ನೀವು ಪಾಸ್ಕ ಹಬ್ಬವನ್ನು ಆಚರಿಸಬೇಕೆಂದು ಆಜ್ಞಾಪಿಸಲಾಗಿದೆ," ಎಂದು ತಿಳಿಸಿದನು. [5]ಅವರು ಅದಕ್ಕನುಗುಣವಾಗಿ ಮೊದಲನೆಯ ತಿಂಗಳಿನ ಹದಿನಾಲ್ಕನೆಯ ದಿನದ ಸಂಜೆ ಸೀನಾಯಿ ಮರುಭೂಮಿಯಲ್ಲಿ ಪಾಸ್ಕವನ್ನು ಆಚರಿಸಿದರು. ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದಂತೆಯೇ ಇಸ್ರಯೇಲರು ಮಾಡಿದರು.

6 ಆದರೆ ಕೆಲವರು ನರಶವವನ್ನು ಮುಟ್ಟಿದ್ದರಿಂದ ಅಶುದ್ಧರಾಗಿದ್ದರು. ಆದ್ದರಿಂದ ಪಾಸ್ಕಹಬ್ಬವನ್ನು ನಿಯಮಿತ ದಿನದಂದು ಆಚರಿಸಲಾಗಲಿಲ್ಲ. ಅವರು ಮೋಶೆ – ಆರೋನರ ಬಳಿಗೆ ಬಂದು, [7]"ನರಶವದ ಸೋಂಕಿನಿಂದ ನಾವು ಅಶುದ್ಧರಾದೆವು. ನಿಯಮಿತ ಕಾಲದಲ್ಲಿ ಮಿಕ್ಕ ಇಸ್ರಯೇಲರೊಡನೆ ಸರ್ವೇಶ್ವರನಿಗೆ ಬಲಿಯನ್ನು ಸಮರ್ಪಿಸಲು ನಮಗೆ ಅಪ್ಪಣೆಯಿಲ್ಲವೆ?" ಎಂದು ವಿಚಾರಿಸಿದರು. [8]ಅವರಿಗೆ ಮೋಶೆ, "ಸ್ವಲ್ಪ ತಾಳಿ, ಸರ್ವೇಶ್ವರ ನಿಮ್ಮ ವಿಷಯದಲ್ಲಿ ಏನು ಆಜ್ಞಾಪಿಸುತ್ತಾರೋ ಎಂದು ವಿಚಾರಿಸುತ್ತೇನೆ," ಎಂದು ಹೇಳಿದನು.

9 ಆಗ ಸರ್ವೇಶ್ವರ ಮೋಶೆಗೆ ಹೀಗೆಂದರು: 10“ನೀನು ಇಸ್ರಯೇಲರಿಗೆ ಹೀಗೆ ಆಜ್ಞಾಪಿಸು –
ನಿಮ್ಮಲ್ಲಿಯಾಗಲಿ ನಿಮ್ಮ ಸಂತತಿಯವರಲ್ಲಾಗಲಿ ಶವ ಸೋಂಕಿದುದರಿಂದ ಅಶುದ್ಧರಾದವರು ಮಾತ್ರವಲ್ಲ
ದೂರ ಪ್ರಯಾಣದಲ್ಲಿರುವವರು ಕೂಡ ಸರ್ವೇಶ್ವರನ ಆಜ್ಞಾನುಸಾರ ಪಾಸ್ಕ ಹಬ್ಬವನ್ನು ಆಚರಿಸಲೇಬೇಕು.
11ಅಂಥವರು ಎರಡನೆಯ ತಿಂಗಳಿನ ಹದಿನಾಲ್ಕನೆಯ ದಿನದ ಸಂಜೆ ಅದನ್ನು ಆಚರಿಸಬೇಕು. ಹುಳಿಯಿಲ್ಲದ
ರೊಟ್ಟಿ ಮತ್ತು ಕಹಿಯಾದ ಸೊಪ್ಪುಸದೆಗಳೊಂದಿಗೆ ಅದನ್ನು ಊಟಮಾಡಬೇಕು. 12ಅದರಲ್ಲಿ ಸ್ವಲ್ಪವನ್ನಾದರೂ
ಮರುದಿನದವರೆಗೆ ಮಿಗಿಸಬಾರದು. ಅದರ ಒಂದು ಎಲುಬನ್ನಾದರೂ ಮುರಿಯಬಾರದು. ಪಾಸ್ಕ ಹಬ್ಬ
ಕುರಿತ ವಿಧಿನಿಯಮಗಳ ಪ್ರಕಾರವೇ ಅದನ್ನು ಆಚರಿಸಬೇಕು. 13ಒಬ್ಬನು ತಾನು ಶುದ್ಧನಾಗಿದ್ದರೂ
ಪ್ರಯಾಣದಲ್ಲಿಲ್ಲದಿದ್ದರೂ ಪಾಸ್ಕ ಹಬ್ಬವನ್ನು ಆಚರಿಸಲು ತಪ್ಪಿದ್ದೇ ಆದರೆ ಅಂಥವನನ್ನು ಕುಲದಿಂದ ಹೊರಗೆ
ಹಾಕಬೇಕು. ಅವನು ಸರ್ವೇಶ್ವರನಿಂದ ನಿಯಮಿತವಾದ ಬಲಿಯನ್ನು ಸಕಾಲದಲ್ಲಿ ಸಮರ್ಪಿಸದೆ
ಹೋದುದರಿಂದ ತನ್ನ ಪಾಪಫಲವನ್ನು ಅನುಭವಿಸಲೇಬೇಕು.

14 “ನಿಮ್ಮಲ್ಲಿ ಅನ್ಯದೇಶೀಯನೊಬ್ಬನು ಪ್ರವಾಸಿಯಾಗಿದ್ದು ಸರ್ವೇಶ್ವರನಿಗೆ ಪಾಸ್ಕ ಹಬ್ಬವನ್ನು
ಆಚರಿಸಬೇಕೆಂದು ಬಯಸಿದರೆ ಅದನ್ನು ವಿಧಿನಿಯಮಗಳ ಅನುಸಾರವೇ ಆಚರಿಸಲಿ. ಪರದೇಶದವನಿಗೂ
ಸ್ವದೇಶದವನಿಗೂ ಒಂದೇ ವಿಧಿಯಿರಬೇಕು.”

## ಅಗ್ನಿಮೇಘ

(ವಿಮೋ. 40.34–38)

15 ಇಸ್ರಯೇಲರು ದೇವದರ್ಶನದ ಗುಡಾರವನ್ನು ಎತ್ತಿ ನಿಲ್ಲಿಸಿದಾಗ ಮೇಘವೊಂದು ಅದರ ಮೇಲೆ
ಆವರಿಸಿಕೊಂಡಿತು. ಸಂಜೆಯಿಂದ ಮುಂಜಾನೆಯವರೆಗೂ ಅದು ಬೆಂಕಿಯಂತೆ ಕಾಣಿಸಿತು. 16ಅದು ಸದಾ
ಹಾಗೆಯೇ ಇರುತ್ತಿತ್ತು.

ಆ ಮೇಘವು ದೇವಸ್ಥಾನವನ್ನು ಆವರಿಸಿಕೊಳ್ಳುತ್ತಿತ್ತು; ರಾತ್ರಿವೇಳೆಯಲ್ಲಿ ಬೆಂಕಿಯಂತೆ ಕಾಣಿಸುತ್ತಿತ್ತು.
17ಅದು ಗುಡಾರದಿಂದ ಮೇಲಕ್ಕೆ ಎದ್ದಾಗ ಇಸ್ರಯೇಲರು ಮುಂದಕ್ಕೆ ಪ್ರಯಾಣ ಮಾಡುತ್ತಿದ್ದರು. ಆ ಮೇಘ
ಎಲ್ಲಿ ನಿಲ್ಲುತ್ತಿತ್ತೋ ಅಲ್ಲೇ ಇಸ್ರಯೇಲರು ತಮ್ಮ ಡೇರೆಗಳನ್ನು ಹಾಕಿಕೊಳ್ಳುತ್ತಿದ್ದರು. 18ಸರ್ವೇಶ್ವರನ
ಅಪ್ಪಣೆಯನ್ನು ಹೊಂದಿಯೇ ಅವರು ಪ್ರಯಾಣ ಮಾಡುತ್ತಿದ್ದರು. ಸರ್ವೇಶ್ವರನ ಅಪ್ಪಣೆಯನ್ನು ಪಡೆದು
ತಮ್ಮ ಡೇರೆಗಳನ್ನು ಹಾಕಿಕೊಳ್ಳುತ್ತಿದ್ದರು. ಆ ಮೇಘವು ದೇವದರ್ಶನದ ಗುಡಾರದ ಮೇಲಿರುವ ತನಕ
ಅವರು ಇದ್ದ ಸ್ಥಳದಲ್ಲೇ ಇರುತ್ತಿದ್ದರು. 19ಅದು ಬಹುದಿನದವರೆಗೂ ದೇವದರ್ಶನದ ಗುಡಾರದ ಮೇಲೆ
ಇರುತ್ತಿದ್ದ ಸಂದರ್ಭದಲ್ಲಿ ಇಸ್ರಯೇಲರು ಸರ್ವೇಶ್ವರನ ಸೂಚನೆಯನ್ನು ಅನುಸರಿಸಿ ಪ್ರಯಾಣಮಾಡದೆ
ಇರುತ್ತಿದ್ದರು. 20ಒಂದೊಂದು ವೇಳೆ ಆ ಮೇಘ ಕೆಲವು ದಿವಸ ಮಾತ್ರ ಗುಡಾರದ ಮೇಲೆ ನಿಂತಿರುತ್ತಿತ್ತು.
ಸರ್ವೇಶ್ವರನ ಆಜ್ಞಾನುಸಾರ ಅವರು ಹಾಗೆಯೇ ಇಳಿದುಕೊಳ್ಳುತ್ತಿದ್ದರು. ಸರ್ವೇಶ್ವರನ
ಆಜ್ಞಾನುಸಾರವಾಗಿಯೇ ತಮ್ಮ ಡೇರೆಗಳನ್ನು ಕಿತ್ತುಕೊಂಡು ಹೊರಡುತ್ತಿದ್ದರು. 21ಕೆಲವೊಮ್ಮೆ ಆ ಮೇಘವು
ಸಾಯಂಕಾಲದಿಂದ ಹೊತ್ತಾರೆಯವರೆಗೆ ಇರುತ್ತಿತ್ತು. ಬೆಳಿಗ್ಗೆ ಅದು ಮೇಲಕ್ಕೆ ಎದ್ದಾಗ ಜನರು
ಪ್ರಯಾಣಮಾಡುತ್ತಿದ್ದರು. ಕೆಲವು ಸಲ ಅದು ಹಗಲಿರುಳೂ ನಿಂತಿರುತ್ತಿತ್ತು. ಅದು ಯಾವಾಗ
ಮೇಲೇಳುತ್ತಿತ್ತೋ ಆಗ ಜನರು ಹೊರಡುತ್ತಿದ್ದರು. 22ದೇವದರ್ಶನದ ಗುಡಾರದ ಮೇಲೆ ಆ ಮೇಘ
ನಿಲ್ಲುವುದು ಎರಡು ದಿನವಾದರೂ ತಿಂಗಳಾದರೂ ಒಂದು ವರ್ಷವಾದರೂ ಸರಿಯೇ ಅಲ್ಲಿಯತನಕ
ಇಸ್ರಯೇಲರು ಪ್ರಯಾಣಮಾಡದೆ ಅಲ್ಲೇ ಇಳಿದುಕೊಂಡಿರುತ್ತಿದ್ದರು. ಅದು ಮೇಲೆದ್ದಾಗ ಅವರು
ಹೊರಡುತ್ತಿದ್ದರು. 23ಸರ್ವೇಶ್ವರನ ಆಜ್ಞೆಯ ಪ್ರಕಾರ ಅವರು ತಮ್ಮ ಡೇರೆಗಳನ್ನು ಹಾಕಿಕೊಳ್ಳುತ್ತಿದ್ದರು.
ಸರ್ವೇಶ್ವರನ ಆಜ್ಞೆಯ ಪ್ರಕಾರವೇ ಡೇರೆಗಳನ್ನು ಕಿತ್ತು ಹೊರಡುತ್ತಿದ್ದರು. ಮೋಶೆಯ ಮುಖಾಂತರ
ಸರ್ವೇಶ್ವರ ಆಜ್ಞಾಪಿಸಿದಂತೆಯೇ ಅವರು ಸರ್ವೇಶ್ವರನ ಸೂಚನೆಗಳನ್ನು ಅನುಸರಿಸಿ ನಡೆಯುತ್ತಿದ್ದರು.

## ಬೆಳ್ಳಿಯ ಕಹಳೆಗಳು

**10** ಸರ್ವೇಶ್ವರಸ್ವಾಮಿ ಮೋಶೆಗೆ ಹೀಗೆಂದು ಆಜ್ಞಾಪಿಸಿದರು: [2]"ನೀನು ಬೆಳ್ಳಿಯ ತಗಡಿನಿಂದ ಎರಡು
ಕಹಳೆಗಳನ್ನು ಮಾಡಿಸು. ಜನರನ್ನು ಸಭೆಸೇರಿಸುವುದಕ್ಕೂ ಹಾಗೂ ದಂಡನ್ನು ಹೊರಡಿಸುವುದಕ್ಕೂ
ಅವುಗಳನ್ನು ಉಪಯೋಗಿಸು. [3]ಅವೆರಡನ್ನೂ ನೀನು ಊದಿಸುವಾಗ ಜನರೆಲ್ಲರೂ ನಿನ್ನ ಹತ್ತಿರ
ದೇವದರ್ಶನದ ಗುಡಾರದ ಬಾಗಿಲಿಗೆ ಕೂಡಿಬರಬೇಕು. [4]ಒಂದನ್ನು ಮಾತ್ರ ಊದಿಸಿದಾಗ ಇಸ್ರಯೇಲರಲ್ಲಿ
ಸಹಸ್ರಾಧಿಪತಿಗಳಾದ ಮುಖ್ಯಸ್ಥರು ನಿನ್ನ ಬಳಿಗೆ ಕೂಡಿಬರಬೇಕು. [5]ಆರ್ಭಟವಾಗಿ ಮೊಳಗಿಸುವಾಗ
ಪೂರ್ವದಿಕ್ಕಿನ ದಂಡುಗಳು ಹೊರಡಬೇಕು. [6]ಎರಡನೆಯ ಸಾರಿ ಆರ್ಭಟವಾಗಿ ಮೊಳಗಿಸಿದಾಗ ದಕ್ಷಿಣ
ದಿಕ್ಕಿನ ದಂಡುಗಳು ಹೊರಡಬೇಕು. ಹೀಗೆ ಪ್ರಯಾಣ ಹೊರಡಬೇಕಾದಾಗ ಆರ್ಭಟವಾಗಿಯೇ
ಮೊಳಗಿಸಬೇಕು. [7]ಜನರನ್ನು ಸಭೆ ಸೇರಿಸಬೇಕಾದಾಗ ಸಾಧಾರಣವಾಗಿ ಊದಿಸಬೇಕೇ ಹೊರತು
ಆರ್ಭಟವಾಗಿ ಮೊಳಗಿಸಬೇಕಾಗಿಲ್ಲ. [8]ಆರೋನನ ವಂಶಸ್ಥರಾದ ಯಾಜಕರೇ ಆ ಕಹಳೆಗಳನ್ನು ಊದಬೇಕು.

"ನಿಮಗೂ ನಿಮ್ಮ ಸಂತತಿಯವರಿಗೂ ಇದು ಶಾಶ್ವತ ನಿಯಮವಾಗಿರಲಿ. [9]ನೀವು ಸ್ವದೇಶವನ್ನು
ಸೇರಿದ ಮೇಲೆ ನಿಮ್ಮನ್ನು ಪೀಡಿಸುವ ಶತ್ರುಗಳ ಮೇಲೆ ಯುದ್ಧಕ್ಕೆ ಹೊರಡುವಾಗ ಆ ಕಹಳೆಗಳನ್ನು
ಆರ್ಭಟವಾಗಿ ಮೊಳಗಿಸಬೇಕು. ಆಗ ನಿಮ್ಮ ದೇವರಾದ ಸರ್ವೇಶ್ವರ ನಿಮ್ಮನ್ನು ನೆನಪಿಗೆ ತಂದುಕೊಂಡು
ಶತ್ರುಗಳ ಕೈಯಿಂದ ನಿಮ್ಮನ್ನು ಬಿಡಿಸುವರು. [10]ಇದಲ್ಲದೆ, ಉತ್ಸವದಿನಗಳಲ್ಲೂ ಹಬ್ಬದಿನಗಳಲ್ಲೂ
ಅಮಾವಾಸ್ಯೆಯಲ್ಲೂ ಮತ್ತು ದಹನಬಲಿಗಳನ್ನೂ ಸಮಾಧಾನಬಲಿಗಳನ್ನೂ ಅರ್ಪಿಸುವಾಗಲೂ ಆ
ಕಹಳೆಗಳನ್ನು ಮೊಳಗಿಸಬೇಕು. ಆ ಧ್ವನಿ ನಿಮ್ಮನ್ನು ನಿಮ್ಮ ದೇವರ ನೆನಪಿಗೆ ತರಲು ನೆರವಾಗುವುದು. ನಾನೇ
ನಿಮ್ಮ ದೇವರಾದ ಸರ್ವೇಶ್ವರ."

## ದಂಡುಗಳ ಪ್ರಯಾಣ

11 ಎರಡನೆಯ ವರ್ಷದ ಎರಡನೆಯ ತಿಂಗಳಿನ ಇಪ್ಪತ್ತನೆಯ ದಿನ ದೇವದರ್ಶನದ ಗುಡಾರದ
ಮೇಲಿದ್ದ ಮೇಘವು ಮೇಲಕ್ಕೆ ಎದ್ದಿತು. [12]ಆದ್ದರಿಂದ ಇಸ್ರಯೇಲರು ಸೀನಾಯಿ ಮರುಭೂಮಿಯನ್ನು ಬಿಟ್ಟು
ಮುಂದೆ ಮುಂದೆ ಪ್ರಯಾಣ ಮಾಡಿದರು. ಬಳಿಕ ಆ ಮೇಘ ಪಾರಾನ್ ಮರುಭೂಮಿಯಲ್ಲಿ ನಿಂತಿತು.

13 ಸರ್ವೇಶ್ವರ ಮೋಶೆಯ ಮುಖಾಂತರ ಆಜ್ಞಾಪಿಸಿದ ಕ್ರಮಾನುಸಾರ ದಂಡುಗಳು ಪ್ರಯಾಣ
ಮಾಡಿದ್ದು ಇದೇ ಮೊದಲನೆಯ ಸಾರಿ. [14]ಮುಂಭಾಗದಲ್ಲಿ ಯೆಹೂದ ಕುಲದ ದಂಡಿಗೆ ಸೇರಿದವರು ಸೈನ್ಯ
ಸೈನ್ಯವಾಗಿ ಹೊರಟರು. ಅವರಿಗೆ ಸೇನಾನಾಯಕನಾಗಿ ಇದ್ದವನು ಅಮ್ಮಿನಾದಾಬನ ಮಗ ನಹಶೋನನು.
[15]ಇಸ್ಸಾಕಾರ್ ಕುಲಕ್ಕೆ ಸೇನಾನಾಯಕನಾಗಿ ಇದ್ದವನು ಚೂವಾರನ ಮಗ ನೆತನೇಲನು. [16]ಜೆಬುಲೂನ್ ಕುಲಕ್ಕೆ
ಹೇಲೋನನ ಮಗ ಎಲೀಯಾಬನು ಸೇನಾನಾಯಕನಾಗಿದ್ದನು.

17 ಬಳಿಕ ದೇವದರ್ಶನದ ಗುಡಾರವನ್ನು ಇಳಿಸಿದ್ದೇ ಗೇರ್ಷೋನ್ಯರೂ ಮೆರಾರೀಯರೂ ಅದನ್ನು
ಹೊತ್ತುಕೊಂಡು ಹೊರಟರು.

18 ಆಮೇಲೆ ರೂಬೇನ್ ಕುಲದ ದಂಡಿಗೆ ಸೇರಿದವರು ಸೈನ್ಯಸೈನ್ಯವಾಗಿ ಹೊರಟರು. ಅವರಿಗೆ
ಸೇನಾನಾಯಕ ಶೆದೇಯೂರನ ಮಗ ಎಲೀಚೂರನು. [19]ಸಿಮೆಯೋನ್ ಕುಲದ ಸೇನಾನಾಯಕನು
ಚೂರಿಷದ್ದೈಯನ ಮಗ ಶೆಲುಮಿಯೇಲನು. [20]ಗಾದ್ ಕುಲದ ಸೇನಾನಾಯಕ ರೇಗೂವೇಲನ ಮಗ
ಎಲ್ಯಾಸಾಫನು.

21 ಅವರ ಹಿಂದೆ ಕೆಹಾತ್ಯರು ದೇವಸ್ಥಾನದ ಸಾಮಾಗ್ರಿಗಳನ್ನು ಹೊತ್ತುಕೊಂಡು ಹೊರಟರು. ಅವರು
ಬರುವಷ್ಟರೊಳಗೆ ಮಿಕ್ಕ ಲೇವಿಯರು ದೇವದರ್ಶನದ ಗುಡಾರವನ್ನು ನಿಲ್ಲಿಸಿದರು.

22 ತದನಂತರ ಎಫ್ರಯಿಮ್ ಕುಲದ ದಂಡಿಗೆ ಸೇರಿದವರು ಸೈನ್ಯಸೈನ್ಯವಾಗಿ ಹೊರಟರು. ಅವರ
ಸೇನಾನಾಯಕ ಅಮ್ಮಿಹೂದನ ಮಗ ಎಲೀಷಾಮನು. [23]ಮನಸ್ಸೆ ಕುಲದ ಸೇನಾನಾಯಕ ಪೆದಾಚೂರನ
ಮಗ ಗಮ್ಲಿಯೇಲನು. [24]ಬೆನ್ಯಾಮಿನ್ ಕುಲದ ಸೇನಾನಾಯಕ ಗಿದ್ಯೋನಿಯ ಮಗ ಅಬೀದಾನನು.

25 ಈ ಎಲ್ಲಾ ದಂಡುಗಳ ಹಿಂಭಾಗದಲ್ಲಿ ದಾನ್ ಕುಲದ ದಂಡಿಗೆ ಸೇರಿದವರು ಸೈನ್ಯ ಸೈನ್ಯವಾಗಿ
ಹೊರಟರು. ಅವರಿಗೆ ಸೇನಾನಾಯಕ ಅಮ್ಮೀಷದ್ದೈಯನ ಮಗ ಅಹೀಗೇಜೆರನು. 26ಆಶೇರ್ ಕುಲಕ್ಕೆ
ಸೇನಾನಾಯಕ ಒಕ್ರಾನನ ಮಗ ಪಗೀಯೇಲನು. 27ನಫ್ತಾಲಿ ಕುಲಕ್ಕೆ ಸೇನಾನಾಯಕ ಏನಾನನ ಮಗ
ಅಹೀರನು.

28 ಈ ಕ್ರಮದಲ್ಲಿ ಇಸ್ರಯೇಲರು ಸೈನ್ಯ ಸೈನ್ಯವಾಗಿ ಹೊರಟು ಪ್ರಯಾಣಮಾಡಿದರು.

29 ಮೋಶೆ ತನ್ನ ಮಾವನಾಗಿದ್ದ ಮಿದ್ಯಾನ್ಯನಾದ ರೆಗೂವೇಲನ ಮಗ ಹೋಬಾಬನಿಗೆ, "ಸರ್ವೇಶ್ವರ
ನಮಗೆ ಕೊಡುವುದಾಗಿ ವಾಗ್ದಾನ ಮಾಡಿದ ನಾಡಿಗೆ ನಾವು ಪ್ರಯಾಣ ಮಾಡುತ್ತಿದ್ದೇವೆ. ಇಸ್ರಯೇಲರಿಗೆ
ಒಳಿತನ್ನೇ ಮಾಡುವುದಾಗಿ ಸರ್ವೇಶ್ವರಸ್ವಾಮಿಯೇ ಹೇಳಿದ್ದಾರೆ. ಆದ್ದರಿಂದ ನೀನೂ ನಮ್ಮ ಸಂಗಡ ಬಾ;
ನಮ್ಮಿಂದ ನಿನಗೂ ಒಳ್ಳೆಯದಾಗುವುದು," ಎಂದು ಹೇಳಿದ. 30ಅದಕ್ಕೆ ಅವನು, "ನಾನು ಬರುವುದಿಲ್ಲ; ನನ್ನ
ಸ್ವದೇಶಕ್ಕೆ, ನನ್ನ ಸ್ವಜನರ ಬಳಿಗೆ ಹೋಗುತ್ತೇನೆ," ಎಂದು ಉತ್ತರಿಸಿದ. 31ಅದಕ್ಕೆ ಮೋಶೆ, "ನಮ್ಮನ್ನು ಬಿಟ್ಟು
ಹೋಗಬೇಡ ಎಂದು ಬೇಡಿಕೊಳ್ಳುತ್ತೇನೆ. ಈ ಮರುಭೂಮಿಯಲ್ಲಿ ಡೇರೆಗಳನ್ನು ಹಾಕುವ ಸ್ಥಳಗಳು ನಿನಗೆ
ಮಾತ್ರ ತಿಳಿದಿವೆ. 32ಆದ್ದರಿಂದ ನೀನು ನಮಗೆ ಕಣ್ಣಾಗಿರಬೇಕು. ನೀನು ನಮ್ಮ ಸಂಗಡ ಬಂದರೆ ಸರ್ವೇಶ್ವರ
ನಮಗೆ ಮಾಡುವ ಒಳಿತೆಲ್ಲವನ್ನು ನಿನ್ನೊಂದಿಗೆ ಹಂಚಿಕೊಳ್ಳುತ್ತೇವೆ," ಎಂದು ಉತ್ತರಕೊಟ್ಟನು.

### ಸೀನಾಯಿ ಬೆಟ್ಟದಿಂದ ಪ್ರಯಾಣ

33 ಅವರು ಸರ್ವೇಶ್ವರನ ಬೆಟ್ಟವನ್ನು ಬಿಟ್ಟು ಮೂರುದಿನದ ಪ್ರಯಾಣದಷ್ಟು ದೂರ ಹೋದರು.
ಇಳಿದುಕೊಳ್ಳಲು ಸೂಕ್ತವಾದ ಸ್ಥಳವನ್ನು ನೋಡಲು ಸರ್ವೇಶ್ವರನ ಒಡಂಬಡಿಕೆಯ ಮಂಜೂಷವು ಆ
ಮೂರು ದಿವಸ ಅವರಿಗೆ ಮುಂದಾಗಿ ಹೋಗುತ್ತಿತ್ತು.

34 ಅವರು ಪಾಳೆಯದಿಂದ ಹೊರಡುವಾಗ ಹಗಲಲ್ಲಿ ಸರ್ವೇಶ್ವರನ ಮೇಘವು ಅವರ ಮೇಲೆ
ಇರುತ್ತಿತ್ತು.

35 ಸರ್ವೇಶ್ವರನ ಮಂಜೂಷ
ಹೊರಡುವಾಗ ಮೋಶೆ,
"ಹೊರಡೋಣವಾಗಲಿ ಸರ್ವೇಶ್ವರಾ,
ಎಚ್ಚೆತ್ತು,
ಚದರಿಹೋಗಲಿ ನಿಮ್ಮ ಶತ್ರುಗಳು
ಬೆಂಗೊಟ್ಟು,
ಓಡಿಹೋಗಲಿ ನಿಮ್ಮ ಹಗೆಗಾರರು"
ಎಂದು ಹೇಳುತ್ತಿದ್ದನು. 36ಆ ಮಂಜೂಷ ನಿಂತಾಗ:
"ಮರಳಿ ಬರೋಣವಾಗಲಿ, ಸರ್ವೇಶ್ವರಾ,
ಸಹಸ್ರಾರು ಇಸ್ರಯೇಲ್ ಕುಟುಂಬಗಳ ಬಳಿಗೆ",
ಎಂದು ಹೇಳುತ್ತಿದ್ದನು.

### ತಬೇರದಲ್ಲಿ ಕಾಣಿಸಿಕೊಂಡ ಬೆಂಕಿ

**11** ಇಸ್ರಯೇಲರು ತಮಗೆ ದುರವಸ್ಥೆ ಪ್ರಾಪ್ತವಾಯಿತೆಂದು ಸರ್ವೇಶ್ವರಸ್ವಾಮಿಗೆ ವಿರುದ್ಧ ಗೊಣಗುಟ್ಟಿದರು.
ಅದಕ್ಕೆ ಕೋಪಗೊಂಡ ಸರ್ವೇಶ್ವರ ಅವರ ಮಧ್ಯೆ ಬೆಂಕಿ ಬೀಳುವಂತೆ ಮಾಡಿದರು. ಇದರ ಪರಿಣಾಮವಾಗಿ
ಪಾಳೆಯದ ಕಡೇಭಾಗದಲ್ಲಿದ್ದವರು ಸುಟ್ಟು ಹೋದರು. 2ಆಗ ಜನರು ಮೋಶೆಯ ಬಳಿಗೆ ಬಂದು
ಮೊರೆಯಿಟ್ಟರು. ಮೋಶೆ ಅವರ ಪರವಾಗಿ ಸರ್ವೇಶ್ವರನನ್ನು ಪ್ರಾರ್ಥಿಸಿದ್ದೇ ಆ ಬೆಂಕಿ ಆರಿಹೋಯಿತು.
3ಆದ್ದರಿಂದ, ಹಾಗು ಸರ್ವೇಶ್ವರನೇ ಆ ಬೆಂಕಿಯನ್ನು ಬರಮಾಡಿದ್ದ ಕಾರಣ, ಆ ಸ್ಥಳಕ್ಕೆ "ತಬೇರ" ಎಂದು
ಹೆಸರು ಆಯಿತು.

## ಎಪ್ಪತ್ತು ಮಂದಿ ಮುಖ್ಯಸ್ಥರ ಆಯ್ಕೆ

4 ಇಸ್ರಯೇಲರೊಡನೆ ಪ್ರಯಾಣಮಾಡುತ್ತಿದ್ದ ಅನ್ಯಜನರು ಮಾಂಸಕ್ಕಾಗಿ ಹಂಬಲಿಸಿದರು.
ಇಸ್ರಯೇಲರು ಕೂಡ, ಕಣ್ಣೀರಿಡುತ್ತಾ: "ಅಯ್ಯೋ, ನಮಗೆ ಮಾಂಸ ಕೊಡುವವರಾರು? 5ಈಜಿಪ್ಟ್ ದೇಶದಲ್ಲಿ
ನಾವು ಬಿಟ್ಟಿಯಾಗಿ ತಿನ್ನುತ್ತಿದ್ದ ಮೀನು, ಸೌತೆಕಾಯಿ, ಕರ್ಬೂಜ, ಉಳ್ಳಿಗಡ್ಡೆ, ನೀರುಳ್ಳಿ, ಬೆಳ್ಳುಳ್ಳಿ ಇವೆಲ್ಲಾ ನೆನಪಿಗೆ
ಬರುತ್ತವೆ. 6ಇಲ್ಲಿಯಾದರೋ ನಮ್ಮ ಜೀವ ಬತ್ತಿಹೋಯಿತು. ಈ 'ಮನ್ನ'ವನ್ನು ಬಿಟ್ಟರೆ ನಮಗೆ ಇನ್ನೇನು
ಗತಿಯಿಲ್ಲ," ಎಂದು ನಿಷ್ಠುರವಾಗಿ ಮಾತನಾಡಿಕೊಳ್ಳುತ್ತಿದ್ದರು.

7 ಆ 'ಮನ್ನ' ಕೊತ್ತುಂಬರಿ ಬೀಜದಂತಿತ್ತು; ಗುಗ್ಗುಲದಂತೆ ಕಾಣಿಸುತ್ತಿತ್ತು. 8ಜನರು ಹೊರಗೆ ಹೋಗಿ
ಅದನ್ನು ಕೂಡಿಸಿಕೊಂಡು ಬಂದು ಬೀಸುವ ಕಲ್ಲುಗಳಿಂದ ಬೀಸಿ, ಇಲ್ಲವೆ ಒರಳಲ್ಲಿ ಕುಟ್ಟಿ, ಮಡಿಕೆಗಳಲ್ಲಿ
ಬೇಯಿಸಿ ರೊಟ್ಟಿಗಳನ್ನು ಮಾಡಿಕೊಳ್ಳುತ್ತಿದ್ದರು. ಅದರ ರುಚಿ ಎಣ್ಣೆಬೆರೆಸಿ ಮಾಡಿದ ತಿಂಡಿಯಂತೆ ಇರುತ್ತಿತ್ತು.
9ರಾತ್ರಿಯಲ್ಲಿ ಮಂಜು ಪಾಳೆಯದ ಮೇಲೆ ಬೀಳುತ್ತಿದ್ದಾಗ ಅದರೊಂದಿಗೆ 'ಮನ್ನ'ವೂ ಬೀಳುತ್ತಿತ್ತು.

10 ಎಲ್ಲ ಕುಟುಂಬದವರು ತಮ್ಮ ತಮ್ಮ ಡೇರೆಗಳ ಬಾಗಿಲುಗಳಲ್ಲಿ ನಿಂತು ನಿಷ್ಠುರವಾಗಿ
ಮಾತನಾಡಿಕೊಳ್ಳುತ್ತಿದ್ದದ್ದು ಮೋಶೆಗೆ ಕೇಳಿಸಿತು. ಆಗ ಸರ್ವೇಶ್ವರನ ಕೋಪ ಉಕ್ಕೇರಿತು; ಮೋಶೆಗೆ ಇದನ್ನು
ಸಹಿಸಲಾಗಲಿಲ್ಲ. 11ಆತ ಸರ್ವೇಶ್ವರನಿಗೆ, "ನಿಮ್ಮ ದಾಸನಾದ ನನಗೇಕೆ ಈ ಜನರನ್ನು ಕರೆದೊಯ್ಯುವ
ಭಾರವನ್ನು ಹಾಕಿದಿರಿ? 12ನಿಮ್ಮ ದಯೆಗೆ ನಾನು ಅಯೋಗ್ಯನಾದೆನೇ? 'ಮೊಲೆ ಕೂಸನ್ನು ಎತ್ತಿಕೊಂಡು
ಹೋಗುವವಳಂತೆ ಈ ಜನರನ್ನು ತೋಳತೆಕ್ಕೆಯಲ್ಲಿರಿಸಿ, ಅವರ ಪೂರ್ವಜರಿಗೆ ನಾನು ಪ್ರಮಾಣಮಾಡಿದ
ನಾಡಿಗೆ ಒಯ್ಯಿ' ಎಂದು ಹೇಳುತ್ತೀರಲ್ಲವೆ? ನಾನು ಇವರಿಗೆ ಹೆತ್ತ ತಾಯಿಯೋ? 13ಇವರು ನಿಷ್ಠುರವಾಗಿ
ಮಾತಾಡುತ್ತಾ ನನ್ನ ಬಳಿಗೆ ಬಂದು, 'ತಿನ್ನಲಿಕ್ಕೆ ನಮಗೆ ಮಾಂಸವನ್ನು ಕೊಡು' ಎಂದು ಕೇಳುತ್ತಿದ್ದಾರಲ್ಲಾ'
ಇಷ್ಟು ಜನಕ್ಕೆ ಬೇಕಾದ ಮಾಂಸ ನನಗೆಲ್ಲಿ ದೊರಕೀತು. 14ಇಷ್ಟು ಜನರ ಭಾರವನ್ನು ನಾನೊಬ್ಬನೇ
ಹೊರುವುದು ಅಸಾಧ್ಯ. ಅದು ನನ್ನ ಶಕ್ತಿಗೆ ಮೀರಿದ ಕೆಲಸ. 15ನೀವು ಹೀಗೆ ಮಾಡುವುದಕ್ಕಿಂತಲೂ ನನ್ನನ್ನು
ಈ ಕೂಡಲೆ ಕೊಂದು ಹಾಕಿದರೆ ಉಪಕಾರವಾದೀತು; ನನಗೆ ಆಗುತ್ತಿರುವ ಸಂಕಟವನ್ನು ಸಹಿಸಲಾರೆ,"
ಎಂದನು.

16 ಆಗ ಸರ್ವೇಶ್ವರ ಮೋಶೆಗೆ ಹೇಳಿದುದು: "ಇಸ್ರಯೇಲರಲ್ಲಿ ಹಿರಿಯರೆಂದೂ ಅಧಿಪತಿಗಳೆಂದೂ
ನನಗೆ ತಿಳಿದಿರುವ ಎಪ್ಪತ್ತು ಮಂದಿಯನ್ನು ಕೂಟವಾಗಿ ಕರೆಸಿ, ದೇವದರ್ಶನದ ಗುಡಾರದ ಬಳಿಗೆ
ಕರೆದುಕೊಂಡು ಬಾ. ಅವರು ಅಲ್ಲೇ ನಿನ್ನೊಡನೆ ನಿಂತಿರಲಿ. 17ನಾನು ಅಲ್ಲಿಗೆ ಇಳಿದು ಬಂದು ನಿನ್ನೊಡನೆ
ಮಾತಾಡುವೆನು. ನಿನಗೆ ನಾನು ಅನುಗ್ರಹಿಸಿರುವ ಆತ್ಮಶಕ್ತಿಯಲ್ಲಿ ಕಿಂಚಿತ್ತನ್ನು ಅವರಿಗೂ ಹಂಚಿಕೊಡುವೆನು.
ಆಗ ನೀನೊಬ್ಬನೇ ಈ ಜನರ ಜವಾಬ್ದಾರಿಯನ್ನು ವಹಿಸಬೇಕಾಗುವುದಿಲ್ಲ; ನಿನ್ನ ಸಂಗಡ ಇವರೂ
ವಹಿಸಿಕೊಳ್ಳುವರು.

18 "ಇದಲ್ಲದೆ ಇಸ್ರಯೇಲರಿಗೆ ಹೀಗೆಂದು ಹೇಳು: 'ನಾಳೆಗೆ ನಿಮ್ಮನ್ನೇ ಶುದ್ಧೀಕರಿಸಿಕೊಳ್ಳಿ; ನಾಳೆ
ನಿಮಗೆ ಮಾಂಸಾಹಾರ ದೊರಕುವುದು. ನೀವು ಸರ್ವೇಶ್ವರನಿಗೆ ಕೇಳಿಸುವಂತೆ – ನಮಗೆ ಮಾಂಸ
ಕೊಡುವವರೇ ಇಲ್ಲ; ಈಜಿಪ್ಟ್ ದೇಶದಲ್ಲಿ ಎಷ್ಟೋ ಸುಖವಾಗಿದ್ದೆವು – ಎಂದು ನಿಷ್ಠೂರವಾಗಿ
ಮಾತಾಡುತ್ತೀರಿ. ಆದ್ದರಿಂದ ಸರ್ವೇಶ್ವರನೇ ನಿಮಗೆ ಮಾಂಸವನ್ನು ತಿನ್ನಲಿಕ್ಕೆ ಕೊಡುವರು. 19ನಿಮ್ಮ
ಮಧ್ಯೆಯೇ ಇರುವ ಸರ್ವೇಶ್ವರನನ್ನು ಧಿಕ್ಕರಿಸಿ, 'ಅಯ್ಯೋ, ನಾವು ಈಜಿಪ್ಟನ್ನು ಬಿಟ್ಟುಬಂದು
ಮೋಸವಾಯಿತು' ಎಂದು ಅವರ ಮುಂದೆ ನಿಷ್ಠೂರವಾಗಿ ಮಾತಾಡಿದಿರಿ. ಆದ್ದರಿಂದ ನೀವು ಒಂದು
ದಿನವಲ್ಲ, ಎರಡು ದಿನವಲ್ಲ, ಐದು ದಿನವಲ್ಲ, ಇಪ್ಪತ್ತು ದಿನವಲ್ಲ, ಒಂದು ತಿಂಗಳು ಪೂರ್ತಿ ತಿನ್ನುವಿರಿ.
20ಅದು ಓಕರಿಕೆಯಾಗಿ, ನಿಮ್ಮ ಮೂಗಿನಲ್ಲಿ, ಹೊರಟು ನಿಮಗೆ ಅಸಹ್ಯವಾಗುವ ತನಕ ಅದನ್ನು ತಿನ್ನುವಿರಿ'."

21 ಮೋಶೆ ಸರ್ವೇಶ್ವರನಿಗೆ, "ನನ್ನ ಸಂಗಡ ಇರುವ ಜನರು ಆರು ಲಕ್ಷ ಕಾಲಾಳುಗಳು. ಆದರೂ
ನೀವು, 'ಇವರು ಇಡೀ ಒಂದು ತಿಂಗಳು ತಿನ್ನುವಷ್ಟು ಮಾಂಸವನ್ನು ಕೊಡುತ್ತೇನೆ' ಎಂದು ಹೇಳಿದ್ದೀರಿ.
22ಅವರಿಗೆ ಬೇಕಾದಷ್ಟು ಸಿಗುವಂತೆ ಆಡುಕುರಿಗಳನ್ನೂ ದನಗಳನ್ನೂ ಕೊಯ್ಯಬೇಕೆನ್ನುತ್ತೀರೋ? ಇಲ್ಲವೆ
ಸಮುದ್ರದಲ್ಲಿರುವ ಮೀನುಗಳನ್ನೆಲ್ಲಾ ಹಿಡಿದುಕೊಳ್ಳ ಬೇಕೆನ್ನುತ್ತೀರೋ?" ಎಂದು ಹೇಳಿದನು. 23ಸರ್ವೇಶ್ವರ

ಅವನಿಗೆ, "ಸರ್ವೇಶ್ವರನ ಕೈ ಮೋಟುಗೈಯೋ? ನನ್ನ ಮಾತು ನೆರವೇರುತ್ತದೋ ಇಲ್ಲವೋ ನೀನೇ ನೋಡುವೆ," ಎಂದರು.

24 ಮೋಶೆ ಹೊರಟುಹೋಗಿ ಸರ್ವೇಶ್ವರನ ಮಾತುಗಳನ್ನು ಜನರಿಗೆ ತಿಳಿಸಿದನು. ಜನರ ಹಿರಿಯರಲ್ಲಿ ಎಪ್ಪತ್ತು ಮಂದಿಯನ್ನು ಕೂಡಿಸಿ ದೇವದರ್ಶನದ ಗುಡಾರದ ಸುತ್ತಲೂ ನಿಲ್ಲಿಸಿದನು. 25ಆಗ
ಸರ್ವೇಶ್ವರ ಮೇಘದಲ್ಲಿ ಇಳಿದು ಬಂದು ಅವನೊಡನೆ ಮಾತಾಡಿ ಅವನಿಗೆ ಅನುಗ್ರಹಿಸಲಾಗಿದ್ದ ಆತ್ಮಶಕ್ತಿಯಲ್ಲಿ ಕಿಂಚಿತ್ತನ್ನು ಆ ಎಪ್ಪತ್ತು ಮಂದಿ ಹಿರಿಯರಿಗೂ ಹಂಚಿದರು. ಆ ಶಕ್ತಿ ಅವರ ಮೇಲೆ ಇಳಿದುಬಂದಾಗ ಅವರು ಪರವಶರಾಗಿ ಪ್ರವಾದಿಸಿದರು. ಅಂಥ ಅನುಭವ ಅವರಿಗೆ ಮತ್ತೆ ಬರಲಿಲ್ಲ.

26 ಎಲ್ದಾದ್ ಮತ್ತು ಮೇದಾದ್ ಎಂಬ ಹಿರಿಯರಿಬ್ಬರು ಪಾಳೆಯದೊಳಗೆ ಉಳಿದುಕೊಂಡಿದ್ದರು. ಅವರ ಹೆಸರು ಲಿಖಿತವಾಗಿದ್ದರೂ ಅವರು ದೇವದರ್ಶನದ ಗುಡಾರಕ್ಕೆ ಹೊರಟು ಬಂದಿರಲಿಲ್ಲ. ಆ ಆತ್ಮಶಕ್ತಿ ಅವರ ಮೇಲೂ ಇಳಿದುಬಂದುದರಿಂದ ಅವರು ಕೂಡ ಪಾಳೆಯದಲ್ಲೇ ಪರವಶರಾಗಿ ಪ್ರವಾದಿಸಿದರು.
27ಆಗ ಒಬ್ಬ ಯುವಕ ಮೋಶೆಯ ಬಳಿಗೆ ಓಡಿಬಂದು, "ಎಲ್ದಾದ್ ಮತ್ತು ಮೇದಾದರು ಪಾಳೆಯದಲ್ಲೇ ಪರವಶರಾಗಿ ಪ್ರವಾದಿಸುತ್ತಿದ್ದಾರೆ," ಎಂದು ತಿಳಿಸಿದನು.

28 ಚಿಕ್ಕಂದಿನಿಂದ ಮೋಶೆಗೆ ಶಿಷ್ಯನಾಗಿದ್ದ ಹಾಗೂ ನೂನನ ಮಗನಾಗಿದ್ದ ಯೆಹೋಶುವನು ಮೋಶೆಗೆ, "ಗುರುವೇ, ಅವರಿಗೆ ಅದು ಬೇಡವೆನ್ನಬೇಕು" ಎಂದು ವಿನಂತಿಸಿದನು. 29ಅದಕ್ಕೆ ಮೋಶೆ, "ನನ್ನ
ಗೌರವ ಕಾಪಾಡಲು ನಿನಗೇಕೆ ಅಸೂಯೆ? ಸರ್ವೇಶ್ವರನ ಅನುಗ್ರಹದಿಂದ ಅವರ ಜನರೆಲ್ಲರೂ ಆತ್ಮಶಕ್ತಿಯನ್ನು ಹೊಂದಿ ಪ್ರವಾದಿಸುವವರಾದರೆ ಎಷ್ಟೋ ಒಳ್ಳೆಯದು!" ಎಂದನು. 30ತರುವಾಯ ಮೋಶೆ
ಮತ್ತು ಇಸ್ರಯೇಲರ ಹಿರಿಯರು ಪಾಳೆಯಕ್ಕೆ ಹಿಂದಿರುಗಿದರು.

### ದೇವರು ಆಹಾರವಾಗಿ ಅನುಗ್ರಹಿಸಿದ ಲಾವಕ್ಕಿಗಳು

31 ಸರ್ವೇಶ್ವರನಿಂದ ಕಳಿಸಲಾದ ಗಾಳಿಯೊಂದು ಸಮುದ್ರದ ಕಡೆಯಿಂದ ಲಾವಕ್ಕಿಗಳನ್ನು ಹೊಡೆದುಕೊಂಡು ಬಂದಿತು. ಆ ಹಕ್ಕಿಗಳು ಪಾಳೆಯದ ಸುತ್ತಲೂ ಒಂದು ದಿನದ ಪ್ರಯಾಣದಷ್ಟು ದೂರದವರೆಗೆ ಭೂಮಿಗಿಂತ ಎರಡು ಮೊಳ ಎತ್ತರದಲ್ಲಿ ಹಾರುತ್ತಾ ಬಂದವು. 32ಇಸ್ರಯೇಲರು ಆ ದಿನ
ಹಗಲಿರುಳೂ ಮರುದಿನ ಹಗಲಲ್ಲೂ ಆ ಲಾವಕ್ಕಿಗಳನ್ನು ಕೂಡಿಸಿಕೊಂಡರು. ಕಡಿಮೆ ಕೂಡಿಸಿಕೊಂಡವರು ಕೂಡ ಸಾವಿರ ಕಿಲೋಗ್ರಾಮಿನಷ್ಟು ಕೂಡಿಸಿಕೊಂಡರು. ಅವುಗಳನ್ನು ಪಾಳೆಯದ ಸುತ್ತಲೂ ಹರವಿ ಒಣಗಿಸಿಕೊಂಡರು. 33ಅವರು ಆ ಮಾಂಸವನ್ನು ಕಚ್ಚಿ, ಅಗಿದು, ತಿಂದು ಮುಗಿಸುವುದರೊಳಗೆ ಸರ್ವೇಶ್ವರನ
ಕೋಪ ಅವರ ವಿರುದ್ಧ ಉದ್ರೇಕಗೊಂಡಿತು. ಬಹಳಷ್ಟು ಜನ ಘೋರವ್ಯಾಧಿಗೆ ತುತ್ತಾಗಿ ಸತ್ತರು.

34 ಆ ಸ್ಥಳಕ್ಕೆ "ಕಿಬ್ರೋತ್ ಹತಾವಾ" ಎಂದು ಹೆಸರಾಯಿತು. ಏಕೆಂದರೆ ಅತ್ಯಾಶೆಪಟ್ಟವರು ಅಲ್ಲಿ ಸಮಾಧಿಯಾದರು.

35 ಇಸ್ರಯೇಲರು ಕಿಬ್ರೋತ್ ಹತಾವಾದಿಂದ ಹೊರಟು ಹಚೇರೋತಿಗೆ ಬಂದು ಅಲ್ಲಿ ತಂಗಿದರು.

### ಮಿರ್ಯಾಮಳಿಗೆ ತೊನ್ನು ಶಿಕ್ಷೆ

**12** ಮೋಶೆ ಕೂಷ್ ನಾಡಿನ ಮಹಿಳೆಯೊಬ್ಬಳನ್ನು ಮದುವೆ ಮಾಡಿಕೊಂಡಿದ್ದನು. ಈ ಕಾರಣ ಮಿರ್ಯಾಮಳು ಮತ್ತು ಆರೋನನು ಅವನಿಗೆ ವಿರುದ್ಧ ಮಾತಾಡತೊಡಗಿದರು. 2"ಸರ್ವೇಶ್ವರಸ್ವಾಮಿ
ಮೋಶೆಯ ಮುಖಾಂತರ ಮಾತ್ರ ಮಾತಾಡಿದ್ದಾರೋ? ನಮ್ಮ ಮುಖಾಂತರ ಮಾತಾಡಲಿಲ್ಲವೋ?" ಎಂದು ಹೇಳತೊಡಗಿದರು. 3ಅವರು ಆಡಿದ ಮಾತು ಸರ್ವೇಶ್ವರನಿಗೆ ಮುಟ್ಟಿತು. ಮೋಶೆ ಸಾಧು ಮನುಷ್ಯ.
ನರಮಾನವರಲ್ಲೆಲ್ಲಾ ಅತ್ಯಂತ ಸಾಧು. 4ಹೀಗಿರಲಾಗಿ ಸರ್ವೇಶ್ವರ ತಟ್ಟನೆ ಮೋಶೆ, ಆರೋನ್ ಹಾಗೂ
ಮಿರ್ಯಾಮರಿಗೆ, "ನೀವು ಮೂವರು ದೇವದರ್ಶನದ ಗುಡಾರಕ್ಕೆ ಬರಬೇಕು," ಎಂದು ಆಜ್ಞಾಪಿಸಿದರು.
5ಅವರು ಬಂದಾಗ ಸರ್ವೇಶ್ವರ ಮೇಘಸ್ತಂಭದಲ್ಲಿ ಇಳಿದು ಬಂದು ದೇವದರ್ಶನದ ಗುಡಾರದ ಬಾಗಿಲಲ್ಲಿ ನಿಂತು ಆರೋನ್ ಹಾಗೂ ಮಿರ್ಯಾಮಳನ್ನು ಹತ್ತಿರಕ್ಕೆ ಕರೆದರು. 6ಅವರು ಸಮೀಪಿಸಿದಾಗ,

“ನನ್ನ ಮಾತಿಗೆ ಕಿವಿಗೊಡಿ
ನಿಮ್ಮಲ್ಲಿ ಪ್ರವಾದಿಯಿದ್ದರೆ ಅವನಿಗೆ
ಕಾಣಿಸಿಕೊಳ್ಳುವೆ ಜ್ಞಾನದೃಷ್ಟಿಯಲ್ಲಿ,
ಇಲ್ಲವೆ ಅವನ ಸಂಗಡ ಮಾತಾಡುವೆ
ಸ್ವಪ್ನದಲ್ಲಿ.
7 ನನ್ನ ದಾಸನಾದ ಮೋಶೆ ಅಂಥವನಲ್ಲ
ಅವನೇ ನಂಬಿಗಸ್ತ ನನ್ನ ಮನೆಯಲ್ಲೆಲ್ಲಾ.
8 ನಾನವನ ಸಂಗಡ ಮಾತಾಡುವುದು
ನಿಗೂಢವಾಗಿ ಅಲ್ಲ,
ಮುಖಾಮುಖಿಯಾಗಿ, ಸ್ಪಷ್ಟವಾಗಿ,
ಒಗಟಾಗಿಯಲ್ಲ.
ಸರ್ವೇಶ್ವರನ ಸ್ವರೂಪವನ್ನೆ ಕಂಡವನಾತ!
ಇಂತಿರಲು ದಾಸ ಮೋಶೆಗೆ ವಿರುದ್ಧ
ಮಾತನಾಡಲು ನೀವೇಕೆ ಭಯಪಡಲಿಲ್ಲಾ?”
ಎಂದು ಹೇಳಿ ಕೋಪದಿಂದ ಹೊರಟುಹೋದರು. 9–10ಆ ಮೇಘವು ದೇವದರ್ಶನದ ಗುಡಾರದಿಂದ
ಅದೃಶ್ಯವಾದದ್ದೇ ಇಗೋ, ಮಿರ್ಯಾಮಳ ಚರ್ಮ ಹಿಮದಂತೆ ಬಿಳಿಚಿಕೊಂಡಿತ್ತು. ಆಕೆಗೆ ತೊನ್ನು ಹತ್ತಿತ್ತು.
ಆರೋನನು ಆಕೆಯನ್ನು ನೋಡಿ ಆಕೆಗೆ ತೊನ್ನು ಪ್ರಾಪ್ತವಾಯಿತೆಂದು ತಿಳಿದುಕೊಂಡನು. 11ಆಗ ಆರೋನನು
ಮೋಶೆಗೆ, “ಅಯ್ಯಾ, ನಾವು ಮೂರ್ಖರಾಗಿ ನಡೆದು ಪಾಪಕಟ್ಟಿಕೊಂಡೆವು. ಈ ಪಾಪದ ಫಲವನ್ನು ನಾವು
ಅನುಭವಿಸುವಂತೆ ಮಾಡಬೇಡ, ಇದು ನನ್ನ ವಿನಂತಿ. 12ಅರ್ಧ ಮಾಂಸ ಕೊಳೆತುಹೋಗಿ ಹುಟ್ಟಿದ ಶಿಶುವಿನ
ಶವದಂತೆ ಈಕೆ ಆಗುವುದು ಬೇಡ,” ಎಂದು ಕೇಳಿಕೊಂಡನು. 13ಆಗ ಮೋಶೆ ಸರ್ವೇಶ್ವರನಿಗೆ “ಹೇ ದೇವಾ,
ಆಕೆಯನ್ನು ಗುಣಪಡಿಸಬೇಕೆಂದು ಬೇಡಿಕೊಳ್ಳುತ್ತೇನೆ,” ಎಂದು ಮೊರೆಯಿಟ್ಟನು. 14ಅದಕ್ಕೆ ಸರ್ವೇಶ್ವರ,
“ಅವಳ ತಂದೆ ಅವಳ ಮುಖದಮೇಲೆ ಉಗುಳಿದ್ದರೆ ಏಳುದಿವಸ ಅವಳು ನಾಚಿಕೆಯಿಂದ
ಮರೆಯಾಗುತ್ತಿದ್ದಳಲ್ಲವೆ? ಅಂತೆಯೇ ಅವಳು ಏಳುದಿವಸ ಪಾಳೆಯದಿಂದ ಹೊರಗಿರಲಿ. ಅನಂತರ
ಅವಳನ್ನು ನೀನು ಪಾಳೆಯದೊಳಗೆ ಸೇರಿಸಿಕೊಳ್ಳಬಹುದು,” ಎಂದು ಉತ್ತರಕೊಟ್ಟರು. 15ಹೀಗೆ ಮಿರ್ಯಾಮಳು
ಏಳು ದಿವಸ ಪಾಳೆಯದ ಹೊರಗೆ ಇರಬೇಕಾಯಿತು. ಅವಳನ್ನು ಮರಳಿ ಸೇರಿಸಿಕೊಳ್ಳುವವರೆಗೆ
ಇಸ್ರಯೇಲರು ಪ್ರಯಾಣಮಾಡಲಿಲ್ಲ. 16ಅನಂತರ ಅವರು ಹಚೇರೋತಿನಿಂದ ಹೊರಟು ಪಾರಾನ್
ಮರುಭೂಮಿಯಲ್ಲಿ ಇಳಿದುಕೊಂಡರು.

### ಕಾನಾನ್ ನಾಡಿಗೆ ಬೇಹುಗಾರರು

(ಧರ್ಮೋ. 1.19–33)

**13** ಸರ್ವೇಶ್ವರಸ್ವಾಮಿ ಮೋಶೆಗೆ, 2“ನಾನು ಇಸ್ರಯೇಲರಿಗೆ ಕೊಡಲಿರುವ ಕಾನಾನ್ ನಾಡನ್ನು ಸಂಚರಿಸಿ
ನೋಡಿಬರಲು ಒಂದೊಂದು ಕುಲದಿಂದ ಒಬ್ಬೊಬ್ಬ ಮುಖ್ಯಸ್ಥನನ್ನು ಕಳಿಸು,” ಎಂದು ಆಜ್ಞಾಪಿಸಿದರು.
3ಸರ್ವೇಶ್ವರನ ಅಪ್ಪಣೆಯ ಮೇರೆಗೆ ಮೋಶೆ ಪಾರಾನ್ ಮರುಭೂಮಿಯಿಂದ ಇಸ್ರಯೇಲರ ಮುಖ್ಯಸ್ಥರನ್ನು
ಕಳಿಸಿದನು. 4ಆ ಮುಖ್ಯಸ್ಥರ ಹೆಸರುಗಳು ಇವು – ರೂಬೇನ್ ಕುಲದ ಜಕ್ಕೂರನ ಮಗ ಶಮ್ಮೂವ,
5 ಸಿಮೆಯೋನ್ ಕುಲದ ಹೋರಿಯ ಮಗನಾದ ಶಾಫಾಟ್,
6 ಯೆಹೂದ ಕುಲದ ಯೆಫುನ್ನೆಯ ಮಗನಾದ ಕಾಲೇಬ,
7 ಇಸ್ಸಾಕಾರ್ ಕುಲದ ಜೋಸೆಫನ ಮಗ ಇಗಾಲ್,
8 ಎಫ್ರಯಿಮ್ ಕುಲದ ನೂನನ ಮಗ ಹೋಶೇಯ,
9 ಬೆನ್ಯಾಮಿನ್ ಕುಲದ ರಾಫೂವನ ಮಗ ಪಲ್ಟೀ,

10 ಜೆಬುಲೂನ್ ಕುಲದ ಸೋದಿಯ ಮಗ ಗದ್ದೀಯೇಲ್,
11 ಜೋಸೆಫ್ ಅಂದರೆ ಮನಸ್ಸೆ ಕುಲದ ಸೂಸೀಯ ಮಗ ಗದ್ದೀ,
12 ದಾನ್ ಕುಲದ ಗೆಮಲ್ಲೀಯನ ಮಗ ಅಮ್ಮೀಯೇಲ್,
13 ಅಶೇರ್ ಕುಲದ ಮಿಕಾಯೇಲನ ಮಗ ಸೆತೂರ್,
14 ನಫ್ತಾಲಿ ಕುಲದ ವಾಪೆಸೀಯನ ಮಗ ನಹಬೀ,
15 ಗಾದ್ ಕುಲದ ಮಾಕೀಯನ ಮಗ ಗೆಯೂವೇಲ್,

16 ಆ ನಾಡನ್ನು ಸಂಚರಿಸಿ ನೋಡಿಬರುವುದಕ್ಕೆ ಮೋಶೆ ಕಳಿಸಿದ್ದ ವ್ಯಕ್ತಿಗಳ ಹೆಸರುಗಳು ಇವೇ. ಮೋಶೆ ನೂನನ ಮಗ ಹೋಶೇಯನಿಗೆ 'ಯೆಹೋಶುವ' ಎಂದು ಹೆಸರಿಟ್ಟನು.

17 ಕಾನಾನ್ ನಾಡನ್ನು ಸಂಚರಿಸಿ ನೋಡಿ ಬರುವುದಕ್ಕೆ ಅವರನ್ನು ಕಳಿಸುವಾಗ ಮೋಶೆ ಹೀಗೆಂದು ಸಂಬೋಧಿಸಿದನು: "ನೀವು ನೆಗೆಬಾ ಮಾರ್ಗವಾಗಿ ಮಲೆನಾಡಿಗೆ ಹತ್ತಿಹೋಗಿರಿ.
[18]ಆ ನಾಡು ಹೇಗಿದೆ, ಅಲ್ಲಿನ ನಿವಾಸಿಗಳು ಬಲಿಷ್ಠರೋ ಬಲಹೀನರೋ, ಅವರ ಸಂಖ್ಯೆ ದೊಡ್ಡದೋ ಚಿಕ್ಕದೋ,
[19]ಅವರ ವಾಸಸ್ಥಳ ಒಳ್ಳೆಯದೋ ಕೆಟ್ಟದೋ, ಅವು ಪಾಳೆಯಗಳೋ ಕೋಟೆಗಳೋ,
[20]ಭೂಮಿ ಸಾರವತ್ತಾದುದೋ ನಿಸ್ಸಾರವಾದುದೋ, ಮರಗಿಡಗಳಿಂದ ಕೂಡಿದೆಯೋ ಬೈಲುಪ್ರದೇಶವಾಗಿದೆಯೋ ನೋಡಿ ತಿಳಿದುಕೊಳ್ಳಿ. ಅದಲ್ಲದೆ, ಆ ನಾಡಿನ ಉತ್ಪನ್ನಗಳಲ್ಲಿ ಕೆಲವನ್ನು ಪ್ರಯಾಸಪಟ್ಟು ತರಬೇಕು." ಅದು ದ್ರಾಕ್ಷಿಯ ಪ್ರಥಮಫಲ ಕಾಲವಾಗಿತ್ತು.

21 ಅವರು ಬೆಟ್ಟವನ್ನು ಹತ್ತಿ ಚಿನ್ ಮರುಭೂಮಿಯಿಂದ ಹಮಾತಿನ ದಾರಿಯಲ್ಲಿರುವ ರೆಹೋಬಿನವರೆಗೆ ಆ ನಾಡನ್ನು ಸಂಚರಿಸಿ ನೋಡಿದರು.
[22]ಅವರು ಬೆಟ್ಟವನ್ನು ಹತ್ತಿ ನೆಗೆಬನ್ನು ದಾಟಿ, ಹೆಬ್ರೋನಿಗೆ ಬಂದರು. ಅಲ್ಲಿ 'ಅನಕಿಮ್' ವಂಶಸ್ಥರಾದ ಅಹೀಮನ್, ಶೇಷೈ, ತಲ್ಮೈ ಎಂಬವರು ಇದ್ದರು. (ಹೆಬ್ರೋನ್ ಪಟ್ಟಣ ಈಜಿಪ್ಟ್ ದೇಶದಲ್ಲಿರುವ ಚೋಮ್ ಪಟ್ಟಣಕ್ಕಿಂತ ಏಳು ವರ್ಷ ಮೊದಲೇ ಕಟ್ಟಲ್ಪಟ್ಟಿತ್ತು)
[23]ಎಷ್ಕೋಲ್ ಎಂಬ ತಗ್ಗಿಗೆ ಬಂದು ಅಲ್ಲಿ ದ್ರಾಕ್ಷಿ ಹಣ್ಣಿನ ಗೊಂಚಲಿದ್ದ ಒಂದು ಕೊಂಬೆಯನ್ನು ಕೊಯ್ದರು. ಅದನ್ನು ಅಡ್ಡದಂಡಿಗೆಯಲ್ಲಿ ಇಬ್ಬರು ಹೊತ್ತು ತಂದರು. ಕೆಲವು ದಾಳಿಂಬೆ ಹಣ್ಣುಗಳನ್ನೂ ಅಂಜೂರದ ಹಣ್ಣುಗಳನ್ನೂ ತಂದರು.
[24]ಇಸ್ರಯೇಲರು ಅಲ್ಲಿಯೇ ದ್ರಾಕ್ಷಿಯ ಗೊಂಚಲನ್ನು ಕೊಯ್ದುದ್ದರಿಂದ ಆ ಸ್ಥಳಕ್ಕೆ 'ಎಷ್ಕೋಲ್' ಎಂದು ಹೆಸರಾಯಿತು.

### ಬೇಹುಗಾರರು ಮಾಡಿದ ವರದಿ

25 ನಾಲ್ವತ್ತು ದಿವಸ ಆ ನಾಡನ್ನು ಸಂಚರಿಸಿ ನೋಡಿ ಆದಮೇಲೆ ಅವರು ಹಿಂದಿರುಗಿ ಬಂದರು.
[26]ಪಾರಾನ್ ಮರುಭೂಮಿಯ ಕಾದೇಶಿನಲ್ಲಿದ್ದ ಮೋಶೆ, ಆರೋನ್ ಹಾಗು ಇಸ್ರಯೇಲ್ ಜನಸಮೂಹದ ಬಳಿಗೆ ಬಂದು ಅವರಿಗೆ ಸಮಾಚಾರವನ್ನು ತಿಳಿಸಿ ಆ ನಾಡಿನ ಹಣ್ಣುಗಳನ್ನು ತೋರಿಸಿದರು.
[27]ಮೋಶೆಗೆ, "ನೀವು ನಮ್ಮನ್ನು ಕಳಿಸಿದ ನಾಡಿಗೆ ಹೋಗಿದ್ದೆವು. ಅದು ಹಾಲು-ಜೇನು ಹರಿಯುವಂಥ ನಾಡು. ಅಲ್ಲಿನ ಹಣ್ಣುಹಂಪಲುಗಳು ಇಂಥವು.
[28]ಅಂತೆಯೇ ಆ ನಾಡಿನ ನಿವಾಸಿಗಳು ಬಲಿಷ್ಠರು. ಅವರಿರುವ ಪಟ್ಟಣಗಳು ದೊಡ್ಡವು; ಅವು ಕೋಟೆ ಕೊತ್ತಲುಗಳಿಂದ ಕೂಡಿವೆ. ಅದೂ ಅಲ್ಲದೆ ಅಲ್ಲಿ 'ಅನಕಿಮ್' ವಂಶಸ್ಥರನ್ನು ಕಂಡೆವು.
[29]ದಕ್ಷಿಣ ಪ್ರಾಂತ್ಯದಲ್ಲಿ ಅಮಾಲೇಕ್ಯರು, ಮಲೆನಾಡಿನಲ್ಲಿ ಹಿತ್ತಿಯರು, ಯೆಬೂಸಿಯರು ಹಾಗು ಅಮೋರಿಯರು ಮತ್ತು ಸಮುದ್ರತೀರದಲ್ಲಿ ಹಾಗೂ ಜೋರ್ಡನ್ ನದಿಯ ಪರಿಸರದಲ್ಲಿ ಕಾನಾನ್ಯರು ವಾಸವಾಗಿದ್ದಾರೆ," ಎಂದು ವರದಿ ಮಾಡಿದರು.

30 ಆಗ ಮೋಶೆಗೆ ವಿರುದ್ಧ ಗೊಣಗುಟ್ಟುತ್ತಿದ್ದ ಅವರನ್ನು ಕಾಲೇಬನು ಸಮಾಧಾನಗೊಳಿಸುತ್ತಾ, "ನಾವು ಧೈರ್ಯದಿಂದ ಆ ಮಲೆನಾಡಿಗೆ ಹೋಗಿ ಅದನ್ನು ಸ್ವಾಧೀನ ಪಡಿಸಿಕೊಳ್ಳೋಣ. ಅದನ್ನು ಜಯಿಸಲು ನಮ್ಮಿಂದ ಸಾಧ್ಯ," ಎಂದನು.
[31]ಆದರೆ ಅವನ ಜೊತೆಯಲ್ಲಿ ಹೋಗಿದ್ದವರು, "ಆ ಜನರು ನಮಗಿಂತ ಬಲಿಷ್ಠರು! ಅವರ ಮೇಲೆ ಜಯಸಾಧಿಸಲು ನಮಗೆ ಶಕ್ತಿ ಸಾಲದು," ಎಂದರು.
[32]ಅದಲ್ಲದೆ ತಾವು ಸಂಚರಿಸಿ ನೋಡಿ ಬಂದ ನಾಡಿನ ವಿಷಯವಾಗಿ ಇಸ್ರಯೇಲರಿಗೆ ಅಶುಭ ಸಮಾಚಾರವನ್ನೇ ಹೇಳುವವರಾದರು. "ನಾವು ಸಂಚಾರಮಾಡಿ ನೋಡಿ ಬಂದ ನಾಡು ತನ್ನಲ್ಲಿ ವಾಸಿಸುವವರನ್ನೇ ಕಬಳಿಸುವಂತಿದೆ. ನಾವು ಅಲ್ಲಿ

ನೋಡಿದ ಜನರೆಲ್ಲರು ಬಹು ಎತ್ತರವಾದ ವ್ಯಕ್ತಿಗಳು. [33]ಅಲ್ಲಿ 'ನೆಫೀಲಿಯರನ್ನು' ಅಂದರೆ ನೆಫೀಲಿಯನ ವಂಶದವರಾದ 'ಅನಕಿಮ್'ರನ್ನು ನೋಡಿದೆವು. ಅವರ ಮುಂದೆ ನಾವು ಮಿಡತೆಗಳಂತೆ ಇದ್ದೆವು. ಅವರಿಗೂ ನಾವು ಹಾಗೆಯೆ ಕಾಣಿಸಿಕೊಂಡೆವು," ಎಂದರು.

## ಇಸ್ರಯೇಲರ ವಿದ್ರೋಹ

**14** ಜನರೆಲ್ಲರು, ಈ ವರದಿಯನ್ನು ಕೇಳಿ ಗಟ್ಟಿಯಾಗಿ ಗೋಳಿಟ್ಟರು. ರಾತ್ರಿಯೆಲ್ಲಾ ಅಳುತ್ತಿದ್ದರು.
[2]ಇಸ್ರಯೇಲರೆಲ್ಲರು ಮೋಶೆ ಮತ್ತು ಆರೋನರ ವಿರುದ್ಧ ಗೊಣಗುಟ್ಟಿದರು. "ಈಜಿಪ್ಟಿನಲ್ಲೇ ನಾವು ಸತ್ತಿದ್ದರೆ
ಚೆನ್ನಾಗಿತ್ತು. [3]ಕತ್ತಿಯ ಬಾಯಿಗೆ ತುತ್ತಾಗಿಸಲು ಸರ್ವೇಶ್ವರಸ್ವಾಮಿ ನಮ್ಮನ್ನೇಕೆ ಈ ನಾಡಿಗೆ ಬರಮಾಡಿದರು?
ನಮ್ಮ ಮಡದಿ ಮಕ್ಕಳು ಪರರ ಪಾಲಾಗುವರಲ್ಲಾ? ನಾವು ಮರಳಿ ಈಜಿಪ್ಟ್ ದೇಶಕ್ಕೆ ಹೋಗುವುದೇ
ಒಳಿತಲ್ಲವೆ?" ಎಂದು ಹೇಳಿಕೊಂಡರು. [4]"ಒಬ್ಬ ನಾಯಕನನ್ನು ನೇಮಿಸಿಕೊಂಡು ಈಜಿಪ್ಟಿಗೆ ಹಿಂದಿರುಗಿ
ಹೋಗೋಣ," ಎಂದೂ ಒಬ್ಬರಿಗೊಬ್ಬರು ಮಾತಾಡಿಕೊಂಡರು.
5 ಆಗ ಮೋಶೆ ಮತ್ತು ಆರೋನರು ಇಸ್ರಯೇಲರ ಸರ್ವಸಮೂಹದ ಮುಂದೆ ಅಡ್ಡಬಿದ್ದರು.
[6]ಅಲ್ಲದೆ ನಾಡನ್ನು ಸಂಚರಿಸಿ ನೋಡಿ ಬಂದವರಲ್ಲಿ ನೂನನ ಮಗ ಯೆಹೋಶುವನು ಮತ್ತು ಯೆಫುನ್ನೆಯ
ಮಗ ಕಾಲೇಬನು ಸಿಟ್ಟಿನಿಂದ ತಮ್ಮ ಬಟ್ಟೆಗಳನ್ನೇ ಹರಿದುಕೊಂಡು, [7]ಇಸ್ರಯೇಲರ ಸರ್ವ ಸಮೂಹದವರಿಗೆ
ಹೀಗೆಂದರು: "ನಾವು ಸಂಚರಿಸಿ ನೋಡಿಬಂದ ನಾಡು ಅತ್ಯುತ್ತಮವಾದುದು; [8]ಹಾಲೂ ಜೇನೂ ಹರಿಯುವ
ನಾಡದು! ಸರ್ವೇಶ್ವರನಿಗೆ ಮೆಚ್ಚುಗೆ ಆದರೆ ಅದರಲ್ಲಿ ನಮ್ಮನ್ನು ಸೇರಿಸುವರು, ಅದನ್ನೇ ನಮ್ಮ ಸ್ವಾಧೀನಕ್ಕೆ
ಕೊಡುವರು. [9]ಆದ್ದರಿಂದ ಸರ್ವೇಶ್ವರನಿಗೆ ವಿರುದ್ಧ ದಂಗೆ ಏಳಬೇಡಿ. ಆ ನಾಡಿನ ಜನರಿಗೆ ದಿಗಿಲು
ಪಡಬೇಡಿ. ಅವರು ನಮಗೆ ತುತ್ತಾಗುವರು, ನಾವು ಪುಷ್ಟಿ ಆಗುವೆವು. ಅವರಿಗೆ ನೆರಳಾಗಿದ್ದ ದೇವರು
ಅವರನ್ನು ಕೈಬಿಟ್ಟಿದ್ದಾನೆ. ಸರ್ವೇಶ್ವರ ನಮ್ಮ ಕಡೆ ಇದ್ದಾರೆ. ಅವರಿಗೆ ಭಯಪಡಬೇಡಿ." [10]ಆದರೆ ಜನಸಂದಣಿ
ಅವರಿಗೆ ಕಿವಿಗೊಡಲೊಲ್ಲದೆ ಕಲ್ಲು ಎಸೆದು ಅವರನ್ನು ಕೊಲ್ಲಬೇಕೆಂದಿದ್ದರು. ಆಗ ಸರ್ವೇಶ್ವರನ ತೇಜಸ್ಸು
ದೇವದರ್ಶನದ ಗುಡಾರದಲ್ಲಿ ಹೊಳೆದು ಇಸ್ರಯೇಲರೆಲ್ಲರಿಗೂ ಕಾಣಿಸಿಕೊಂಡಿತು.

## ಜನರ ಪರವಾಗಿ ಮೋಶೆ ಮಾಡಿದ ಪ್ರಾರ್ಥನೆ

11 ಮೋಶೆಗೆ ಸರ್ವೇಶ್ವರ, "ಇನ್ನೆಷ್ಟು ಕಾಲ ಈ ಜನರು ನನ್ನನ್ನು ಅಲಕ್ಷ್ಯಮಾಡುವರು? ನಾನು
ಮಾಡಿದ ಮಹತ್ಕಾರ್ಯಗಳನ್ನು ಕಣ್ಣಾರೆ ನೋಡಿಯೂ ನನ್ನನ್ನು ಇನ್ನೆಷ್ಟು ಕಾಲ ನಂಬದೆ ಇರುವರು?
[12]ಆಗಲಿ, ನಾನು ಇವರಿಗೆ ದೊಡ್ಡ ರೋಗವನ್ನು ಬರಮಾಡಿ ಇವರನ್ನು ನಿರ್ಮೂಲ ಮಾಡಿಬಿಡುತ್ತೇನೆ;
ಇವರಿಗಿಂತ ದೊಡ್ಡದೂ ಬಲಿಷ್ಠವೂ ಆದ ಜನಾಂಗವೊಂದನ್ನು ನಿನ್ನಿಂದಲೇ ಹುಟ್ಟಿಸುವೆನು," ಎಂದು
ಹೇಳಿದರು.

13 ಅದಕ್ಕೆ ಮೋಶೆ: "ನೀವು ಹಾಗೆ ಮಾಡುವುದಾದರೆ ಈಜಿಪ್ಟಿನವರು ಈ ಸಮಾಚಾರವನ್ನು
ಕೇಳುವರು. ಅವರ ಕೈಯಿಂದ ನೀವು ಈ ಜನರನ್ನು ಭುಜಪರಾಕ್ರಮದಿಂದ ಬಿಡಿಸಿದ ಸಂಗತಿಯನ್ನು ಈ
ಕಾನಾನ್ ನಾಡಿನ ನಿವಾಸಿಗಳಿಗೆ ತಿಳಿಸುವರು. [14]ಅಲ್ಲದೆ ಸರ್ವೇಶ್ವರಾ, ನೀವು ಇಸ್ರಯೇಲರ ನಡುವೆ
ಇರುವುದಾಗಿ, ನೀವು ಇಸ್ರಯೇಲರಿಗೆ ಪ್ರತ್ಯಕ್ಷ ಕಾಣಿಸಿಕೊಳ್ಳುವುದಾಗಿ, ಹಗಲಿನಲ್ಲಿ ಮೇಘಸ್ತಂಭದಲ್ಲೂ,
ಇರುಳಲ್ಲಿ ಅಗ್ನಿಸ್ತಂಭದಲ್ಲೂ ಇದ್ದು ಇವರ ಮುಂದೆ ನಡೆದು ಹೋಗುವುದಾಗಿ ಹಾಗೂ ನೀವಿರುವ ಮೇಘ
ಇಸ್ರಯೇಲರ ಮೇಲೆ ಇರುವುದಾಗಿ ಈ ನಾಡಿನವರು ಕೇಳಿದ್ದಾರೆ. [15]ಹೀಗಿರಲಾಗಿ ನೀವು ಒಂದೇ ಪೆಟ್ಟಿನಿಂದ
ಈ ಜನರನ್ನೆಲ್ಲಾ ಸಾಯಿಸಿದರೆ ನಿಮ್ಮ ಪ್ರಖ್ಯಾತಿಯನ್ನು ಕೇಳಿದ ಜನಾಂಗಗಳವರು ನಿಮಗೆ ವಿರುದ್ಧ
ಮಾತಾಡಿಕೊಳ್ಳುವರು: [16]'ಸರ್ವೇಶ್ವರ ಪ್ರಮಾಣ ಪೂರ್ವಕವಾಗಿ ವಾಗ್ದಾನ ಮಾಡಿದ ನಾಡಿಗೆ ತನ್ನ ಜನರನ್ನು
ಸೇರಿಸಲು ಶಕ್ತಿ ಸಾಲದೆ ಹೋಯಿತು; ಅವರನ್ನು ಮರುಭೂಮಿಯಲ್ಲೇ ಕೊಂದುಹಾಕಿಬಿಟ್ಟ'
ಎಂದುಕೊಳ್ಳುವರು. [17]ಆದ್ದರಿಂದ ಪ್ರಭೂ, ನಿಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಿರಿ: ಹಿಂದೆ ನೀವು ನಿಮ್ಮ
ವಿಷಯದಲ್ಲಿ: [18]'ಸರ್ವೇಶ್ವರ ದೀರ್ಘಶಾಂತನು, ಪ್ರೀತಿಮಯನು, ಪಾಪ-ಅಪರಾಧಗಳನ್ನು ಕ್ಷಮಿಸುವವನು,

ಆದರೂ ಶಿಕ್ಷಿಸದೆ ಬಿಡದವನು; ತಂದೆಗಳ ಪಾಪಫಲವನ್ನು ಮಕ್ಕಳ ಮೇಲೆ ಮೂರುನಾಲ್ಕು ತಲೆಗಳವರೆಗೆ
ಬರಮಾಡುವವನು,' ಎಂದು ಹೇಳಿದ್ದೀರಿ. ಆ ಮಾತನ್ನು ನೆನಪಿಗೆ ತಂದುಕೊಳ್ಳಿ. 19ನಾವು ಈಜಿಪ್ಟ್
ದೇಶವನ್ನು ಬಿಟ್ಟುಬಂದ ದಿನದಿಂದ ಇಂದಿನವರೆಗೆ ಈ ಜನರ ಪಾಪಗಳನ್ನು ಕ್ಷಮಿಸಿದ್ದೀರಿ. ಅದೇ ಪ್ರಕಾರ
ಈಗಲೂ ಮಹಾಕೃಪೆಯಿಂದ ಇವರ ಪಾಪವನ್ನು ಕ್ಷಮಿಸಬೇಕೆಂದು ಬೇಡಿಕೊಳ್ಳುತ್ತೇನೆ," ಎಂದು
ಪ್ರಾರ್ಥಿಸಿದನು.

20 ಅದಕ್ಕೆ ಸರ್ವೇಶ್ವರ, "ನಿನ್ನ ಪ್ರಾರ್ಥನೆಯ ಮೇರೆಗೆ ನಾನು ಕ್ಷಮಿಸಿದ್ದೇನೆ. 21ಆದರೂ ನನ್ನ
ಜೀವದಾಣೆ, ಸರ್ವೇಶ್ವರನ ಮಹಿಮೆ ಅಖಿಲ ವಿಶ್ವವನ್ನು ತುಂಬಿದೆಯೆಂಬ ಸತ್ಯವಾಕ್ಯದ ಆಣೆ, ನನ್ನನ್ನು
ಅಲಕ್ಷ್ಯ ಮಾಡಿದ ಇವರಲ್ಲಿ ಯಾರೂ ವಾಗ್ದತ್ತ ನಾಡನ್ನು ನೋಡುವುದಿಲ್ಲ. 22ಈಜಿಪ್ಟ್ ದೇಶದಲ್ಲೂ
ಮರುಭೂಮಿಯಲ್ಲೂ ನಾನು ಮಾಡಿದ ಮಹತ್ಕಾರ್ಯಗಳನ್ನು ಹಾಗೂ ನನ್ನ ಅಸ್ತಿತ್ವದ ತೇಜಸ್ಸನ್ನು ಈ
ಮಾನವರೆಲ್ಲರೂ ನೋಡಿದ್ದರೂ ನನ್ನ ಮಾತಿಗೆ ಕಿವಿಗೊಡಲಿಲ್ಲ. ಬದಲಿಗೆ ನನ್ನನ್ನು ಪದೇಪದೇ
ಪರೀಕ್ಷಿಸಿದ್ದಾರೆ. 23ಆದ್ದರಿಂದ ಇವರ ಪೂರ್ವಜರಿಗೆ ಪ್ರಮಾಣ ಪೂರ್ವಕವಾಗಿ ನಾನು ವಾಗ್ದಾನ ಮಾಡಿದ
ಆ ನಾಡನ್ನು ಇವರಾರೂ ನೋಡುವುದಿಲ್ಲ. 24ನನ್ನ ದಾಸನಾದ ಕಾಲೇಬನಾದರೋ ಅವರಂಥ
ಮನಸ್ಸುಳ್ಳವನಾಗಿರದೆ ಮನಃಪೂರ್ವಕವಾಗಿ ನನ್ನ ಮಾತನ್ನು ಅನುಸರಿಸಿ ನಡೆದಿದ್ದಾನೆ. ಆದ್ದರಿಂದ ಅವನು
ಸಂಚರಿಸಿ ಬಂದ ಆ ನಾಡಿಗೆ ಅವನನ್ನು ಸೇರಿಸುವೆನು. ಅವನ ಸಂತತಿಯವರು ಅದನ್ನು
ಸ್ವಾಧೀನಪಡಿಸಿಕೊಳ್ಳುವರು. 25(ಅಮಾಲೇಕ್ಯರು ಹಾಗು ಕಾನಾನ್ಯರು ಅದರ ಕಣಿವೆಯಲ್ಲಿ
ವಾಸಮಾಡುತ್ತಿದ್ದಾರೆ); ಈ ಕಾರಣ ನೀವು ನಾಳೆ ಹಿಂದಿರುಗಿ ಕೆಂಪುಸಮುದ್ರಕ್ಕೆ ಹೋಗುವ ದಾರಿ ಹಿಡಿದು
ಮರುಭೂಮಿಗೆ ಪ್ರಯಾಣ ಮಾಡಬೇಕು," ಎಂದು ಹೇಳಿದರು.

### ಗೊಣಗುಟ್ಟಿದವರಿಗಾದ ದಂಡನೆ

26 ಸರ್ವೇಶ್ವರ ಮೋಶೆ ಮತ್ತು ಆರೋನರಿಗೆ: 27"ನನಗೆ ವಿರೋಧವಾಗಿ ಗೊಣಗುಟ್ಟುವ ಈ ದುಷ್ಟ
ಸಮೂಹದವರನ್ನು ನಾನು ಎಷ್ಟು ಕಾಲ ಸಹಿಸಲಿ! ಈ ಇಸ್ರಯೇಲರು ನನಗೆ ವಿರುದ್ಧ ಗೊಣಗುಟ್ಟುವ
ಮಾತುಗಳು ನನಗೆ ಕೇಳಿಸಿವೆ. 28ನೀವು ಅವರಿಗೆ ಹೀಗೆ ಹೇಳಬೇಕು: 'ಸರ್ವೇಶ್ವರ ಹೇಳುವುದೇನೆಂದರೆ –
ನನ್ನ ಜೀವದಾಣೆ, ನೀವು ನನಗೆ ಕೇಳಿಸುವಂತೆ ಆಡಿಕೊಂಡ ಪ್ರಕಾರವೇ ನಾನು ಮಾಡುತ್ತೇನೆ. 29ನಿಮ್ಮ
ಶವಗಳು ಈ ಮರುಭೂಮಿಯಲ್ಲೇ ಬೀಳುವುವು. ನೀವು ನನಗೆ ವಿರೋಧವಾಗಿ ಗೊಣಗಿದ್ದರಿಂದ ನಿಮ್ಮಲ್ಲಿ
ಎಣಿಕೆಯಾದವರೆಲ್ಲರೂ ಅಂದರೆ, ಇಪ್ಪತ್ತು ವರ್ಷ ಮತ್ತು ಮೇಲ್ಪಟ್ಟ ವಯಸ್ಸುಳ್ಳವರೆಲ್ಲರೂ
ಮರುಭೂಮಿಯಲ್ಲೇ ಸಾಯುವರು. 30ಯೆಫುನ್ನೆಯ ಮಗ ಕಾಲೇಬ್ ಮತ್ತು ನೂನನ ಮಗ ಯೆಹೋಶುವ
ಇವರಿಬ್ಬರೇ ಹೊರತು ನಿಮ್ಮಲ್ಲಿ ಯಾರೂ ನಿಮ್ಮ ನಿವಾಸಕ್ಕಾಗಿ ನಾನು ಪ್ರಮಾಣಪೂರ್ವಕವಾಗಿ ವಾಗ್ದಾನ
ಮಾಡಿದ ನಾಡನ್ನು ಸೇರುವುದಿಲ್ಲ. 31ಆದರೆ ನಿಮ್ಮ ಮಕ್ಕಳನ್ನು, ಪರರ ಪಾಲಾಗುವರು ಎಂದು ಹೇಳಿದ
ನಿಮ್ಮ ಚಿಕ್ಕಮಕ್ಕಳನ್ನು ಅಲ್ಲಿಗೆ ಸೇರಿಸುವೆನು. ನೀವು ಬೇಡವೆಂದ ನಾಡನ್ನು ಅವರು ಅನುಭವಿಸುವರು.
32ನೀವಾದರೋ ಈ ಮರುಭೂಮಿಯಲ್ಲೇ ಬೀಳುವ ತನಕ 33ನಿಮ್ಮ ಮಕ್ಕಳು ನೀವು ಮಾಡಿದ ದ್ರೋಹದ
ಫಲವನ್ನು ಅನುಭವಿಸುವವರಾಗಿ ನಾಲ್ವತ್ತು ವರ್ಷ ಮರುಭೂಮಿಯಲ್ಲೇ ಅಲೆದಾಡುವರು. 34ನೀವು ಆ
ನಾಡನ್ನು ನಾಲ್ವತ್ತು ದಿನಗಳು ಸಂಚರಿಸಿ ನೋಡಿದಿರಿ. ಅಂತೆಯೇ ಒಂದು ದಿನಕ್ಕೆ ಒಂದು ವರ್ಷದ ಮೇರೆಗೆ
ನಾಲ್ವತ್ತು ವರ್ಷ ನಿಮ್ಮ ಪಾಪದ ಫಲವನ್ನು ಅನುಭವಿಸುವಿರಿ; ನಾನು ಕೈಬಿಟ್ಟವರ ಗತಿ ಎಂಥದೆಂದು
ತಿಳಿದುಕೊಳ್ಳುವಿರಿ. 35ಇದು ಸರ್ವೇಶ್ವರನೆಂಬ ನಾನೇ ಹೇಳಿದ ಮಾತು. ನನಗೆ ವಿರೋಧವಾಗಿ ಒಟ್ಟು
ಕೂಡಿಕೊಂಡಿರುವ ಈ ದುಷ್ಟ ಸಮೂಹದವರೆಲ್ಲರಿಗೆ ಈ ಮಾತಿನ ಮೇರೆಗೆ ಮಾಡಿಯೇ ತೀರುವೆನು.
ಮರುಭೂಮಿಯಲ್ಲೇ ಅವರೆಲ್ಲರು ಸಾಯಬೇಕು," ಎಂದು ಹೇಳಿದರು.

36 ಆ ನಾಡನ್ನು ಸಂಚರಿಸಿ ನೋಡಿಬರುವುದಕ್ಕೆ ಮೋಶೆಯಿಂದ ಕಳಿಸಲಾಗಿದ್ದವರು ಹಿಂದಿರುಗಿ
ಬಂದು ಆ ನಾಡಿನ ಬಗ್ಗೆ ಅಶುಭ ಸಮಾಚಾರವನ್ನು ಹೇಳಿ ಸರ್ವಸಮೂಹದವರನ್ನು ಮೋಶೆಗೆ ವಿರುದ್ಧ
ಗೊಣಗುವಂತೆ ಮಾಡಿದ್ದರು. 37ಅಂಥ ವ್ಯಕ್ತಿಗಳು ಸರ್ವೇಶ್ವರನ ಸನ್ನಿಧಿಯಲ್ಲಿ ವ್ಯಾಧಿಯಿಂದ ಸತ್ತರು.
38ಅವರಲ್ಲಿ ನೂನನ ಮಗ ಯೆಹೋಶುವನು ಮತ್ತು ಯೆಫುನ್ನೆಯ ಮಗ ಕಾಲೇಬನು ಉಳಿದುಕೊಂಡರು.

## ನಾಡನ್ನು ಅಕ್ರಮಿಸಲು ಪ್ರಥಮ ಪ್ರಯತ್ನ

(ಧರ್ಮೋ. 1.41–46)

39 ಮೋಶೆ ಸರ್ವೇಶ್ವರನ ಮತುಗಳನ್ನೆಲ್ಲಾ ಇಸ್ರಯೇಲರಿಗೆ ತಿಳಿಸಿದನು. ಅವರು ಬಹಳವಾಗಿ ವ್ಯಸನಪಟ್ಟರು.

40 ಮಾರನೆಯ ದಿನ ಬೆಳಿಗ್ಗೆ ಜನರು ಎದ್ದು, "ನಾವು ಪಾಪಮಾಡಿರುವುದೇನೋ ನಿಜ; ಸರ್ವೇಶ್ವರ ವಾಗ್ದಾನಮಾಡಿದ ಸ್ಥಳಕ್ಕೆ ಏರಿ ಹೋಗೋಣ ಬನ್ನಿ," ಎಂದು ಹೇಳಿಕೊಳ್ಳುತ್ತಾ ಆ ಬೆಟ್ಟದ ಮೇಲಕ್ಕೆ ಹತ್ತಿಹೋಗಲಾರಂಭಿಸಿದರು. [41]ಆದರೆ ಮೋಶೆ ಅವರಿಗೆ, "ಸರ್ವೇಶ್ವರನ ಆಜ್ಞೆಯನ್ನು ಏಕೆ ಮೀರುತ್ತೀರಿ? ಇದು ಕೈಗೂಡುವುದಿಲ್ಲ. [42]ಸರ್ವೇಶ್ವರ ನಿಮ್ಮ ಸಂಗಡ ಇಲ್ಲ, ಹತ್ತಬೇಡಿ. ನೀವು ಶತ್ರುಗಳ ಮುಂದೆ ನಿಲ್ಲಲಾರಿರಿ, ಬಿದ್ದು ಸತ್ತುಹೋಗುವಿರಿ. [43]ಅಲ್ಲಿ ಅಮಾಲೇಕ್ಯರು ಹಾಗೂ ಕಾನಾನ್ಯರು ನಿಮಗೆ ಎದುರಾಗುವರು; ನೀವು ಅವರ ಕತ್ತಿಗೆ ತುತ್ತಾಗುವಿರಿ. ನೀವು ಸರ್ವೇಶ್ವರನ ಮಾತನ್ನು ಅನುಸರಿಸಿದೆ ಪ್ರತಿಭಟಿಸಿದ್ದೀರಿ. ಕತ್ತಿಗೆ ತುತ್ತಾಗುವಿರಿ. ಈ ಕಾರಣ ಅವರು ನಿಮ್ಮೊಂದಿಗೆ ಇರುವುದಿಲ್ಲ," ಎಂದು ಹೇಳಿದನು. [44]ಆದರೂ ಅವರು ಹಟಮಾಡಿ ಆ ಬೆಟ್ಟವನ್ನು ಹತ್ತೇಹತ್ತಿದರು. ಸರ್ವೇಶ್ವರನ ಒಡಂಬಡಿಕೆಯಾದ ಮಂಜೂಷವಾಗಲಿ, ಮೋಶೆಯಾಗಲಿ ಪಾಳೆಯವನ್ನು ಬಿಟ್ಟು ಹೊರಡಲಿಲ್ಲ. [45]ಆ ಮಲೆನಾಡಿನಲ್ಲಿ ವಾಸವಾಗಿದ್ದ ಅಮಾಲೇಕ್ಯರು ಹಾಗೂ ಕಾನಾನ್ಯರು ಇಳಿದುಬಂದು ಅವರನ್ನು ಹೊಡೆದು ಹೊರ್ಮಾ ಪಟ್ಟಣದವರೆಗೂ ಬೆನ್ನಟ್ಟಿ ಬಂದು ಸಂಹರಿಸಿದರು.

## ಬಲಿಕಾಣಿಕೆಯೊಂದಿಗೆ ಸಮರ್ಪಿಸಬೇಕಾದ ನೈವೇದ್ಯ ದ್ರವ್ಯಗಳು

**15** ಸರ್ವೇಶ್ವರಸ್ವಾಮಿ ಮೋಶೆಗೆ: [2]"ನೀನು ಇಸ್ರಯೇಲರಿಗೆ ಹೀಗೆಂದು ಹೇಳು: 'ನಿಮ್ಮ ನಿವಾಸಕ್ಕಾಗಿ ನಾನು ಕೊಡುವ ನಾಡಿಗೆ ನೀವು ಬಂದು ಸೇರಿದನಂತರ [3]ಸರ್ವೇಶ್ವರನಾದ ನನಗೆ ಸುವಾಸನೆಯ ಕಾಣಿಕೆಯಾಗಿ ದನಕರುಗಳಿಂದ, ಆಡುಕುರಿಗಳಿಂದ ಬಲಿಯನ್ನು ಅರ್ಪಿಸುವಾಗ ಅದು ಹರಕೆಯ, ಕೃತಜ್ಞತೆಯ, ಹಬ್ಬಾಚರಣೆಯ, ಶಾಂತಿ ಸಮಾಧಾನದ ಬಲಿಯಾಗಿರಲಿ ಅಥವಾ ದಹನಬಲಿಯಾಗಿರಲಿ. [4]ಆ ಬಲಿಪ್ರಾಣಿಯೊಂದಿಗೆ ಧಾನ್ಯನೈವೇದ್ಯಕ್ಕಾಗಿ ಒಂದೂವರೆ ಸೇರು ಎಣ್ಣೆ ಬೆರೆಸಿದ ಮೂರು ಸೇರು ಗೋದಿಯ ಹಿಟ್ಟನ್ನು ತರಬೇಕು. [5]ಮತ್ತು ಪಾನ ದ್ರವ್ಯಕ್ಕಾಗಿ ಒಂದೂವರೆ ಸೇರು ದ್ರಾಕ್ಷಾರಸವನ್ನೂ ತರಬೇಕು. ನೀವು ದಹನಬಲಿದಾನವಾಗಿ ಇಲ್ಲವೆ ಸಮಾಧಾನಬಲಿಯಾಗಿ ಸಮರ್ಪಿಸುವ ಒಂದೊಂದು ಕುರಿಯೊಂದಿಗೆ ಇದನ್ನು ಸಮರ್ಪಿಸಬೇಕು.

6 "ಸರ್ವೇಶ್ವರನಾದ ನನಗೆ ಸುವಾಸನೆಯ ಕಾಣಿಕೆಯಾಗಿ ಟಗರನ್ನು ಅರ್ಪಿಸುವಾಗ ಅದರೊಂದಿಗೆ ಧಾನ್ಯನೈವೇದ್ಯಕ್ಕಾಗಿ ಎರಡು ಸೇರು ಎಣ್ಣೆ ಬೆರೆಸಿದ ಆರುಸೇರು ಗೋದಿಯ ಹಿಟ್ಟನ್ನು ಅರ್ಪಿಸಬೇಕು; [7]ಮತ್ತು ಪಾನದ್ರವ್ಯಕ್ಕಾಗಿ ಎರಡು ಸೇರು ದ್ರಾಕ್ಷಾರಸವನ್ನು ಸಮರ್ಪಿಸಬೇಕು.

8 "ನೀವು ಅರ್ಪಿಸುವಂಥದ್ದು ಹೋರಿ ಆಗಿದ್ದರೆ, ಅದು ಸರ್ವಾಂಗ ಹೋಮವೇ ಆಗಿರಲಿ ಅಥವಾ ಹರಕೆಯ ಹಾಗೂ ಬೇರೆ ವಿಧವಾದ ಬಲಿಯೇ ಆಗಿರಲಿ, [9]ಆಗ ನೀವು ಆ ಬಲಿ ಪ್ರಾಣಿಯೊಂದಿಗೆ ಧಾನ್ಯನೈವೇದ್ಯಕ್ಕಾಗಿ ಮೂರು ಸೇರು ಎಣ್ಣೆ ಬೆರೆಸಿದ ಒಂಬತ್ತು ಸೇರು ಗೋದಿಯ ಹಿಟ್ಟನ್ನು ಅರ್ಪಿಸಬೇಕು; [10]ಮತ್ತು ಪಾನದ್ರವ್ಯಕ್ಕಾಗಿ ಮೂರು ಸೇರು ದ್ರಾಕ್ಷಾರಸವನ್ನು ತಂದು ಸಮರ್ಪಿಸಬೇಕು. ಇದು ಸರ್ವೇಶ್ವರನಾದ ನನಗೆ ಪ್ರಿಯವಾದ ಸುಗಂಧ ದಹನಬಲಿಯಾಗುವುದು.

11 "ಕುರಿ, ಆಡು, ಟಗರು, ಹೋರಿ – ಇವುಗಳಲ್ಲಿ ಪ್ರತಿಯೊಂದು ಬಲಿಪ್ರಾಣಿಯ ಸಂಗಡ ನೀವು ಈ ಮೇರೆಗೆ ನೈವೇದ್ಯಮಾಡಬೇಕು. [12]ನೀವು ಸಮರ್ಪಿಸುವ ಬಲಿಪ್ರಾಣಿಗಳ ಸಂಖ್ಯಾನುಸಾರ ಒಂದೊಂದು ಪ್ರಾಣಿಯ ಸಮೇತ ಹೀಗೆಯೇ ಮಾಡಬೇಕು. [13]ಸ್ವದೇಶದವರೆಲ್ಲರೂ ಸರ್ವೇಶ್ವರನಿಗೆ ಸುಗಂಧಬಲಿಯನ್ನು ಸಮರ್ಪಿಸುವಾಗ ಈ ರೀತಿಯಾಗಿಯೇ ಮಾಡಬೇಕು. [14]ನಿಮ್ಮ ಮಧ್ಯೆ, ಇಲ್ಲವೆ ನಿಮ್ಮ ಸಂತತಿಯವರ ಮಧ್ಯೆ ವಾಸಿಸುವ ಅನ್ಯದೇಶಿಯನಾಗಲಿ, ಪ್ರವಾಸಿಯಾಗಲಿ ಸುಗಂಧ ದಹನಬಲಿಯನ್ನು ಅರ್ಪಿಸಲಾಶಿಸಿದರೆ ನಿಮ್ಮಂತೆಯೇ ಅವನೂ ಮಾಡಬೇಕು. [15]ಸರ್ವರಿಗೂ ಅಂದರೆ, ನಿಮಗೂ ನಿಮ್ಮಲ್ಲಿರುವ ಅನ್ಯದೇಶಿಯರಿಗೂ

ಒಂದೇ ವಿಧಿಯಿರಬೇಕು. ಇದು ನಿಮಗೆ ಮಾತ್ರವಲ್ಲ, ನಿಮ್ಮ ಸಂತತಿಯವರಿಗೂ ಶಾಶ್ವತ ನಿಯಮವಾಗಿರಲಿ. ಸರ್ವೇಶ್ವರನ ಸನ್ನಿಧಿಯಲ್ಲಿ ನೀವು ಹೇಗೆ ಇರುವಿರೋ ಹಾಗೆಯೇ ಅನ್ಯದೇಶಿಯನೂ ಇರುವನು. [16]ನಿಮಗೂ
ನಿಮ್ಮಲ್ಲಿ ವಾಸಿಸುವ ವಿದೇಶಿಯನಿಗೂ ಒಂದೇ ವಿಧಿ, ಒಂದೇ ನಿಯಮ ಇರಬೇಕು," ಎಂದರು.

### ಗೋದಿಯ ಹಸಿಹಿಟ್ಟಿನಿಂದ ಮಾಡಿದ ಮೊದಲ ರೊಟ್ಟಿ

17 ಸರ್ವೇಶ್ವರ ಮೋಶೆಗೆ, [18]"ನೀನು ಇಸ್ರಯೇಲರಿಗೆ ಹೀಗೆ ಆಜ್ಞಾಪಿಸು: ನಾನು ನಿಮ್ಮನ್ನು
ಕರೆದುಕೊಂಡು ಹೋಗುವ ನಾಡಿಗೆ ನೀವು ಸೇರಿದ ನಂತರ [19]ಆ ಭೂಮಿಯ ಬೆಳೆಯನ್ನು ಅನುಭವಿಸುವಾಗ
ಅದರಲ್ಲಿ ಸ್ವಲ್ಪವನ್ನು ಸರ್ವೇಶ್ವರನಿಗೆ ಮೀಸಲಾಗಿಡಬೇಕು. [20]ನೀವು ಕಣದಲ್ಲಿ ತುಳಿಸಿದ ದವಸದಲ್ಲಿ
ಕಿಂಚಿತ್ತನ್ನು ಸರ್ವೇಶ್ವರನಿಗೆಂದು ಮೀಸಲಾಗಿಡುವಂತೆಯೆ ಆ ಕಣಕದಿಂದ ಮಾಡುವ ಮೊದಲ
ರೊಟ್ಟಿಯನ್ನು ಮೀಸಲಾಗಿಡಬೇಕು. [21]ನೀವು ಹಾಗು ನಿಮ್ಮ ಸಂತತಿಯವರು ಹೀಗೆ ಕಣಕದಿಂದ ಮಾಡುವ
ಮೊದಲನೆಯ ರೊಟ್ಟಿಯನ್ನು ಸರ್ವೇಶ್ವರನಿಗೆ ಮೀಸಲಾಗಿಡಬೇಕು," ಎಂದರು.

### ತಿಳಿಯದೆ ಮಾಡಿದ ತಪ್ಪಿಗೆ ಪರಿಹಾರ

22 "ಸರ್ವೇಶ್ವರಸ್ವಾಮಿ ಮೋಶೆಯ ಮುಖಾಂತರ ಕೊಟ್ಟ ಈ ಆಜ್ಞೆಗಳಲ್ಲಿ ಒಂದನ್ನು, ಒಬ್ಬನು
ತಿಳಿಯದೆ ಮೀರಿ ನಡೆಯಲು ಸಾಧ್ಯ. [23]ಅಂತೆಯೇ ಮುಂಬರುವ ಕಾಲದಲ್ಲಿ ಎಂದಾದರೂ ಒಂದು ಸಭೆ
ಇವುಗಳಲ್ಲಿ ಒಂದನ್ನು ಮೀರಿ ದೋಷಿಯಾಗಲು ಸಾಧ್ಯ. [24]ಆಗ ಅವರೆಲ್ಲರು ಒಟ್ಟಿಗೆ ಸೇರಿ ಸರ್ವೇಶ್ವರನಿಗೆ
ಸುಗಂಧಕಾಣಿಕೆಯಾಗಿ ಹಾಗೂ ದಹನಬಲಿಯಾಗಿ ಒಂದು ಹೋರಿಯನ್ನು ಅರ್ಪಿಸಬೇಕು; ನೈವೇದ್ಯವಾಗಿ
ನಿಯಮಿತ ಧಾನ್ಯದ್ರವ್ಯಗಳನ್ನು ಹಾಗೂ ಪಾನ ದ್ರವ್ಯಗಳನ್ನು ಅರ್ಪಿಸಬೇಕು; ಅಲ್ಲದೆ ದೋಷ
ಪರಿಹಾರಕಬಲಿಯಾಗಿ ಒಂದು ಹೋತವನ್ನು ಸಮರ್ಪಿಸಬೇಕು. [25]ಹೀಗೆ ಯಾಜಕನು ಇಸ್ರಯೇಲರ
ಸರ್ವಸಮೂಹದ ಪರವಾಗಿ ದೋಷ ಪರಿಹಾರವನ್ನು ಮಾಡಿದಾಗ ಅವರಿಗೆ ಕ್ಷಮಾಪಣೆ ದೊರಕುವುದು.
ಅವರು ಆ ತಪ್ಪನ್ನು ತಿಳಿಯದೆ ಮಾಡಿದ್ದರಿಂದ ಮತ್ತು ಅವರು ಅದರ ಪರಿಹಾರಕ್ಕಾಗಿ ಸರ್ವೇಶ್ವರನ
ಸನ್ನಿಧಿಯಲ್ಲಿ ದಹನಬಲಿಯನ್ನೂ ದೋಷಪರಿಹಾರಕ ಬಲಿಯನ್ನೂ ಅರ್ಪಿಸಿದ್ದರಿಂದ ಕ್ಷಮೆ ಲಭಿಸುವುದು.
[26]ಇಸ್ರಯೇಲರ ಸರ್ವಸಭೆಯವರಿಗೂ ಅವರ ಮಧ್ಯೆ ವಾಸಿಸುವ ವಿದೇಶಿಯರಿಗೂ ಅವರೆಲ್ಲರೂ ತಿಳಿಯದೆ
ಮಾಡಿದ ತಪ್ಪಿಗೆ ಕ್ಷಮೆ ಲಭಿಸುವುದು.
27 "ಯಾವನಾದರೂ ಒಬ್ಬನು ವೈಯಕ್ತಿಕವಾಗಿ ತಿಳಿಯದೆ ತಪ್ಪು ಮಾಡಿದರೆ, ಅಂಥವನು
ದೋಷಪರಿಹಾರಕಬಲಿಗಾಗಿ ಒಂದು ವರ್ಷದ ಆಡನ್ನು ಸಮರ್ಪಿಸಬೇಕು. [28]ತಿಳಿಯದೆ ತಪ್ಪು ಮಾಡಿದ
ಅಂಥವನ ಪರವಾಗಿ ಯಾಜಕನು ಸರ್ವೇಶ್ವರನ ಸನ್ನಿಧಿಯಲ್ಲಿ ದೋಷಪರಿಹಾರಕ ವಿಧಿಯನ್ನು
ನೆರವೇರಿಸಿದರೆ ಅವನಿಗೆ ಕ್ಷಮೆ ದೊರಕುವುದು. [29]ಈ ಬಗ್ಗೆ ಇಸ್ರಯೇಲರಲ್ಲಿರುವ ಸ್ವದೇಶಿಯರಿಗೂ
ವಿದೇಶೀಯರಿಗೂ ಒಂದೇ ವಿಧಿಯಿರಬೇಕು.
30 "ಆದರೆ ಒಬ್ಬನು ಸ್ವದೇಶದವನೇ ಆಗಲಿ, ವಿದೇಶದವನೇ ಆಗಲಿ, ಮನಃಪೂರ್ವಕವಾಗಿ,
ಬೇಕುಬೇಕೆಂದು ಪಾಪವನ್ನು ಮಾಡಿದರೆ ಅಂಥವನನ್ನು ಕುಲದಿಂದ ತೆಗೆದುಹಾಕಬೇಕು. ಏಕೆಂದರೆ ಅವನು
ಸರ್ವೇಶ್ವರನನ್ನು ತೃಣೀಕರಿಸಿದ್ದಾನೆ. [31]ಸರ್ವೇಶ್ವರನ ಮಾತನ್ನು ತಾತ್ಸಾರ ಮಾಡಿ, ಅವರ ಆಜ್ಞೆಯನ್ನು
ಉಲ್ಲಂಘಿಸಿದ್ದರಿಂದ ಅಂಥವನಿಗೆ ಬಹಿಷ್ಕಾರ ಹಾಕಲೇಬೇಕು. ಅವನು ತನ್ನ ಪಾಪದ ದುಷ್ಫಲವನ್ನು
ಅನುಭವಿಸುವಂತಾಗಬೇಕು."

### ವಿಶ್ರಾಂತಿ ದಿನಾಚರಣೆಯ ಉಲ್ಲಂಘನೆ

32 ಇಸ್ರಯೇಲರು ಮರುಭೂಮಿಯಲ್ಲಿ ಇದ್ದಾಗ ಒಬ್ಬನು 'ಸಬ್ಬತ್' ದಿನದಂದು ಸೌದೆ
ಕೂಡಿಸುವುದನ್ನು ಕಂಡರು. [33]ಅವನನ್ನು ಮೋಶೆ, ಆರೋನ್ ಹಾಗೂ ಸರ್ವಸಮುದಾಯದ ಬಳಿಗೆ
ಹಿಡಿದುಕೊಂಡು ಬಂದರು. [34]ಅಂಥವನಿಗೆ ವಿಧಿಸಬೇಕಾದ ಶಿಕ್ಷೆಯ ಬಗ್ಗೆ ಇದುವರೆಗೂ ಯಾವ
ನಿಯಮವೂ ಇರಲಿಲ್ಲ. ಆದುದರಿಂದ ಅವನನ್ನು ಕಾವಲಿನಲ್ಲಿಟ್ಟರು. [35]ಆಗ ಸರ್ವೇಶ್ವರ ಮೋಶೆಗೆ, "ಆ

ಮನುಷ್ಯನಿಗೆ ಮರಣ ಶಿಕ್ಷೆಯಾಗಬೇಕು. ಜನ ಸಮೂಹದವರೆಲ್ಲ ಅವನನ್ನು ಪಾಳೆಯದ ಹೊರಗೆ ಕಲ್ಲೆಸೆದು ಕೊಲ್ಲಬೇಕು," ಎಂದು ಆಜ್ಞಾಪಿಸಿದರು. [36]ಅಂತೆಯೆ ಜನಸಮೂಹದವರೆಲ್ಲರು ಆ ವ್ಯಕ್ತಿಯನ್ನು ಪಾಳೆಯದ ಹೊರಗೆ ಎಳೆದುಕೊಂಡು ಹೋಗಿ ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದಂತೆ ಕಲ್ಲೆಸೆದು ಕೊಂದರು.

**ಬಟ್ಟೆಮೂಲೆಗಳಲ್ಲಿ ಗೊಂಡೆಯಿರಲಿ**

37 ಸರ್ವೇಶ್ವರ ಮೋಶೆಗೆ ಹೀಗೆಂದರು: [38]"ಇಸ್ರಯೇಲರು ಮತ್ತು ಅವರ ಸಂತತಿಯವರು ತಮ್ಮ ಬಟ್ಟೆಗಳ ಮೂಲೆಗಳಲ್ಲಿ ಗೊಂಡೆಗಳನ್ನು ಕಟ್ಟಿಕೊಳ್ಳಬೇಕು. ಪ್ರತಿಯೊಂದು ಗೊಂಡೆಯೂ ಒಂದೊಂದು ನೀಲಿದಾರದಿಂದ ಕೂಡಿರಬೇಕೆಂದು ಆಜ್ಞಾಪಿಸು. [39]ಆ ಗೊಂಡೆಗಳ ಪ್ರಯೋಜನವಿದು – ನೀವು ಅವುಗಳನ್ನು ನೋಡುವಾಗ ಸರ್ವೇಶ್ವರನ ಆಜ್ಞೆಗಳನ್ನೆಲ್ಲಾ ನೆನಪಿಗೆ ತಂದುಕೊಂಡು ಅವುಗಳನ್ನು ಪಾಲಿಸಬೇಕು. ಹಿಂದೆ ನೀವು ನನಗೆ ದ್ರೋಹಿಗಳಾಗಿ ನಿಮ್ಮ ಮನಸ್ಸಿಗೆ ಬಂದಂತೆ, ಕಣ್ಣಿಗೆ ತೋರಿದಂತೆ ದಾರಿತಪ್ಪಿ ನಡೆದಿರಿ. [40]ಈಗ ನನ್ನ ಆಜ್ಞೆಗಳನ್ನೇ ಗಮನದಲ್ಲಿಟ್ಟು ಅವುಗಳನ್ನು ಅನುಸರಿಸಬೇಕು. ಹೀಗೆ ನಿಮ್ಮ ದೇವರಿಗೆ ಪ್ರತಿಷ್ಠಿತರಾಗಿರಬೇಕು. [41]ನಿಮ್ಮ ದೇವರಾಗಬೇಕೆಂಬ ಉದ್ದೇಶದಿಂದಲೇ ನಿಮ್ಮನ್ನು ಈಜಿಪ್ಟ್ ದೇಶದಿಂದ ಬರಮಾಡಿದ ಸರ್ವೇಶ್ವರನಾದ ದೇವರು ನಾನು. ನಾನೇ ನಿಮ್ಮ ದೇವರಾದ ಸರ್ವೇಶ್ವರ."

**ಕೋರಹ, ದಾತನ್ ಮತ್ತು ಅಬೀರಾಮರಿಂದ ಪ್ರತಿಭಟನೆ**

**16** ಲೇವಿಯ ಮರಿಮಗನೂ ಕೆಹಾತನ ಮೊಮ್ಮಗನೂ ಇಚ್ಹಾರನ ಮಗನೂ ಆದ ಕೋರಹ ಮತ್ತು ರೂಬೇನ್ ಕುಲದವರಲ್ಲಿ ಎಲೀಯಾಬನ ಮಕ್ಕಳಾದ ದಾತಾನ್ ಹಾಗೂ ಅಬೀರಾಮ್ ಮತ್ತು ಪೆಲೆತನ ಮಗ ಓನ್ – ಇವರು ಮೋಶೆಗೆ ವಿರುದ್ಧ ಪ್ರತಿಭಟಿಸಿದರು. [2]ಇವರ ಸಮೇತ ಸಮುದಾಯದವರಲ್ಲಿ ಮುಖ್ಯಸ್ಥರೂ ಸಲಹೆಗಾರರೂ ಹೆಸರಾಂತ ವ್ಯಕ್ತಿಗಳೂ ಆಗಿದ್ದ 250 ಮಂದಿ ಇಸ್ರಯೇಲರು ಕೂಡ ದಂಗೆಯೆದ್ದರು. [3]ಇವರೆಲ್ಲರೂ ಜೊತೆಗೂಡಿ ಮೋಶೆ ಮತ್ತು ಆರೋನರ ಬಳಿಗೆ ಬಂದು, "ನಿಮ್ಮ ವರ್ತನೆ ಅಧಿಕವಾಯಿತು. ಈ ಸಮುದಾಯದಲ್ಲಿ ಪ್ರತಿ ಒಬ್ಬನೂ ಪ್ರತಿಷ್ಠಿತನೇ. ಸರ್ವೇಶ್ವರ ಇವರೆಲ್ಲರಲ್ಲಿ ವಾಸವಾಗಿದ್ದಾರಲ್ಲವೆ? ಹೀಗಿರಲಾಗಿ ಸರ್ವೇಶ್ವರನ ಸಮುದಾಯದವರಿಗಿಂತ ನಿಮ್ಮನ್ನು ನೀವೇ ಹೆಚ್ಚಿಸಿಕೊಳ್ಳುವುದೇಕೆ?" ಎಂದು ವಾದಿಸಿದರು.

4 ಈ ಮಾತುಗಳನ್ನು ಕೇಳಿದ್ದೇ ಮೋಶೆ ನೆಲದ ಮೇಲೆ ಬೋರಲಾಗಿ ಬಿದ್ದನು. [5]ಕೋರಹನಿಗೂ ಅವನ ಪಂಗಡದವರೆಲ್ಲರಿಗೂ ಹೀಗೆಂದನು: "ಸರ್ವೇಶ್ವರ ತನ್ನವರು ಯಾರೆಂದು ನಾಳೆ ತಿಳಿಸುವರು. ಯಾರನ್ನು ಪ್ರತಿಷ್ಠಿಸಿದ್ದಾರೋ ಹಾಗೂ ತಾವೇ ಆರಿಸಿಕೊಂಡಿದ್ದಾರೋ ಅವರನ್ನು ಮಾತ್ರ ತಮ್ಮ ಹತ್ತಿರಕ್ಕೆ ಬರಗೊಳಿಸುವರು. [6]ನೀವು ಮಾಡಬೇಕಾದುದಿಷ್ಟು – ಕೋರಹನು ಮತ್ತು ಅವನ ಪಂಗಡದವರಾದ ನೀವೆಲ್ಲರೂ ಧೂಪಾರತಿಗಳನ್ನು ತಂದು ಅವುಗಳಲ್ಲಿ ಕೆಂಡವನ್ನಿಟ್ಟು ನಾಳೆ ಸರ್ವೇಶ್ವರನ ಸನ್ನಿಧಿಯಲ್ಲಿ ಧೂಪಹಾಕಬೇಕು. [7]ಆಗ ಸರ್ವೇಶ್ವರ ಯಾರನ್ನು ಮೆಚ್ಚುತ್ತಾರೋ ಅವನೇ ದೇವರಿಗೆ ಪ್ರತಿಷ್ಠಿತನೆಂದು ತಿಳಿದುಕೊಳ್ಳುವಿರಿ. ಲೇವಿಯರೇ, ಅಧಿಕವಾದುದು ನಿಮ್ಮ ವರ್ತನೆಯೆ!"

8 ಮೋಶೆ ಕೋರಹನಿಗೆ – "ಲೇವಿಯರೇ ಕೇಳಿ: [9]ಇಸ್ರಯೇಲರ ದೇವರು ತಮ್ಮ ಸಮುದಾಯದವರಾದ ನಿಮ್ಮನ್ನು ಪ್ರತ್ಯೇಕಿಸಿ ತಮ್ಮ ಗುಡಾರದ ಪರಿಚರ್ಯವನ್ನು ಮಾಡಲು ಹಾಗೂ ಸರ್ವಸಮುದಾಯದ ಸೇವೆಯನ್ನು ಕೈಗೊಳ್ಳಲು ತಮ್ಮ ಬಳಿಯಲ್ಲೇ ಇಟ್ಟುಕೊಂಡರು. [10]ಇದು ಕೋರಹನಾದ ನಿನಗೂ ನಿನ್ನ ಸ್ವಕುಲದವರಾದ ಲೇವಿಯರಿಗೂ ಕೇವಲ ಅಲ್ಪಕಾರ್ಯವೆಂದು ತೋರಿತೇ? ಯಾಜಕಪದವಿ ನಿಮಗಾಗಬೇಕೆಂದು ಕೋರುತ್ತೀರೋ? [11]ಆರೋನನಂಥವನಿಗೇ ವಿರೋಧವಾಗಿ ಗೊಣಗುವವರಾದ್ದರಿಂದ ನೀನು ಮತ್ತು ನಿನ್ನ ಪಂಗಡದವರೆಲ್ಲರು ಸರ್ವೇಶ್ವರನಿಗೆ ವಿರುದ್ಧ ಕೂಡಿಕೊಂಡವರಾದಿರಿ!" ಎಂದನು.

12 ಮೋಶೆ ಎಲೀಯಾಬನ ಮಕ್ಕಳಾದ ದಾತಾನ್ ಮತ್ತು ಅಬಿರಾಮರನ್ನು ಬರುವಂತೆ ಹೇಳಿಕಳಿಸಿದನು. [13]ಅವರು ಅವನಿಗೆ, "ನಾವು ಬರುವುದಿಲ್ಲ, ಹಾಲೂಜೇನೂ ಹರಿಯುವ ದೇಶದಿಂದ ನಮ್ಮನ್ನು ಕರೆತಂದು ಈ ಮರಳುಗಾಡಿನಲ್ಲಿ ಸಾಯಿಸುತ್ತಿರುವೆ, ಇದು ಅಲ್ಪಕಾರ್ಯ ಎಂದು

ಎಣಿಸುತ್ತೀಯೋ? ನಮ್ಮ ಮೇಲೆ ದೊರೆತನ ಮಾಡಬೇಕೆಂದು ಕೋರುತ್ತಿರುವೆಯೋ?” 14ಅಷ್ಟು ಮಾತ್ರವಲ್ಲ,
ಹಾಲೂಜೇನೂ ಹರಿಯುವ ದೇಶಕ್ಕೆ ನಮ್ಮನ್ನು ಸೇರಿಸಲೇ ಇಲ್ಲ; ಹೊಲ ಹಾಗು ದ್ರಾಕ್ಷಿ ತೋಟಗಳನ್ನು ನಮ್ಮ
ಸ್ವಾಧೀನಕ್ಕೆ ಕೊಟ್ಟೂ ಇಲ್ಲ. ಈ ಜನರ ಕಣ್ಣಿಗೆ ಮಣ್ಣು ಹಾಕಬೇಕೆಂದಿರು ವೆಯಾ? ನಾವು ಬರುವುದಿಲ್ಲ,”
ಎಂದು ಹೇಳಿದರು.

15 ಅದಕ್ಕೆ ಮೋಶೆ ಬಹುಕೋಪಗೊಂಡನು. ಸರ್ವೇಶ್ವರನಿಗೆ, “ತಾವು ಇವರ ನೈವೇದ್ಯವನ್ನು ಲಕ್ಷ್ಯಕ್ಕೆ
ತೆಗೆದುಕೊಳ್ಳಬೇಡಿ. ನಾನು ಇವರಿಂದ ಒಂದು ಕತ್ತೆಯನ್ನೂ ಕೂಡ ತೆಗೆದುಕೊಂಡವನಲ್ಲ. ಅವರಲ್ಲಿ
ಒಬ್ಬನಿಗಾದರೂ ಹಾನಿಮಾಡಿದವನಲ್ಲ,” ಎಂದು ಮನವಿಮಾಡಿದನು.

16 ಮೋಶೆ ಕೋರಹನಿಗೆ, “ನೀನೂ ನಿನ್ನ ಪಂಗಡದವರು ಮತ್ತು ಆರೋನನು ನಾಳೆ ಸರ್ವೇಶ್ವರನ
ಸನ್ನಿಧಿಗೆ ಬರಬೇಕು. 17ಪಂಗಡದ ಪ್ರತಿಯೊಬ್ಬನು ತನ್ನತನ್ನ ಧೂಪಾರತಿಯನ್ನು ಅಂದರೆ ಒಟ್ಟು 250
ಧೂಪಾರತಿಗಳನ್ನು ತೆಗೆದುಕೊಂಡು ಧೂಪಹಾಕಿ ಸರ್ವೇಶ್ವರನ ಸನ್ನಿಧಿಗೆ ಬರಬೇಕು. ನೀನು ಮತ್ತು
ಆರೋನನು ಕೂಡ ನಿಮ್ಮ ನಿಮ್ಮ ಧೂಪಾರತಿಗಳನ್ನು ತೆಗೆದುಕೊಂಡು ಬರಬೇಕು,” ಎಂದು ಹೇಳಿದನು.
18ಅದರಂತೆ ಅವರೆಲ್ಲರೂ ತಮ್ಮತಮ್ಮ ಧೂಪಾರತಿಗಳನ್ನು ಕೈಯಲ್ಲಿ ತೆಗೆದುಕೊಂಡು ಬಂದು, ಅವುಗಳಲ್ಲಿ
ಕೆಂಡವನ್ನಿಟ್ಟು ಧೂಪ ದ್ರವ್ಯಗಳನ್ನು ಹಾಕಿ ಮೋಶೆ ಮತ್ತು ಆರೋನರ ಜೊತೆ ದೇವದರ್ಶನದ ಗುಡಾರದ
ಬಾಗಿಲಲ್ಲಿ ನಿಂತುಕೊಂಡರು. 19ಬಳಿಕ ಕೋರಹನು ಸಮುದಾಯದವರೆಲ್ಲರನ್ನು ತಮಗೆ ಎದುರಾಗಿ
ದೇವದರ್ಶನದ ಗುಡಾರದ ಬಾಗಿಲಿನ ಹತ್ತಿರಕ್ಕೆ ಬರಮಾಡಿದನು. ಆಗ ಸರ್ವೇಶ್ವರನ ತೇಜಸ್ಸು
ಸಮುದಾಯದವರೆಲ್ಲರಿಗೆ ಹೊಳೆಯಿತು. 20ಮೋಶೆ –ಆರೋನರಿಗೆ ಸರ್ವೇಶ್ವರ, 21“ನೀವು ಈ
ಸಮುದಾಯದವರಿಂದ ಪ್ರತ್ಯೇಕವಾಗಿ ನಿಲ್ಲಿ; ನಾನು ಇವರನ್ನು ಒಂದು ಕ್ಷಣಮಾತ್ರದಲ್ಲಿ ಭಸ್ಮ
ಮಾಡಿಬಿಡುತ್ತೇನೆ,” ಎಂದರು.

22 ಮೋಶೆ ಮತ್ತು ಆರೋನರು ಅಡ್ಡಬಿದ್ದು, “ದೇವರೇ, ಸರ್ವ ದೇಹಾತ್ಮಗಳಿಗೆ
ದೇವರಾಗಿರುವವರೇ, ಒಬ್ಬನೇ ಒಬ್ಬನು ಪಾಪಮಾಡಿರುವಲ್ಲಿ ನೀವು ಸಮುದಾಯದ ಎಲ್ಲರ ಮೇಲೆ
ಕೋಪಗೊಳ್ಳಬಹುದೆ?” ಎಂದು ಭಿನ್ನವಿಸಿದರು. 23ಆಗ ಸರ್ವೇಶ್ವರ ಮೋಶೆಗೆ, 24“ಇಸ್ರಯೇಲ್
ಸಮಾಜದವರು ಕೋರಹ, ದಾತಾನ್ ಮತ್ತು ಅಬೀರಾಮರ ಗುಡಾರದ ಸುತ್ತಲಿರದೆ ದೂರವಿರಬೇಕೆಂದು
ಅವರಿಗೆ ಆಜ್ಞಾಪಿಸು,” ಎಂದರು.

25 ಆಗ ಮೋಶೆ ಎದ್ದು ದಾತಾನ್ – ಅಬೀರಾಮರ ಬಳಿಗೆ ಹೋದನು. ಇಸ್ರಯೇಲರ ಹಿರಿಯರು
ಅವನ ಹಿಂದೆ ಹೋದರು. 26ಇಸ್ರಯೇಲ್ ಸಮಾಜದವರಿಗೆ ಅವನು, ‘ಈ ದುಷ್ಟರ ಡೇರೆಗಳ ಬಳಿಯಿರದೆ
ದೂರಹೋಗಿ. ಇವರ ಸೊತ್ತಿನಲ್ಲಿ ಯಾವುದನ್ನೂ ಮುಟ್ಟಬೇಡಿ. ಇವರ ದೋಷಗಳಿಗೆ ಬರಲಿರುವ ಶಿಕ್ಷೆ
ನಿಮ್ಮನ್ನು ಕೊಚ್ಚಿಕೊಂಡು ಹೋದೀತು,” ಎಂದು ಎಚ್ಚರಿಸಿದನು. 27ಆದಕಾರಣ ಅವರೆಲ್ಲರು ಕೋರಹ,
ದಾತಾನ್ ಮತ್ತು ಅಬೀರಾಮರ ಗುಡಾರದ ಸುತ್ತಲಿರದೆ ಬೇರೆ ಹೋದರು.

ದಾತಾನ್, ಅಬೀರಾಮ ಮತ್ತು ಅವರ ಮಡದಿ ಮಕ್ಕಳು, ಬಂಧುಬಳಗದವರೂ ಹೊರಗೆ ಬಂದು
ತಮ್ಮತಮ್ಮ ಡೇರೆಗಳ ಬಾಗಿಲುಗಳಲ್ಲಿ ನಿಂತುಕೊಂಡರು. 28ಮೋಶೆ ಜನರಿಗೆ, “ಈ ಕಾರ್ಯ ಗಳೆಲ್ಲ ನನ್ನ
ಸ್ವಂತ ಆಲೋಚನೆಯಿಂದ ಆಗಲಿಲ್ಲ, ಸರ್ವೇಶ್ವರನೇ ಇವುಗಳನ್ನು ನಡೆಸುವುದಕ್ಕೆ ನನ್ನನ್ನು ಕಳಿಸಿದ್ದಾರೆಂದು
ನೀವೇ ತಿಳಿದುಕೊಳ್ಳಬಹುದು. 29ಅದು ಹೇಗೆಂದರೆ – ಎಲ್ಲರೂ ಸಾಯುವ ರೀತಿಯಲ್ಲೇ ಇವರು ಸತ್ತರೆ,
ಅಥವಾ ಎಲ್ಲರಿಗೂ ಸಂಭವಿಸುವ ಗತಿ ಇವರಿಗೆ ಒದಗಿದರೆ ಸರ್ವೇಶ್ವರ ನನ್ನನ್ನು ಕಳಿಸಲಿಲ್ಲವೆಂದು
ತಿಳಿದುಕೊಳ್ಳಬೇಕು. 30ಬದಲಿಗೆ ಸರ್ವೇಶ್ವರ ಇವರಿಗಾಗಿ ಆಶ್ಚರ್ಯಕರವಾದ ಶಿಕ್ಷೆಯನ್ನು ಕಲ್ಪಿಸಿ ಅಂದರೆ,
ಭೂಮಿ ಬಾಯ್ದೆರೆದು ಇವರನ್ನು ಹಾಗು ಇವರಿಗಿರುವ ಸರ್ವಸ್ವವನ್ನು ನುಂಗಿಬಿಟ್ಟರೆ, ಇವರೆಲ್ಲರು
ಸಜೀವಿಗಳಾಗಿ ಪಾತಾಳಕ್ಕೆ ಹೋಗಿಬಿಟ್ಟರೆ, ಇವರು ಸರ್ವೇಶ್ವರನನ್ನು ಉಲ್ಲಂಘಿಸಿದವರೆಂದು ನೀವು
ತಿಳಿದುಕೊಳ್ಳಬೇಕು,” ಎಂದು ಹೇಳಿದನು.

31 ಮೋಶೆ ಈ ಮಾತುಗಳನ್ನು ಹೇಳಿ ಮುಗಿಸಿದ ಕೂಡಲೆ ಆ ಜನರ ಕೆಳಗಿದ್ದ ನೆಲವು ಸೀಳಿತು.
32ಭೂಮಿ ಬಾಯ್ದೆರೆದು ಅವರನ್ನೂ ಅವರ ಮನೆಯವರನ್ನೂ ಕೋರಹನಿಗೆ ಸೇರಿದ ವ್ಯಕ್ತಿಗಳೆಲ್ಲರನ್ನೂ
ಅವರ ಸರ್ವಸ್ವವನ್ನೂ ನುಂಗಿಬಿಟ್ಟಿತು. 33ಅವರು ಸಜೀವರಾಗಿ, ತಮ್ಮ ಸರ್ವಸ್ವ ಸಹಿತವಾಗಿ ಪಾತಾಳಕ್ಕೆ

ಇಳಿದುಬಿಟ್ಟರು. ಭೂಮಿ ಅವರನ್ನು ಮುಚ್ಚಿಕೊಂಡಿತು. [34]ಹೀಗೆ ಅವರು ಸಮುದಾಯದಿಂದ ನಾಶವಾದರು. ಅವರ ಸುತ್ತಲಿದ್ದ ಇಸ್ರಯೇಲರೆಲ್ಲರೂ ಸಾಯುವವರ ಹಾಹಾಕಾರವನ್ನು ಕೇಳಿ, "ಭೂಮಿ ನಮ್ಮನ್ನು ನುಂಗದಿರಲಿ" ಎಂದುಕೊಂಡು ಓಡಿಹೋದರು.

35 ಸರ್ವೇಶ್ವರನ ಬಳಿಯಿಂದ, ಬೆಂಕಿ ಹೊರಟು ಧೂಪಾರತಿಯನ್ನು ಅರ್ಪಿಸುತ್ತಿದ್ದ ಆ 250 ಮಂದಿಯನ್ನು ಭಸ್ಮಮಾಡಿತು.

### ಧೂಪಕಳಶಗಳು

36 ಸರ್ವೇಶ್ವರಸ್ವಾಮಿ ಮೋಶೆಗೆ, [37]"ಸುಟ್ಟು ಹೋದವರ ನಡುವೆಯಿಂದ ಆ ಧೂಪಾರತಿ ಗಳನ್ನು ಎತ್ತಬೇಕೆಂದು ಮಹಾಯಾಜಕ ಆರೋನನ ಮಗ ಎಲ್ಲಾಜಾರನಿಗೆ ಆಜ್ಞಾಪಿಸು; ನೀನು ಅವುಗಳಲ್ಲಿರುವ ಕೆಂಡಗಳನ್ನು ದೂರಕ್ಕೆ ಚೆಲ್ಲು. [38]ಆ ಧೂಪಾರತಿಗಳು ಸರ್ವೇಶ್ವರನ ಸನ್ನಿಧಿಗೆ ತರಲಾದವುಗಳು. ಈ ಕಾರಣ ಪವಿತ್ರವಾದುವು. ಆದುದರಿಂದ ಅವುಗಳನ್ನು ತಗಡುಗಳಾಗಿ ತಟ್ಟಿ ಬಲಿಪೀಠಕ್ಕೆ ಮುಚ್ಚಳವನ್ನಾಗಿ ಮಾಡಿಸು. ಹೀಗೆ ಅವು ಇಸ್ರಯೇಲರಿಗೆ ನೆನಪು ಹುಟ್ಟಿಸುವ ಗುರುತುಗಳಾಗುವುವು," ಎಂದು ಹೇಳಿದರು. [39]ಮೋಶೆಯ ಮುಖಾಂತರ ಸರ್ವೇಶ್ವರ ಹೇಳಿದ ಅಪ್ಪಣೆಯ ಮೇರೆಗೆ ಯಾಜಕ ಎಲ್ಲಾಜಾರನು, ಸುಟ್ಟುಹೋದವರು ತಂದಿದ್ದ ಆ ಕಂಚಿನ ಧೂಪಾರತಿಗಳನ್ನು ತಗಡುಗಳನ್ನಾಗಿ ತಟ್ಟಿಸಿ ಬಲಿಪೀಠಕ್ಕೆ ಮುಚ್ಚಳವನ್ನು ಮಾಡಿಸಿದನು. [40]ಆರೋನನ ಸಂತತಿಯವರಲ್ಲದೆ ಇತರರು ಸರ್ವೇಶ್ವರನ ಸನ್ನಿಧಿಗೆ ಬಂದು ಧೂಪವನ್ನು ಅರ್ಪಿಸಬಾರದು; ಅರ್ಪಿಸಿದರೆ ಕೋರಹನಿಗೂ ಅವನ ಪಂಗಡದವರಿಗೂ ಆದ ಗತಿಗೆ ಗುರಿ ಆಗುವರು ಎಂದು ಇಸ್ರಯೇಲರಿಗೆ ಎಚ್ಚರಿಕೆ ನೀಡುವ ಚಿನ್ಹೆಯಾಯಿತು.

### ಆರೋನನ ಮಧ್ಯಸ್ಥಿಕೆಯ ಪ್ರಭಾವ

41 ಆದರೂ ಇಸ್ರಯೇಲ್ ಸಮುದಾಯದವರು ಮೋಶೆ ಮತ್ತು ಆರೋನರ ಮೇಲೆ ಗೊಣಗುಟ್ಟತೊಡಗಿದರು. 'ಸರ್ವೇಶ್ವರನ ಜನರನ್ನು ಸಾಯಿಸಿದವರು ನೀವೇ' ಎಂದು ಹೇಳುವವರಾದರು. [42]ಸಮುದಾಯದವರೆಲ್ಲರೂ ಹೀಗೆ ಮೋಶೆ ಮತ್ತು ಆರೋನರ ವಿರುದ್ಧ ಪ್ರತಿಭಟಿಸಲು ಸಭೆ ಸೇರಿದರು. ಅವರು ದೇವದರ್ಶನದ ಗುಡಾರದತ್ತ ನೋಡಿದಾಗ, ಮೇಘವೊಂದು ಅದನ್ನು ಆವರಿಸಿತು ಮತ್ತು ಸರ್ವೇಶ್ವರನ ತೇಜಸ್ಸು ಹೊಳೆಯಿತು. [43]ಮೋಶೆ – ಆರೋನರು ದೇವದರ್ಶನದ ಗುಡಾರದ ಮುಂಭಾಗಕ್ಕೆ ಬಂದರು. [44–45]ಆಗ ಸರ್ವೇಶ್ವರ ಮೋಶೆಗೆ: "ನೀವಿಬ್ಬರು ಸಮುದಾಯದವರೊಂದಿಗೆ ಸೇರದೆ ಬೇರೆ ನಿಲ್ಲಬೇಕು. ಒಂದೇ ಕ್ಷಣದಲ್ಲಿ ನಾನು ಅವರನ್ನು ಭಸ್ಮ ಮಾಡಿಬಿಡುತ್ತೇನೆ," ಎಂದರು. ಆಗ ಮೋಶೆ, ಆರೋನರು ಸಾಷ್ಟಾಂಗವೆರಗಿದರು. [46]ಮೋಶೆ, ಆರೋನನನ್ನು ಉದ್ದೇಶಿಸಿ, "ಸರ್ವೇಶ್ವರನಿಗೆ ಕೋಪವುಂಟಾಗಿದೆ; ಈ ಜನರೊಳಗೆ ಘೋರ ವ್ಯಾಧಿಯೊಂದು ಪ್ರಾರಂಭವಾಗಿಬಿಟ್ಟಿದೆ. ನೀನು ಧೂಪಾರತಿಯನ್ನು ತೆಗೆದುಕೊಂಡು, ಅದರಲ್ಲಿ ಬಲಿಪೀಠದಿಂದ ಕೆಂಡಗಳನ್ನು ಇಟ್ಟು, ಧೂಪಹಾಕಿ ಸಮುದಾಯದವರ ಬಳಿಗೆ ಬೇಗಹೋಗು; ಅವರ ಪರವಾಗಿ ದೋಷ ಪರಿಹಾರವನ್ನು ಮಾಡು," ಎಂದು ಹೇಳಿದನು. [47]ಮೋಶೆ ಹೇಳಿದಂತೆಯೇ ಆರೋನನು ಧೂಪಾರತಿಯನ್ನು ತೆಗೆದುಕೊಂಡು ಸಮುದಾಯದವರ ಬಳಿಗೆ ಓಡಿಬಂದಾಗ ಆ ಘೋರ ವ್ಯಾಧಿ ಜನರಲ್ಲಿ ಹರಡಿಕೊಳ್ಳುತ್ತಲಿತ್ತು. ಅವನು ಧೂಪ ಹಾಕಿ ಆ ಜನರ ಪರವಾಗಿ ದೋಷಪರಿಹಾರ ಮಾಡಿದನು; [48]ಸತ್ತವರಿಗು ಹಾಗೂ ಬದುಕುವವರಿಗು ನಡುವೆ ಅವನು ನಿಂತನು. ಆ ವಿಪತ್ತು ಶಮನವಾಯಿತು. [49]ಕೋರಹನನ್ನು ಸೇರಿಕೊಂಡು ಸತ್ತವರಲ್ಲದೆ ಆ ವಿಪತ್ತಿನಿಂದಲೇ ಸತ್ತವರ ಸಂಖ್ಯೆ 14,700. [50]ವಿಪತ್ತು ನಿಂತ ಮೇಲೆ ಆರೋನನು ದೇವ ದರ್ಶನದ ಗುಡಾರದ ಬಳಿಯಿದ್ದ ಮೋಶೆಯ ಬಳಿಗೆ ಹಿಂದಿರುಗಿದನು.

### ಆರೋನನ ಕೋಲು ಚಿಗುರಿತು

**17** ಸರ್ವೇಶ್ವರ ಮೋಶೆಗೆ ಹೀಗೆಂದರು: 2“ಇಸ್ರಯೇಲರ ಸಂಗಡ ನೀನು ಮಾತಾಡಿ ಒಂದೊಂದು ಕುಲದ
ಅಧಿಪತಿಯಿಂದ ಒಂದೊಂದು ಕೋಲಿನ ಮೇರೆಗೆ ಹನ್ನೆರಡು ಕೋಲುಗಳನ್ನು ತೆಗೆದುಕೋ. ಅವನವನ
ಕೋಲಿನ ಮೇಲೆ ಆಯಾ ಅಧಿಪತಿಯ ಹೆಸರನ್ನು ಬರೆಯಿಸು. 3ಲೇವಿಯ ಕುಲಕ್ಕೂ ಒಂದು ಕೋಲು
ಇರುವುದರಿಂದ ಅದರ ಮೇಲೆ ಆರೋನನ ಹೆಸರನ್ನು ಬರೆಯಿಸು. 4ಆ ಕೋಲುಗಳನ್ನು ದೇವದರ್ಶನದ
ಗುಡಾರದಲ್ಲಿ ಮಂಜೂಷದ ಮುಂದೆ ನಾನು ನಿನಗೆ ದರ್ಶನ ಕೊಡುವ ಸ್ಥಳದಲ್ಲಿ ಇಡು. 5ಯಾರನ್ನು ನಾನು
ಮೆಚ್ಚಿದ್ದೇನೋ ಅವನ ಕೋಲು ಚಿಗುರುವುದು. ನಿಮ್ಮಿಬ್ಬರ ವಿರುದ್ಧ ಇಸ್ರಯೇಲರು ಗೊಣಗುವುದು ಇನ್ನು
ಕೇಳಿಸದಂತೆ ಹೀಗೆ ನಿಲ್ಲಿಸಿ ಬಿಡುತ್ತೇನೆ.”

6 ಅದರಂತೆಯೇ ಮೋಶೆ ಇಸ್ರಯೇಲರೊಡನೆ ಮಾತಾಡಿದನು. ಅವರ ಕುಲಾಧಿಪತಿ ಗಳೆಲ್ಲರೂ
ಕುಲಕ್ಕೆ ಒಂದರಂತೆ ಹನ್ನೆರಡು ಕೋಲುಗಳನ್ನು ಅವನ ಕೈಗೆ ಕೊಟ್ಟರು. ಅವುಗಳೊಡನೆ ಆರೋನನ ಕೋಲು
ಇತ್ತು. 7ಮೋಶೆ ಆ ಕೋಲುಗಳನ್ನು ಮಂಜೂಷವಿರುವ ಗುಡಾರದಲ್ಲಿ ಸರ್ವೇಶ್ವರನ ಸನ್ನಿಧಿಯಲ್ಲಿ ಇಟ್ಟನು.
8ಮಾರನೆಯ ದಿನ ಮೋಶೆ ಗುಡಾರದೊಳಗೆ ಹೋಗಿ ನೋಡಿದನು. ಏನಾಶ್ಚರ್ಯ! ಲೇವಿಕುಲದ ಪರವಾಗಿ
ಆರೋನನು ಕೊಟ್ಟಿದ್ದ ಕೋಲು ಚಿಗುರಿತ್ತು; ಮೊಗ್ಗುಗಳು ಬಿಟ್ಟು, ಹೂವರಳಿ, ಬಾದಾಮಿ ಹಣ್ಣುಗಳನ್ನು
ಫಲಿಸಿತ್ತು. 9ಮೋಶೆ ಆ ಕೋಲುಗಳನ್ನೆಲ್ಲಾ ಸರ್ವೇಶ್ವರನ ಸನ್ನಿಧಿಯಿಂದ ಇಸ್ರಯೇಲರೆಲ್ಲರ ಬಳಿಗೆ ತಂದು
ತೋರಿಸಿದನು. ಅವರು ತಮ್ಮ ತಮ್ಮ ಕೋಲುಗಳನ್ನು ಪರೀಕ್ಷಿಸಿ ತೆಗೆದುಕೊಂಡರು.

10 ಅನಂತರ ಸರ್ವೇಶ್ವರ ಮೋಶೆಗೆ: “ಆರೋನನ ಕೋಲನ್ನು ಮರಳಿ ಮಂಜೂಷದ ಮುಂದೆ
ಇಡಬೇಕು. ದಂಗೆಯೇಳುವವರಿಗೆ ದೃಷ್ಟಾಂತವಾಗಿ ಅದು ಅಲ್ಲೇ ಇರಲಿ. ಇನ್ನು ಮುಂದೆ ಈ ಜನರು ನನಗೆ
ವಿರುದ್ಧ ಗೊಣಗಿ ನಾಶವಾಗಬಾರದು. ಅದಕ್ಕಾಗಿ ನೀನು ಹೀಗೆ ಮಾಡು,” ಎಂದು ಆಜ್ಞಾಪಿಸಿದರು.
11ಸರ್ವೇಶ್ವರನ ಅಪ್ಪಣೆಯ ಪ್ರಕಾರವೇ ಮೋಶೆ ಮಾಡಿದನು.

12 ಇಸ್ರಯೇಲರು ಮೋಶೆಯ ಬಳಿಗೆ ಬಂದು, “ಇಗೋ ನಾವು ನಾಶವಾಗಲಿದ್ದೇವೆ,
ನಶಿಸಿಹೋಗುತ್ತೇವೆ, ನಿಶ್ಶೇಷವಾಗಿ ನಿರ್ಮೂಲವಾಗುವ ಹಾಗೆ ಕಾಣುತ್ತದೆ. 13ಸರ್ವೇಶ್ವರನ ಗುಡಾರದ
ಸಮೀಪಕ್ಕೆ ಬರುವವರೆಲ್ಲರು ಸಾಯಲೇ ಬೇಕಾದರೆ ಇನ್ನು ನಾವೆಲ್ಲರು ಸತ್ತ ಹಾಗೆ ತಾನೆ?” ಎಂದರು.

### ಯಾಜಕರ ಮತ್ತು ಲೇವಿಯರ ಕರ್ತವ್ಯ

**18** ಸರ್ವೇಶ್ವರಸ್ವಾಮಿ ಆರೋನನಿಗೆ ಹೀಗೆಂದರು: “ದೇವದರ್ಶನದ ಗುಡಾರದ ವಿಷಯದಲ್ಲಿ ಏನಾದರು
ಅಕ್ರಮ ನಡೆದರೆ ನೀನು, ನಿನ್ನ ಸಂತತಿಯವರು ಮತ್ತು ನಿನ್ನ ಕುಲದವರೆಲ್ಲರೂ ಆ ದೋಷದ ಫಲವನ್ನು
ಅನುಭವಿಸಬೇಕು. ಯಾಜಕಸೇವೆಯ ವಿಷಯದಲ್ಲಿ ಅಕ್ರಮವೇನಾದರೂ ನಡೆದರೆ ನೀನು ಮತ್ತು ನಿನ್ನ
ಸಂತತಿಯವರು ಮಾತ್ರ ಆ ದೋಷದ ಫಲವನ್ನು ಅನುಭವಿಸಬೇಕು. 2ನಿನ್ನ ಕುಲದ ಮೂಲ ಪುರುಷನಾದ
ಲೇವಿಯ ವಂಶದವರನ್ನು ನಿನ್ನ ಜೊತೆಯಲ್ಲಿರಿಸಿಕೊಂಡು, ನಿನ್ನ ಕೈಕೆಳಗೆ ಸೇವೆ ಮಾಡಿಸು. ಆದರೆ
ಮಂಜೂಷವಿರುವ ಗುಡಾರದ ಮುಂದೆ ನೀನು ಮತ್ತು ನಿನ್ನ ಮಕ್ಕಳು ಮಾತ್ರ ಸೇವೆ ಮಾಡಬೇಕು.
3ಲೇವಿಯರು ನಿನ್ನ ಅಪ್ಪಣೆ ಮೇರೆಗೆ ನಡೆದು ಇಡೀ ಗುಡಾರವನ್ನು ಕಾಯಬೇಕು. ಆದರೆ ಪವಿತ್ರಸ್ಥಾನದ
ವಸ್ತುಗಳ ಹತ್ತಿರವಾಗಲಿ, ಬಲಿಪೀಠದ ಹತ್ತಿರವಾಗಲಿ ಅವರು ಬರಕೂಡದು; ಬಂದರೆ ಅವರು ಮಾತ್ರವಲ್ಲ,
ನೀವೂ ಕೂಡ ಸಾಯಬೇಕಾಗ ಬಹುದು. 4ಅವರು ನಿಮ್ಮ ಜೊತೆ ಸೇರಿ ದೇವದರ್ಶನದ ಗುಡಾರವನ್ನು
ನೋಡಿಕೊಳ್ಳಲಿ; ಅದರ ಎಲ್ಲ ಪರಿಚರ್ಯವನ್ನು ಮಾಡಲಿ. ಇತರ ಕುಲದವರ ಜೊತೆ ನಿಮಗೆ ಬೇಡ.
5ದೇವಸ್ಥಾನದ ವ್ಯವಹಾರವನ್ನು ಮತ್ತು ಬಲಿಪೀಠವನ್ನು ನೀವೇ ನೋಡಿಕೊಳ್ಳಬೇಕು. ಆಗ ದೇವರ ಕೋಪ
ಮತ್ತೆ ಇಸ್ರಯೇಲರ ಮೇಲೆ ಬಾರದು. 6ಇಸ್ರಯೇಲರಲ್ಲಿ ನಿನ್ನ ಕುಲದವರಾದ ಲೇವಿಯರನ್ನು ನಾನೇ
ಆರಿಸಿಕೊಂಡಿದ್ದೇನೆ. ಅವರು ಸರ್ವೇಶ್ವರನಿಗೆ ಸಮರ್ಪಿತವಾಗಿ ಕಾಣಿಕೆಯಂತೆ ನಿನ್ನ ವಶದಲ್ಲೇ ಇದ್ದಾರೆ.
ದೇವದರ್ಶನದ ಗುಡಾರದ ಪರಿಚರ್ಯವನ್ನು ಅವರೇ ಮಾಡಲಿ. 7ನೀನು ಮತ್ತು ನಿನ್ನ ಸಂತತಿಯವರು
ಯಾಜಕ ಕರ್ತವ್ಯಗಳನ್ನು ಕೈಗೊಂಡು ಬಲಿಪೀಠದ ಮತ್ತು ಗರ್ಭಗುಡಿಯ ಸೇವೆಯನ್ನು ನಡೆಸಬೇಕು.

ಅವುಗಳ ಪರಿಚರ್ಯವನ್ನು ನೀವೇ ಮಾಡಬೇಕು. ಯಾಜಕ ಪದವಿಯನ್ನು ನಿಮಗೆ ಅನುಗ್ರಹಿಸಿದ್ದೇನೆ. ಇತರರು ಅದಕ್ಕೆ ಕೈ ಹಾಕಬಾರದು. ಹಾಕಿದರೆ ಅಂಥವರಿಗೆ ಮರಣ ಶಿಕ್ಷೆಯಾಗಬೇಕು."

**ಯಾಜಕರ ಪಾಲು**

8 ಸರ್ವೇಶ್ವರ ಆರೋನನಿಗೆ ಹೀಗೆಂದು ಆಜ್ಞಾಪಿಸಿದರು: "ಇಸ್ರಯೇಲರು ನನಗಾಗಿ ಮೀಸಲಾಗಿಟ್ಟು ಸಮರ್ಪಿಸುವ ಪದಾರ್ಥಗಳನ್ನೆಲ್ಲ ಅಂದರೆ, ಪ್ರತಿಷ್ಠಾಪಿತವಾದ ವಸ್ತುಗಳನ್ನೆಲ್ಲಾ ನಿನಗೂ ನಿನ್ನ ಸಂತತಿಯವರಿಗೂ ದಾನ ಮಾಡಿದ್ದೇನೆ. ಅವು ಸದಾಕಾಲ ನಿಮಗೆ ಸಲ್ಲಬೇಕಾದ ಪಾಲು. [9]ಅಗ್ನಿಯಲ್ಲಿ ದಹನಮಾಡದೆ ಉಳಿಸುವ ಮಹಾ ಪರಿಶುದ್ಧ ಪದಾರ್ಥಗಳೆಲ್ಲ ಅಂದರೆ, ಇಸ್ರಯೇಲರು ನನಗೆ ಸಮರ್ಪಿಸುವ ಎಲ್ಲ ಧಾನ್ಯದ್ರವ್ಯ, ನೈವೇದ್ಯ ದ್ರವ್ಯ, ಪಾಪ ಪರಿಹಾರಕಬಲಿ, ಪ್ರಾಯಶ್ಚಿತ್ತ ಬಲಿಕಾಣಿಕೆ, ಇವುಗಳಲ್ಲಿ ದಹನವಾಗದೆ ಉಳಿದ ಭಾಗಗಳು ಮಹಾ ಪರಿಶುದ್ಧವಾದುವುಗಳು. ಅವು ನಿನಗೂ ನಿನ್ನ ಸಂತತಿಯವರಿಗೂ ಸಲ್ಲತಕ್ಕವು. [10]ಅವುಗಳಲ್ಲಿ ಅತಿ ಪವಿತ್ರವಾದುವುಗಳನ್ನು ನೀವೇ ಊಟ ಮಾಡಬೇಕು. ನಿಮ್ಮಲ್ಲಿರುವ ಗಂಡಸರೆಲ್ಲರೂ ಅವುಗಳನ್ನು ತಿನ್ನಬಹುದು. ಅವು ಅತಿ ಪವಿತ್ರ ಆದುವು ಎಂಬುದನ್ನು ತಿಳಿದಿರಬೇಕು.

11 "ಇದಲ್ಲದೆ ಇಸ್ರಯೇಲರು ನನಗೆ ಮೀಸಲಾಗಿಟ್ಟು ಅರ್ಪಿಸುವ ದ್ರವ್ಯಗಳೂ, ನೈವೇದ್ಯ ಆಗಿ ಆರತಿಯೆತ್ತುವ ದ್ರವ್ಯಗಳೂ ನಿಮಗೆ ಸಲ್ಲಬೇಕು. ಇವು ನಿನಗೂ ನಿನ್ನ ಸಂತತಿಯವರಾದ ಸ್ತ್ರೀಪುರುಷರೆಲ್ಲರಿಗೂ ಶಾಶ್ವತ ನಿಯಮ ಆಗಿ ಸಲ್ಲಬೇಕೆಂದು ಅನುಗ್ರಹಿಸಿದ್ದೇನೆ. ಇವುಗಳನ್ನು ನಿಮ್ಮ ಮನೆಗಳಲ್ಲಿ ಶುದ್ಧರಾದವರು ಎಲ್ಲರೂ ಊಟಮಾಡಬಹುದು.

12 "ಇಸ್ರಯೇಲರು ನನಗೆ ಸಮರ್ಪಿಸುವ ಪ್ರಥಮ ಫಲಗಳು, ಅಂದರೆ ಎಣ್ಣೆ, ದ್ರಾಕ್ಷಾರಸ, ಧಾನ್ಯ, ಇವುಗಳಲ್ಲಿ ಶ್ರೇಷ್ಠವಾದುದು ನಿನಗೇ ಸಿಗಬೇಕೆಂದು ವಿಧಿಸಿದ್ದೇನೆ. [13]ಆ ಜನರು ತಮ್ಮ ನಾಡಿನ ಎಲ್ಲ ಬೆಳೆಗಳಲ್ಲಿ ನನಗೆ ತರುವ ಪ್ರಥಮ ಫಲಗಳು ನಿನಗೇ ಸಲ್ಲಬೇಕು. ನಿಮ್ಮ ಮನೆಗಳಲ್ಲಿ ಶುದ್ಧರಾಗಿರುವ ಎಲ್ಲರೂ ಅವುಗಳನ್ನು ಊಟಮಾಡಬಹುದು. [14]ಅವರು ನನಗೆ ಹರಕೆ ಮಾಡಿ ಅರ್ಪಿಸಿಕೊಡುವ ಪ್ರತಿಯೊಂದು ನಿನಗೆ ಧಕ್ಕಬೇಕು.

15 "ಮನುಷ್ಯರಲ್ಲೇ ಆಗಲಿ, ಪಶುಗಳಲ್ಲೇ ಆಗಲಿ, ಅವರು ನನಗೆ ಸಮರ್ಪಿಸುವ ಸಕಲ ಪ್ರಾಣಿಗಳಲ್ಲಿ ಚೊಚ್ಚಲಿನದು ನಿನಗೆ ಸಲ್ಲಬೇಕು. ಆದರೆ ಮನುಷ್ಯರ ಚೊಚ್ಚಲು ಮಕ್ಕಳಿಗೂ ಅಪವಿತ್ರವಾದ ಪಶುಗಳ ಮರಿಗಳಿಗೂ ಬದಲಾಗಿ ನೀನು ಈಡನ್ನು ತೆಗೆದುಕೊಂಡು ಅವುಗಳನ್ನು ಬಿಟ್ಟುಬಿಡಬೇಕು. [16]ಹೀಗೆ ಬಿಟ್ಟುಬಿಡಬೇಕಾದ ಶಿಶುಗಳು ಒಂದು ತಿಂಗಳಿನ ಪ್ರಾಯಕ್ಕೆ ಬಂದಾಗಲೆ ಗೊತ್ತಾದ ಈಡನ್ನು ಅಂದರೆ, ದೇವರ ಸೇವೆಗೆ ನಿಗದಿಯಾದ ಇಪ್ಪತ್ತು 'ಗೇರಾ' ತೂಕದ ನಾಣ್ಯದ ಮೇರೆಗೆ ಐದು ಶೆಕೆಲ್ ನಾಣ್ಯವನ್ನು ತೆಗೆದುಕೊಂಡು ಅವುಗಳನ್ನು ಬಿಟ್ಟುಬಿಡು. [17]ಹಸುವಿನ ಮತ್ತು ಆಡುಕುರಿಗಳ ಚೊಚ್ಚಲು ಮರಿಗಳನ್ನು ಬಿಡಕೂಡದು. ಅವು ದೇವರ ಸೊತ್ತು. ಆದ್ದರಿಂದ ಅವುಗಳ ರಕ್ತವನ್ನು ಬಲಿಪೀಠದ ಮೇಲೆ ಚಿಮುಕಿಸು; ಅವುಗಳ ಕೊಬ್ಬನ್ನು ಬಲಿಕಾಣಿಕೆಯಾಗಿ ದಹಿಸು. [18]ಅವುಗಳ ಮಾಂಸ ಹಾಗೂ ನೈವೇದ್ಯವಾಗಿ ಆರತಿಯೆತ್ತುವ ಎದೆ ಮತ್ತು ಬಲತೊಡೆ ನಿನಗೆ ಸಲ್ಲಬೇಕು.

19 "ಇಸ್ರಯೇಲರು ನನಗೆ ಮೀಸಲಾಗಿಟ್ಟು ಸಮರ್ಪಿಸುವ ಪವಿತ್ರ ವಸ್ತುಗಳೆಲ್ಲಾ ನಿನಗೂ ನಿನ್ನ ಸಂತತಿಯವರಾದ ಸ್ತ್ರೀಪುರುಷರಿಗೂ ಸಲ್ಲಬೇಕು. ಸದಾಕಾಲಕ್ಕೂ ಇದನ್ನು ನಾನು ನಿನಗೆ ಅನುಗ್ರಹಿಸಿದ್ದೇನೆ. ಇದು ನನ್ನ ಸನ್ನಿಧಿಯಲ್ಲಿ ನಿನ್ನೊಡನೆ ಮತ್ತು ನಿನ್ನ ಸಂತತಿಯೊಡನೆ ಮಾಡಿಕೊಂಡ ಶಶ್ವತವಾದ ಉಪ್ಪಿನ ಒಡಂಬಡಿಕೆ."

20 ಇದಲ್ಲದೆ ಸರ್ವೇಶ್ವರ ಆರೋನನಿಗೆ ಹೀಗೆಂದರು: "ಇಸ್ರಯೇಲರ ನಾಡಿನಲ್ಲಿ ನಿನ್ನ ಸ್ವಂತ ಸೊತ್ತಾಗಿ ಯಾವ ಆಸ್ತಿಯೂ ಇರುವುದಿಲ್ಲ; ಅವರೊಂದಿಗೆ ನಿನಗೆ ಯಾವ ಪಾಲೂ ಇರುವುದಿಲ್ಲ. ಇಸ್ರಯೇಲರ ನಡುವೆ ನಾನೇ ನಿನಗೆ ಆಸ್ತಿಪಾಸ್ತಿ, ಪಾಲುಪಸುಗೆ."

### ಲೇವಿಯರ ಪಾಲು

21 “ಇಗೋ, ಇಸ್ರಯೇಲರಿಂದ ಸಕಲ ಪದಾರ್ಥಗಳ ಹತ್ತನೆಯ ಪಾಲನ್ನು ಗೊತ್ತು ಮಾಡಿ
ಲೇವಿಯರಿಗೆ ಕೊಟ್ಟಿದ್ದೇನೆ. ದೇವದರ್ಶನದ ಗುಡಾರದ ಪರಿಚರ್ಯವನ್ನು ಮಾಡುವ ಅವರಿಗೆ ಇದು
ಸಲ್ಲತಕ್ಕ ಸಂಭಾವನೆ. [22]ಇನ್ನು ಮುಂದೆ ಇಸ್ರಯೇಲರು ಪಾಪಮಾಡಿ ಸಾವಿಗೆ ತುತ್ತಾಗದಂತೆ ದೇವದರ್ಶನದ
ಗುಡಾರದ ಹತ್ತಿರಕ್ಕೆ ಬರಕೂಡದು. [23]ಆ ಗುಡಾರದ ಪರಿಚರ್ಯವನ್ನು ಮಾಡಬೇಕಾದವರು ಲೇವಿಯರೇ.
ಅದರ ಸಂಬಂಧವಾಗಿ ಅವರು ಮಾಡುವ ಪಾಪದ ಫಲವನ್ನು ಅವರೇ ಅನುಭವಿಸಲಿ. ಇದು ನಿಮಗೂ
ನಿಮ್ಮ ಸಂತತಿಯವರಿಗೂ ಒಂದು ಶಾಶ್ವತವಾದ ನಿಯಮವಾಗಿರಲಿ. ಲೇವಿಯರಿಗೆ ಇಸ್ರಯೇಲರಲ್ಲಿ ಶಾಶ್ವತ
ಸೊತ್ತು ಇರುವುದಿಲ್ಲ. [24]ಇಸ್ರಯೇಲರು ನನಗೆ ಮೀಸಲಾಗಿಟ್ಟು ಸಮರ್ಪಿಸುವ ಹತ್ತನೆಯ ಪಾಲನ್ನು ಅವರಿಗೆ
ಸೊತ್ತಾಗಿ ಕೊಟ್ಟಿದ್ದೇನೆ. ಆದುದರಿಂದಲೇ ಇತರ ಇಸ್ರಯೇಲರಿಗೆ ಪಾಲು ದೊರಕುವಂತೆ ಅವರಿಗೆ ಪಾಲು
ದೊರಕುವುದಿಲ್ಲವೆಂದು ಒತ್ತಿ ಹೇಳಿದ್ದೇನೆ.”

### ಲೇವಿಯರಿಗೆ ಹತ್ತರಲ್ಲೊಂದು ಭಾಗ

25 ಸರ್ವೇಶ್ವರ ಮೋಶೆಗೆ ಹೀಗೆಂದರು: [26]“ಲೇವಿಯರಿಗೆ ನೀನು ಇಂತೆಂದು ಆಜ್ಞಾಪಿಸು – ನಿಮ್ಮ
ಸ್ವಂತಕ್ಕಾಗಿ ನಾನು ಗೊತ್ತು ಮಾಡಿರುವ ಹತ್ತನೆಯ ಒಂದು ಪಾಲನ್ನು ಇಸ್ರಯೇಲರಿಂದ ನೀವು
ತೆಗೆದುಕೊಳ್ಳುವಾಗ ಅದರಲ್ಲಿ ಹತ್ತನೆಯ ಒಂದು ಪಾಲನ್ನು ಪ್ರತ್ಯೇಕಿಸಿ ಸರ್ವೇಶ್ವರನಿಗೆ ಸಮರ್ಪಿಸಬೇಕು.
[27]ಹೀಗೆ ನೀವು ಸಮರ್ಪಿಸಿದ ಹತ್ತನೆಯ ಪಾಲು, ಕಣದಲ್ಲಿನ ದವಸದಿಂದ ಹಾಗೂ ದ್ರಾಕ್ಷಿತೋಟ್ಟಿಯ
ರಸದಿಂದ ಬರಬೇಕಾದ ದಶಾಂಶವೆಂದು ಪರಿಗಣಿತವಾಗುವುದು. [28]ಇಸ್ರಯೇಲರಿಂದ ನಿಮಗೆ ಸಲ್ಲುವ
ಹತ್ತನೆಯ ಒಂದು ಪಾಲಿನಲ್ಲಿ ನೀವು ಸರ್ವೇಶ್ವರನಿಗೆ ಹತ್ತನೆಯ ಒಂದು ಭಾಗವನ್ನು ಪ್ರತ್ಯೇಕಿಸಿ ಯಾಜಕ
ಆರೋನನಿಗೆ ಒಪ್ಪಿಸಬೇಕು. [29]ನಿಮಗೆ ಕೊಡಲಾಗುವ ಸಕಲ ಪದಾರ್ಥಗಳಲ್ಲಿ ಉತ್ತಮ ಭಾಗವನ್ನೇ, ಅಂದರೆ
ದೇವರ ವಸ್ತುವಾಗುವುದಕ್ಕೆ ಯೋಗ್ಯವಾದ ಭಾಗವನ್ನೇ ಸರ್ವೇಶ್ವರನಿಗೆ ಮೀಸಲಾಗಿಟ್ಟು ಸಮರ್ಪಿಸಬೇಕು.

30 “ಲೇವಿಯರಿಗೆ ಮತ್ತೆ ಹೀಗೆಂದು ತಿಳಿಸು: ನಿಮಗೆ ದೊರಕಿದ್ದರಲ್ಲಿ ಉತ್ತಮವಾದುದನ್ನೇ
ಪ್ರತ್ಯೇಕಿಸಿ ಸಮರ್ಪಿಸಿದ ಮೇಲೆ ಮಿಕ್ಕದ್ದನ್ನು ಕಣದಲ್ಲಿನ ದವಸ ಹಾಗೂ ದ್ರಾಕ್ಷಿತೋಟ್ಟಿಯ ರಸವೆಂದು ಭಾವಿಸಿ
ನೀವು ಉಪಯೋಗಿಸಿಕೊಳ್ಳಬಹುದು. [31]ನೀವು ಮತ್ತು ನಿಮ್ಮ ಮನೆಯವರು ಅದನ್ನು ಯಾವ
ಸ್ಥಳದಲ್ಲಿಯಾದರೂ ಊಟಮಾಡಬಹುದು. ದೇವದರ್ಶನದ ಗುಡಾರದ ಪರಿಚರ್ಯವನ್ನು ಮಾಡಿದ್ದಕ್ಕೆ
ಅದು ನಿಮಗೆ ಪ್ರತಿಫಲ. [32]ಅದರಲ್ಲಿ ಉತ್ತಮಭಾಗವನ್ನು ಸರ್ವೇಶ್ವರನಿಗೆ ಮೀಸಲಾಗಿಟ್ಟ ನಂತರ ಮಿಕ್ಕದ್ದನ್ನು
ಊಟಮಾಡುವುದರಿಂದ ಯಾವ ದೋಷಕ್ಕೂ ನೀವು ಗುರಿಯಾಗುವುದಿಲ್ಲ. ಇಸ್ರಯೇಲರು ಸಮರ್ಪಿಸುವ
ಪವಿತ್ರ ವಸ್ತುಗಳನ್ನು ಅಪವಿತ್ರಗೊಳಿಸಬೇಡಿ; ಇಲ್ಲವಾದರೆ ಸಾಯುವಿರಿ.”

### ಕೆಂದಾಕಳಿನ ಬೂದಿ

**19** ಸರ್ವೇಶ್ವರಸ್ವಾಮಿ ಮೋಶೆ ಮತ್ತು ಆರೋನರಿಗೆ ಹೀಗೆಂದರು: [2]“ಸರ್ವೇಶ್ವರನಾದ ನಾನು ಒಂದು
ವಿಧಿಯನ್ನು ನೇಮಿಸಿದ್ದೇನೆ. ಅದೇನೆಂದರೆ – ಎಂದೂ ನೊಗವನ್ನು ಹೊರದ ಹಾಗು ಯಾವ
ಕುಂದುಕೊರತೆಯೂ ಇಲ್ಲದ ಒಂದು ಕೆಂದಾಕಳನ್ನು ನಿನಗೆ ತಂದು ಕೊಡಬೇಕೆಂದು ಇಸ್ರಯೇಲರಿಗೆ ತಿಳಿಸು.
[3]ಅದನ್ನು ನೀವು ಯಾಜಕ ಎಲ್ಲಾಜಾರನ ಕೈಗೆ ಒಪ್ಪಿಸಬೇಕು. ಆತ ಅದನ್ನು ಪಾಳೆಯದ ಹೊರಗೆ
ಹೊಡೆಸಿಕೊಂಡು ಹೋಗಿ ತನಗೆದುರಾಗಿಯೇ ಒಬ್ಬನ ಕೈಯಿಂದ ವಧೆಮಾಡಿಸಬೇಕು. [4]ತರುವಾಯ
ಎಲ್ಲಾಜಾರನು ಅದರ ರಕ್ತದಲ್ಲಿ ಸ್ವಲ್ಪವನ್ನು ತನ್ನ ಬೆರಳಿನಿಂದ ದೇವದರ್ಶನದ ಗುಡಾರದ ಮುಂಭಾಗದತ್ತ
ಏಳು ಸಾರಿ ಚಿಮುಕಿಸಬೇಕು. [5]ಆ ಆಕಳನ್ನು ಚರ್ಮ, ಮಾಂಸ, ರಕ್ತ, ಕಲ್ಮಷಗಳ ಸಹಿತವಾಗಿ ತನ್ನ
ಎದುರಿನಲ್ಲೇ ದಹಿಸಿಬಿಡಬೇಕು. [6]ಯಾಜಕನು ದೇವದಾರು ಮರದ ಕಟ್ಟಿಗೆಯನ್ನು, ಹಿಸ್ಸೋಪ್ ಗಿಡದ
ಬರಲನ್ನು ಮತ್ತು ರಕ್ತವರ್ಣದ ದಾರವನ್ನು ತೆಗೆದುಕೊಂಡು ಆ ಆಕಳನ್ನು ದಹಿಸುವ ಬೆಂಕಿಯಲ್ಲಿ
ಹಾಕಬೇಕು. [7]ಬಳಿಕ ಯಾಜಕನು ತನ್ನ ಬಟ್ಟೆಗಳನ್ನು ಒಗೆದುಕೊಂಡು ಸ್ನಾನಮಾಡಿ ಪಾಳೆಯದೊಳಗೆ

ಬರಬಹುದು. ಆದರೆ ಆ ದಿನದ ಸಂಜೆಯವರೆಗೂ ಅವನು ಮಡಿಗೆಟ್ಟವನಾಗಿರಬೇಕು. [8]ಆ ಆಕಳನ್ನು ಸುಟ್ಟವನು ಕೂಡ ತನ್ನ ಬಟ್ಟೆಗಳನ್ನು ಒಗೆದುಕೊಂಡು, ಸ್ನಾನಮಾಡಿ ಆ ದಿನದ ಸಂಜೆಯ ತನಕ ಮಡಿಗೆಟ್ಟವನಾಗಿರಬೇಕು.

9 "ಶುದ್ಧನಾದವನೊಬ್ಬನು ಆ ಆಕಳಿನ ಬೂದಿಯನ್ನು ಕೂಡಿಸಿ ಪಾಳೆಯದ ಹೊರಗೆ ಶುದ್ಧವಾದ ಒಂದು ಸ್ಥಳದಲ್ಲಿ ಇಡಬೇಕು. ಅದನ್ನು ಇಸ್ರಯೇಲ್ ಸಮಾಜದವರ ಉಪಯೋಗಕ್ಕಾಗಿ ನೀವು ಜೋಪಾನವಾಗಿಡಬೇಕು. ಅದು ದೋಷ ಪರಿಹಾರಕವಾದುದು. ಅದರಿಂದ ಶುದ್ಧೀಕರಣ ನೀರನ್ನು ಸಿದ್ಧಪಡಿಸುವುದಕ್ಕಾಗಿ ಅಲ್ಲೇ ಇಟ್ಟಿರಬೇಕು. [10]ಆ ಬೂದಿಯನ್ನು ಕೂಡಿಸಿದವನು ತನ್ನ ಬಟ್ಟೆಗಳನ್ನು ಒಗೆದುಕೊಂಡು, ಸಂಜೆಯವರೆಗೆ ಮಡಿಗೆಟ್ಟವನಾಗಿರಬೇಕು. ಇದು ಇಸ್ರಯೇಲರಿಗೂ ಅವರ ಮಧ್ಯೆ ವಾಸಿಸುವ ಇತರರಿಗೂ ಅನ್ವಯಿಸುವ ಶಾಶ್ವತ ನಿಯಮ.

### ಶವ ಸೋಂಕಿದವ ಮಡಿಗೆಟ್ಟವ

11 "ಮನುಷ್ಯನ ಶವವನ್ನು ಸೋಂಕಿದವನು ಏಳುದಿನಗಳವರೆಗೆ ಮಡಿಗೆಟ್ಟವನಾಗಿರಬೇಕು.
[12]ಮೂರನೇ ದಿನ ಆ ಬೂದಿಯಿಂದ ದೋಷಪರಿಹಾರ ಮಾಡಿಕೊಂಡು ಏಳನೆಯ ದಿನ ಶುದ್ಧನಾಗುವನು.
ಮೂರನೆಯ ದಿನ ಅವನು ದೋಷಪರಿಹಾರ ಮಾಡಿಕೊಳ್ಳದೆ ಹೋದರೆ ಏಳನೆ ದಿನದಲ್ಲೂ ಶುದ್ಧನಾಗನು.
[13]ಮನುಷ್ಯನ ಶವ ಸೋಂಕಿದವನು ದೋಷಪರಿಹಾರ ಮಾಡಿಕೊಳ್ಳದೆ ಹೋದರೆ ಅವನು ಸರ್ವೇಶ್ವರನ ಗುಡಾರವನ್ನು ಅಪವಿತ್ರಪಡಿಸುತ್ತಾನೆ. ಅಂಥವನನ್ನು ಇಸ್ರಯೇಲರಿಂದ ಬಹಿಷ್ಕರಿಸಬೇಕು. ಶುದ್ಧೀಕರಣ ನೀರನ್ನು ಅವನ ಮೇಲೆ ಚಿಮುಕಿಸದೆ ಇರುವ ಕಾರಣ ಅವನು ಮಡಿಗೆಟ್ಟವನು; ಅವನಿಗುಂಟಾದ ಮೈಲಿಗೆ ಅವನಲ್ಲಿ ಉಳಿದಿರುತ್ತದೆ.

### ಶುದ್ಧೀಕರಣ ಜಲ

14 "ಮೈಲಿಗೆ ನಿಯಮವಿದು: ಯಾರಾದರೂ ಡೇರೆಯೊಳಗೆ ಸತ್ತ ಸಂದರ್ಭದಲ್ಲಿ ಆ ಡೇರೆಯ ಒಳಗಿರುವವರೆಲ್ಲರು ಹಾಗೂ ಅದರೊಳಗೆ ಬರುವವರು ಕೂಡ ಮೈಲಿಗೆಯಾಗಿರುತ್ತಾರೆ. [15]ಮುಚ್ಚಳಹಾಕಿ ಕಟ್ಟದಿರುವ ಎಲ್ಲ ಪಾತ್ರೆಗಳು ಕೂಡ ಮೈಲಿಗೆಯಾಗಿರುತ್ತವೆ. [16]ಹೊರಗೆ ಬಯಲಿನಲ್ಲಿರುವ ಯಾವನಿಗಾದರೂ ಶಸ್ತ್ರಹತನ ಶವವಾಗಲಿ, ಬೇರೆ ಯಾವ ಮನುಷ್ಯ ಶವವಾಗಲಿ, ಮನುಷ್ಯನ ಎಲುಬಾಗಲಿ, ಸಮಾಧಿಯಾಗಲಿ, ಸೋಂಕಿದರೆ ಅವನು ಏಳು ದಿನಗಳವರೆಗೆ ಮಡಿಗೆಟ್ಟವನಾಗಿರಬೇಕು.

17 "ಅಂಥ ಮಡಿಗೆಟ್ಟವನನ್ನು ಪವಿತ್ರಪಡಿಸಬೇಕಾದರೆ ಆ ದೋಷಪರಿಹಾರಕ ಬೂದಿಯಲ್ಲಿ ಸ್ವಲ್ಪವನ್ನು ಪಾತ್ರೆಯಲ್ಲಿಟ್ಟು ಅದರ ಮೇಲೆ ಹರಿಯುವ ನೀರನ್ನು ಹೊಯ್ಯಬೇಕು. [18]ಬಳಿಕ ಮೈಲಿಗೆಯಾಗದವನೊಬ್ಬನು ಆ ನೀರನ್ನು ಹಿಸ್ಸೋಪ್ ಗಿಡದ ಗೊಂಚಲಿನಿಂದ ಸಾವಾದ ಆ ಡೇರೆಯ ಮೇಲೂ ಅದರಲ್ಲಿರುವ ಸಲಕರಣೆಗಳ ಮೇಲೂ ವ್ಯಕ್ತಿಗಳ ಮೇಲೂ ಚಿಮುಕಿಸಬೇಕು. ಹಾಗೆಯೇ ಎಲುಬಾಗಲಿ, ಹತನಾದವನ ಅಥವಾ ಬೇರೆ ಮನುಷ್ಯನ ಶವವಾಗಲಿ, ಸಮಾಧಿಯಾಗಲಿ ಯಾರಿಗೆ ಸೋಂಕಿತೋ ಅವರ ಮೇಲೆಯೂ ಚಿಮುಕಿಸಬೇಕು. [19]ಮೂರನೆಯ ದಿನದಲ್ಲೂ ಏಳನೆಯ ದಿನದಲ್ಲೂ ಮಡಿಗೆಟ್ಟವನ ಮೇಲೆ ಹಾಗೆಯೇ ಚಿಮುಕಿಸಬೇಕು. ಮಡಿಗೆಟ್ಟವನು ಏಳನೆಯ ದಿನ ದೋಷಪರಿಹಾರ ಹೊಂದುವನು. ತನ್ನ ಬಟ್ಟೆಗಳನ್ನು ಒಗೆದುಕೊಂಡು ಸ್ನಾನ ಮಾಡಿಕೊಂಡು ಸಂಜೆ ಶುದ್ಧನಾಗುವನು.
[20]ಮಡಿಗೆಟ್ಟು ದೋಷಪರಿಹಾರ ಮಾಡಿಕೊಳ್ಳದವನು ಸರ್ವೇಶ್ವರನ ದೇವಸ್ಥಾನವನ್ನು ಅಪವಿತ್ರಗೊಳಿಸುತ್ತಾನೆ. ಆದಕಾರಣ ಅಂಥವನಿಗೆ ಸಭೆಯಿಂದ ಬಹಿಷ್ಕಾರ ಹಾಕಬೇಕು. ಶುದ್ಧೀಕರಣ ಜಲವನ್ನು ತನ್ನ ಮೇಲೆ ಚಿಮುಕಿಸಿಕೊಳ್ಳದೆ ಹೋದುದರಿಂದ ಅವನು ಮಡಿಗೆಟ್ಟವನಾಗಿಯೇ ಇರುತ್ತಾನೆ.

21 "ಇದು ಇಸ್ರಯೇಲರಿಗೆ ಶಾಶ್ವತ ನಿಯಮ ಆಗಿರುತ್ತದೆ. ಮೈಲಿಗೆ ನೀಗಿಸುವ ಆ ನೀರನ್ನು ಚಿಮುಕಿಸಿದವನು ತನ್ನ ಬಟ್ಟೆಗಳನ್ನು ಒಗೆದುಕೊಳ್ಳಬೇಕು. ಆ ನೀರನ್ನು ಮುಟ್ಟಿದವನು ಆ ದಿನದ ಸಂಜೆಯವರೆಗೂ ಮಡಿಗೆಟ್ಟವನಾಗಿರುವನು. [22]ಮಡಿಗೆಟ್ಟವನಿಗೆ ಸೋಂಕಿದ ಬಟ್ಟೆಬರೆ ಯಾವುದೇ ಆಗಲಿ

ಮೈಲಿಗೆಯಾದುದೆಂದು ನೀವು ತಿಳಿದುಕೊಳ್ಳಬೇಕು. ಅದು ಯಾರಿಗೆ ಸೋಂಕಿತೋ ಅವನು ಕೂಡ ಆ ದಿನದ ಸಂಜೆಯವರೆಗೆ ಮಡಿಗೆಟ್ಟವನು."

### ಕಾದೇಶಿನಲ್ಲಿ ನಡೆದ ಘಟನೆಗಳು
(ವಿಮೋ. 17.1–7)
### ಬಂಡೆಯಿಂದ ಬಂದ ನೀರು

**20** ಇಸ್ರಯೇಲ್ ಸಮಾಜದವರು ಮೊದಲನೆಯ ತಿಂಗಳಲ್ಲಿ 'ಚಿನ್' ಎಂಬ ಮರುಭೂಮಿಗೆ ಬಂದು ಕಾದೇಶಿನಲ್ಲಿ ಇಳಿದುಕೊಂಡರು. ಅಲ್ಲಿ ಮಿರ್ಯಾಮಳು ಮೃತಳಾದಳು; ಆಕೆಯನ್ನು ಅಲ್ಲೇ ಸಮಾಧಿ ಮಾಡಿದರು.

2 ಜನರಿಗೆ ನೀರು ಇಲ್ಲದೆ ಹೋಯಿತು. ಅವರು ಮೋಶೆ ಮತ್ತು ಆರೋನರ ವಿರುದ್ಧ ಸಭೆ ಸೇರಿ
ಮೋಶೆಯ ಸಂಗಡ ವಾದಿಸತೊಡಗಿದರು: [3]"ಸರ್ವೇಶ್ವರನ ಸನ್ನಿಧಿಯಲ್ಲಿ ನಮ್ಮ ಬಂಧು ಬಳಗದವರು
ಸತ್ತಂತೆ ನಾವೂ ಸತ್ತು ಹೋಗಿದ್ದರೆ ಎಷ್ಟೋ ಚೆನ್ನಾಗಿರುತ್ತಿತ್ತು! ನೀವು ಸರ್ವೇಶ್ವರನ ಪ್ರಜೆಯಾದ [4]ನಮ್ಮನ್ನು
ಈ ಮರಳುಗಾಡಿಗೆ ಕರೆದುಕೊಂಡು ಬಂದುದೇಕೆ? ನಾವೂ ನಮ್ಮ ಜಾನುವಾರಗಳೂ ಇಲ್ಲಿ
ಸಾಯಬೇಕೆಂದೋ? [5]ಈಜಿಪ್ಟ್ ದೇಶದಿಂದ ನಮ್ಮನ್ನು ಬರಮಾಡಿದ್ದು ಈ ಕೀಳು ಸ್ಥಳಕ್ಕೆ ಸೇರಿಸಲಿಕ್ಕೋ?
ಈ ನೆಲದಲ್ಲಿ ದವಸಧಾನ್ಯ ಬೆಳೆಯುವಂತಿಲ್ಲ; ಅಂಜೂರವಿಲ್ಲ, ದ್ರಾಕ್ಷಿಯಿಲ್ಲ, ದಾಳಿಂಬೆಯಿಲ್ಲ, ಕುಡಿಯುವುದಕ್ಕೆ
ನೀರು ಕೂಡ ಇಲ್ಲ," ಎಂದು ದೂರಿದರು.

6 ಮೋಶೆ ಮತ್ತು ಆರೋನರು ಆ ಜನಸಂದಣಿಯನ್ನು ಬಿಟ್ಟು ದೇವದರ್ಶನದ ಗುಡಾರದ ಬಾಗಿಲ
ಬಳಿಗೆ ಬಂದು ಸಾಷ್ಟಾಂಗವೆರಗಿದರು. ಆಗ ಸರ್ವೇಶ್ವರನ ತೇಜಸ್ಸು ಅವರಿಗೆ ಕಾಣಿಸಿತು. [7]ಆಗ ಸರ್ವೇಶ್ವರ
ಮೋಶೆಗೆ, "ನೀನು ಆ ಕೋಲನ್ನು ಕೈಗೆ ತೆಗೆದುಕೋ. ನೀನು ಮತ್ತು ನಿನ್ನ ಸಹೋದರ ಆರೋನನು
ಜನಸಮೂಹದವರನ್ನು ಸಭೆ ಸೇರಿಸಿರಿ. ಅವರೆಲ್ಲರ ಎದುರಿನಲ್ಲೇ ನೀರುಕೊಡಬೇಕೆಂದು ಆ ಕಡಿದಾದ
ಬಂಡೆಗೆ ಆಜ್ಞೆಮಾಡು. [8]ಅದರಿಂದ ನೀರು ಹೊರಟು ಬರುವುದು. ಅದನ್ನು ಜನಸಮೂಹದವರಿಗೂ ಅವರ
ಜಾನುವಾರಗಳಿಗೂ ಕುಡಿಯಲು ಕೊಡಬಹುದು," ಎಂದರು.

9 ಸರ್ವೇಶ್ವರ ಆಜ್ಞಾಪಿಸಿದಂತೆಯೇ ಮೋಶೆ ಆ ಕೋಲನ್ನು ಅವರ ಸನ್ನಿಧಿಯಿಂದ ತೆಗೆದು
ಕೊಂಡನು. [10]ಆರೋನನ ಜೊತೆಯಲ್ಲಿ ಜನ ಸಮೂಹದವರ ಬಳಿಗೆ ಹೋಗಿ ಕಡಿದಾದ ಆ ಬಂಡೆಗೆದುರಾಗಿ
ಅವರನ್ನು ಸಭೆಸೇರಿಸಿದನು. ಅವರನ್ನು ಸಂಬೋಧಿಸುತ್ತಾ, "ದಂಗೆಕಾರರೇ ಕೇಳಿ: ಈ ಬಂಡೆಯಿಂದ ನಿಮಗೆ
ನಾವು ನೀರನ್ನು ಬರಮಾಡಬೇಕೋ," ಎಂದು ಹೇಳಿ [11]ಕೈಯೆತ್ತಿ ತನ್ನ ಕೈಯಲ್ಲಿದ್ದ ಕೋಲಿನಿಂದ ಆ
ಬಂಡೆಯನ್ನು ಎರಡುಸಾರಿ ಹೊಡೆದನು. ನೀರು ಪ್ರವಾಹವಾಗಿ ಹೊರಟಿತು. ಜನಸಮೂಹದವರೂ ಅವರ
ಜಾನುವಾರಗಳೂ ಕುಡಿದರು.

12 ಬಳಿಕ ಸರ್ವೇಶ್ವರ ಮೋಶೆ ಮತ್ತು ಆರೋನರಿಗೆ, "ನೀವು ನನ್ನನ್ನು ನಂಬದೇ ಹೋದಿರಿ.
ಇಸ್ರಯೇಲರ ಮುಂದೆ ನನ್ನ ಗೌರವವನ್ನು ಕಾಪಾಡದೆಹೋದಿರಿ. ಆದುದರಿಂದ ಈ ಸಮಾಜದವರನ್ನು
ನಾನು ವಾಗ್ದಾನಮಾಡಿದ ನಾಡಿಗೆ ನೀವು ಕರೆದುಕೊಂಡು ಹೋಗಕೂಡದು," ಎಂದು ಹೇಳಿದರು.

13 ಇಸ್ರಯೇಲರು ಅಲ್ಲಿ ಸರ್ವೇಶ್ವರನ ಸಂಗಡ ವಾದಮಾಡಿದ್ದರಿಂದ ಆ ನೀರಿನ ಪ್ರವಾಹಕ್ಕೆ
'ಮೆರಿಬಾ' ಎಂದು ಹೆಸರಾಯಿತು. ಅಲ್ಲಿ ಸರ್ವೇಶ್ವರ ತಮ್ಮ ಪರಮ ಪಾವನತೆಯನ್ನು ವ್ಯಕ್ತಪಡಿಸಿದರು.

### ಎದೋಮ್ಯರ ನಾಡನ್ನು ದಾಟಲು ತಡೆ

14 ಮೋಶೆ ಕಾದೇಶಿನಿಂದ ಎದೋಮ್ಯರ ಅರಸನ ಬಳಿಗೆ ದೂತರನ್ನು ಕಳಿಸಿದನು. "ತಮ್ಮ
ಸಂಬಂಧಿಕರಾದ ಇಸ್ರಯೇಲರು ತಮ್ಮಲ್ಲಿ ಮಾಡುವ ಮನವಿ ಇದು – ನಮಗೆ ಸಂಭವಿಸಿದ
ಕಷ್ಟದುಃಖಗಳೆಲ್ಲಾ ತಮಗೆ ತಿಳಿದೇ ಇವೆ. [15]ನಮ್ಮ ಪೂರ್ವಜರು ಈಜಿಪ್ಟ್ ದೇಶಕ್ಕೆ ಹೋದದ್ದು, ಅಲ್ಲಿ ನಾವು
ಬಹು ದಿವಸ ವಾಸವಾಗಿದ್ದದ್ದು, ಈಜಿಪ್ಟಿನವರು ನಮ್ಮನ್ನೂ ನಮ್ಮ ಪೂರ್ವಜರನ್ನೂ ಹಿಂಸಿಸಿದ್ದು, ಇವೆಲ್ಲಾ

ತಿಳಿದ ವಿಷಯಗಳು. 16ನಾವು ಸರ್ವೇಶ್ವರನಿಗೆ ಮೊರೆಯಿಟ್ಟೆವು. ಅವರು ನಮ್ಮ ಪ್ರಾರ್ಥನೆಯನ್ನು ಆಲಿಸಿ
ನಮ್ಮನ್ನು ಈಜಿಪ್ಟಿನಿಂದ ಬಿಡುಗಡೆ ಮಾಡಿದರು. ಇದೆಲ್ಲದರ ಅರಿವು ತಮಗಿದೆ. ಈಗ ನಾವು ತಮ್ಮ ರಾಜ್ಯದ
ಗಡಿಪ್ರದೇಶವಾದ ಕಾದೇಶ ಎಂಬ ಊರಲ್ಲಿದ್ದೇವೆ. 17ತಮ್ಮ ನಾಡನ್ನು ದಾಟಿ ಹೋಗಲು ಅಪ್ಪಣೆ
ಆಗಬೇಕೆಂದು ಬೇಡಿಕೊಳ್ಳುತ್ತೇವೆ. ನಾವು ಹೊಲಗದ್ದೆಗಳ ಮೇಲಾಗಲಿ, ದ್ರಾಕ್ಷಿತೋಟಗಳ ಮೂಲಕವಾಗಲಿ
ಹೋಗುವುದಿಲ್ಲ. ಬಾವಿಗಳ ನೀರನ್ನೂ ಕುಡಿಯುವುದಿಲ್ಲ. ರಾಜಮಾರ್ಗದಲ್ಲೇ ನಡೆದು, ತಮ್ಮ ನಾಡಿನ ಗಡಿ
ದಾಟುವ ತನಕ ಎಡಕ್ಕಾಗಲಿ ಬಲಕ್ಕಾಗಲಿ ತಿರುಗುವುದಿಲ್ಲ," ಎಂದು ಹೇಳಿಕಳಿಸಿದನು.
18 ಆದರೆ ಎದೋಮ್ಯರು, "ನಮ್ಮ ನಾಡನ್ನು ನೀವು ದಾಟಿ ಹೋಗಕೂಡದು. ದಾಟುವುದಾದರೆ
ನಿಮ್ಮ ಮೇಲೆ ಯುದ್ಧಮಾಡುತ್ತೇವೆ," ಎಂದು ಉತ್ತರಕೊಟ್ಟರು. 19ಅದಕ್ಕೆ ಇಸ್ರಯೇಲರು, "ನಾವು
ರಾಜಮಾರ್ಗದಲ್ಲೇ ಹೋಗುತ್ತೇವೆ. ನಾವಾಗಲಿ, ನಮ್ಮ ಜಾನುವಾರುಗಳಾಗಲಿ ನಿಮ್ಮ ನೀರನ್ನು ಕುಡಿದರೆ
ಅದಕ್ಕೆ ಬೆಲೆ ಕೊಡುತ್ತೇವೆ. ಬೇರೆ ಏನೂ ನಮಗೆ ಬೇಡ; ಕಾಲ್ನಡೆಯಾಗಿ ದಾಟಿಹೋಗುವುದಕ್ಕೆ ಮಾತ್ರ
ಅಪ್ಪಣೆಯಾಗಬೇಕು," ಎಂದು ವಿನಂತಿಸಿದರು. 20ಆದರೆ ಎದೋಮ್ಯರು, "ನೀವು ದಾಟಲೇ ಕೂಡದು,"
ಎಂದು ಉತ್ತರಿಸಿದರು ಮಾತ್ರವಲ್ಲ, ದೊಡ್ಡ ಪಡೆಯಾಗಿ ಕೂಡಿಕೊಂಡು ಅವರ ಮೇಲೆ ದಾಳಿಮಾಡಲು
ಬಂದರು. 21ಹೀಗೆ ಎದೋಮ್ಯರು ತಮ್ಮ ನಾಡನ್ನು ದಾಟಿ ಹೋಗಲು ಅಪ್ಪಣೆ ಕೊಡದ ಕಾರಣ
ಇಸ್ರಯೇಲರು ಅಲ್ಲಿಂದ ಹಿಂದಿರುಗಿ ಹೊರಟುಹೋದರು.

### ಆರೋನನ ಮರಣ

22 ಇಸ್ರಯೇಲ್ ಇಡೀ ಸಮಾಜದವರು ಕಾದೇಶಿನಿಂದ ಹೊರಟು 'ಹೋರ್' ಎಂಬ ಬೆಟ್ಟಕ್ಕೆ
ಬಂದರು. 23ಎದೋಮ್ಯರ ನಾಡಿನ ಗಡಿ ಹತ್ತಿರ ಇರುವ ಆ ಹೋರ್ ಬೆಟ್ಟದ ಬಳಿ ಸರ್ವೇಶ್ವರ, ಮೋಶೆ
ಮತ್ತು ಆರೋನರ ಸಂಗಡ ಮಾತಾಡಿದರು: 24"ಆರೋನನು ದೇಹತ್ಯಜಿಸಿ ತನ್ನ ಪೂರ್ವಜರನ್ನು ಸೇರಲಿ.
ನೀವಿಬ್ಬರೂ ಮೆರೀಬಾ ಪ್ರವಾಹದ ಬಳಿ ನನ್ನ ಮಾತನ್ನು ಮೀರಿ ನಡೆದಿರಿ. ಆದ್ದರಿಂದ ನಾನು ಇಸ್ರಯೇಲರಿಗೆ
ವಾಗ್ದಾನ ಮಾಡಿದ ನಾಡನ್ನು ಆರೋನನು ಪ್ರವೇಶಿಸಕೂಡದು. 25ಅವನನ್ನೂ ಅವನ ಮಗ
ಎಲ್ಲಾಜಾರನನ್ನೂ ಕರೆದುಕೊಂಡು ನೀನು ಹೋರ್ ಬೆಟ್ಟವನ್ನು ಹತ್ತು. 26ಅಲ್ಲಿ ಆರೋನನ ಯಾಜಕ
ವಸ್ತ್ರಗಳನ್ನು ತೆಗೆದು ಅವನ ಮಗ ಎಲ್ಲಾಜಾರನಿಗೆ ತೊಡಿಸು. ಆರೋನನು ಅಲ್ಲಿ ದೇಹವನ್ನು ಬಿಟ್ಟು ತನ್ನ
ಪೂರ್ವಜರ ಬಳಿ ಸೇರಲಿ," ಎಂದು ವಿಧಿಸಿದರು. 27ಸರ್ವೇಶ್ವರನ ಅಪ್ಪಣೆಯ ಮೇರೆಗೆ ಮೋಶೆ
ಮಾಡಿದನು. ಸರ್ವಸಮುದಾಯದವರು ನೋಡುತ್ತಿರುವಾಗ ಅವರು ಹೋರ್ ಬೆಟ್ಟವನ್ನು ಹತ್ತಿದರು.
28ಮೋಶೆ ಆರೋನನ ವಸ್ತ್ರಗಳನ್ನು ತೆಗೆದು ಅವನ ಮಗ ಎಲ್ಲಾಜಾರನಿಗೆ ತೊಡಿಸಿದನು. ಆರೋನನು ಅಲ್ಲೇ
ಬೆಟ್ಟದ ತುದಿಯಲ್ಲಿ ಸತ್ತುಹೋದನು. ಬಳಿಕ ಮೋಶೆ ಮತ್ತು ಎಲ್ಲಾಜಾರನು ಬೆಟ್ಟದಿಂದ ಇಳಿದುಬಂದರು.
ಆರೋನನು ಸತ್ತುಹೋದುದನ್ನು ಇಸ್ರಯೇಲ್ ಸಮಾಜದವರೆಲ್ಲರೂ ತಿಳಿದು ಅವನಿಗಾಗಿ ಮೂವತ್ತು
ದಿನಗಳವರೆಗೆ ಶೋಕಿಸಿದರು.

### ಕಾನಾನ್ಯರ ಮೇಲೆ ಗಳಿಸಿದ ಜಯ

**21** ಇಸ್ರಯೇಲರು ಅತಾರೀಮ್ ಮಾರ್ಗವಾಗಿ ಬರುತ್ತಿದ್ದಾರೆಂದು ನೆಗೇಬಿನಲ್ಲಿ ಕಾನಾನ್ ನಾಡಿನ ದಕ್ಷಿಣ
ಪ್ರಾಂತ್ಯದಲ್ಲಿದ್ದ ಕಾನಾನ್ಯನಾದ ಅರಾದ್ ಪಟ್ಟಣದ ಅರಸನು ಕೇಳಿದನು. ಅವನು ಇಸ್ರಯೇಲರ ಮೇಲೆ
ಯುದ್ಧಮಾಡಿ ಕೆಲವರನ್ನು ಸೆರೆಹಿಡಿದನು.
2 ಇಸ್ರಯೇಲರು ಸರ್ವೇಶ್ವರನಿಗೆ ಹರಕೆ ಮಾಡಿಕೊಂಡರು: "ನಾವು ಈ ಜನರನ್ನು ಜಯಿಸುವಂತೆ
ಅನುಗ್ರಹಿಸಿದರೆ ಅವರ ಗ್ರಾಮಗಳನ್ನು ಪೂರ್ಣ ಹಾಳುಮಾಡಿ ಸರ್ವೇಶ್ವರನಾದ ನಿಮಗಾಗಿಯೇ
ಮೀಸಲಿಡುತ್ತೇವೆ," ಎಂದರು. 3ಸರ್ವೇಶ್ವರ ಅವರ ಪ್ರಾರ್ಥನೆಯನ್ನು ಆಲಿಸಿದರು; ಅವರು ಆ ಕಾನಾನ್ಯರನ್ನು
ಜಯಿಸುವಂತೆ ಮಾಡಿದರು. ಇಸ್ರಯೇಲರು ಆ ಜನರನ್ನೂ ಅವರ ಗ್ರಾಮಗಳನ್ನೂ ನಿಶ್ಶೇಷವಾಗಿ
ನಾಶಮಾಡಿಬಿಟ್ಟರು. ಈ ಕಾರಣ ಆ ಪ್ರದೇಶಕ್ಕೆ 'ಹೊರ್ಮಾ' ಎಂದು ಹೆಸರಾಯಿತು.

## ಕಂಚಿನ ವಿಷಸರ್ಪ

4 ಇಸ್ರಯೇಲರು ಹೋರ್ ಬೆಟ್ಟದಿಂದ ಹೊರಟು ಎದೋಮ್ಯರ ನಾಡನ್ನು ಸುತ್ತಿಕೊಂಡು
ಹೋಗುವುದಕ್ಕೆ ಕೆಂಪುಕಡಲಿನ ಮಾರ್ಗವಾಗಿ ಪ್ರಯಾಣ ಮಾಡಿದರು. ಈ ಮಾರ್ಗದ ಆಯಾಸ ದಿಂದ
ಅವರಿಗೆ ಬೇಸರವಾಯಿತು. [5]ಆಗ ಅವರು ದೇವರಿಗೂ ಮೋಶೆಗೂ ವಿರುದ್ಧ ಮಾತಾಡ ತೊಡಗಿದರು:
"ನೀವು ನಮ್ಮನ್ನು ಈ ಮರಳುಗಾಡಿನಲ್ಲಿ ಕೊಲ್ಲಬೇಕೆಂದು ಈಜಿಪ್ಟ್‌ದೇಶದಿಂದ ಕರೆದುಕೊಂಡು ಬಂದಿರೋ?
ಇಲ್ಲಿ ಆಹಾರವಿಲ್ಲ, ನೀರೂ ಇಲ್ಲ; ಈ ನಿಸ್ಸಾರವಾದ ಆಹಾರವನ್ನು ತಿಂದು ತಿಂದು ನಮಗೆ ಬೇಸರವಾಗಿದೆ,"
ಎಂದು ಹೇಳತೊಡಗಿದರು. [6]ಅದಕ್ಕೆ ಸರ್ವೇಶ್ವರ ವಿಷಸರ್ಪಗಳನ್ನು ಅವರ ನಡುವೆ ಬರಮಾಡಿದರು. ಅವು
ಆ ಜನರನ್ನು ಕಚ್ಚಿದವು. ಬಹುಜನ ಸತ್ತುಹೋದರು. [7]ಆಗ ಜನರು ಮೋಶೆಯ ಬಳಿಗೆ ಬಂದು, "ನಾವು
ನಿಮಗೂ ಸರ್ವೇಶ್ವರನಿಗೂ ವಿರುದ್ಧ ಮಾತಾಡಿ ದೋಷಿಗಳಾದೆವು. ಈ ಸರ್ಪಗಳು ನಮ್ಮನ್ನು ಬಿಟ್ಟು
ತೊಲಗುವಂತೆ ಸರ್ವೇಶ್ವರನನ್ನು ಪ್ರಾರ್ಥಿಸಿ," ಎಂದು ಬೇಡಿಕೊಂಡರು. [8]ಮೋಶೆ ಜನರ ಪರವಾಗಿ
ಪ್ರಾರ್ಥಿಸಿದನು. ಸರ್ವೇಶ್ವರ ಅವನಿಗೆ, "ನೀನು ಕಂಚಿನಿಂದ ವಿಷಸರ್ಪದ ಆಕಾರವನ್ನು ಮಾಡಿಸಿ,
ಧ್ವಜಸ್ತಂಭದ ಮೇಲೆ ಎತ್ತಿ ನಿಲ್ಲಿಸು. ಸರ್ಪಗಳಿಂದ ಗಾಯಗೊಂಡ ಪ್ರತಿ ಒಬ್ಬನು ಅದನ್ನು ನೋಡಿ
ಬದುಕಿಕೊಳ್ಳುವನು," ಎಂದು ಆಜ್ಞಾಪಿಸಿದರು. [9]ಅಂತೆಯೆ ಮೋಶೆ ಕಂಚಿನಿಂದ ಸರ್ಪದ ಆಕಾರವನ್ನು
ಮಾಡಿಸಿ ಧ್ವಜಸ್ತಂಭದ ಮೇಲೆ ಇಡಿಸಿದನು. ಸರ್ಪಗಳಿಂದ ಗಾಯಗೊಂಡವರಲ್ಲಿ ಯಾರು ಯಾರು ಆ
ಕಂಚಿನ ಸರ್ಪವನ್ನು ಲಕ್ಷ್ಯವಿಟ್ಟು ನೋಡಿದರೋ ಅವರೆಲ್ಲರೂ ಬದುಕಿಕೊಂಡರು.

## 'ಹೋರ್' ಬೆಟ್ಟದಿಂದ ಮೋವಾಬ್ ಕಣಿವೆಯವರೆಗೆ

10 ತರುವಾಯ ಇಸ್ರಯೇಲರು ಅಲ್ಲಿಂದ ಹೊರಟು ಓಬೋತಿನಲ್ಲಿ ಇಳಿದುಕೊಂಡರು.
[11]ಓಬೋತಿನಿಂದ ಹೊರಟು ಮೋವಾಬ್ ನಾಡಿನ ಪೂರ್ವ ದಿಕ್ಕಿನ ಮರುಭೂಮಿಯಲ್ಲಿ ಇಯ್ಯೇ
ಅಬಾರೀಮಿನಲ್ಲಿ ಇಳಿದುಕೊಂಡರು. [12]ಅಲ್ಲಿಂದ ಹೊರಟು ಜೆರೆಬ್ ಕಣಿವೆಯಲ್ಲಿ ಇಳಿದುಕೊಂಡರು.
[13]ಅಲ್ಲಿಂದ ಹೊರಟು ಅರ್ನೋನ್ ಹೊಳೆಯ ಆಚೆಕಡೆಯಲ್ಲಿ ಇಳಿದುಕೊಂಡರು. ಅರ್ನೋನ್ ಹೊಳೆ
ಅಮೋರಿಯರ ಪ್ರದೇಶದಿಂದಾಚೆ ಇರುವ ಮರುಭೂಮಿಯಲ್ಲಿ ಮೋವಾಬ್ಯರಿಗೂ ಅಮೋರಿಯರಿಗೂ
ನಡುವೆ ಇದ್ದು ಮೋವಾಬ್ಯರ ಎಲ್ಲೆಯಾಗಿದೆ. [14]ಅದನ್ನು ಉಲ್ಲೇಖಿಸುತ್ತಾ, "ಸರ್ವೇಶ್ವರನ ವಿಷಯ" ಎಂಬ
ಗ್ರಂಥ ಹೀಗೆನ್ನುತ್ತದೆ:

'ಸೂಫಕ್ಕೆ ಸೇರಿದ ವಾಹೇಬನ್ನು,
ಅರ್ನೋನ್ ಹೊಳೆಗೆ ಕೂಡುವ ಹಳ್ಳಗಳನ್ನು,
15 ಆರ್ ಪಟ್ಟಣದ ತನಕ ಮೋವಾಬಿನ ಎಲ್ಲೆಯಾಗಿರುವ ಕೊರಕಲನ್ನು' ದಾಟಿದ್ದಾಯಿತು.

16 ಅಲ್ಲಿಂದ ಅವರು ಬೇರ್ ಎಂಬ ಸ್ಥಳಕ್ಕೆ ಬಂದರು. "ಜನರನ್ನು ಸೇರಿಸು, ಅವರಿಗೆ
ಜಲಧಾರೆಯನ್ನು ಕೊಡುವೆನು" ಎಂದು ಸರ್ವೇಶ್ವರ ಮೋಶೆಗೆ ಹೇಳಿದ್ದು ಇಲ್ಲಿನ ಬಾವಿಯನ್ನು ಕುರಿತೇ.
[17]ಆ ಕಾಲದಲ್ಲಿ ಇಸ್ರಯೇಲರು ಹಾಡಿದ ಗೀತೆ ಇದು:

ಬಾವಿಯೇ, ಎದ್ದು ಬಾ ಉಕ್ಕುತ್ತಾ
ಜನರೇ, ಹಾಡಿ ಹಿಗ್ಗುತ್ತಾ !
18 ಹಿರಿಯರು ತೋಡಿದರೀ ಬಾವಿಯನ್ನು
ಕೋಲುಕಡ್ಡಿಗಳಿಂದ
ಪ್ರಜಾಧಿಪತಿಗಳು ಅಗೆದರಿದನ್ನು
ರಾಜದಂಡಗಳಿಂದ.

19 ಅವರು ಮರುಭೂಮಿಯನ್ನು ಬಿಟ್ಟು ಮತ್ತಾನಕ್ಕೂ ಮತ್ತಾನದಿಂದ ನಹಲೀಯೇಲಿಗೂ
ನಹಲೀಯೇಲಿನಿಂದ ಬಾಮೋತಿಗೂ ಬಂದರು. [20]ಬಾಮೋತಿನಿಂದ ಮೋವಾಬ್ಯರ ಬೈಲು ಪ್ರದೇಶದಲ್ಲಿರುವ

ಕಣಿವೆಗೆ, ಅಂದರೆ ‘ಪಿಸ್ಗಾ’ ಎಂಬ ಮಲೆನಾಡಿನ ಅಂಚಿಗೆ ಬಂದರು. ಕೆಳಗಿರುವ ‘ಯೆಷೀಮೋನ್’ ಎಂಬ ಮರಳುಗಾಡು ಆ ಗುಡ್ಡದ ಮೇಲಿಂದ ಕಾಣಿಸುತ್ತದೆ.

### ಸೀಹೋನ್-ಓಗ್ ಇವರ ನಾಡುಗಳ ಸ್ವಾಧೀನ

(ಧರ್ಮೋ. 2.26-3.11)

21 ಇಸ್ರಯೇಲರು ಅಮೋರಿಯರ ಅರಸನಾದ ಸೀಹೋನನ ಬಳಿಗೆ ದೂತರನ್ನು ಕಳಿಸಿದರು.
22“ನಿಮ್ಮ ನಾಡನ್ನು ದಾಟಿಹೋಗುವುದಕ್ಕೆ ನಮಗೆ ಅಪ್ಪಣೆಯಾಗಬೇಕು. ನಾವು ಹೊಲಗದ್ದೆಗಳ ಮೇಲಾಗಲಿ, ದ್ರಾಕ್ಷಿತೋಟಗಳ ಮೂಲಕವಾಗಲಿ ಹಾದುಹೋಗುವುದಿಲ್ಲ; ನಿಮ್ಮ ನಾಡನ್ನು ದಾಟುವವರೆಗೂ ರಾಜಮಾರ್ಗದಲ್ಲೇ ನಡೆದು ಹೋಗುತ್ತೇವೆ,” ಎಂದು ಹೇಳಿಸಿದರು.
23ಆದರೆ ಸೀಹೋನನು ತನ್ನ ನಾಡನ್ನು ದಾಟುವುದಕ್ಕೆ ಇಸ್ರಯೇಲರಿಗೆ ಅಪ್ಪಣೆ ಕೊಡಲಿಲ್ಲ. ಬದಲಿಗೆ ಅವರನ್ನು ಎದುರಿಸಲು ತನ್ನ ಜನರೆಲ್ಲರನ್ನು ಕೂಡಿಸಿಕೊಂಡು ಮರುಭೂಮಿಗೆ ಹೊರಟು, ಯಹಚಕ್ಕೆ ಬಂದು, ಅವರೊಡನೆ ಯುದ್ಧ ಮಾಡಿದನು.
24ಇಸ್ರಯೇಲರು ಅವನ ಜನರನ್ನು ಸೋಲಿಸಿದರು, ಕತ್ತಿಯಿಂದ ಸಂಹರಿಸಿದರು. ಅರ್ನೋನ್ ಹೊಳೆಯಿಂದ ಯಬ್ಬೋಕ್ ಹೊಳೆಯವರೆಗೂ ಹಾಗೂ ಅಮ್ಮೋನಿಯರ ಎಲ್ಲೆಯವರೆಗೂ ಇದ್ದ ಸೀಹೋನನ ನಾಡನ್ನೆಲ್ಲಾ ಸ್ವಾಧೀನ ಮಾಡಿಕೊಂಡರು. ಅಮ್ಮೋನಿಯರ ಎಲ್ಲೆ ಒಂದು ದುರ್ಗವಾಗಿತ್ತು.
25ಇಸ್ರಯೇಲರು ಈ ಪಟ್ಟಣಗಳನ್ನೆಲ್ಲಾ ವಶಮಾಡಿಕೊಂಡರು. ಹೆಷ್ಬೋನಿನಲ್ಲೂ ಅದಕ್ಕೆ ಸೇರಿದ ಗ್ರಾಮಗಳಲ್ಲೂ ಅಮೋರಿಯರ ಬೇರೆ ಎಲ್ಲಾ ಊರುಗಳಲ್ಲೂ ವಾಸಿಸಿದರು.
26ಹೆಷ್ಬೋನ್ ಪಟ್ಟಣ ಅಮೋರಿಯರ ಅರಸನಾದ ಸೀಹೋನನ ರಾಜಧಾನಿ. ಅವನು ಮೋವಾಬ್ಯರ ಹಿಂದಿನ ಅರಸನ ಮೇಲೆ ಯುದ್ಧ ಮಾಡಿ ಅರ್ನೋನ್ ಹೊಳೆಯವರೆಗೂ ಅವನ ನಾಡನ್ನೆಲ್ಲಾ ಸ್ವಾಧೀನಮಾಡಿಕೊಂಡಿದ್ದನು.

27 ಈ ವಿಷಯವಾಗಿಯೇ ಕವಿಗಳು ಹೀಗೆಂದು ಹಾಡಿದ್ದಾರೆ:

ಹೆಷ್ಬೋನಿಗೆ ಬನ್ನಿ, ಕಟ್ಟಿ ಅದನ್ನು ಪುನಃ;
ಮತ್ತೆ ಸ್ಥಾಪನೆ ಆಗಲಿ ಸೀಹೋನನಾ
ಪಟ್ಟಣ.

28 ಸೀಹೋನನಾ ಪಟ್ಟಣ, ಆ ಹೆಷ್ಬೋನ್,
ಅಲ್ಲಿಂದಲೆ ಹೊರಟು ಬಂದಿತು
ಅಗ್ನಿಜ್ವಾಲೆ.
ದಹಿಸಿ ಬಿಟ್ಟಿತದು
ಮೋವಾಬ್ಯರ ರಾಜಧಾನಿಯಾದ
ಆರ್ ನಗರವನ್ನು,
ಅರ್ನೋನ್ ಹೊಳೆಯ ಬಳಿಯ
ಪೂಜಾಸ್ಥಳಗಳ ದೇವತೆಗಳನ್ನು.

29 ಮೋವಾಬ್ಯರೇ, ನಿಮಗೆ ಧಿಕ್ಕಾರ !
ಕೆಮೋಷಿನ ಭಕ್ತರೇ, ನಿಮಗೆ ಪರಿವಿನಾಶ !
ಮಾಡಿಹನಾತ ತನ್ನ ಕುವರರನ್ನು
ದೇಶಭ್ರಷ್ಟರನ್ನಾಗಿ
ತನ್ನ ಕುವರಿಯರನ್ನು ಸೆರೆಯಾಳುಗಳನ್ನಾಗಿ
ಅಮೋರಿಯರ ಅರಸ ಸೀಹೋನನಿಗೆ
ಸೆರೆಯವರನ್ನಾಗಿ.

30 ಅವರನ್ನು ಹೊಡೆದೆವು ನಾವು
ಬಿಲ್ಲು ಬಾಣಗಳಿಂದ,
ಹೆಷ್ಬೋನಿನಿಂದ ದೀಬೋನಿನವರೆಗೆ

ಸರ್ವನಾಶ !
ಹಾಳು ಮಾಡಿದೆವು ಮೇದೆಬಾ ಊರಿನ
ನೆರೆಯಲ್ಲಿರುವ ನೋಫಹದ ತನಕ.

31 ಹೀಗೆ ಇಸ್ರಯೇಲರು ಅಮ್ಮೋನಿಯರ ನಾಡಿನಲ್ಲಿ ವಾಸಮಾಡುವಂತಾಯಿತು. [32]ಬಳಿಕ ಮೋಶೆ ಯಗ್ವೇರನ್ನು ನೋಡಿ ಬರಲು ಗೂಢಚಾರರನ್ನು ಕಳಿಸಿದನು. ಇದಾದ ಬಳಿಕ ಇಸ್ರಯೇಲರು ಅದರ ಗ್ರಾಮಗಳನ್ನು ವಶಪಡಿಸಿಕೊಂಡು ಅಲ್ಲಿದ್ದ ಅಮೋರಿಯರನ್ನು ಹೊರಡಿಸಿಬಿಟ್ಟರು.

33 ಇಸ್ರಯೇಲರು ಹಿಂದಿರುಗಿ ಬಾಷಾನಿನ ಮಾರ್ಗವಾಗಿ ಪ್ರಯಾಣ ಮಾಡಿದರು. ಬಾಷಾನಿನ ಅರಸ ಓಗನು ತನ್ನ ಜನರೆಲ್ಲರೊಡನೆ ಅವರಿಗೆ ವಿರುದ್ಧ ಯುದ್ಧಮಾಡಲು ಎದ್ರೈವೂರಿಗೆ ಹೊರಟು
ಬಂದನು. [34]ಸರ್ವೇಶ್ವರ ಮೋಶೆಗೆ, "ಅವನಿಗೆ ಭಯಪಡಬೇಡ; ಅವನನ್ನೂ ಅವನ ಸಮಸ್ತ ಪ್ರಜೆಯನ್ನೂ ನಾಡನ್ನೂ ನಿನ್ನ ಕೈವಶಮಾಡಿದ್ದೇನೆ. ನೀನು ಹೆಷ್ಬೋನಿನಲ್ಲಿ ಅಮೋರಿಯರ ಅರಸ ಸೀಹೋನನಿಗೆ
ಮಾಡಿದಂತೆಯೇ ಇವನಿಗೂ ಮಾಡು," ಎಂದು ಹೇಳಿದರು. [35]ಹಾಗೆಯೇ ಇಸ್ರಯೇಲರು ಅವನನ್ನೂ ಅವನ ಮಕ್ಕಳನ್ನೂ ಅವನ ಜನರೆಲ್ಲರನ್ನೂ ಒಬ್ಬನನ್ನೂ ಬಿಡದೆ ಕೊಂದು ಅವನ ನಾಡನ್ನು ಸ್ವಾಧೀನಪಡಿಸಿಕೊಂಡರು.

## ಮೋವಾಬ್ ಮೈದಾನದಲ್ಲಿ ಬಿಳಾಮನ ಭವಿಷತ್ ವಾಣಿ

**22** ಇಸ್ರಯೇಲರು ಪ್ರಯಾಣಮಾಡಿ ಜೋರ್ಡನ್ ನದಿ ತೀರದಲ್ಲಿ ಜೆರಿಕೋ ನಗರಕ್ಕೆ ಹತ್ತಿರವಿರುವ ಮೋವಾಬ್ಯರ ಬೈಲಿನಲ್ಲಿ ಇಳಿದುಕೊಂಡರು.

2 ಆ ಕಾಲದಲ್ಲಿ ಚಿಪ್ಪೋರನ ಮಗನಾದ ಬಾಲಾಕನು ಮೋವಾಬ್ಯರಿಗೆ ಅರಸನಾಗಿದ್ದನು. ಇಸ್ರಯೇಲರು ಅಮೋರಿಯರನ್ನು ಕೊಂದ ವರ್ತಮಾನವನ್ನು ಈತ ಕೇಳಿದ್ದನು. [3]ಇಸ್ರಯೇಲರು ಬಹು
ಮಂದಿ ಇದ್ದುದರಿಂದ ಮೋವಾಬ್ಯರು ಬಹಳವಾಗಿ ದಿಗಿಲುಪಟ್ಟರು; ಇಸ್ರಯೇಲರ ವಿಷಯದಲ್ಲಿ ಸಹಿಸಲಾರದಷ್ಟು ಹೆದರಿಕೆಯುಳ್ಳವರಾದರು. [4]ಮಿದ್ಯಾನ್ಯರ ಹಿರಿಯರಿಗೆ, "ದನಕರುಗಳು ಅಡವಿಯ
ಹುಲ್ಲನ್ನೆಲ್ಲಾ ಮೇದುಬಿಡುವಂತೆ ಈ ಸಮುದಾಯದವರು ನಮ್ಮನ್ನೂ ನಮ್ಮ ಸುತ್ತಮುತ್ತಲಿನವರನ್ನೂ ನಿರ್ಮೂಲ ಮಾಡುವ ಹಾಗಿದೆ," ಎಂದು ಎಚ್ಚರಿಸಿದರು. [5]ಬಾಲಾಕನು ಬೆಯೋರನ ಮಗ ಬಿಳಾಮನನ್ನು
ಕರೆಸುವುದಕ್ಕೆ ಸ್ವಜನರ ನಾಡಾದ ಯೂಫ್ರೆಟಿಸ್ ನದಿಯ ತೀರದಲ್ಲಿರುವ 'ಪೆತೋರ್' ಎಂಬ ಊರಿಗೆ ದೂತರನ್ನು ಕಳಿಸಿದನು. "ತಾವು ದಯವಿಟ್ಟು ಬರಬೇಕು. ಯಾವುದೋ ಒಂದು ಜನಾಂಗ ಈಜಿಪ್ಟ್ ದೇಶದಿಂದ ಬಂದಿದೆ; ಭೂಮಿಯನ್ನೆಲ್ಲಾ ಆವರಿಸಿಕೊಂಡಿದೆ; ನನಗೆದುರಾಗಿ ಬಂದಿಳಿದಿದೆ. ಅವರು
ನಮಗಿಂತ ಬಲಿಷ್ಠರು. [6]ಆದುದರಿಂದ ತಾವು ದಯಮಾಡಿ ಬಂದು ಈ ಜನಕ್ಕೆ ಶಾಪಹಾಕಿ ನಮಗೆ ನೆರವಾಗಬೇಕು. ಆಗ ಇವರನ್ನು ಸೋಲಿಸಿ ಈ ನಾಡಿನಿಂದ ಹೊರಡಿಸುವುದಕ್ಕೆ ನನ್ನಿಂದ ಸಾಧ್ಯವಾಗಬಹುದು. ತಮ್ಮ ಆಶೀರ್ವಾದದಿಂದ ಶುಭ, ತಮ್ಮ ಶಾಪದಿಂದ ಅಶುಭವುಂಟಾಗುತ್ತದೆ ಎಂದು ನಾನು ಬಲ್ಲೆ," ಎಂದು ಹೇಳಿಕಳಿಸಿದನು.

7 ಮೋವಾಬ್ಯರ ಹಾಗೂ ಮಿದ್ಯಾನ್ಯರ ಮುಖ್ಯಸ್ಥರು ಭವಿಷ್ಯವಾಣಿ ಕೇಳಲು ಸಲ್ಲಿಸಬೇಕಾದ ಕಾಣಿಕೆಯನ್ನು ತೆಗೆದುಕೊಂಡು ಬಿಳಾಮನ ಹತ್ತಿರಕ್ಕೆ ಬಂದರು. ಬಾಲಾಕನು ಹೇಳಿಕಳಿಸಿದ್ದ ಮಾತುಗಳನ್ನು
ತಿಳಿಸಿದರು. [8]ಆಗ ಬಿಳಾಮನು, "ಈ ರಾತ್ರಿ ನೀವು ಇಲ್ಲೇ ತಂಗಿರಿ. ಸರ್ವೇಶ್ವರ ನನಗೆ ಕೊಡುವ ಉತ್ತರವನ್ನು ಬೆಳಿಗ್ಗೆ ತಿಳಿಸುವೆನು," ಎಂದನು. ಅಂತೆಯೆ, ಮೋವಾಬ್ಯರ ಮುಖಂಡರು ಬಿಳಾಮನ ಬಳಿಯಲ್ಲಿ ಉಳಿದುಕೊಂಡರು.

9 ದೇವರು ಬಿಳಾಮನ ಬಳಿಗೆ ಬಂದು, "ನಿನ್ನ ಬಳಿ ತಂಗಿರುವ ಈ ಜನರು ಯಾರು?" ಎಂದು
ವಿಚಾರಿಸಿದರು. [10]ಬಿಳಾಮನು, "ಮೋವಾಬ್ಯರ ಅರಸನು, ಅಂದರೆ ಚಿಪ್ಪೋರನ ಮಗ ಬಾಲಾಕನು ಅವರನ್ನು ನನ್ನ ಬಳಿಗೆ ದೂತರನ್ನಾಗಿ ಕಳಿಸಿದ್ದಾನೆ; [11]'ದಯಮಾಡಿ ಬರಬೇಕು. ಯಾವುದೋ ಒಂದು ಜನಾಂಗ
ಈಜಿಪ್ಟ್ ದೇಶದಿಂದ ಹೊರಟು ಬಂದಿದೆ; ಭೂಮಿಯನ್ನೆಲ್ಲಾ ಆವರಿಸಿಕೊಂಡಿದೆ; ನೀನು ಬಂದು ಅವರಿಗೆ

ಶಾಪಹಾಕಬೇಕು; ಹಾಕಿದರೆ ಅವರನ್ನು ಸೋಲಿಸಿ ಹೊರಡಿಸುವುದಕ್ಕೆ ನನ್ನಿಂದ ಸಾಧ್ಯವಾಗಬಹುದು,' ಎಂದು ಹೇಳಿಕಳಿಸಿದ್ದಾನೆ," ಎಂದು ಉತ್ತರ ಕೊಟ್ಟನು. [12]ಅದಕ್ಕೆ ದೇವರು, "ನೀನು ಅವರ ಜೊತೆಯಲ್ಲಿ ಹೋಗಬಾರದು. ಆ ಜನಾಂಗದವರು ನನ್ನ ಆಶೀರ್ವಾದ ಹೊಂದಿದವರು. ಅವರನ್ನು ಶಪಿಸಬಾರದು," ಎಂದು ಹೇಳಿಬಿಟ್ಟರು.

13 ಬೆಳಿಗ್ಗೆ ಬಿಳಾಮನು ಬಾಲಾಕನ ಮುಖಂಡರಿಗೆ, "ನಾನು ನಿಮ್ಮ ಜೊತೆಯಲ್ಲಿ ಬರುವುದಕ್ಕೆ ಸರ್ವೇಶ್ವರನ ಅಪ್ಪಣೆಯಿಲ್ಲ. ನೀವು ನಿಮ್ಮ ನಾಡಿಗೆ ತೆರಳಿ," ಎಂದನು. [14]ಮೋವಾಬ್ಯರ ಮುಖಂಡರು ಹೊರಟು ಬಾಲಾಕನ ಬಳಿಗೆ ಬಂದರು. ಬಿಳಾಮನು ಬರಲು ಒಪ್ಪಲಿಲ್ಲವೆಂದು ತಿಳಿಸಿದರು.

15 ಬಾಲಾಕನು ಅವರಿಗಿಂತಲೂ ಹೆಚ್ಚು ಗಣ್ಯವಂತ ಮುಂದಾಳುಗಳನ್ನು ಹೆಚ್ಚು ಸಂಖ್ಯೆಯಲ್ಲಿ ಕಳಿಸಿದನು. [16]ಇವರು ಬಿಳಾಮನ ಬಳಿಗೆ ಬಂದು, "ಚಿಪ್ಪೋರನ ಮಗ ಬಾಲಾಕನು ತಮಗೆ ತಿಳಿಸುವುದು ಇದು: 'ತಾವು ದಯಮಾಡಿ ನನ್ನ ಬಳಿಗೆ ಬರಲು ಯಾವ ಅಡ್ಡಿಯನ್ನು ಒಡ್ಡಬೇಡಿ. [17]ನಾನು ತಮ್ಮನ್ನು ಬಹಳವಾಗಿ ಸನ್ಮಾನಿಸುವೆನು; ತಾವು ಏನು ಹೇಳಿದರೂ ಅದರಂತೆಯೇ ಮಾಡುವೆನು; ತಾವು ಅಗತ್ಯವಾಗಿ ಬಂದು ಈ ಜನಾಂಗದವರನ್ನು ಶಪಿಸಿ ನನಗೆ ನೆರವಾಗಬೇಕು' ಎಂದು ಹೇಳಿಕಳಿಸಿದ್ದಾರೆ," ಎಂದರು. [18]ಅದಕ್ಕೆ ಬಿಳಾಮನು, "ಬಾಲಾಕನು ತನ್ನ ಮನೆ ತುಂಬ ಬೆಳ್ಳಿಬಂಗಾರ ಕೊಟ್ಟರೂ ನಾನು ನನ್ನ ದೇವರಾದ ಸರ್ವೇಶ್ವರನ ಆಜ್ಞೆಯನ್ನು ಚಿಕ್ಕದರಲ್ಲಾಗಲಿ ದೊಡ್ಡದರಲ್ಲಾಗಲಿ ಉಲ್ಲಂಘಿಸಲಾರೆ. [19]ನೀವು ಕೂಡ ಈ ರಾತ್ರಿ ಇಲ್ಲೇ ತಂಗಿರಿ, ಸರ್ವೇಶ್ವರ ಏನು ಹೇಳುತ್ತಾರೋ ಅದನ್ನು ತಿಳಿದುಕೊಳ್ಳುತ್ತೇನೆ," ಎಂದು ಬಾಲಾಕನು ದೂತರಿಗೆ ಉತ್ತರಕೊಟ್ಟನು.

20 ಆ ರಾತ್ರಿ ದೇವರು ಬಿಳಾಮನ ಬಳಿಗೆ ಬಂದು, "ಆ ಜನರು ನಿನ್ನನ್ನು ಕರೆಯುವುದಕ್ಕೆ ಬಂದಿರುವುದರಿಂದ ಎದ್ದು ಅವರ ಜೊತೆಯಲ್ಲಿ ಹೋಗು; ಆದರೆ ನಾನು ಆಜ್ಞಾಪಿಸುವ ಪ್ರಕಾರವೇ ಮಾಡಬೇಕು," ಎಂದರು. [21]ಬೆಳಿಗ್ಗೆ ಬಿಳಾಮನು ತನ್ನ ಕತ್ತೆಗೆ ತಡಿಹಾಕಿಸಿ ಮೋವಾಬ್ಯರ ಮುಂದಾಳುಗಳ ಜೊತೆಯಲ್ಲಿ ಹೊರಟನು.

## ಬಿಳಾಮನ ಕತ್ತೆ

22 ಬಿಳಾಮನು ಹೀಗೆ ಹೋದುದರಿಂದ ದೇವರಿಗೆ ಸಿಟ್ಟಾಯಿತು. ಸರ್ವೇಶ್ವರನ ದೂತನು ಅವನಿಗೆ ಎದುರಾಳಿಯಾಗಿ ದಾರಿಯಲ್ಲಿ ನಿಂತುಕೊಂಡನು. ಬಿಳಾಮನು ತನ್ನ ಕತ್ತೆಯ ಮೇಲೆ ಹತ್ತಿ ಇಬ್ಬರು ಆಳುಗಳ ಸಂಗಡ ಸವಾರಿ ಮಾಡುತ್ತಿದ್ದನು. [23]ಸರ್ವೇಶ್ವರನ ದೂತನು ಬಿಚ್ಚು ಗತ್ತಿಯನ್ನು ಕೈಯಲ್ಲಿ ಹಿಡಿದು ದಾರಿಯಲ್ಲೇ ನಿಂತನು. ಇದನ್ನು ಕಂಡ ಆ ಕತ್ತೆ ದಾರಿಯನ್ನು ಬಿಟ್ಟು ಅಡವಿ ಕಡೆಹೋಯಿತು. ದಾರಿಗೆ ತಿರುಗಿಸಲು ಬಿಳಾಮನು ಅದನ್ನು ಹೊಡೆದನು. [24]ಬಳಿಕ ಸರ್ವೇಶ್ವರನ ದೂತನು ದ್ರಾಕ್ಷಿ ತೋಟಗಳ ಸಂದಿಯಲ್ಲಿ ನಿಂತನು. ಈ ಕಡೆಯಲ್ಲೂ ಗೋಡೆಯಿತ್ತು. [25]ಕತ್ತೆ ಆ ದೂತನನ್ನು ನೋಡಿ ಗೋಡೆಗೆ ಒತ್ತಿಕೊಂಡಿತು. ಬಿಳಾಮನ ಕಾಲನ್ನು ಆ ಗೋಡೆಗೆ ಇರುಕಿಸಿತು. ಅವನು ಅದನ್ನು ಮತ್ತೆ ಹೊಡೆದನು. [26]ಅನಂತರ ಸರ್ವೇಶ್ವರನ ದೂತನು ಮುಂದೆ ಹೋಗಿ ಎಡಕ್ಕಾಗಲಿ ಬಲಕ್ಕಾಗಲಿ ತಿರುಗಲು ದಾರಿಯಿಲ್ಲದ ಇಕ್ಕಟ್ಟಾದ ಒಂದು ಸ್ಥಳದಲ್ಲಿ ನಿಂತುಕೊಂಡನು. [27]ಕತ್ತೆ ಅವನನ್ನು ನೋಡಿ ಬಿಳಾಮನ ಕೆಳಗೆ ಬಿದ್ದುಕೊಂಡಿತು. ಬಿಳಾಮನು ಸಿಟ್ಟುಗೊಂಡು ಕೈಗೋಲಿಂದ ಹೊಡೆದನು.

28 ಆಗ ಸರ್ವೇಶ್ವರ ಆ ಕತ್ತೆಗೆ ಮಾತಾಡುವ ಶಕ್ತಿಯನ್ನು ಕೊಟ್ಟರು. ಅದು ಬಿಳಾಮನಿಗೆ, "ನೀನು ಮೂರು ಸಾರಿ ನನ್ನನ್ನು ಹೊಡೆದದ್ದೇಕೆ? ನಾನು ನಿನಗೇನು ಮಾಡಿದೆ?" ಎಂದು ಪ್ರಶ್ನೆ ಹಾಕಿತು. [29]ಅದಕ್ಕೆ ಬಿಳಾಮನು, "ನೀನು ಇಷ್ಟಬಂದಂತೆ ನನ್ನನ್ನು ಅತ್ತಿತ್ತ ಆಡಿಸಿದೆ; ನನ್ನ ಕೈಯಲ್ಲಿ ಕತ್ತಿಯಿದ್ದಿದ್ದರೆ ನಿನ್ನನ್ನು ಕೊಂದು ಹಾಕಿಬಿಡುತ್ತಿದ್ದೆ," ಎಂದನು. [30]ಅದಕ್ಕೆ ಆ ಕತ್ತೆ, "ನಿನ್ನ ಜೀವಮಾನವೆಲ್ಲ, ಇಂದಿನ ತನಕ ಸವಾರಿ ಮಾಡುತ್ತಿದ್ದ ಕತ್ತೆ ನಾನಲ್ಲವೆ? ನಾನು ಎಂದಾದರೂ ಈ ರೀತಿ ಮಾಡಿದ್ದುಂಟೆ?" ಎಂದಿತು. ಆಗ ಬಿಳಾಮನು "ಇಲ್ಲ" ಎಂದನು.

31 ಅಷ್ಟರಲ್ಲೇ ಸರ್ವೇಶ್ವರ ಬಿಳಾಮನ ಕಣ್ಣುಗಳನ್ನು ತೆರೆದರು. ಅವರ ದೂತನು ಬಿಚ್ಚು ಕತ್ತಿಯನ್ನು ಹಿಡಿದು ದಾರಿಯಲ್ಲೆ ನಿಂತಿರುವುದನ್ನು ಕಂಡನು. ಕೂಡಲೆ ಅಡ್ಡಬಿದ್ದು ನಮಸ್ಕರಿಸಿದನು. [32]ಆಗ ಸರ್ವೇಶ್ವರನ

ದೂತ, “ಮೂರು ಸಾರಿ ನಿನ್ನ ಕತ್ತೆಯನ್ನೇಕೆ ಹೊಡೆದೆ? ನೀನು ಹಿಡಿದ ಮಾರ್ಗ ಸರಿಯಲ್ಲ. ನಿನ್ನನ್ನು
ತಡೆಗಟ್ಟಲು ನಾನೇ ಬಂದೆ. 33ಈ ಕತ್ತೆ ನನ್ನನ್ನು ನೋಡಿ ಮೂರು ಸಾರಿ ನನ್ನೆದುರಿನಿಂದ ಪಕ್ಕಕ್ಕೆ ತಿರುಗಿ
ಕೊಂಡಿತು. ಹಾಗೆ ತಿರುಗಿಕೊಳ್ಳದೆ ಹೋಗಿದ್ದರೆ ನಿನ್ನನ್ನು ಕೊಂದು ಕತ್ತೆಯನ್ನು ಉಳಿಸುತ್ತಿದ್ದೆ,” ಎಂದು
ಹೇಳಿದನು. 34ಅದಕ್ಕೆ ಬಿಳಾಮನು, “ನಾನು ಪಾಪ ಮಾಡಿದೆ, ನೀನೆ ನನಗೆದುರಾಗಿ ದಾರಿಯಲ್ಲಿ
ನಿಂತಿರುವುದು ನನಗೆ ತಿಳಿಯದೆ ಹೋಯಿತು. ನಾನು ಮಾಡುವುದು ನಿನಗೆ ಕೆಟ್ಟದ್ದಾಗಿ ತೋರಿದರೆ ಹಿಂದಕ್ಕೆ
ತಿರುಗಿಕೊಳ್ಳುತ್ತೇನೆ,” ಎಂದನು. 35ಆಗ ಸರ್ವೇಶ್ವರನ ದೂತನು, “ಆ ವ್ಯಕ್ತಿಗಳ ಸಂಗಡ ಹೋಗು. ಆದರೆ
ನಾನು ನಿನಗೆ ಹೇಳುವುದನ್ನೇ ಹೊರತು ಬೇರೆ ಏನನ್ನೂ ಹೇಳಬೇಡ,” ಎಂದು ತಿಳಿಸಿದನು. ಬಿಳಾಮನು
ಬಾಲಾಕನ ಮುಂದಾಳುಗಳ ಜೊತೆ ಹೊರಟನು.

### ಬಿಳಾಮನ ಮತ್ತು ಬಾಲಾಕನ ಭೇಟಿ

36 ಬಿಳಾಮನು ಬಂದ ಸಮಾಚಾರ ಬಾಲಾಕನಿಗೆ ಮುಟ್ಟಿತು. ಅವನು ಬಿಳಾಮನನ್ನು
ಬರಮಾಡಿಕೊಳ್ಳಲು ತನ್ನ ನಾಡಗಡಿಯಾದ ಅರ್ನೋನ್ ಹೊಳೆಯ ತೀರದಲ್ಲಿರುವ ಮೋವಾಬ್ಯರ ಪಟ್ಟಣಕ್ಕೆ
ಹೊರಟುಬಂದನು. 37ಅಲ್ಲಿ ಬಿಳಾಮನನ್ನು ಕಂಡು, “ತಮ್ಮನ್ನು ತುರ್ತಾಗಿ ಕರೆದುತರಲು ನಾನು ದೂತರನ್ನು
ಕಳಿಸಿದೆನಲ್ಲವೆ? ತಾವೇಕೆ ಆಗಲೇ ಬರಲಿಲ್ಲ? ತಮಗೆ ಯೋಗ್ಯವಾದ ಸತ್ಕಾರ ನೀಡಲು ನಾನು
ಅಸಮರ್ಥನೇ?” ಎಂದನು. 38ಅದಕ್ಕೆ ಬಿಳಾಮನು, “ಅದಿರಲಿ, ನಾನೀಗ ಬಂದಾಯಿತು. ಆದರೆ ನಾನಾಗಿ
ಏನನ್ನು ಹೇಳುವ ಶಕ್ತಿ ನನಗಿಲ್ಲ. ದೇವರು ಆಡಿಸಿದ ಮಾತನ್ನೇ ಹೇಳಲು ಸಾಧ್ಯ,” ಎಂದು ಹೇಳಿದನು.
39ಇದಾದ ಬಳಿಕ ಬಿಳಾಮನು ಬಾಲಾಕನೊಂದಿಗೆ ಹೋದನು. ಅವರು ಕಿರ್ಯತ್ ಹುಚೋತಿಗೆ ಬಂದರು.
40ಬಾಲಾಕನು ಹೋರಿಗಳನ್ನು ಹಾಗೂ ಕುರಿಗಳನ್ನು ಕೊಂದು ಬಲಿಕೊಟ್ಟು, ಅವುಗಳ ಮಾಂಸವನ್ನು
ಬಿಳಾಮನಿಗೂ ಅವನ ಸಂಗಡವಿದ್ದ ಮುಂದಾಳುಗಳಿಗೂ ಕಳಿಸಿದನು.

41 ಮರುದಿನ ಬೆಳಿಗ್ಗೆ ಬಾಲಾಕನು ಬಿಳಾಮನನ್ನು ಕರೆದುಕೊಂಡು ‘ಬಾಳ್’ ಎಂಬ ದೇವತೆಯ
ಪೂಜಾಸ್ಥಳಗಳಿದ್ದ ಗುಡ್ಡವನ್ನು ಹತ್ತಿ ಇಸ್ರಯೇಲರ ಶಿಬಿರದೊಂದು ಭಾಗವನ್ನು ತೋರಿಸಿದನು.

**23** ಆಗ ಬಿಳಾಮನು, “ಇಲ್ಲಿ ಏಳು ಬಲಿಪೀಠಗಳನ್ನು ಕಟ್ಟಿಸಿ ಏಳು ಹೋರಿಗಳನ್ನು ಮತ್ತು ಏಳು
ಟಗರುಗಳನ್ನು ಸಿದ್ಧಪಡಿಸು,” ಎಂದು ಬಾಲಾಕನಿಗೆ ಹೇಳಿದನು. 2ಬಾಲಾಕನು ಹಾಗೆಯೇ ಮಾಡಿದನು.
ಬಾಲಾಕನು ಮತ್ತು ಬಿಳಾಮನು ಪ್ರತಿ ಬಲಿಪೀಠದ ಮೇಲೆ ಒಂದು ಹೋರಿಯನ್ನು ಹಾಗು ಒಂದು ಟಗರನ್ನು
ದಹನಬಲಿದಾನವಾಗಿ ಸಮರ್ಪಿಸಿದರು. 3ಬಳಿಕ ಬಿಳಾಮನು ಬಾಲಾಕನಿಗೆ, “ನೀನು ದಹನ ಬಲಿದಾನ
ಮಾಡಿದ ಸ್ಥಳದಲ್ಲೇ ಇರು; ನಾನು ಸ್ವಲ್ಪ ದೂರ ಹೋಗಿ ಬರುತ್ತೇನೆ; ಸರ್ವೇಶ್ವರ ನನಗೆ ದರ್ಶನ ಕೊಟ್ಟರೂ
ಕೊಡಬಹುದು. ಅವರು ಸೂಚಿಸುವ ಸಂಗತಿಗಳನ್ನು ನಿನಗೆ ತಿಳಿಸುತ್ತೇನೆ,” ಎಂದು ಹೇಳಿ ಮರಗಳಿಲ್ಲದ
ಒಂದು ದಿಣ್ಣೆಗೆ ಹೋದನು. 4ದೇವರು ಬಿಳಾಮನಿಗೆ ಎದುರಾಗಿ ಬಂದರು. ಬಿಳಾಮನು ಅವರಿಗೆ, “ನಾನು
ಏಳು ಬಲಿಪೀಠಗಳನ್ನು ಕಟ್ಟಿಸಿ ಒಂದೊಂದು ಪೀಠದಲ್ಲಿ ಒಂದು ಹೋರಿಯನ್ನೂ ಒಂದು ಟಗರನ್ನೂ
ದಹನಬಲಿಯಾಗಿ ಸಮರ್ಪಿಸಿದ್ದೇನೆ,” ಎಂದು ಹೇಳಿದನು.

5 ಸರ್ವೇಶ್ವರ ಬಿಳಾಮನಿಗೆ ಹೇಳಬೇಕಾದುದನ್ನು ಹೇಳಿ, “ನೀನು ಬಾಲಾಕನ ಬಳಿಗೆ ಹಿಂದಿರುಗಿ
ಹೋಗಿ ನಾನು ಹೇಳಿದ್ದನ್ನು ತಿಳಿಸು,” ಎಂದು ಆಜ್ಞಾಪಿಸಿದರು. 6ಬಿಳಾಮನು ಬಾಲಾಕನ ಬಳಿಗೆ ಬಂದಾಗ
ತಾನು ದಹನಬಲಿಯನ್ನು ಸಮರ್ಪಿಸಿದ್ದ ಪೀಠದ ಹತ್ತಿರವೆ ನಿಂತಿದ್ದನು. ಮೋವಾಬ್ಯರ ಮುಖ್ಯಸ್ಥರೆಲ್ಲರು
ಅವನ ಬಳಿಯಲ್ಲೆ ಇದ್ದರು. ಆಗ ಬಿಳಾಮನು ಪದ್ಯರೂಪದಲ್ಲಿ ಹೀಗೆಂದು ನುಡಿದನು:

7 “ಬಾಲಾಕನು ನನ್ನನ್ನು ಕರೆಸಿದ
ಅರಾಮಿನಿಂದ
ಮೋವಾಬರಸ ನನ್ನ ಬರಮಾಡಿದ
ಮೂಡಲಗುಡ್ಡೆಗಳಿಂದ.

‘ನನ್ನ ಪರವಾಗಿ ಯಕೋಬವಂಶಜರನ್ನು
ಶಪಿಸೆಂದ’
‘ಹಾಕು ಇಸ್ರಯೇಲರಿಗೆ ಧಿಕ್ಕಾರ’
ಎಂದು ಹೇಳಿದ.
8 ದೇವರೇ ಶಪಿಸಿಲ್ಲದವರನ್ನು
ನಾನೇನೆಂತು ಶಪಿಸಲಿ?
ಸರ್ವೇಶ್ವರನೇ ಧಿಕ್ಕರಿಸಿಲ್ಲದವರನ್ನು
ನಾನೇನೆಂತು ಧಿಕ್ಕರಿಸಲಿ?
9 ನಾನವರನ್ನು ಕಂಡೆ ಬೆಟ್ಟದ ಶಿಖರದಿಂದ
ನೋಡಿದೆನವರನ್ನು ಗುಡ್ಡದೆತ್ತರದಿಂದ.
10 ಯಕೋಬ್ಯರು ಧೂಳಿನಷ್ಟು ಅಸಂಖ್ಯ
ಅವರನ್ನು ಲೆಕ್ಕಿಸಲು ಯಾರಿಂದ ಸಾಧ್ಯ?
ಕಾಲ್ಭಾಗವನ್ನಾದರೂ ಹೇಳಲು
ಯಾರಿಂದ ಸಾಧ್ಯ?
ನಾ ಸಾಯಬೇಕು ಆ ಸಜ್ಜನರು
ಸಾಯುವ ರೀತಿ
ನನ್ನದಾಗಬೇಕು ಅವರಿಗಾಗುವ
ಅಂತ್ಯಗತಿ,”

11 ಈ ನುಡಿಗಳನ್ನು ಕೇಳಿದ ಬಾಲಾಕನು ಅವನಿಗೆ, “ಇದೇನು ನೀವು ಮಾಡಿದ್ದು? ನನ್ನ ಶತ್ರುಗಳನ್ನು ಶಪಿಸುವುದಕ್ಕೆ ನಾನು ನಿಮ್ಮನ್ನು ಕರೆದೆ. ಶಪಿಸುವುದಕ್ಕೆ ಬದಲು ಅವರನ್ನು ಆಶೀರ್ವದಿಸಿ ಬಿಟ್ಟಿರಲ್ಲಾ?” ಎಂದು ಹೇಳಿದನು.
12ಅದಕ್ಕೆ ಬಿಳಾಮನು “ಸರ್ವೇಶ್ವರ ನುಡಿಸುವುದನ್ನೇ ನಾನು ನುಡಿಯಬೇಕಾಗಿದೆಯಲ್ಲವೆ?” ಎಂದುಬಿಟ್ಟನು.

### ಬಿಳಾಮನಿಂದ ಎರಡನೇ ಭವಿಷ್ಯವಾಣಿ

13 ಆಗ ಬಾಲಾಕನು, “ದಯಮಾಡಿ ನನ್ನೊಡನೆ ಇನ್ನೊಂದು ಸ್ಥಳಕ್ಕೆ ಬನ್ನಿ. ಅಲ್ಲಿಂದಲೂ ಅವರನ್ನು ನೋಡಬಹುದು. ಆದರೆ ಅವರೆಲ್ಲರೂ ಕಾಣಿಸರು. ಅವರ ಒಂದು ಕೊನೆ ತುಣುಕು ಮಾತ್ರ ಕಾಣಿಸುವುದು.
14ಅಲ್ಲಿಂದ ನನ್ನ ಪರವಾಗಿ ಅವರನ್ನು ಶಪಿಸಬೇಕು,” ಎಂದು ಹೇಳಿ ಪಿಸ್ಗಾ ಬೆಟ್ಟದ ತುದಿಯಲ್ಲಿರುವ ‘ಚೋಫೀಮ್ ಬೈಲು’ ಎಂಬ ಸ್ಥಳಕ್ಕೆ ಕರೆದುಕೊಂಡು ಹೋದನು. ಅಲ್ಲಿಯೂ ಏಳು ಬಲಿಪೀಠಗಳನ್ನು ಕಟ್ಟಿಸಿ ಪ್ರತಿ ಒಂದು ಪೀಠದಲ್ಲಿ ಒಂದು ಹೋರಿ ಮತ್ತು ಟಗರನ್ನು ದಹನಬಲಿಯಾಗಿ ಸಮರ್ಪಿಸಿದನು.

15 ಬಿಳಾಮನು ಅವನಿಗೆ, “ನೀನು ಇಲ್ಲಿ ದಹನಬಲಿಯರ್ಪಿಸುವ ಸ್ಥಳದಲ್ಲಿರು. ನಾನು ಅತ್ತ ಕಡೆಹೋಗಿ (ಸರ್ವೇಶ್ವರನನ್ನು) ಸಂದರ್ಶಿಸಿ ಬರುತ್ತೇನೆ,” ಎಂದು ಹೇಳಿಹೋದನು.

16 ಸರ್ವೇಶ್ವರ ಬಿಳಾಮನಿಗೆ ದರ್ಶನಕೊಟ್ಟು ಅವನು ಹೇಳಬೇಕಾದುದನ್ನು ಕಲಿಸಿಕೊಟ್ಟು, “ನೀನು ಬಾಲಾಕನ ಬಳಿಗೆ ಹಿಂದಿರುಗಿ ನಾನು ಹೇಳಿದಂತೆಯೇ ತಿಳಿಸು,” ಎಂದರು.
17ಬಿಳಾಮನು ಬಾಲಾಕನ ಬಳಿಗೆ ಬಂದಾಗ ಬಾಲಾಕನು ತಾನು ದಹನಬಲಿಯನ್ನು ಸಮರ್ಪಿಸಿದ ಪೀಠದ ಹತ್ತಿರವೇ ನಿಂತಿದ್ದನು. ಮೋವಾಬ್ಯರ ಮುಖ್ಯಸ್ಥರು ಅವನ ಸಂಗಡವೇ ಇದ್ದರು.

18 ಬಿಳಾಮನು ಪದ್ಯರೂಪವಾಗಿ ಹೀಗೆಂದು ನುಡಿದನು:
“ಬಾಲಾಕನೇ, ಕಿವಿಗೊಟ್ಟು ಕೇಳು:
ಚಿಪ್ಪೋರನ ಪುತ್ರನೇ,
ನನ್ನ ಮಾತನ್ನು ಆಲಿಸು:
19 ನರಮಾನವರಂತೆ ದೇವರು ಎರಡು

ಮಾತಿನವರಲ್ಲ
ನರಪುತ್ರರಂತೆ ಮನಸ್ಸನ್ನು
ಬದಲಾಯಿಸಿಕೊಳ್ಳುವವರಲ್ಲ.
ಆತ ನುಡಿದಂತೆ ನಡೆಯದಿರುತ್ತಾನೋ?
20 ಆ ಜನರನ್ನು ಆಶೀರ್ವದಿಸಬೇಕೆಂಬ
ಆದೇಶ ನನಗಿರುವುದು;
ಸರ್ವೇಶ್ವರನಿತ್ತ ಆಶೀರ್ವಾದವನ್ನು
ನಾನು ಮಾರ್ಪಡಿಸಲಾಗದು.
21 ಈ ಯಕೋಬ್ಯರಲ್ಲಿಲ್ಲ ಆಪತ್ತಿನ ಸೂಚನೆ
ಈ ಇಸ್ರಯೇಲರಲ್ಲಿಲ್ಲ ವಿಪತ್ತಿನ ಸಾಧ್ಯತೆ
ಸರ್ವೇಶ್ವರನೇ ಇಹನು ಅವರ ಸಂಗಡ
ದೇವರಾಗಿ
ಜಯಘೋಷ ಕೇಳಿಸುತ್ತಿದೆ
ಅವರ ಅರಸನಿಗಾಗಿ!
22 ಅವರನ್ನು ದೇವರೇ ಕರೆದು ತಂದ
ಈಜಿಪ್ಟಿನಿಂದ
ಅವರಿಗಿದೆ ಕಾಡುಕೋಣದಂಥ
ಶಕ್ತಿಸಾಮರ್ಥ್ಯ !
23 ಯಕೋಬ್ಯರಿಗೆ ವಿರುದ್ಧವಾದ ಶಕುನವಿಲ್ಲ
ಇಸ್ರಯೇಲರಿಗೆ ವಿರುದ್ಧವಾದ
ತಂತ್ರಮಂತ್ರವಿಲ್ಲ.
ತಾನು ಮಾಡುವುದನ್ನು ತತ್ಕಾಲದಲ್ಲೇ
ದೇವ ತಿಳಿಸುತ್ತಾನೆ ಯಕೋಬ್ಯರಿಗೆ
ಅದನ್ನು ಸೂಚಿಸುತ್ತಾನೆ
ಸಮಯೋಚಿತವಾಗಿ ಆ ಇಸ್ರಯೇಲರಿಗೆ.
24 ಈ ಜನಾಂಗ ಯುವಸಿಂಹದಂತೆ
ನಿಂತಿಹುದು ಮೃಗೇಂದ್ರನಂತೆ
ಮೃಗ ಕೊಂದು, ರಕ್ತ ಕುಡಿದು,
ಮಾಂಸ ತಿಂದು,
ತೃಪ್ತಿಹೊಂದದ ಹೊರತು
ಆ ಸಿಂಹ ವಿರಮಿಸದು."

25 ಆಗ ಬಾಲಾಕನು ಅವನಿಗೆ, "ಹಾಗಾದರೆ ನೀನು ಅವರನ್ನು ಶಪಿಸಲೂ ಬೇಡ, ಆಶೀರ್ವದಿಸಲೂ
ಬೇಡ," ಎಂದನು. 26ಅದಕ್ಕೆ ಬಿಳಾಮನು, "ಸರ್ವೇಶ್ವರ ಆಜ್ಞಾಪಿಸಿದ್ದನ್ನೇ ನಾನು ಮಾಡಬೇಕೆಂದು ನಿನಗೆ
ಹೇಳಲಿಲ್ಲವೆ?" ಎಂದನು.

### ಬಿಳಾಮನಿಂದ ಮೂರನೇ ಭವಿಷ್ಯವಾಣಿ

27 ಆ ಬಳಿಕ ಬಾಲಾಕನು, "ಬಾ, ನಿನ್ನನ್ನು ಬೇರೊಂದು ಸ್ಥಳಕ್ಕೆ ಕರೆದುಕೊಂಡು ಹೋಗುತ್ತೇನೆ.
ಬಹುಶಃ ಅಲ್ಲಿಯಾದರು ನೀನು ಅವರನ್ನು ಶಪಿಸುವಂತೆ ದೇವರು ಅನುಮತಿಸ ಬಹುದು," ಎಂದು
ಹೇಳಿದನು. 28ಅಲ್ಲಿಂದ ಅವನನ್ನು ಪೆಗೋರ್ ಎಂಬ ಬೆಟ್ಟದ ತುದಿಗೆ ಕರೆದುಕೊಂಡು ಹೋದನು. ಆ
ಬೆಟ್ಟದ ಕೆಳಗಿರುವ 'ಯೆಷೀಮೋನ್' ಎಂಬ ಮರುಭೂಮಿ ಕಾಣಿಸುತ್ತಿತ್ತು. 29ಬಿಳಾಮನು ಬಾಲಾಕನಿಗೆ,

“ಇಲ್ಲೂ ಏಳು ಬಲಿಪೀಠಗಳನ್ನು ಕಟ್ಟಿಸಿ, ಏಳು ಹೋರಿಗಳನ್ನು ಹಾಗು ಏಳು ಟಗರುಗಳನ್ನು ಸಿದ್ಧಪಡಿಸು,” ಎಂದನು. [30]ಬಾಲಾಕನು ಅಂತೆಯೇ ಮಾಡಿ ಪ್ರತಿಯೊಂದು ಪೀಠದಲ್ಲೂ ಒಂದು ಹೋರಿಯನ್ನೂ ಒಂದು ಟಗರನ್ನೂ ದಹನಬಲಿಯಾಗಿ ಸಮರ್ಪಿಸಿದನು.

**24** ಇಸ್ರಯೇಲರಿಗೆ ಶುಭವಾಗಬೇಕು ಎಂಬುದೇ ಸರ್ವೇಶ್ವರನ ಚಿತ್ತ ಎಂದು ಅರಿತ ಬಿಳಾಮನು ಮೊದಲಿನಂತೆ ಶಕುನ ನೋಡಲು ಹೋಗಲಿಲ್ಲ. ಬದಲಿಗೆ ಮರುಭೂಮಿಯ ಕಡೆ ಮುಖ ತಿರುಗಿಸಿಕೊಂಡು, ಕಣ್ಣೆತ್ತಿ ನೋಡಿದನು. [2]ಕುಲಗಳ ಅನುಸಾರ ಡೇರೆಗಳನ್ನು ಹಾಕಿಕೊಂಡಿದ್ದ ಇಸ್ರಯೇಲರು ಅವನಿಗೆ ಕಾಣಿಸಿದರು. [3]ಆಗ ಅವನು ದೇವಾತ್ಮ ಪ್ರೇರಿತನಾಗಿ ಪದ್ಯರೂಪದಲ್ಲಿ ಇಂತೆಂದು ಭವಿಷ್ಯ ನುಡಿದನು:

“ಇದು ಬೆಯೋರನ ಮಗ ಬಿಳಾಮನ
ಭವಿಷ್ಯವಾಣಿ:
ಮನೋದೃಷ್ಟಿಯಿಂದ ನೋಡುವ
ಪುರುಷನ ವಾಣಿ.
4 ದೈವೋಕ್ತಿಗಳನ್ನು ಕೇಳುವವನ
ಭವಿಷ್ಯವಾಣಿ
ಪರವಶನಾಗಿ ಕಣ್ತೆರೆದು ಸರ್ವಶಕ್ತನ
ದರ್ಶನ ಹೊಂದಿದಾ ವ್ಯಕ್ತಿಯ ವಾಣಿ.
5 ಯಕೋಬ್ಯರೇ, ನಿಮ್ಮ ಡೇರೆಗಳೆಷ್ಟು
ರಮ್ಯ !
ಇಸ್ರಯೇಲರೇ, ನಿಮ್ಮ ನಿವಾಸಗಳೆಷ್ಟು
ಸುಂದರ !
6 ಅವಿವೆ ಉದ್ದುದ್ದ ಚಾಚಿಕೊಂಡಿರುವ
ಕಣಿವೆಗಳಂತೆ
ನದಿಯ ಬಳಿಯಿರುವ ತೋಟಗಳಂತೆ
ಸರ್ವೇಶ್ವರ ನೆಟ್ಟ ಅಗರುಮರಗಳಂತೆ.
ನೀರ ಬದಿಯ ದೇವದಾರು ವೃಕ್ಷಗಳಂತೆ.
7 ನೀರು ಹರಿಯುತ್ತಲೇ ಇದೆ
ಅವರ ಕಪಿಲೆಗಳಿಂದ
ಅವರ ಬಿತ್ತನೆಗೆ ನೀರಿನ
ಕೊರತೆಯೆಂಬುದಿಲ್ಲ.
ಅಗಾಗ್‌ರಾಜನಿಗಿಂತ ಶ್ರೇಷ್ಠ
ಅವರ ಅರಸ
ಅಭಿವೃದ್ಧಿಯಾಗುತ್ತಿದೆ ಅವರ ರಾಜ್ಯ.
8 ಅವರನ್ನು ದೇವರೇ ಕರೆದು
ತಂದರು ಈಜಿಪ್ಟಿನಿಂದ
ಅವರಿಗಿದೆ ಕಾಡುಕೋಣದಂಥ
ಶಕ್ತಿಸಾಮರ್ಥ್ಯ.
ನಿರ್ಮೂಲ ಮಾಡುವರವರು ಶತ್ರುಗಳನ್ನು
ಮುರಿದು ಹಾಕುವರು ವೈರಿಗಳ
ಎಲುಬುಗಳನ್ನು;

ನುಚ್ಚುನೂರು ಮಾಡುವರು
ಅವರ ಬಿಲ್ಲು ಬಾಣಗಳನ್ನು.
9 ಕಾಲು ಮಡಚಿ ಹೊಂಚುಕೂತ
ಸಿಂಹದಂತಿದೆ ಆ ಜನಾಂಗ;
ಕೆಣಕಲು ಯಾರಿಂದಾದೀತು, ಅದು
ಮೃಗೇಂದ್ರನಿಗೆ ಸಮಾನ !

10 ಇದನ್ನು ಕೇಳಿ ಬಾಲಾಕನಿಗೆ ಬಿಳಾಮನ ಮೇಲೆ ಕಡುಕೋಪ ಉಂಟಾಯಿತು. ಅವನು
ಕೈಕೈಹಿಸಿಕಿಕೊಂಡು ಬಿಳಾಮನಿಗೆ, "ಶತ್ರುಗಳನ್ನು ಶಪಿಸುವುದಕ್ಕೆ ನಿನ್ನನ್ನು ಕರೆಸಿದೆ; ಆದರೆ ನೀನು ಮೂರು
ಸಾರಿಯೂ ಅವರನ್ನೇ ಆಶೀರ್ವದಿಸಿದೆ. [11]ಆದುದರಿಂದ ನಿನ್ನ ಊರಿಗೆ ತೆರಳು. ನಿನ್ನನ್ನು ಬಹಳವಾಗಿ
ಸನ್ಮಾನಿಸಬೇಕೆಂದಿದ್ದೆ. ಆದರೆ ನಿನಗೆ ಸನ್ಮಾನ ಕೂಡದೆಂದು ಸರ್ವೇಶ್ವರ ಆಜ್ಞೆ ಮಾಡಿದ್ದಾನೆ," ಎಂದನು.
[12]ಅದಕ್ಕೆ ಬಿಳಾಮನು, "ನೀನು ನಿನ್ನ ಮನೆತುಂಬ ಬೆಳ್ಳಿಬಂಗಾರವನ್ನು ದಾನಮಾಡಿದರೂ ನಾನು
ಸರ್ವೇಶ್ವರನ ಆಜ್ಞೆಯನ್ನು ಮೀರಿ ನನ್ನ ಇಷ್ಟದಂತೆ ಏನನ್ನೂ ಮಾಡಲಾರೆ. [13]ಸರ್ವೇಶ್ವರ
ಆಜ್ಞಾಪಿಸಿದಂತೆಯೇ ಮಾಡುವೆನೆಂದು ನೀನು ನನ್ನ ಬಳಿಗೆ ಕಳಿಸಿದ ದೂತರಿಗೆ ನಾನು ಹೇಳಲಿಲ್ಲವೆ?
[14]ಆಗಲಿ, ನಾನು ನನ್ನ ಸ್ವಜನರ ಬಳಿಗೆ ತೆರಳುತ್ತೇನೆ. ಆದರೆ ಈ ಜನರು ನಿನ್ನ ಜನರಿಗೆ ಕೊನೆಗೆ ಏನು
ಮಾಡುವರೋ ಅದನ್ನು ತಿಳಿಸುತ್ತೇನೆ ಕೇಳು," ಎಂದು ಹೇಳಿ [15]ಪದ್ಯರೂಪವಾಗಿ ಹೀಗೆಂದನು:

"ಬೆಯೋರನ ಮಗ ಬಿಳಾಮನು
ನುಡಿದ ಭವಷ್ಯವಾಣಿ:
16 ಮನೋದೃಷ್ಟಿಯಿಂದ ನೋಡುವ
ಪುರುಷನ ವಾಣಿ
ದೈವೋಕ್ತಿಗಳನ್ನು ಕೇಳುವವನ
ಭವಿಷ್ಯವಾಣಿ
ಪರಾತ್ಪರನ ಜ್ಞಾನವನ್ನು ಪಡೆದವನ
ವಾಣಿ
ಪರವಶನಾಗಿ ಕಣ್ದೆರೆದು ಸರ್ವಶಕ್ತನ
ದರ್ಶನ ಹೊಂದಿದವನ ಭವಿಷ್ಯವಾಣಿ:
17 ಒಬ್ಬಾತನನ್ನು ನೋಡುತ್ತಿದ್ದೇನೆ;
ಆತ ಈಗಿನವನಲ್ಲ.
ಆತ ಕಾಣಿಸುತ್ತಾನೆ,
ಆದರೆ ಸಮೀಪದಲ್ಲಿಲ್ಲ.
ನಕ್ಷತ್ರಪ್ರಾಯನೊಬ್ಬನು
ಉದಯಿಸಿದ್ದಾನೆ ಯಕೋಬವಂಶದಲ್ಲಿ
ರಾಜದಂಡ ಹಿಡಿದವನು
ಕಂಡು ಬಂದಿದ್ದಾನೆ ಇಸ್ರಯೇಲರಲ್ಲಿ.
ಆತ ಸೀಳಿಹಾಕಿದ್ದಾನೆ
ಮೊವಾಬ್ಯರ ತಲೆಯನ್ನು;
ಕೆಡವಿಬಿಟ್ಟಿದ್ದಾನೆ ಯುದ್ಧವೀರರೆಲ್ಲರನ್ನು.
18 ಸ್ವಾಧೀನವಾಗಿಸಿಕೊಂಡಿದ್ದಾನೆ
ಎದೋಮ್ಯರ ನಾಡನ್ನು;
ಆತನಿಗೆ ಅಧೀನರಾದರು
ಹಗೆಗಳಾದ ಸೇಯೇರಿನವರು.

19 ಹೌದು, ಇಸ್ರಯೇಲರು ಬಲವಂತರು
ಯಕೋಬ್ಯರದೇ ದೊರೆತನವಾಯಿತು
ನಗರಗಳಿಂದ ತಲೆತಪ್ಪಿಸಿಕೊಂಡವರೂ
ನಾಶವಾದರು."
20 ಅನಂತರ ಅಮಾಲೇಕ್ಯರನ್ನು ನೋಡಿ ಅವರ ವಿಷಯದಲ್ಲಿ ಹೀಗೆಂದು ನುಡಿದನು:
"ಅಮಾಲೇಕ್ಯರು ಶ್ರೇಷ್ಠರಲ್ಲವೆ ರಾಷ್ಟ್ರಗಳಲ್ಲಿ?
ಆದರೂ ಅವರ ಗತಿ ವಿನಾಶವೇ ಸರಿ."
21 ಬಳಿಕ ಕೇನ್ಯರನ್ನು ನೋಡಿ ಅವರ ವಿಷಯದಲ್ಲಿ ಇಂತೆಂದು ನುಡಿದನು:
"ನಿಮ್ಮ ನಿವಾಸಸ್ಥಳ ಸುರಕ್ಷಿತ
ಬೆಟ್ಟದ ತುತ್ತತುದಿಯಲ್ಲಿ ಗೂಡು
ಕಟ್ಟಿಕೊಂಡಷ್ಟು ಸುರಕ್ಷಿತ.
22 ಆದರೂ ಕೇನ್ಯರು ಕೂಡ ನಾಶವಾಗುವರು.
ಅಶ್ಶೂರ್ಯರು ನಿಮ್ಮನ್ನು
ಸೆರೆ ಹಿಡಿಯಲು ಎಷ್ಟು ಕಾಲತಾನೆ
ಹಿಡಿಯುವುದು?"
23 ಬಿಳಾಮನು ಮುಂದುವರೆದು ನುಡಿದದ್ದು ಏನೆಂದರೆ:
"ಅಯ್ಯೋ, ದೇವರೇ ಹೀಗೆ ಮಾಡುವಾಗ
ಉಳಿಯುವವರಾರು?
24 'ಸೈಪ್ರಸ್' ಎಂಬ ಸ್ಥಳದಿಂದ
ಹಡಗುಗಳಲ್ಲಿ ಬರುವರು ಜನರು
ಸೋಲಿಸುವರವರು ಅಶ್ಶೂರ್ಯರನ್ನೂ
ಏಬೆರ್‍ಜರನ್ನೂ;
ಅವರಿಗೂ ನಾಶವುಂಟಾಗುವುದು."

25 ಇದಾದ ಮೇಲೆ ಬಿಳಾಮನು ಸ್ವಂತ ನಾಡಿಗೆ ಹಿಂದಿರುಗಿದನು. ಬಾಲಾಕನು ತನ್ನ ದಾರಿ ಹಿಡಿದನು.

### ಪೆಗೋರದಲ್ಲಿ ಇಸ್ರಯೇಲರು

**25** ಇಸ್ರಯೇಲರು ಶಿಟ್ಟೀಮಿನಲ್ಲಿ ವಾಸಮಾಡುತ್ತಿದ್ದಾಗ ಮೋವಾಬ್ ಮಹಿಳೆಯರೊಡನೆ ಸಹವಾಸ
ಮಾಡತೊಡಗಿದರು. 2ಆ ಮಹಿಳೆಯರು ತಮ್ಮ ದೇವತೆಗಳಿಗೆ ಮಾಡಿದ ಬಲಿಔತಣಗಳಲ್ಲಿ ಭಾಗಿಗಳಾಗಲು
ಇಸ್ರಯೇಲರನ್ನು ಆಹ್ವಾನಿಸುತ್ತಿದ್ದರು. ಇವರು ಪ್ರಸಾದ ಸ್ವೀಕರಿಸಿ ಆ ದೇವತೆಗಳಿಗೆ ತಲೆಬಾಗುತ್ತಿದ್ದರು. 3ಹೀಗೆ
ಇಸ್ರಯೇಲರು ಪೆಗೋರದ 'ಬಾಳ್' ದೇವತೆಯ ಭಕ್ತರಾದರು. ಇದರಿಂದ ಸರ್ವೇಶ್ವರಸ್ವಾಮಿ
ಕೋಪಗೊಂಡರು. 4ಮೋಶೆಗೆ, "ಈ ಜನರ ಮುಖಂಡರೆಲ್ಲರನ್ನು ಹಿಡಿಸಿ, ನನ್ನ ಆಜ್ಞಾನುಸಾರ
ಬಹಿರಂಗವಾಗಿ ಮರಣದಂಡನೆಗೆ ಗುರಿಮಾಡಿಸು. ಆಗ ನನ್ನ ಕೋಪಾಗ್ನಿ ಇಸ್ರಯೇಲರಿಂದ
ತೊಲಗುವುದು," ಎಂದರು. 5ಅಂತೆಯೇ ಮೋಶೆ ಇಸ್ರಯೇಲರ ನ್ಯಾಯಾಧಿಪತಿಗಳಿಗೆ, "ನಿಮ್ಮಲ್ಲಿ
ಪ್ರತಿಯೊಬ್ಬನು ಪೆಗೋರದ ಬಾಳ್‍ದೇವತೆಗೆ ಪೂಜಿಸುವ ತನ್ನ ತನ್ನ ವಂಶದವರಿಗೆ ಪ್ರಾಣಶಿಕ್ಷೆಯನ್ನು
ವಿಧಿಸಬೇಕು," ಎಂದು ಆಜ್ಞಾಪಿಸಿದನು.

### ಫೀನೆಹಾಸನು

6 ಇಸ್ರಯೇಲರ ಸರ್ವಸಮುದಾಯದವರು ದೇವದರ್ಶನದ ಗುಡಾರದ ಬಾಗಿಲಿನ ಹತ್ತಿರ
ವಿಲಾಪಿಸುತ್ತಿದ್ದರು. ಇಸ್ರಯೇಲನಾದ ಒಬ್ಬ ವ್ಯಕ್ತಿ ಮೋಶೆಗೂ ಸರ್ವಸಮೂಹದವರಿಗೂ ಕಾಣುವಂತೆ ಒಬ್ಬ
ಮಿದ್ಯಾನ್ ಮಹಿಳೆಯನ್ನು ತನ್ನ ಮನೆಯೊಳಗೆ ಕರೆದುಕೊಂಡು ಹೋದನು. 7ಕೂಡಲೆ ಮಹಾ ಯಾಜಕ
ಆರೋನನ ಮೊಮ್ಮಗನೂ ಹಾಗು ಎಲ್ಲಾಜಾರನ ಮಗನೂ ಆದ ಫೀನೆಹಾಸನು ಸಭೆಯ ನಡುವೆಯಿಂದೆದ್ದು
ಈಟಿಯನ್ನು ಕೈಗೆ ತೆಗೆದುಕೊಂಡನು. 8ಆ ಇಸ್ರಯೇಲ ವ್ಯಕ್ತಿಯ ಹಿಂದೆಯೇ ಹೋಗಿ, ಅವನ
ಒಳಕೋಣೆಯನ್ನು ಹೊಕ್ಕು ಅವರಿಬ್ಬರನ್ನು, ಅಂದರೆ ಆ ಇಸ್ರಯೇಲನನ್ನು ಮತ್ತು ಆ ಮಹಿಳೆಯನ್ನು ಒಂದೇ
ಬಾರಿಗೆ ಹೊಟ್ಟೆಯಲ್ಲಿ ತಿವಿದುಕೊಂದನು. ಹೀಗೆ ಇಸ್ರಯೇಲರಿಗೆ ಒದಗಿದ್ದ ಜಾಡ್ಯ ನಿಂತು ಹೋಯಿತು.
9ಇಪ್ಪತ್ತುನಾಲ್ಕು ಸಾವಿರ ಮಂದಿ ಈಗಾಗಲೇ ಈ ಜಾಡ್ಯದಿಂದ ಸತ್ತಿದ್ದರು.

10 ಸರ್ವೇಶ್ವರ ಮೋಶೆಗೆ ಹೀಗೆಂದರು: 11"ಮಹಾಯಾಜಕ ಆರೋನನ ಮೊಮ್ಮಗನೂ ಎಲ್ಲಾಜಾರನ
ಮಗನೂ ಆದ ಫೀನೆಹಾಸನು ಇಸ್ರಯೇಲರ ಮೇಲೆ ನನಗಿದ್ದ ಕೋಪವನ್ನು ತೊಲಗಿಸಿದ್ದಾನೆ. ನನ್ನ ಬಗ್ಗೆ
ಅವನೊಬ್ಬನೆ ಅಭಿಮಾನವನ್ನು ವ್ಯಕ್ತಪಡಿಸಿದ್ದಾನೆ. ನನ್ನ ಗೌರವವನ್ನು ಕಾಪಾಡಿಕೊಳ್ಳಲು ಇನ್ನು
ಇಸ್ರಯೇಲರನ್ನು ನಿರ್ಮೂಲ ಮಾಡಬೇಕಾದ ಅಗತ್ಯವಿಲ್ಲ. 12ಆದ ಕಾರಣ ನಾನು ಅವನ ಸಂಗಡ
ಸಮಾಧಾನದ ಒಪ್ಪಂದವನ್ನು ಮಾಡಿಕೊಳ್ಳುತ್ತೇನೆಂದು ತಿಳಿಸು. 13ಆ ಒಪ್ಪಂದವೇನೆಂದರೆ ಅವನಿಗೂ ಅವನ
ತರುವಾಯ ಅವನ ಸಂತತಿಯವರಿಗೂ ಯಾಜಕತ್ವವು ಶಾಶ್ವತವಾಗಿಯೇ ಇರುವುದೆಂದು ವಾಗ್ದಾನ
ಮಾಡುತ್ತೇನೆ. ಅವನು ತನ್ನ ದೇವರ ಗೌರವದ ಬಗ್ಗೆ ಅಭಿಮಾನ ವ್ಯಕ್ತಪಡಿಸಿದ್ದಾನೆ; ಇಸ್ರಯೇಲರ
ದೋಷಕ್ಕಾಗಿ ಪ್ರಾಯಶ್ಚಿತ್ತ ಮಾಡಿದ್ದಾನೆ. ಆದ್ದರಿಂದ ಅವನಿಗೇ ಈ ವಾಗ್ದಾನ ಮಾಡಿದ್ದೇನೆ."

14 ಆ ಮಿದ್ಯಾನ್ ಮಹಿಳೆಯೊಡನೆ ಹತನಾದವನ ಹೆಸರು ಜಿಮ್ರೀ. ಅವನು ಸಿಮೆಯೋನ್
ಕುಲದವರಲ್ಲಿ ಗೋತ್ರ ನಾಯಕನಾದ ಸಾಲೂ ಎಂಬವನ ಮಗ. 15ಹತಳಾದ ಮಿದ್ಯಾನ್ ಮಹಿಳೆಯ ಹೆಸರು
ಕೊಜ್ಜೀ. ಅವಳು ಮಿದ್ಯಾನ್ಯರಲ್ಲಿ ಗೋತ್ರನಾಯಕನಾದ ಚೂರ್ ಎಂಬವನ ಮಗಳು.

16 ಅನಂತರ ಸರ್ವೇಶ್ವರ ಮೋಶೆಗೆ: 17"ನೀನು ದಾಳಿಮಾಡಿ ಮಿದ್ಯಾನ್ಯರನ್ನು ಹಾಳು ಮಾಡು.
18ಅವರು ಪೆಗೋರದಲ್ಲಿ ನಡೆದ ಘಟನೆಗಳಲ್ಲೂ ತಮ್ಮ ನಾಯಕನ ಮಗಳಾದ ಕೊಜ್ಜೀ ಎಂಬ ಸ್ವಕುಲಸ್ತ್ರೀಯ
ವಿಷಯದಲ್ಲೂ ನಿಮ್ಮನ್ನು ಮೋಸಗೊಳಿಸಿದ್ದಾರೆ. ನಿಮಗೆ ಕೇಡು ಮಾಡಿದ್ದಾರೆ," ಎಂದರು. ಆ ಮಹಿಳೆ
ಹತಳಾದುದು ಪೆಗೋರದ ಘಟನೆಗಳ ನಿಮಿತ್ತ ದೊಡ್ಡ ರೋಗ ಬಂದಾಗ.

### ಎರಡನೆಯ ಜನಗಣತಿ

**26** ಆ ದೊಡ್ಡರೋಗ ನಿಂತ ಮೇಲೆ ಸರ್ವೇಶ್ವರಸ್ವಾಮಿ ಮೋಶೆಗೆ ಮತ್ತು ಆರೋನನ ಮಗ
ಎಲ್ಲಾಜಾರನಿಗೆ: 2"ನೀವು ಇಸ್ರಯೇಲ ಸಮಾಜದವರಲ್ಲಿ ಇಪ್ಪತ್ತು ವರ್ಷ ಮತ್ತು ಮೇಲ್ಪಟ್ಟ ವಯಸ್ಸುಳ್ಳವರನ್ನು
ಅಂದರೆ ಸೈನಿಕಸೇವೆಗೆ ಅರ್ಹರಾದವರನ್ನು ಗೋತ್ರ ಗೋತ್ರಗಳ ಪ್ರಕಾರ ಜನಗಣತಿ ಮಾಡಿ," ಎಂದು
ಹೇಳಿದರು. 3ಅಂತೆಯೇ ಮೋಶೆ ಮತ್ತು ಮಹಾಯಾಜಕ ಎಲ್ಲಾಜಾರನು ಜೋರ್ಡನ್ ನದಿಯ ತೀರದಲ್ಲಿ
ಜೆರಿಕೋ ಪಟ್ಟಣದ ಹತ್ತಿರ ಮೋವಾಬ್ಯರ ಮೈದಾನದಲ್ಲಿ ಜನಗಣತಿ ಮಾಡಿದರು. 4ಸರ್ವೇಶ್ವರ ಮೋಶೆಗೂ
ಈಜಿಪ್ಟಿನಿಂದ ಬಂದಿದ್ದ ಇಸ್ರಯೇಲರಿಗೂ ಆಜ್ಞಾಪಿಸಿದ್ದಂತೆ ಇಪ್ಪತ್ತು ವರ್ಷ ಮತ್ತು ಮೇಲ್ಪಟ್ಟ ವಯಸ್ಸಿನ
ಇಸ್ರಯೇಲರನ್ನು ಲೆಕ್ಕಿಸಿದರು: ಅದರ ವಿವರ ಇದು. 5ಯಕೋಬನ ಜೇಷ್ಠ ಪುತ್ರನಾದ ರೂಬೇನನ
ವಂಶಸ್ಥರು ಇವರು: ಹನೋಕನಿಂದ ಹನೋಕ್ಯರು, ಪಲ್ಲೂವಿನಿಂದ ಪಲ್ಲೂವಿನವರು, 6ಹೆಚ್ರೋನನಿಂದ
ಹೆಚ್ರೋನ್ಯರು ಹಾಗು ಕರ್ಮೀಯನಿಂದ ಕರ್ಮೀಯರು. 7ರುಬೇನ್ಯರಾದ ಇವರಲ್ಲಿ ಲೆಕ್ಕಿತರಾದವರ ಸಂಖ್ಯೆ
43,730. 8ಪಲ್ಲೂವಿನ ಮಗ ಎಲೀಯಾಬ್; 9ಎಲೀಯಾಬನ ಮಕ್ಕಳು ಇವರು – ನೆಮೂವೇಲ್, ದಾತಾನ್
ಮತ್ತು ಅಬೀರಾಮ್. ಕೋರಹನ ಪಂಗಡದವರು ಸರ್ವೇಶ್ವರನಿಗೆ ವಿರುದ್ಧ ವಾದಿಸಿದ ಕಾಲದಲ್ಲಿ
ಅವರೊಂದಿಗೆ ಸೇರಿಕೊಂಡು ಮೋಶೆ ಮತ್ತು ಆರೋನರಿಗೆ ವಿರುದ್ಧ ಪ್ರತಿಭಟಿಸಿದ ಆಲೋಚನಾ ಕರ್ತರು
ದಾತಾನ್ ಮತ್ತು ಅಬೀರಾಮ್. 10ಇವರನ್ನು ಹಾಗು ಕೋರಹನನ್ನು ಭೂಮಿ ಬಾಯ್ದೆರೆದು ನುಂಗಿಬಿಟ್ಟಿತು.

ಆ ಪಂಗಡದವರಲ್ಲಿ ಬೇರೆ ಇನ್ನೂರೈವತ್ತು ಮಂದಿಯನ್ನು ಬೆಂಕಿ ಸುಟ್ಟು ಹಾಕಿತು. ಹೀಗೆ ಇಸ್ರಯೇಲರಿಗೆ ಎಚ್ಚರಿಕೆ ಉಂಟಾಗುವಂತೆ ಮಾಡಿತು. [11]ಆ ಪಂಗಡದವರೆಲ್ಲರು ಸತ್ತರು. ಆದರೆ ಕೋರಹನ ಮಕ್ಕಳು ಆ ಕಾಲದಲ್ಲಿ ಸಾಯಲಿಲ್ಲ.

12 ಸಿಮೆಯೋನ್ ಕುಲದ ಕುಟುಂಬಗಳು ಇವು: ನೆಮೂವೇಲನಿಂದ ನೆಮೂವೇಲ್ಯರು, ಯಾಮಿೂನನಿಂದ ಯಾಮಿೂನ್ಯರು, ಯಾಕೀನನಿಂದ ಯಾಕೀನ್ಯರು, [13]ಜೆರಹನಿಂದ ಜೆರಹಿಯರು, ಸೌಲನಿಂದ ಸೌಲ್ಯರು ಎಂಬ ವಂಶಸ್ಥರು. [14]ಸಿಮೆಯೋನ್ ಕುಲದವರಾದ ಇವರಲ್ಲಿ ಲೆಕ್ಕಿತರಾದವರ ಸಂಖ್ಯೆ 22,200.

15 ಗಾದ್ ಕುಲದ ಕುಟುಂಬಗಳು ಇವು: ಚೆಫೋನನಿಂದ ಚೆಫೋನ್ಯರು, ಹಗ್ಗೀಯನಿಂದ ಹಗ್ಗೀಯರು, ಶೂನೀಯನಿಂದ ಶೂನೀಯರು, [16]ಒಜ್ನೀಯನಿಂದ ಒಜ್ನೀಯರು, ಏರೀಯನಿಂದ ಏರೀಯರು, [17]ಆರೋದನಿಂದ ಆರೋದ್ಯರು, ಅರೇಲೀಯನಿಂದ ಅರೇಲಿಯರು ಎಂಬ ವಂಶಸ್ಥರು. [18]ಗಾದ್ ಕುಲದವರಾದ ಇವರಲ್ಲಿ ಲೆಕ್ಕಿತರಾದವರ ಸಂಖ್ಯೆ: 40,500.

19 ಯೆಹೂದನ ಮಕ್ಕಳಲ್ಲಿ ಏರ್, ಓನಾನ್ಯರು ಕಾನಾನ ನಾಡಿನಲ್ಲಿ ಸತ್ತರು.

20 ಯೆಹೂದ ಕುಲದಲ್ಲಿ ಉಳಿದ ಕುಟುಂಬಗಳು ಇವು – ಶೆಲಹನಿಂದ ಶೇಲಾನ್ಯರು, ಪೆರೆಚನಿಂದ ಪೆರೆಚ್ಯರು, ಹಾಗು ಜೆರಹನಿಂದ ಜೆರಹಿಯರು. [21]ಪೆರೆಚನಿಂದ ಬೆಳೆದ ಕುಟುಂಬಗಳು – ಹೆಚ್ರೋನನಿಂದ ಹೆಚ್ರೋನ್ಯರು ಮತ್ತು ಹಾಮೂಲನಿಂದ ಹಾಮೂಲ್ಯರು ಎಂಬ ವಂಶಸ್ಥರು. [22]ಯೆಹೂದ ಕುಲದವರಾದ ಇವರಲ್ಲಿ ಲೆಕ್ಕಿತರಾದವರ ಸಂಖ್ಯೆ : 76,500.

23 ಇಸ್ಸಾಕಾರ್ ಕುಲದ ಕುಟುಂಬಗಳು ಯಾವುವೆಂದರೆ – ತೋಲನಿಂದ ತೋಲಾಯರು, ಪುವ್ವನನಿಂದ ಪೂನ್ಯರು, [24]ಯಾಶೂಬನಿಂದ ಯಾಶೂಬ್ಯರು ಮತ್ತು ಶಿಮ್ರೋನನಿಂದ ಶಿಮ್ರೋನ್ಯರು ಎಂಬ ವಂಶಸ್ಥರು. [25]ಇಸ್ಸಾಕಾರ್ ಕುಲದವರಾದ ಇವರಲ್ಲಿ ಲೆಕ್ಕಿತರಾದವರ ಸಂಖ್ಯೆ: 64,300.

26 ಜೆಬುಲೂನ್ ಕುಲದ ಕುಟುಂಬಗಳು ಇವು – ಸೆರೆದನಿಂದ ಸೆರೆದ್ಯರು, ಏಲೋನನಿಂದ ಏಲೋನ್ಯರು ಮತ್ತು ಯಹಲೇಲನಿಂದ ಯಹಲೇಲ್ಯರು. [27]ಜೆಬುಲೂನ್ ಕುಲದವರಾದ ಇವರಲ್ಲಿ ಲೆಕ್ಕಿತರಾದವರ ಸಂಖ್ಯೆ: 60,500.

28 ಜೋಸೆಫನ ಮಕ್ಕಳು ಮನಸ್ಸೆ ಮತ್ತು ಎಫ್ರಯಿಮ್. [29]ಮನಸ್ಸೆ ಕುಲದ ಕುಟುಂಬಗಳು ಯಾವುವೆಂದರೆ – ಮಾಕೀರನಿಂದ ಮಾಕೀರ್ಯರು ಮತ್ತು ಮಾಕೀರನ ಮಗ ಗಿಲ್ಯಾದನಿಂದ ಗಿಲ್ಯಾದ್ಯರು ಎಂಬ ವಂಶಸ್ಥರು. [30]ಗಿಲ್ಯಾದನ ವಂಶದವರು ಇವರು: ಈಯೆಜೆರನಿಂದ ಈಯೆಜೆರ್ಯರು, ಹೇಲಿಕನಿಂದ ಹೇಲಿಕ್ಯರು, [31]ಅಸ್ರೀಯೇಲನಿಂದ ಅಸ್ರೀಯೇಲ್ಯರು, ಶೆಕೆಮನಿಂದ ಶೆಕೆಮ್ಯರು [32]ಶೆಮಿೂದಾಯನಿಂದ ಶೆಮಿೂದಾಯರು ಮತ್ತು ಹೇಫೆರನಿಂದ ಹೇಫೆರ್ಯರು ಎಂಬ ವಂಶಸ್ಥರು.

33 ಹೇಫೆಕನ ಮಗ ಚಲ್ಪಹಾದನಿಗೆ ಹೆಣ್ಣು ಮಕ್ಕಳು ಹುಟ್ಟಿದರೇ ಹೊರತು ಗಂಡು ಮಕ್ಕಳು ಹುಟ್ಟಲಿಲ್ಲ. ಅವನ ಹೆಣ್ಣು ಮಕ್ಕಳ ಹೆಸರು ಮಹ್ಲಾ, ನೋವಾ, ಹೊಗ್ಲಾ, ಮಿಲ್ಕಾ ಮತ್ತು ತಿರ್ಚಾ. [34]ಮನಸ್ಸೆ ಕುಲದವರಲ್ಲಿ ಲೆಕ್ಕಿತರಾದವರ ಸಂಖ್ಯೆ: 52,700.

35 ಎಫ್ರಯಿಮ್ ಕುಲದ ಕುಟುಂಬಗಳು ಇವು – ಶೂತೆಲಹನಿಂದ ಶೂತೆಲಹ್ಯರು, ಬೆಕೆರನಿಂದ ಬೆಕೆರ್ಯರು, ತಹನನಿಂದ ತಹನಿಯರು. [36]ಶೂತೆಲಹನ ಮಗ ಏರಾನನಿಂದ ಏರಾನ್ಯರು ಎಂಬ ವಂಶಸ್ಥರು. ಎಫ್ರಯಿಮ್ ಕುಲದವರಾದ [37]ಇವರಲ್ಲಿ ಲೆಕ್ಕಿತರಾದವರ ಸಂಖ್ಯೆ: 32,500. ಇದೇ ಜೋಸೆಫ್ ವಂಶದ ಕುಟುಂಬಗಳ ವಿವರ.

38 ಬೆನ್ಯಾಮಿೂನ್ ಕುಲದ ಕುಟುಂಬಗಳ ಹೆಸರು ಹೀಗಿದೆ – ಬೆಲಗನಿಂದ ಬೆಲಗ್ಯರು, ಅಷ್ಬೇಲನಿಂದ ಅಷ್ಬೇಲ್ಯರು, ಅಹೀರಾಮನಿಂದ ಅಹೀರಾಮ್ಯರು [39]ಶೂಫಾಮನಿಂದ ಶೂಫಾಮ್ಯರು, ಹೂಫಾಮನಿಂದ ಹೂಫಾಮ್ಯರು ಎಂಬ ವಂಶಸ್ಥರು. [40]ಬೆಲಗನಿಗೆ ಅರ್ದ್ ಮತ್ತು ನಾಮಾನ್ ಎಂಬ ಇಬ್ಬರು ಮಕ್ಕಳಿದ್ದರು. ಅರ್ದನಿಂದ ಅರ್ದ್ಯರು ಮತ್ತು ನಾಮಾನನಿಂದ ನಾಮಾನ್ಯರು ಎಂಬ ವಂಶಸ್ಥರಾದರು. [41]ಬೆನ್ಯಾಮಿನ್ ಕುಲದವರಾದ ಇವರಲ್ಲಿ ಲೆಕ್ಕಿತರಾದವರ ಸಂಖ್ಯೆ : 45,600.

42 ದಾನ್ ಕುಲದ ಕುಟುಂಬಗಳು ಇವು: ಶೂಹಾಮನಿಂದ ಶೂಹಾಮ್ಯರು ಎಂಬ ವಂಶಸ್ಥರಾದರು. [43]ದಾನ್ ಕುಲದವರಲ್ಲಿ ಲೆಕ್ಕಿತರಾದವರ ಸಂಖ್ಯೆ: 64,400.

44 ಆಶೇರ್ ಕುಲದ ಕುಟುಂಬಗಳ ಹೆಸರು ಇವು: ಇಮ್ನಾಹನಿಂದ ಇಮ್ನಾಹ್ಯರು, ಇಷ್ವೀಯ ನಿಂದ ಇಷ್ವೀಯರು ಮತ್ತು ಬೆರೀಯನಿಂದ ಬೆರೀಯ ವಂಶಸ್ಥರು. 45ಬೆರೀಯನ ಮಕ್ಕಳಿಂದ ಉಂಟಾದ ಕುಟುಂಬಗಳು ಇವು – ಹೇಬೆರನಿಂದ ಹೇಬೆರ್ಯರು ಮತ್ತು ಮಲ್ಕಿಯೇಲನಿಂದ ಮಲ್ಕಿಯೇಲ್ಯರು. 46ಆಶೇರನಿಗೆ ಸೆರಹಳೆಂಬ ಮಗಳು ಸಹ ಇದ್ದಳು. 47ಆಶೇರ್ ಕುಲದವರಾದ ಇವರಲ್ಲಿ ಲೆಕ್ಕಿತರಾದವರ ಸಂಖ್ಯೆ : 53,400.

48 ನಫ್ತಾಲಿ ಕುಲದ ಕುಟುಂಬಗಳು ಯಾವುವೆಂದರೆ – ಯಹಚೇಲನಿಂದ ಯಹಚೇಲ್ಯರು, ಗೂನೀಯನಿಂದ ಗೂನೀಯರು, 49ಯೇಚೆರನಿಂದ ಯೇಚೆರ್ಯರು ಮತ್ತು ಶಿಲ್ಲೇಮನಿಂದ ಶಿಲ್ಲೇಮ್ಯರು, 50ನಫ್ತಾಲಿ ಕುಲದವರಾದ ಇವರಲ್ಲಿ ಲೆಕ್ಕಿತರಾದವರ ಸಂಖ್ಯೆ : 45,400.

51 ಇಸ್ರಯೇಲರಲ್ಲಿ ಲೆಕ್ಕಿತರಾದವರ ಒಟ್ಟು ಸಂಖ್ಯೆ : 601,730.

52 ಸರ್ವೇಶ್ವರಸ್ವಾಮಿ ಮೋಶೆಗೆ, 53"ಈ ಕುಲಗಳಿಗೆ ಅವರವರ ಸಂಖ್ಯೆಯ ಪ್ರಕಾರ ಆ ನಾಡನ್ನು ಸ್ವಂತ ನಾಡಾಗಿ ಹಂಚಿಕೊಡು. 54ಹೆಚ್ಚು ಮಂದಿಯುಳ್ಳ ಕುಲಕ್ಕೆ ಹೆಚ್ಚಾಗಿಯೂ ಕಡಿಮೆಯಾದ ಕುಲಕ್ಕೆ ಕಡಿಮೆಯಾಗಿಯೂ ಕೊಡು. ಲೆಕ್ಕಿಸಿದ ಸಂಖ್ಯೆಯ ಪ್ರಕಾರವೇ ಪ್ರತಿ ಒಂದು ಕುಲಕ್ಕೆ ಭೂಮಿಯನ್ನು ಸೊತ್ತಾಗಿಕೊಡು. 55ಪ್ರತಿಯೊಂದು ಕುಲದ ಮೂಲಪುರುಷನ ಹೆಸರನ್ನು ಬರೆದು ಚೀಟು ಹಾಕಿ ಆಯಾ ಕುಲಕ್ಕೆ ಸೊತ್ತನ್ನು ಗೊತ್ತುಮಾಡು. 56ಹೆಚ್ಚು ಮಂದಿಯುಳ್ಳ ಕುಲಕ್ಕಾಗಲಿ, ಕಡಿಮೆ ಮಂದಿಯುಳ್ಳ ಕುಲಕ್ಕಾಗಲಿ ಚೀಟು ಬಂದ ಪ್ರಕಾರವೇ ಸೊತ್ತನ್ನು ಗೊತ್ತು ಮಾಡು.

### ಲೇವಿಯರ ಜನಗಣತಿ

57 ಲೇವಿಯರಲ್ಲಿ ಎಣಿಕೆಯಾದ ಕುಟುಂಬಗಳು ಇವು: ಗೇರ್ಷೋನನಿಂದ ಗೇರ್ಷೋನ್ಯರು, ಕೆಹಾತನಿಂದ ಕೆಹಾತ್ಯರು ಮತ್ತು ಮೆರಾರೀಯನಿಂದ ಮೆರಾರೀಯರು, ಎಂಬ ವಂಶಸ್ಥರು. 58ಲೇವಿ ಕುಲದವರ ಕುಟುಂಬಗಳು ಯಾವುವೆಂದರೆ – ಲಿಬ್ನೀ, ಹೆಬ್ರೋನ್, ಮಹ್ಲೀಯ, ಮೂಷೀಯ ಮತ್ತು ಕೋರಹಿಯ ಎಂಬ ಕುಟುಂಬಗಳು. 59ಕೆಹಾತನು ಅಮ್ರಾಮನನ್ನು ಪಡೆದನು. ಅಮ್ರಾಮನ ಹೆಂಡತಿ ಈಜಿಪ್ಟ್ ದೇಶದಲ್ಲಿ ಲೇವಿಯಿಂದ ಹುಟ್ಟಿದ ಯೋಕೆಬೆದ ಎಂಬವಳು. ಈಕೆಯಲ್ಲಿ ಅಮ್ರಾಮನಿಂದ ಆರೋನ, ಮೋಶೆ ಮತ್ತು ಅವರ ಅಕ್ಕ ಮಿರ್ಯಾಮಳೂ ಹುಟ್ಟಿದರು. 60ಆರೋನನಿಂದ ನಾದಾಬ್, ಅಬೀಹೂ, ಎಲ್ಲಾಜಾರ್, ಈತಾಮಾರ್ ಎಂಬವರು ಹುಟ್ಟಿದರು. 61ನಾದಾಬ್ ಮತ್ತು ಅಬೀಹೂ ಎಂಬ ಇಬ್ಬರು ಸರ್ವೇಶ್ವರನ ಸನ್ನಿಧಿಯಲ್ಲಿ ಬಹಿಷ್ಕೃತ ಅಗ್ನಿಯಿಂದ ಧೂಪಾರತಿ ಎತ್ತಿದುದರಿಂದ ಸತ್ತು ಹೋದರು. 62ಬೇರೆ ಇಸ್ರಯೇಲರಿಗೆ ಸೊತ್ತು ದೊರಕಿದಂತೆ ಲೇವಿಯರಿಗೆ ದೊರಕದೆ ಹೋದುದರಿಂದ ಅವರು ಇಸ್ರಯೇಲರ ಸಮೇತ ಎಣಿಕೆ ಆಗಲಿಲ್ಲ. ಲೇವಿಯರಲ್ಲಿ ಒಂದು ತಿಂಗಳು ಮತ್ತು ಮೇಲ್ಪಟ್ಟ ವಯಸ್ಸಿನ ಗಂಡಸರನ್ನು ಲೆಕ್ಕ ಹಾಕಿದಾಗ ಅವರ ಸಂಖ್ಯೆ : 23,000 ಇತ್ತು.

63 ಜೋರ್ಡನ್ ನದಿ ತೀರದಲ್ಲಿ, ಜೆರಿಕೋ ಪಟ್ಟಣದ ಹತ್ತಿರವಿದ್ದ ಮೋವಾಬ್ಯರ ಮೈದಾನದಲ್ಲಿ ಮೋಶೆ ಮತ್ತು ಯಾಜಕ ಎಲ್ಲಾಜಾರನು ಇಸ್ರಯೇಲರ ಜನಗಣತಿ ಮಾಡಿದಾಗ ಇದ್ದ ಜನಸಂಖ್ಯೆ ಇದು. 64ಮೋಶೆ ಮತ್ತು ಯಾಜಕ ಆರೋನನು ಸೀನಾಯಿ ಮರುಭೂಮಿಯಲ್ಲಿ ಇಸ್ರಯೇಲರ ಜನಗಣತಿ ಮಾಡಿದಾಗ ಎಣಿಕೆಯಾದವರಲ್ಲಿ ಒಬ್ಬರಾದರೂ ಇವರಲ್ಲಿರಲಿಲ್ಲ. 65ಏಕೆಂದರೆ ನಿಶ್ಚಯವಾಗಿ ಅವರು ಮರುಭೂಮಿಯಲ್ಲೇ ಸಾಯುವರೆಂದು ಸರ್ವೇಶ್ವರಸ್ವಾಮಿ ಹೇಳಿದ್ದರು. ಆದ್ದರಿಂದ ಯೆಫುನ್ನೆಯ ಮಗ ಕಾಲೇಬ್ ಮತ್ತು ನೂನನ ಮಗ ಯೆಹೋಶುವ ಇವರಿಬ್ಬರನ್ನು ಬಿಟ್ಟರೆ ಅವರಲ್ಲಿ ಯಾರೂ ಉಳಿಯಲಿಲ್ಲ.

### ಹೆಣ್ಣುಮಕ್ಕಳು ವಾರಸುದಾರರು

**27** ಜೋಸೆಫನ ಕುಮಾರ ಮನಸ್ಸೆಯ ವಂಶಕ್ಕೆ ಸೇರಿದವನು ಚಲ್ಪಹಾದ ಎಂಬವನು. ಇವನು ಮಾಕೀರನ ಮರಿಮಗ, ಗಿಲ್ಯಾದನ ಮೊಮ್ಮಗ ಹಾಗು ಹೇಫರನ ಮಗ. ಈ ಚಲ್ಪಹಾದನಿಗೆ ಮಹ್ಲಾ, ನೋವಾ, ಹೊಗ್ಲಾ, ಮಿಲ್ಕಾ ಮತ್ತು ತಿರ್ಚಾ ಎಂಬ ಹೆಣ್ಣು ಮಕ್ಕಳಿದ್ದರು. 2ಇವರು ದೇವದರ್ಶನದ ಗುಡಾರದ ಬಾಗಿಲಿನ ಬಳಿಯಿದ್ದ ಮೋಶೆ, ಮಹಾಯಾಜಕ ಎಲ್ಲಾಜಾರ್, ಕುಲಾಧಿಪತಿಗಳು ಹಾಗು ಸರ್ವಸಮೂಹದವರ ಮುಂದೆ

ಬಂದು ತಮ್ಮ ಒಂದು ವಿಜ್ಞಾಪನೆಯನ್ನು ಮುಂದಿಟ್ಟರು: [3]"ನಮ್ಮ ತಂದೆ ಮರುಭೂಮಿಯಲ್ಲಿ ಸತ್ತುಹೋದರು. ಅವರು ಕೋರಹನ ಜತೆ ಸೇರಿ ಸರ್ವೇಶ್ವರನಿಗೆ ವಿರುದ್ಧ ಪ್ರತಿಭಟಿಸಿದವರಲ್ಲ. ಅವರು ಸತ್ತದ್ದು ತಮ್ಮ ಸ್ವಂತ ಪಾಪದ ನಿಮಿತ್ತ. ಅವರಿಗೆ ಗಂಡುಮಕ್ಕಳಿರಲಿಲ್ಲ. [4]ನಮ್ಮ ತಂದೆಗೆ ಗಂಡುಮಗನಿಲ್ಲದ ಮಾತ್ರಕ್ಕೆ ಅವರ ಹೆಸರನ್ನು ಕುಲದಿಂದ ತೆಗೆದುಹಾಕುವುದು ನ್ಯಾಯವೇ? ನಮ್ಮ ತಂದೆಯ ಸ್ವಂತದವರಲ್ಲಿ ನಮಗೂ ಸೊತ್ತನ್ನು ಕೊಡಿ," ಎಂದು ಕೇಳಿಕೊಂಡರು.

5 ಮೋಶೆ ಅವರ ವಿಜ್ಞಾಪನೆಯನ್ನು ಸರ್ವೇಶ್ವರನ ಸಮ್ಮುಖದಲ್ಲಿ ವಿಚಾರಿಸಿದನು. ಅವರು ಆತನಿಗೆ ಹೀಗೆಂದು ವಿಧಿಸಿದರು: [6]"ಚಲ್ಪಹಾದನ ಹೆಣ್ಣುಮಕ್ಕಳು ಹೇಳುವುದು ನ್ಯಾಯವಾಗಿದೆ. [7]ಅವರ ತಂದೆಯ ಸ್ವಂತದವರಲ್ಲಿ ಅವರಿಗೂ ಸೊತ್ತನ್ನು ಕೊಡು. ತಂದೆಯ ಸೊತ್ತು ಅವರಿಗೆ ಸೇರಲಿ. [8]ಇದಲ್ಲದೆ ಇಸ್ರಯೇಲರಿಗೆ ನೀನು ಹೀಗೆಂದು ಆಜ್ಞಾಪಿಸು: ಯಾವನಾದರು ಮಗನಿಲ್ಲದೆ ಸತ್ತರೆ ಅವನ ಸೊತ್ತು ಅವನ ಮಗಳಿಗೆ ಸೇರಬೇಕು. [9]ಮಗಳು ಇಲ್ಲದ ಪಕ್ಷಕ್ಕೆ ಅವನ ಸೊತ್ತು ಅವನ ಅಣ್ಣತಮ್ಮಂದಿರಿಗೆ ಸೇರಬೇಕು. [10]ಅಣ್ಣತಮ್ಮಂದಿರಿಲ್ಲದ ಪಕ್ಷಕ್ಕೆ ತಂದೆಯ ಅಣ್ಣತಮ್ಮಂದಿರಿಗೆ ಸೇರಬೇಕು. [11]ಇವರೂ ಇಲ್ಲದಿದ್ದರೆ ಕುಲದವರಲ್ಲಿ ಸಮೀಪ ಬಂಧುವಿಗೆ ಸೇರಬೇಕು; ಇವನೇ ಅದನ್ನು ಅನುಭೋಗಿಸಲಿ. ಸರ್ವೇಶ್ವರನಾದ ನಾನು ನಿನಗೆ ಅಪ್ಪಣೆಮಾಡಿದ ಈ ತೀರ್ಮಾನವು ಇಸ್ರಯೇಲರಿಗೆ ನ್ಯಾಯವಿಧಿಯಾಗಿರಲಿ."

## ಮೋಶೆಯ ತರುವಾಯ ಯೆಹೋಶುವ ನಾಯಕ

(ಧರ್ಮೋ. 31.1–8)

12 ಸರ್ವೇಶ್ವರ ಮೋಶೆಗೆ ಹೀಗೆಂದರು: "ನೀನು ಈ ಅಬಾರೀಮ್ ಬೆಟ್ಟವನ್ನು ಹತ್ತಿ ಇಸ್ರಯೇಲರಿಗೆ ನಾನು ವಾಗ್ದಾನ ಮಾಡಿದ ನಾಡನ್ನು ನೋಡು. [13]ನೋಡಿದ ಮೇಲೆ ನಿನ್ನ ಅಣ್ಣ ಆರೋನನು ಮರಣ ಹೊಂದಿ ಪಿತೃಗಳ ಬಳಿಗೆ ಸೇರಿದಂತೆ ನೀನು ಕೂಡ ಸೇರಬೇಕು. [14]ಚಿನ್ ಮರುಭೂಮಿಯಲ್ಲಿ ಇಸ್ರಯೇಲ್ ಸಮಾಜದವರು ನನ್ನೊಡನೆ ವಿವಾದಿಸಿದರು. ಆಗ ನೀವಿಬ್ಬರೂ ನನ್ನ ಗೌರವವನ್ನು ಅವರ ಮುಂದೆ ಕಾಪಾಡದೆ ಹೋದಿರಿ; ನನ್ನ ಆಜ್ಞೆಯನ್ನು ಉಲ್ಲಂಘಿಸಿದಿರಿ. ಆದ್ದರಿಂದ ನೀವು ಆ ನಾಡನ್ನು ಸೇರಬಾರದು." ಚಿನ್ ಮರುಭೂಮಿಯಲ್ಲಿನ ಕಾದೇಶಿನಲ್ಲಿರುವ ಮೆರಿಬಾ ಜಲಾಶಯದ ಬಳಿ ನಡೆದ ಘಟನೆಯನ್ನು ಸೂಚಿಸುತ್ತಾ ಇದನ್ನು ನುಡಿದರು.

15 ಆಗ ಮೋಶೆ ಸರ್ವೇಶ್ವರನಿಗೆ: [16]"ಸರ್ವೇಶ್ವರಾ, ಎಲ್ಲ ಪ್ರಾಣಿಗಳಿಗೆ ಜೀವದಾತ ದೇವರೇ, ನಿಮ್ಮವರಾದ ಈ ಸಮಾಜದವರು ಕುರುಬನಿಲ್ಲದ ಕುರಿಗಳಾಗಬಾರದು. [17]ಆದುದರಿಂದ ಅವರ ಕೆಲಸಕಾರ್ಯಗಳನ್ನು ನಿರ್ವಹಿಸುವುದಕ್ಕೂ ಅವರನ್ನು ಮುನ್ನಡೆಸುವುದಕ್ಕೂ ಹಿಂದಕ್ಕೆ ಕರೆದುತರುವುದಕ್ಕೂ ಒಬ್ಬ ನಾಯಕನನ್ನು ನೇಮಿಸಿ," ಎಂದು ಮನವಿಮಾಡಿಕೊಂಡನು.

18 ಅದಕ್ಕೆ ಸರ್ವೇಶ್ವರ, "ನೂನನ ಮಗ ಯೆಹೋಶುವನು ಆತ್ಮ ವರಸಂಪನ್ನನು. [19]ಅವನನ್ನು ಮಹಾಯಾಜಕನಾದ ಎಲ್ಲಾಜಾರನ ಮುಂದೆ ಹಾಗು ಸಮಾಜದವರೆಲ್ಲರ ಮುಂದೆ ನಿಲ್ಲಿಸು; ಅವನ ಮೇಲೆ ಹಸ್ತನಿಕ್ಷೇಪಮಾಡಿ ಅವರ ಸಮ್ಮುಖದಲ್ಲೆ ಅಧಿಕಾರ ವಹಿಸಿಕೊಡು. [20]ಸಮಾಜದವರೆಲ್ಲರು ಅವನಿಗೆ ವಿಧೇಯರಾಗಿ ಇರುವಂತೆ ನಿನಗಿರುವ ಗೌರವವನ್ನು ಅವನಿಗೆ ಕೊಡು. [21]ದೈವೇಚ್ಛೆಯನ್ನು ತಿಳಿದುಕೊಳ್ಳಲು ಅವನು ಮಹಾಯಾಜಕ ಎಲ್ಲಾಜಾರನ ಹತ್ತಿರ ಬರಬೇಕು. ಎಲ್ಲಾಜಾರನು ಸರ್ವೇಶ್ವರನ ಸನ್ನಿಧಿಯಲ್ಲಿ 'ಊರಿಮ್' ಎಂಬ ವಸ್ತುವಿನ ಮೂಲಕ ಅವನ ಪರವಾಗಿ ವಿಚಾರಿಸುವನು. ಯೆಹೋಶುವನು ಮತ್ತು ಇಸ್ರಯೇಲ್ ಸಮಾಜದವರೆಲ್ಲರು ಅವನ ಮಾತಿನಂತೆ ಹೊರಡಬೇಕು ಹಾಗು ಹಿಂದಿರುಗಬೇಕು," ಎಂದು ಆಜ್ಞಾಪಿಸಿದರು. [22]ಸರ್ವೇಶ್ವರನ ಅಪ್ಪಣೆಯ ಮೇರೆಗೆ ಮೋಶೆ ಯೆಹೋಶುವನನ್ನು ಮಹಾಯಾಜಕ ಎಲ್ಲಾಜಾರನ ಮತ್ತು ಸಮಾಜದವರೆಲ್ಲರ ಮುಂದೆ ನಿಲ್ಲಿಸಿ [23]ಅವನ ಮೇಲೆ ಹಸ್ತನಿಕ್ಷೇಪ ಮಾಡಿ ಅವನಿಗೆ ಅಧಿಕಾರವನ್ನು ವಹಿಸಿಕೊಟ್ಟನು.

## ಕ್ರಮಬದ್ಧ ಬಲಿಯರ್ಪಣೆಗಳು
(ವಿಮೋ. 29.38-46)

**28** ಸರ್ವೇಶ್ವರಸ್ವಾಮಿ ಮೋಶೆಗೆ ಹೇಳಿದ್ದೇನೆಂದರೆ: [2]"ನನಗೆ ಸಮರ್ಪಿಸಬೇಕಾದ ಬಲಿಗಳನ್ನು, ಅಂದರೆ ದಹನಬಲಿಗಾಗಿ ಇಸ್ರಯೇಲರು ನನಗೆ ತರುವ ಆಹಾರವನ್ನು ತಕ್ಕಕಾಲದಲ್ಲಿ ತಂದು ಎಚ್ಚರಿಕೆಯಿಂದ ಸಮರ್ಪಿಸಬೇಕೆಂದು ವಿಧಿಸು. [3]ಆ ವಿಷಯದಲ್ಲಿ ನೀನು ಅವರಿಗೆ ಹೀಗೆಂದು ಅಪ್ಪಣೆಮಾಡು:

### ದೈನಿಕ ಬಲಿ

4 'ಪ್ರತಿದಿನ ನೀವು ಸರ್ವೇಶ್ವರನಿಗೆ ದಹನ ಬಲಿಗಾಗಿ ಬೆಳಿಗ್ಗೆ ಒಂದು ಕುರಿ, ಸಂಜೆ ಒಂದು ಕುರಿ ಹೀಗೆ ಎರಡು ಕಳಂಕರಹಿತವಾದ ಒಂದು ವರ್ಷದ ಕುರಿಗಳನ್ನು ಸಮರ್ಪಿಸಬೇಕು. [5]ಬೆಳಿಗ್ಗೆ ಆ ಕುರಿಯೊಂದಿಗೆ ಧಾನ್ಯ ನೈವೇದ್ಯಕ್ಕಾಗಿ ಒಂದುವರೆ ಸೇರು ಶ್ರೇಷ್ಠವಾದ ಎಣ್ಣೆಯನ್ನು ಮತ್ತು ಮೂರು ಸೇರು ಗೋದಿಹಿಟ್ಟನ್ನು ಬೆರೆಸಿ ಸಮರ್ಪಿಸಬೇಕು. [6]ನೀವು ಪ್ರತಿನಿತ್ಯವು ಸರ್ವೇಶ್ವರನಿಗೆ ಸುಗಂಧಕರವಾದ ಈ ದಹನಬಲಿಯನ್ನು ಮಾಡಬೇಕೆಂದು ಸೀನಾಯಿ ಬೆಟ್ಟದಲ್ಲೇ ನೇಮಕವಾಯಿತು. [7]ಆ ಕುರಿಯೊಂದಿಗೆ ಪಾನದ್ರವ್ಯಾರ್ಪಣೆಗಾಗಿ ಒಂದುವರೆ ಸೇರು ಮದ್ಯವನ್ನು ಪವಿತ್ರಸ್ಥಾನದಲ್ಲಿ ಪೀಠದ ಮೇಲೆ ಸುರಿಯಬೇಕು. [8]ಸಂಜೆ ಎರಡನೇ ಕುರಿಯನ್ನು ದಹನಬಲಿ ಕೊಡುವಾಗ ಬೆಳಿಗ್ಗೆ ಮಾಡಿದಂತೆಯೇ ಅದರೊಂದಿಗೆ ಧಾನ್ಯ ಹಾಗು ಪಾನದ್ರವ್ಯಗಳನ್ನು ಸಮರ್ಪಿಸಬೇಕು.

### ವಿಶ್ರಾಂತಿ ದಿನದ ಬಲಿ

9 'ಪ್ರತಿದಿನ ಅರ್ಪಿಸಬೇಕಾದ ದಹನಬಲಿ ಹಾಗು ಅದಕ್ಕೆ ಸಂಬಂಧಿಸಿದ ಪಾನದ್ರವ್ಯ ಇವುಗಳ ಜೊತೆಗೆ [10]ನೀವು ಸಬ್ಬತ್ ದಿನದಂದು ಹೆಚ್ಚಾಗಿ ಎರಡು ಕಳಂಕರಹಿತವಾದ ವರ್ಷದ ಕುರಿಗಳನ್ನು ಮತ್ತು ಧಾನ್ಯನೈವೇದ್ಯಕ್ಕಾಗಿ ಎಣ್ಣೆಬೆರೆಸಿದ ಆರು ಸೇರು ಗೋದಿಹಿಟ್ಟನ್ನು ಅದಕ್ಕೆ ತಕ್ಕ ಪಾನದ್ರವ್ಯವನ್ನೂ ಸಮರ್ಪಿಸಬೇಕು.

### ಅಮಾವಾಸ್ಯೆ ದಿನದ ಬಲಿ

11 'ಅಮಾವಾಸ್ಯೆಯಲ್ಲಿ ದಹನಬಲಿಗಾಗಿ ಕಳಂಕರಹಿತವಾದ ಟಗರು, ವರ್ಷದ ಎರಡು ಹೋರಿ, ಒಂದು ಟಗರು, ವರ್ಷದ ಏಳು ಕುರಿಗಳು – ಇವುಗಳನ್ನು ಸರ್ವೇಶ್ವರನಿಗೆ ಸಮರ್ಪಿಸಬೇಕು. [12]ಇವುಗಳ ಜೊತೆಗೆ ಧಾನ್ಯನೈವೇದ್ಯಕ್ಕಾಗಿ ಪ್ರತಿಯೊಂದು ಹೋರಿಗೆ ಒಂಬತ್ತು ಸೇರು, ಟಗರಿಗೆ ಆರು ಸೇರು, [13]ಕುರಿಯೊಂದಕ್ಕೆ ಮೂರು ಸೇರು – ಈ ಮೇರೆಗೆ ಎಣ್ಣೆಬೆರೆಸಿದ ಗೋದಿಹಿಟ್ಟನ್ನು ಸಮರ್ಪಿಸಬೇಕು. ಇದು ಸರ್ವೇಶ್ವರನಿಗೆ ಸುಗಂಧಕರವಾದ ದಹನಬಲಿಯಾಗುವುದು. [14]ಇವುಗಳಿಗೆ ತಕ್ಕ ಪಾನಾರ್ಪಣೆ ಯಾವುವೆಂದರೆ – ಒಂದೊಂದು ಹೋರಿಯೊಡನೆ ಮೂರು ಸೇರು, ಟಗರಿನೊಡನೆ ಎರಡು ಸೇರು, ಕುರಿಯೊಡನೆ ಒಂದು ಸೇರು ದ್ರಾಕ್ಷಾರಸ. ವರ್ಷದ ಪ್ರತಿ ಅಮಾವಾಸ್ಯೆಯಲ್ಲಿ ಹೀಗೆ ದಹನಬಲಿಯನ್ನು ಕೊಡಬೇಕು. [15]ಅಮಾವಾಸ್ಯೆಯಲ್ಲಿ ದಹನಬಲಿಯನ್ನೂ ಅದಕ್ಕೆ ಸಂಬಂಧಿಸಿದ ಪಾನದ್ರವ್ಯವನ್ನೂ ಅರ್ಪಿಸುವುದಲ್ಲದೆ ಪಾಪಪರಿಹಾರಕ ಬಲಿಗಾಗಿ ಒಂದು ಹೋತವನ್ನು ಸರ್ವೇಶ್ವರನಿಗೆ ಹೆಚ್ಚಾಗಿ ಸಮರ್ಪಿಸಬೇಕು.

### ಪಾಸ್ಕಹಬ್ಬದ ಬಲಿ
(ಯಾಜ. 23.5-4)

16 'ಮೊದಲನೆಯ ತಿಂಗಳಿನ ಹದಿನಾಲ್ಕನೆಯ ದಿನದಂದು ಸರ್ವೇಶ್ವರಸ್ವಾಮಿ ನೇಮಿಸಿದ ಪಾಸ್ಕಹಬ್ಬವಾಗಬೇಕು. [17]ಅದೇ ತಿಂಗಳ ಹದಿನೈದನೆಯ ದಿನದಲ್ಲಿ ಜಾತ್ರೆ ಆರಂಭವಾಗಬೇಕು. ಏಳು ದಿನಗಳವರೆಗೂ ಹುಳಿಯಿಲ್ಲದ ರೊಟ್ಟಿಗಳನ್ನು ಊಟಮಾಡಬೇಕು. [18]ಮೊದಲನೆಯ ದಿನ ದೇವಾರಾಧನೆಗಾಗಿ

ಸಭೆಸೇರಬೇಕು. ಆ ದಿನ ಯಾವ ದುಡಿಮೆಯನ್ನೂ ಮಾಡಬಾರದು. [19]ಸರ್ವೇಶ್ವರನಿಗೆ ದಹನಬಲಿಗಾಗಿ ಎರಡು ಹೋರಿಗಳನ್ನೂ ಒಂದು ಟಗರನ್ನೂ ಹಾಗು ವರ್ಷದ ಏಳು ಕುರಿಗಳನ್ನೂ ಸಮರ್ಪಿಸಬೇಕು. ಈ ಪ್ರಾಣಿಗಳು ಕಳಂಕರಹಿತವಾಗಿರಬೇಕು. [20]ಇವುಗಳ ಜೊತೆಗೆ ಧಾನ್ಯನೈವೇದ್ಯಕ್ಕಾಗಿ ಎಣ್ಣೆಬೆರೆಸಿದ ಗೋದಿಹಿಟ್ಟನ್ನು ತಂದುಕೊಡಬೇಕು. ಹೋರಿಗೆ ಒಂಬತ್ತು ಸೇರು, ಟಗರಿಗೆ ಆರು ಸೇರು [21]ಒಂದೊಂದು ಕುರಿಗೆ ಮೂರು ಸೇರು ಹೀಗೆ ತಂದುಕೊಡಬೇಕು. [22]ಇದಲ್ಲದೆ ಪಾಪ ಪರಿಹಾರಕ ಬಲಿಗಾಗಿ ಒಂದು ಹೋತವನ್ನು ಸಮರ್ಪಿಸಬೇಕು. [23]ನಿತ್ಯಗಟ್ಟಲೆಯಾಗಿ ಪ್ರತಿದಿನ ಬೆಳಿಗ್ಗೆ ಒಪ್ಪಿಸಲಾಗುವ ದಹನಬಲಿಯ ಜೊತೆಗೆ ಇವುಗಳನ್ನು ಸೇರಿಸಿ ಸಮರ್ಪಿಸಬೇಕು. [24]ಆ ಏಳು ದಿನಗಳಲ್ಲೂ ದೈನಿಕ ದಹನಬಲಿಯನ್ನು ಮತ್ತು ಅದಕ್ಕೆ ಸೇರಿದ ಪಾನಾರ್ಪಣೆಯನ್ನು ಒಪ್ಪಿಸಬೇಕಲ್ಲದೆ ಮೇಲೆ ಹೇಳಿದ ಕ್ರಮದ ಮೇರೆಗೆ ಪ್ರತಿದಿನವೂ ದಹನಬಲಿ ರೂಪವಾಗಿ ಸರ್ವೇಶ್ವರನಿಗೆ ಅನ್ನಾರ್ಪಣೆ ಮಾಡಿ ಅವರಿಗೆ ಸುಗಂಧ ಸುವಾಸನೆಯನ್ನು ಉಂಟುಮಾಡಬೇಕು. [25]ಏಳನೆಯ ದಿನದಲ್ಲೂ ಸಭೆ ಕೂಡಬೇಕು. ಆ ದಿನದಂದು ಯಾವ ದುಡಿಮೆಯನ್ನೂ ಮಾಡಬಾರದು.

## ಸುಗ್ಗಿಹಬ್ಬದ ಬಲಿ

(ಯಾಜ. 23.15–22)

26 ‘ಪಾಸ್ಕವಾದ ಏಳು ವಾರಗಳ ಮೇಲೆ ನೀವು ಹೊಸ ಬೆಳೆಯ ಗೋದಿಯನ್ನು ನೈವೇದ್ಯ ಮಾಡಬೇಕು. ಆ ಪ್ರಥಮ ಫಲಾರ್ಪಣೆಯ ದಿನ ನೀವು ಯಾವ ದುಡಿಮೆಯನ್ನೂ ಮಾಡದೆ ದೇವಾರಾಧನೆಗಾಗಿ ಸಭೆಸೇರಬೇಕು. [27]ಆ ದಿನ ಸರ್ವೇಶ್ವರನಿಗೆ ಸುಗಂಧ ಸುವಾಸನೆಯುಂಟು ಮಾಡುವುದಕ್ಕಾಗಿ ಎರಡು ಹೋರಿ, ಒಂದು ಟಗರು, ಹಾಗು ವರ್ಷದ ಏಳು ಕುರಿ ಇವುಗಳನ್ನು, [28]ಹಾಗು ಧಾನ್ಯನೈವೇದ್ಯಕ್ಕಾಗಿ ಎಣ್ಣೆ ಬೆರೆಸಿದ ಗೋದಿಹಿಟ್ಟನ್ನು ಅಂದರೆ, ಪ್ರತಿಯೊಂದು ಹೋರಿಗೆ ಒಂಬತ್ತು ಸೇರು, [29]ಟಗರಿಗೆ ಆರು ಸೇರು, ಕುರಿಗೆ ಮೂರು ಸೇರು ಹಿಟ್ಟನ್ನು; [30]ಮತ್ತು ಪಾಪಪರಿಹಾರಕ ಬಲಿಗಾಗಿ ಒಂದು ಹೋತವನ್ನು ಸಮರ್ಪಿಸಬೇಕು. [31]ಈ ಪ್ರಾಣಿಗಳೆಲ್ಲಾ ಕಳಂಕ ರಹಿತವಾಗಿರಬೇಕು. ದೈನಿಕ ದಹನಬಲಿ ಮತ್ತು ಅದಕ್ಕೆ ಸೇರಿದ ಧಾನ್ಯನೈವೇದ್ಯ ಇವುಗಳ ಜೊತೆಗೆ ಮೇಲೆ ಹೇಳಿದ ಬಲಿಗಳನ್ನೂ ಅವುಗಳೊಡನೆ ಕೊಡಬೇಕಾದ ಪಾನಾರ್ಪಣೆಗಳನ್ನೂ ಸೇರಿಸಿ ಸಮರ್ಪಿಸಬೇಕು.

## ಹೊಸವರ್ಷದ ಬಲಿಯರ್ಪಣೆ

(ಯಾಜ. 23.23–25)

**29** ‘ಏಳನೆಯ ತಿಂಗಳಿನ ಮೊದಲನೆಯ ದಿನ ನೀವು ಯಾವ ದುಡಿಮೆಯನ್ನೂ ಮಾಡದೆ ದೇವಾರಾಧನೆಗಾಗಿ ಸಭೆ ಸೇರಬೇಕು. ಅದು ನಿಮಗೆ ಕೊಂಬೂದುವ ದಿನ. [2]ಅಂದು ನೀವು ಸರ್ವೇಶ್ವರನಿಗೇ ಸುಗಂಧಕರವಾದ ದಹನಬಲಿಗಾಗಿ ಕಳಂಕರಹಿತವಾದ ಒಂದು ಹೋರಿ, ಒಂದು ಟಗರು ಮತ್ತು ವರ್ಷದ ಏಳು ಕುರಿಗಳನ್ನು ಹಾಗು [3]ಧಾನ್ಯನೈವೇದ್ಯಕ್ಕಾಗಿ ಆ ಒಂದು ಹೋರಿಗೆ ಒಂಬತ್ತು ಸೇರು [4]ಟಗರಿಗೆ ಆರು ಸೇರು, ಒಂದೊಂದು ಕುರಿಗೆ ಮೂರು ಸೇರು ಹೀಗೆ ಎಣ್ಣೆಬೆರೆಸಿದ ಗೋದಿಹಿಟ್ಟನ್ನು ಮತ್ತು [5]ಪಾಪಪರಿಹಾರಕಬಲಿಗಾಗಿ ಒಂದು ಹೋತವನ್ನು ಸಮರ್ಪಿಸಬೇಕು. [6]ಅಮಾವಾಸ್ಯೆಯಲ್ಲೂ ಪ್ರತಿದಿನವೂ ಸಲ್ಲಿಸುವ ದಹನಬಲಿಗಳ ಹಾಗು ಅವುಗಳಿಗೆ ಸಂಬಂಧಿಸಿದ ಧಾನ್ಯ – ಪಾನ ನೈವೇದ್ಯಗಳ ಜೊತೆಗೆ ಮೇಲೆ ಹೇಳಿದ ಬಲಿಗಳನ್ನು ಕೂಡ ಸಮರ್ಪಿಸಬೇಕು. ಅವು ಸರ್ವೇಶ್ವರನಿಗೆ ಸುಗಂಧಕರವಾದ ದಹನಬಲಿಯಾಗಿರುವುವು.

## ಪಾಪಪರಿಹಾರಕ ದಿನದ ಬಲಿಕಾಣಿಕೆ

(ಯಾಜ. 23.26–32)

7 ‘ಉಪವಾಸ ಆಚರಣೆಯ ಏಳನೆಯ ತಿಂಗಳಿನ ಹತ್ತನೆಯ ದಿನ ನೀವು ಯಾವ ದುಡಿಮೆ ಯನ್ನು ಮಾಡದೆ ದೇವಾರಾಧನೆಗಾಗಿ ಸಭೆ ಕೂಡಬೇಕು. [8]ಸರ್ವೇಶ್ವರನಿಗೆ ಸುಗಂಧಕರವಾದ ದಹನಬಲಿಗಾಗಿ ಕಳಂಕರಹಿತವಾದ ಒಂದು ಹೋರಿ, ಒಂದು ಟಗರು, ವರ್ಷದ ಏಳು ಕುರಿ ಇವುಗಳನ್ನು ಹಾಗು [9]ಧಾನ್ಯನೈವೇದ್ಯಕ್ಕಾಗಿ ಹೋರಿಗೆ ಒಂಬತ್ತು ಸೇರು, [10]ಟಗರಿಗೆ ಆರು ಸೇರು, ಕುರಿಯೊಂದಕ್ಕೆ ಮೂರು ಸೇರು ಈ ಮೇರೆಗೆ ಎಣ್ಣೆ ಬೆರೆಸಿದ ಗೋದಿಹಿಟ್ಟನ್ನು ಮತ್ತು [11]ಪಾಪಪರಿಹಾರಕಬಲಿಗಾಗಿ ಒಂದು ಹೋತವನ್ನು ತಂದು ಸಮರ್ಪಿಸಬೇಕು. ಆ ದಿನಕ್ಕೆ ನೇಮಕವಾದ ಪಾಪಪರಿಹಾರಕಬಲಿ, ದೈನಿಕ ದಹನಬಲಿ ಇದರ ಧಾನ್ಯ – ಪಾನ ದ್ರವ್ಯ ನೈವೇದ್ಯ ಇವುಗಳ ಸಮೇತ ಮೇಲೆ ಹೇಳಿದ ಬಲಿಗಳನ್ನು ಕೂಡ ಸಮರ್ಪಿಸಬೇಕು.

## ಗುಡಾರಹಬ್ಬದ ಬಲಿಕಾಣಿಕೆ

(ಯಾಜ. 23,33–44)

12 ‘ಏಳನೆಯ ತಿಂಗಳಿನ ಹದಿನೈದನೆಯ ದಿನ ದೇವಾರಾಧನೆಗಾಗಿ ಸಭೆ ಕೂಡಬೇಕು. ನೀವು ಆ ದಿನದಂದು ಯಾವ ದುಡಿಮೆಯನ್ನೂ ಮಾಡಕೂಡದು. ಆ ದಿನ ಮೊದಲುಗೊಂಡು ಏಳು ದಿನದವರೆಗೆ ಸರ್ವೇಶ್ವರನಿಗೆ ಹಬ್ಬವನ್ನು ಆಚರಿಸಬೇಕು. [13]ಆ ದಿನದಲ್ಲಿ ದೈನಿಕ ದಹನ ಬಲಿಯನ್ನೂ ಅದಕ್ಕೆ ಸಂಬಂಧಿಸಿದ ಧಾನ್ಯ – ಪಾನ ನೈವೇದ್ಯಗಳನ್ನೂ ಅರ್ಪಿಸಬೇಕು. ಅವುಗಳ ಸುಗಂಧಕರವಾದ ದಹನಬಲಿಗಾಗಿ ಕಳಂಕರಹಿತ ಆದ ಹದಿಮೂರು ಹೋರಿಗಳನ್ನು, ಎರಡು ಟಗರುಗಳನ್ನು, ವರ್ಷದ ಹದಿನಾಲ್ಕು ಕುರಿಗಳನ್ನು ಸಮರ್ಪಿಸಬೇಕು. [14]ಧಾನ್ಯನೈವೇದ್ಯಕ್ಕಾಗಿ ಪ್ರತಿ ಒಂದು ಹೋರಿಗೆ ಒಂಬತ್ತು ಸೇರು, [15]ಟಗರಿಗೆ ಆರು ಸೇರು, ಹಾಗು ಕುರಿಗೆ ಮೂರು ಸೇರು ಹೀಗೆ ಎಣ್ಣೆಬೆರೆಸಿದ ಗೋದಿಹಿಟ್ಟನ್ನು ಒಪ್ಪಿಸಬೇಕು; [16]ಅಂತೆಯೇ ಪಾಪಪರಿಹಾರಕಬಲಿಗಾಗಿ ಒಂದು ಹೋತವನ್ನು ತಂದು ಸಮರ್ಪಿಸಬೇಕು. [17]ಆ ಹಬ್ಬದ ಎರಡನೆಯ ದಿನದಲ್ಲಿ ದೈನಿಕ ದಹನ ಬಲಿಯನ್ನೂ ಅದಕ್ಕೆ ಸಂಬಂಧಿಸಿದ ಧಾನ್ಯ ಹಾಗು ಪಾನಾರ್ಪಣೆಗಳ ಜೊತೆಗೆ ಕಳಂಕರಹಿತವಾದ ಹನ್ನೆರಡು ಹೋರಿ, ಎರಡು ಟಗರು, ವರ್ಷದ ಹದಿನಾಲ್ಕು ಕುರಿಗಳು ಇವುಗಳನ್ನು ಸಮರ್ಪಿಸಬೇಕು. [18]ಆ ಪ್ರಾಣಿಗಳಲ್ಲಿ ಪ್ರತಿಯೊಂದಕ್ಕೆ ಸಂಬಂಧಿಸಿದ ಪ್ರಕಾರ ಧಾನ್ಯ ಹಾಗು ಪಾನಗಳನ್ನು ಒಪ್ಪಿಸಬೇಕು. [19]ಪಾಪಪರಿಹಾರಕ ಬಲಿಗಾಗಿ ಒಂದು ಹೋತವನ್ನು ಕೂಡ ಅರ್ಪಿಸಬೇಕು.

20 ‘ಮೂರನೆಯ ದಿನ, ದೈನಿಕ ದಹನಬಲಿಯನ್ನು, ಅದಕ್ಕೆ ಸಂಬಂಧಿಸಿದ ಧಾನ್ಯ–ಪಾನ ದ್ರವ್ಯಗಳ ಜೊತೆಗೆ ಕಳಂಕರಹಿತವಾದ ಹನ್ನೊಂದು ಹೋರಿ, ಎರಡು ಟಗರು ಹಾಗು ವರ್ಷದ ಹದಿನಾಲ್ಕು ಕುರಿ ಇವುಗಳನ್ನು ಸಮರ್ಪಿಸಬೇಕು. [21]ನೈವೇದ್ಯಕ್ಕಾಗಿ ಆ ಪ್ರಾಣಿಗಳಲ್ಲಿ ಪ್ರತಿಯೊಂದಕ್ಕೆ ಸಂಬಂಧಿಸಿದ ಧಾನ್ಯಪಾನಗಳನ್ನು ಒಪ್ಪಿಸಬೇಕು; [22]ಅಂತೆಯೇ ಪಾಪಪರಿಹಾರಕ ಬಲಿಗಾಗಿ ಒಂದು ಹೋತವನ್ನೂ ಅರ್ಪಿಸಬೇಕು.

23 ‘ನಾಲ್ಕನೆಯ ದಿನ, ದೈನಿಕ ದಹನಬಲಿಯನ್ನೂ ಅದಕ್ಕೆ ಸಂಬಂಧವಾದ ಧಾನ್ಯ ಹಾಗು ಪಾನಾರ್ಪಣೆಗಳ ಜೊತೆ ಕಳಂಕರಹಿತವಾದ ಹತ್ತು ಹೋರಿ, ಎರಡು ಟಗರು, ವರ್ಷದ ಹದಿನಾಲ್ಕು ಕುರಿಗಳು, ಇವುಗಳನ್ನು ಸಮರ್ಪಿಸಬೇಕು. [24]ನೈವೇದ್ಯಕ್ಕಾಗಿ ಪ್ರಾಣಿಗಳಲ್ಲಿ ಪ್ರತಿಯೊಂದಕ್ಕೆ ಸಂಬಂಧವಾದ ಧಾನ್ಯ ಹಾಗು ಪಾನದ್ರವ್ಯಗಳನ್ನು ಒಪ್ಪಿಸಬೇಕು; [25]ಪಾಪಪರಿಹಾರಕಬಲಿಗಾಗಿ ಒಂದು ಹೋತವನ್ನೂ ಅರ್ಪಿಸಬೇಕು.

26 ‘ಐದನೆಯ ದಿನ, ದೈನಿಕ ದಹನಬಲಿಯನ್ನು, ಅದಕ್ಕೆ ಸಂಬಂಧಿಸಿದ ಧಾನ್ಯ ಹಾಗು ಪಾನಾರ್ಪಣೆಗಳ ಜೊತೆಗೆ ಕಳಂಕರಹಿತವಾದ ಒಂಬತ್ತು ಹೋರಿ, ಎರಡು ಟಗರು, ವರ್ಷದ ಹದಿನಾಲ್ಕು ಕುರಿಗಳನ್ನು ಅರ್ಪಿಸಬೇಕು; [27]ನೈವೇದ್ಯಕ್ಕಾಗಿ ಈ ಪ್ರಾಣಿಗಳಲ್ಲಿ ಪ್ರತಿಯೊಂದಕ್ಕೆ ಸಂಬಂಧವಾದ ಧಾನ್ಯ ಹಾಗು ಪಾನದ್ರವ್ಯಗಳನ್ನು ಒಪ್ಪಿಸಬೇಕು. [28]ಪಾಪಪರಿಹಾರಕಬಲಿಗಾಗಿ ಒಂದು ಹೋತವನ್ನು ಸಮರ್ಪಿಸಬೇಕು.

29 ‘ಆರನೆಯ ದಿನ, ದೈನಿಕ ದಹನಬಲಿಯನ್ನೂ ಅದಕ್ಕೆ ಸಂಬಂಧಿಸಿದ ಧಾನ್ಯ ಹಾಗು ಪಾನಾರ್ಪಣೆಗಳ ಜೊತೆಗೆ ಕಳಂಕರಹಿತವಾದ ಎಂಟು ಹೋರಿ, ಎರಡು ಟಗರು, ವರ್ಷದ ಹದಿನಾಲ್ಕು

ಕುರಿಗಳನ್ನೂ ಸಮರ್ಪಿಸಬೇಕು. 30ನೈವೇದ್ಯಕ್ಕಾಗಿ ಆ ಪ್ರಾಣಿಗಳಲ್ಲಿ ಪ್ರತಿಯೊಂದಕ್ಕೆ ನೇಮಕವಾದ ಪ್ರಕಾರ
ಧಾನ್ಯ ಹಾಗು ಪಾನಾರ್ಪಣೆಗಳನ್ನು ಒಪ್ಪಿಸಬೇಕು. 31ಪಾಪಪರಿಹಾರಕಬಲಿಗಾಗಿ ಒಂದು ಹೋತವನ್ನು
ಅರ್ಪಿಸಬೇಕು.

32 ‘ಏಳನೆಯ ದಿನ, ದೈನಿಕ ದಹನಬಲಿಯನ್ನೂ ಅದಕ್ಕೆ ಸಂಬಂಧಿಸಿದ ಧಾನ್ಯ ಹಾಗು
ಪಾನಾರ್ಪಣೆಗಳ ಜೊತೆಗೆ ಕಳಂಕರಹಿತವಾದ ಏಳು ಹೋರಿ, ಎರಡು ಟಗರು, ವರ್ಷದ ಹದಿನಾಲ್ಕು
ಕುರಿಗಳನ್ನು ಸಮರ್ಪಿಸಬೇಕು. 33ನೈವೇದ್ಯಕ್ಕಾಗಿ ಈ ಪ್ರಾಣಿಗಳಲ್ಲಿ ಪ್ರತಿಯೊಂದಕ್ಕೆ ನೇಮಕವಾದ ಪ್ರಕಾರ
ಧಾನ್ಯ ಹಾಗು ಪಾನಾರ್ಪಣೆಗಳನ್ನು ಒಪ್ಪಿಸಬೇಕು. 34ಪಾಪಪರಿಹಾರಕಬಲಿಗಾಗಿ ಒಂದು ಹೋತವನ್ನೂ
ಅರ್ಪಿಸಬೇಕು.

35 ‘ಎಂಟನೆಯ ದಿನ, ದೇವಾರಾಧನೆಗೆ ಸಭೆ ಕೂಡಬೇಕು. ಅಂದು ಯಾವ ದುಡಿಮೆಯನ್ನೂ
ಮಾಡಕೂಡದು. 36ದೈನಿಕ ದಹನಬಲಿಯನ್ನೂ ಅದಕ್ಕೆ ಸಂಬಂಧಿಸಿದ ಧಾನ್ಯ ಹಾಗು ಪಾನಾರ್ಪಣೆಗಳನ್ನೂ
ಅರ್ಪಿಸಬೇಕು. ಅವುಗಳ ಜೊತೆಗೆ ಸರ್ವೇಶ್ವರನಿಗೆ ಸುಗಂಧಕರ ದಹನಬಲಿಗಾಗಿ ಕಳಂಕರಹಿತವಾದ ಒಂದು
ಹೋರಿ, ಒಂದು ಟಗರು, ವರ್ಷದ ಏಳು ಕುರಿಗಳನ್ನು ಸಮರ್ಪಿಸಬೇಕು. 37ನೈವೇದ್ಯಕ್ಕಾಗಿ ಈ ಪ್ರಾಣಿಗಳಲ್ಲಿ
ಪ್ರತಿ ಒಂದಕ್ಕೆ ನೇಮಕವಾದ ಪ್ರಕಾರ ಧಾನ್ಯ ಹಾಗು ಪಾನಾರ್ಪಣೆಗಳನ್ನು ಒಪ್ಪಿಸಬೇಕು.
38ಪಾಪಪರಿಹಾರಕಬಲಿಗಾಗಿ ಒಂದು ಹೋತವನ್ನೂ ಸಮರ್ಪಿಸಬೇಕು.

39 ‘ನೀವು ಕಾಣಿಕೆಯಾಗಿ ಆಗಲಿ, ಹರಕೆಯನ್ನು ತೀರಿಸುವುದಕ್ಕಾಗಿ ಆಗಲಿ ಮಾಡುವ ದಹನಬಲಿ,
ಧಾನ್ಯನೈವೇದ್ಯ, ಪಾನಾರ್ಪಣೆ, ಸಮಾಧಾನಬಲಿ ಇವುಗಳು ಮಾತ್ರವಲ್ಲದೆ ಹಬ್ಬದ ದಿನಗಳಲ್ಲಿ ಮೇಲೆ
ಸೂಚಿಸಿರುವ ಬಲಿಗಳನ್ನು ಹೆಚ್ಚಾಗಿ ಮಾಡಬೇಕು’.”

40 ಸರ್ವೇಶ್ವರಸ್ವಾಮಿ ಕೊಟ್ಟ ಈ ಎಲ್ಲ ಆಜ್ಞೆಗಳನ್ನು ಮೋಶೆ ಇಸ್ರಯೇಲರಿಗೆ ತಿಳಿಸಿದನು.

## ಹರಕೆ ಕುರಿತ ನಿಯಮಗಳು

**30** ಮೋಶೆ ಇಸ್ರಯೇಲರ ಕುಲನಾಯಕರಿಗೆ ಹೀಗೆಂದು ಹೇಳಿದನು: ಸರ್ವೇಶ್ವರಸ್ವಾಮಿಯ ಆಜ್ಞೆ ಇದು:
2“ನಿಮ್ಮಲ್ಲಿ ಯಾರಾದರು ಸರ್ವೇಶ್ವರನಿಗೆ ಹರಕೆ ಮಾಡಿದರೆ, ಇಲ್ಲವೆ ತಾನು ವಸ್ತುವೊಂದನ್ನು
ಮುಟ್ಟುವುದಿಲ್ಲವೆಂದು ಆಣೆಯಿಟ್ಟು ಹೇಳಿದರೆ ಅಂಥವನು ತನ್ನ ಮಾತನ್ನು ಮೀರದೆ ನುಡಿದಂತೆ
ನೆರವೇರಿಸಬೇಕು.

3 “ಕನ್ಯೆಯೊಬ್ಬಳು ತನ್ನ ತಂದೆಯ ಮನೆಯಲ್ಲಿದ್ದು ಸರ್ವೇಶ್ವರನಿಗೆ ಹರಕೆಯನ್ನು ಮಾಡಿದಾಗ
ಇಲ್ಲವೆ ಯಾವುದಾದರೊಂದನ್ನು ಮುಟ್ಟುವುದಿಲ್ಲವೆಂದು ಪ್ರತಿಜ್ಞೆ ಮಾಡಿದಾಗ 4ಅವಳ ತಂದೆ ಆ
ಸಂಗತಿಯನ್ನು ತಿಳಿದು ಸುಮ್ಮನಿದ್ದರೆ ಅವಳು ಆ ಹರಕೆಯನ್ನು ನೆರವೇರಿಸಲೇಬೇಕು; ಯಾವುದನ್ನು
ಮುಟ್ಟುವುದಿಲ್ಲವೆಂದು ಹೇಳಿದ್ದಳೋ ಅದನ್ನು ಮುಟ್ಟಲೇಬಾರದು. 5ಆದರೆ ಅವಳ ತಂದೆ ಆ ಸಂಗತಿಯನ್ನು
ತಿಳಿದು ಹಾಗೆ ಮಾಡಬಾರದೆಂದು ಆಜ್ಞೆ ಮಾಡಿದರೆ ಅವಳು ಮಾಡಿದ ಹರಕೆ ಹಾಗೂ ಪ್ರತಿಜ್ಞೆಗಳು
ವ್ಯರ್ಥವಾಗುತ್ತವೆ. ತಂದೆ ಬೇಡವೆಂದು ಹೇಳಿದ್ದರಿಂದ ಸರ್ವೇಶ್ವರ ಅವಳನ್ನು ದೋಷಿಯೆಂದು
ಎಣಿಸುವುದಿಲ್ಲ.

6 “ಆಕೆ ಮಾಡಿದ ಹರಕೆ ಇಲ್ಲವೆ ಪರ್ಯಾಲೋಚಿಸದೆ ಮಾಡಿದ ಪ್ರತಿಜ್ಞೆ ಮುಗಿಯುವಷ್ಟ ರೊಳಗೆ
ಅವಳಿಗೆ ಮದುವೆಯಾಯಿತೆಂದು ಇಟ್ಟುಕೊಳ್ಳೋಣ. 7ಆಗ ಗಂಡಸು ಆ ಪ್ರಮಾಣದ ಸಂಗತಿಯನ್ನು ತಿಳಿದು
ಸುಮ್ಮನಿದ್ದರೆ ಆ ಹರಕೆಗಳೂ ಪ್ರತಿಜ್ಞೆಗಳೂ ನಡೆಯಲೇಬೇಕು. 8ಆದರೆ ಗಂಡನು, ಕೇಳಿದಾಗಲೆ ಬೇಡವೆಂದು
ಆಜ್ಞೆ ಮಾಡಿದರೆ ಆ ಹರಕೆ ಇಲ್ಲವೆ ಆ ಅವಿಚಾರ ಪ್ರತಿಜ್ಞೆ ನಿರರ್ಥಕವಾಗುತ್ತವೆ. ಸರ್ವೇಶ್ವರ ಅವಳನ್ನು
ದೋಷಿಯೆಂದು ಎಣಿಸುವುದಿಲ್ಲ.

9 “ವಿಧವೆ ಇಲ್ಲವೆ ಗಂಡನಿಂದ ಬೇರ್ಪಟ್ಟ ಮಹಿಳೆ ಇಂಥ ಪ್ರಮಾಣವನ್ನು ಕೈಗೊಂಡಿದ್ದರೆ ಅದು
ನಿಲ್ಲುತ್ತದೆ. ಅವಳು ಅದನ್ನು ನೆರವೇರಿಸಬೇಕು.

10 “ಮಡದಿ ಅಂಥ ಹರಕೆಯನ್ನಾಗಲಿ ಪ್ರಮಾಣವನ್ನಾಗಲಿ ಮಾಡಿದಾಗ [11]ಅವಳ ಗಂಡ ಅದನ್ನು ತಿಳಿದೂ ಅಡ್ಡಿಮಾಡದೆ ಸುಮ್ಮನಿದ್ದರೆ ಆ ಹರಕೆಗಳೂ ಪ್ರತಿಜ್ಞೆಗಳೂ ನಿಲ್ಲುತ್ತವೆ. [12]ಆದರೆ ಗಂಡನು ಅವುಗಳನ್ನು ತಿಳಿದಾಗಲೇ ಬೇಡವೆಂದರೆ ಅವು ರದ್ದಾಗುತ್ತವೆ. ಗಂಡನು ರದ್ದುಮಾಡಿದ್ದ ರಿಂದ ಸರ್ವೇಶ್ವರ ಅವಳನ್ನು ದೋಷಿಯೆಂದು ಎಣಿಸುವುದಿಲ್ಲ. [13]ಹೆಂಡತಿ ಮಾಡಿದ ಹರಕೆಯನ್ನು ಹಾಗು ಉಪವಾಸವಿರುವೆನೆಂದು ಅವಳು ಮಾಡಿದ ಪ್ರಮಾಣವನ್ನು ದೃಢೀಕರಿಸುವುದಕ್ಕಾಗಲಿ, ರದ್ದು ಪಡಿಸುವುದಕ್ಕಾಗಲಿ ಗಂಡನಿಗೆ ಹಕ್ಕಿದೆ. [14]ಆದರೆ ಅವಳ ಗಂಡ ಯಾವ ಅಡ್ಡಿಯನ್ನೂ ಮಾಡದೆ ದಿನದಿನಕ್ಕೂ ಸುಮ್ಮನಿದ್ದರೆ ಅವಳ ಹರಕೆಗಳನ್ನೂ ಪ್ರತಿಜ್ಞೆಗಳನ್ನೂ ಅವನು ಅನುಮೋದಿಸಿ ದಂತಾಗುವುದು. [15]ಅನಂತರ ಅವನು ಬೇಡವೆಂದರೆ ಆ ಪಾಪದ ಫಲವನ್ನು ಅವನೇ ಅನುಭವಿಸಬೇಕು.”

16 ಇವೇ ಗಂಡಹೆಂಡಿರ ವಿಷಯವಾಗಿ ಹಾಗು ಇನ್ನೂ ಮದುವೆಯಿಲ್ಲದ ಪುತ್ರಿ ಮತ್ತು ಅವಳ ತಂದೆಯ ವಿಷಯವಾಗಿ ಸರ್ವೇಶ್ವರಸ್ವಾಮಿ ಕೊಟ್ಟ ನಿಯಮಗಳು.

## ಮಿದ್ಯಾನರಿಗೆ ವಿರುದ್ಧ ಧರ್ಮಯುದ್ಧ

**31** ಸರ್ವೇಶ್ವರಸ್ವಾಮಿ ಮೋಶೆಗೆ: [2]“ಮಿದ್ಯಾನರು ಇಸ್ರಯೇಲರಿಗೆ ಮಾಡಿದ ಹಿಂಸೆಗಾಗಿ ನೀನು ಮುಯ್ಯಿತೀರಿಸಬೇಕು. ಅನಂತರ ನಿನ್ನ ಪೂರ್ವಜರ ಬಳಿಗೆ ನೀನು ಸೇರಬೇಕು,” ಎಂದರು.

3 ಆಗ ಮೋಶೆ ಇಸ್ರಯೇಲರಿಗೆ, “ನೀವು ಒಂದೊಂದು ಕುಲದಿಂದ ಸಾವಿರ ಜನರ ಮೇರೆಗೆ ಕಾದಾಳುಗಳನ್ನು ಯುದ್ಧಕ್ಕೆ ಸಿದ್ಧಮಾಡಿಕೊಳ್ಳಿ. [4]ಅವರು ಮಿದ್ಯಾನರಿಗೆ ಸರ್ವೇಶ್ವರ ಆಜ್ಞಾಪಿಸಿದ ದಂಡನೆಯನ್ನು ಮಾಡಬೇಕು,” ಎಂದು ಅಪ್ಪಣೆಕೊಟ್ಟನು. [5]ಅಂತೆಯೇ ಇಸ್ರಯೇಲರು ಕುಲ ಒಂದಕ್ಕೆ ಸಾವಿರ ಮಂದಿಯ ಮೇರೆಗೆ ಯುದ್ಧಕ್ಕೆ ಸನ್ನದ್ಧರಾದ ಹನ್ನೆರಡು ಸಾವಿರ ಮಂದಿಯನ್ನು ಲೆಕ್ಕಿಸಿಕೊಟ್ಟರು. [6]ಮೋಶೆ ಇವರನ್ನು ಮಹಾಯಾಜಕನಾದ ಎಲ್ಲಾಜಾರನ ಮಗ ಫೀನೆಹಾಸನ ಮುಂದಾಳತ್ವದಲ್ಲಿ ಪವಿತ್ರ ಉಪಕರಣಗಳೊಂದಿಗೂ ಯುದ್ಧಕಹಳೆಗಳೊಂದಿಗೂ ಯುದ್ಧಕ್ಕೆ ಕಳುಹಿಸಿದನು.

7 ಸರ್ವೇಶ್ವರನ ಆಜ್ಞೆಯಂತೆ ಅವರು ಮಿದ್ಯಾನರೊಡನೆ ಯುದ್ಧಮಾಡಿ ಗಂಡಸರೆಲ್ಲರನ್ನು ಸಂಹಾರ ಮಾಡಿದರು. [8]ಹತರಾದವರಲ್ಲಿ ಎವೀ, ರೆಕೆಮ್, ಚೂರ್, ಹೂರ್ ಹಾಗು ರೆಬಾ ಎಂಬ ಮಿದ್ಯಾನರ ಐದು ಮಂದಿ ರಾಜರು ಇದ್ದರು. ಅದೂ ಅಲ್ಲದೆ ಬೆಯೋರನ ಮಗ ಬಿಳಾಮನನ್ನು ಕತ್ತಿಯಿಂದ ಕೊಂದುಹಾಕಿದರು.

9 ಇಸ್ರಯೇಲರು ಮಿದ್ಯಾನರ ಎಲ್ಲಾ ಮಡದಿ ಮಕ್ಕಳನ್ನೂ ಸೆರೆಹಿಡಿದರು; ಎಲ್ಲಾ ದನಕುರಿಗಳನ್ನೂ ಆಸ್ತಿಪಾಸ್ತಿಯನ್ನೂ ಸೂರೆಮಾಡಿದರು. [10]ಅವರಿದ್ದ ಊರುಕೇರಿಗಳನ್ನು ಸುಟ್ಟುಹಾಕಿದರು. [11]ನರಮಾನವರೆನ್ನದೆ, ಪಶುಪ್ರಾಣಿಗಳೆನ್ನದೆ ಏನನ್ನೂ ಬಿಡದೆ ಎಲ್ಲವನ್ನು ಕೊಳ್ಳೆಹೊಡೆದರು. [12]ಹೀಗೆ ಸೆರೆಯಾಳುಗಳನ್ನೂ ಪಶುಪ್ರಾಣಿಗಳನ್ನೂ ಆಸ್ತಿಪಾಸ್ತಿಯನ್ನೂ ತೆಗೆದುಕೊಂಡು ಜೆರಿಕೋ ಪಟ್ಟಣದ ಎದುರಿಗಿರುವ ಜೋರ್ಡನ್ ನದಿಯ ತೀರಕ್ಕೆ ಬಂದರು. ಅಲ್ಲಿ ಮೋವಾಬ್ಯರ ಮೈದಾನದ ಪಾಳೆಯದಲ್ಲಿದ್ದ ಮೋಶೆ, ಮಹಾಯಾಜಕ ಎಲ್ಲಾಜಾರ್ ಹಾಗು ಇಸ್ರಯೇಲರ ಸರ್ವಸಮಾಜದವರ ಬಳಿಗೆ ಬಂದರು.

## ಹಿಂದಿರುಗಿ ಬಂದ ಸೇನೆ

13 ಮೋಶೆ, ಮಹಾಯಾಜಕ ಎಲ್ಲಾಜಾರನು ಮತ್ತು ಸಮಾಜದ ಮುಖಂಡರು ಪಾಳೆಯದ ಹೊರಗೆ ಬಂದು ಯುದ್ಧವೀರರನ್ನು ಎದುರುಗೊಂಡರು. [14]ಯುದ್ಧಭೂಮಿಯಿಂದ ಬಂದಿದ್ದ ಆ ಸೈನ್ಯದ ಸಹಸ್ರಾಧಿಪತಿಗಳನ್ನು ಹಾಗು ಶತಾಧಿಪತಿಗಳನ್ನು ಕಂಡು ಮೋಶೆ ಕೋಪಗೊಂಡನು. [15]“ನೀವು ಮಹಿಳೆಯರನ್ನೆಲ್ಲ ಉಳಿಸಿದ್ದೇಕೆ? [16]ಪೆಗೋರದ ಬಾಳನ ವಿಷಯದಲ್ಲಿ ಬಿಳಾಮನ ದುರಾಲೋಚನೆಯನ್ನು ಅನುಸರಿಸಿ, ಇಸ್ರಯೇಲರನ್ನು ಸರ್ವೇಶ್ವರನಿಗೆ ದ್ರೋಹಿಗಳನ್ನಾಗಿಸಿ, ಸಮಾಜದವರಲ್ಲಿ ಘೋರ ವ್ಯಾಧಿಯುಂಟಾಗುವಂತೆ ಮಾಡಿದವರು ಅವರೇ ಅಲ್ಲವೆ? [17]ಆದಕಾರಣ ಈ ಗುಂಪಿನಲ್ಲಿರುವ ಎಲ್ಲ ಗಂಡು ಮಕ್ಕಳನ್ನು ಮತ್ತು ಪುರುಷ ಸಂಗಮಮಾಡಿದ ಎಲ್ಲ ಹೆಂಗಸರನ್ನು ಕೊಲ್ಲಬೇಕು. [18]ಪುರುಷ ಸಂಗಮ

ಮಾಡದಿರುವ ಕನ್ಯೆಯರನ್ನು ನಿಮಗೋಸ್ಕರ ಉಳಿಸಿಕೊಳ್ಳಬೇಕು. [19]ನಿಮ್ಮಲ್ಲಿ ಮನುಷ್ಯಪ್ರಾಣ ತೆಗೆದವರು ಹಾಗು ಶವಸೋಂಕಿದವರು ಏಳು ದಿನದವರೆಗೆ ಪಾಳೆಯದ ಹೊರಗಡೆ ಇರಬೇಕು. ಮೂರನೆಯ ಮತ್ತು ಏಳನೆಯ ದಿನ ನಿಮ್ಮನ್ನೂ ಸೆರೆಯಾಳುಗಳನ್ನೂ ಶುದ್ಧೀಕರಿಸಿಕೊಳ್ಳಬೇಕು. [20]ಎಲ್ಲ ಬಟ್ಟೆಬರೆಗಳನ್ನೂ ತೊಗಲಿನ ಸಾಮಾನುಗಳನ್ನೂ ಮೇಕೆ ಕೂದಲಿನ ವಸ್ತ್ರಗಳನ್ನೂ ಹಾಗು ಮರದ ಸಾಮಾನುಗಳನ್ನೂ ಶುದ್ಧಮಾಡಿಕೊಳ್ಳಬೇಕು," ಎಂದು ಹೇಳಿದನು.

21 ಮಹಾಯಾಜಕ ಎಲ್ಲಾಜಾರನು ಯುದ್ಧಕ್ಕೆ ಹೋಗಿ ಬಂದಿದ್ದ ಸೈನಿಕರಿಗೆ ಹೀಗೆಂದನು: "ಸರ್ವೇಶ್ವರಸ್ವಾಮಿ ಮೋಶೆಗೆ ಅಪ್ಪಣೆಮಾಡಿದ ವಿಧಿನಿಯಮ ಹೀಗಿದೆ – [22]ಬೆಂಕಿಯನ್ನು ತಡೆಯುವ ಚಿನ್ನ, ಬೆಳ್ಳಿ, ತಾಮ್ರ, ಕಬ್ಬಿಣ, ತವರ, ಸೀಸ ಮೊದಲಾದುವುಗಳನ್ನು ಬೆಂಕಿದಾಟಿಸಿ ಶುದ್ಧಿಮಾಡಬೇಕು. [23]ಅವುಗಳನ್ನು, ಹೊಲೆ ಹೋಗಲಾಡಿಸುವ ನೀರಿನಿಂದಲೂ ಶುದ್ಧಮಾಡಬೇಕು. ಬೆಂಕಿಯನ್ನು ತಡೆಯಲಾರದ ವಸ್ತುಗಳನ್ನು ನೀರಿನಿಂದ ತೊಳೆದು ಶುದ್ಧಮಾಡಬೇಕು. [24]ಏಳನೆಯ ದಿನದಲ್ಲಿ ನಿಮ್ಮ ಬಟ್ಟೆಗಳನ್ನು ಒಗೆದುಕೊಂಡ ನಂತರ ಶುದ್ಧರಾಗುವಿರಿ. ಆ ಬಳಿಕ ನೀವು ಪಾಳೆಯದೊಳಗೆ ಬರಬಹುದು."

## ಕೊಳ್ಳೆಹೊಡೆದವುಗಳ ಹಂಚಿಕೆ

25 ಸರ್ವೇಶ್ವರ ಮೋಶೆಗೆ: [26]"ನೀನು, ಮಹಾಯಾಜಕ ಎಲ್ಲಾಜಾರನು ಮತ್ತು ಕುಲನಾಯಕರು ಸೈನಿಕರ ಕೈಗೆ ಸಿಕ್ಕಿರುವ ಸೆರೆಯಾಳುಗಳನ್ನೂ ಪಶುಪ್ರಾಣಿಗಳನ್ನೂ ಲೆಕ್ಕಮಾಡಿ ಒಟ್ಟು ಎಷ್ಟೆಂದು ತಿಳಿದುಕೊಳ್ಳಿ. [27]ಅದನ್ನು ಎರಡು ಭಾಗಮಾಡಿ ಯುದ್ಧಕ್ಕೆ ಹೋಗಿದ್ದ ಸೈನಿಕರಿಗೆ ಅರ್ಧವನ್ನೂ ಮಿಕ್ಕ ಸಮಾಜದವರಿಗೆ ಅರ್ಧವನ್ನೂ ಹಂಚಿಕೊಡಿ. [28]ಯುದ್ಧಕ್ಕೆ ಹೋಗಿದ್ದ ಸೈನಿಕರಿಗೆ ಬರುವ ಭಾಗದಿಂದ ಸೆರೆಯಾಳು, ದನ, ಕತ್ತೆ, ಆಡು, ಕುರಿ [29]ಇವುಗಳಲ್ಲಿ ಐನೂರರಲ್ಲಿ ಒಂದರ ಮೇರೆಗೆ ಸರ್ವೇಶ್ವರನಿಗೋಸ್ಕರ ಕಪ್ಪವನ್ನು ತೆಗೆದುಕೊಳ್ಳಿ. ಇದನ್ನು ಪ್ರತ್ಯೇಕಿಸಿ ಮಹಾಯಾಜಕ ಎಲ್ಲಾಜಾರನಿಗೆ ಒಪ್ಪಿಸಿರಿ. [30]ಮಿಕ್ಕ ಇಸ್ರಯೇಲರಿಗೆ ಬರುವ ಭಾಗದಿಂದ ಸೆರೆಯಾಳು, ದನ, ಕತ್ತೆ, ಆಡು, ಕುರಿ ಇವುಗಳಲ್ಲಿ ಐವತ್ತರಲ್ಲಿ ಒಂದರ ಮೇರೆಗೆ ತೆಗೆದುಕೊಂಡು ಸರ್ವೇಶ್ವರನ ಗುಡಾರವನ್ನು ನೋಡಿಕೊಳ್ಳುವ ಲೇವಿಯರಿಗೆ ಕೊಡಿ," ಎಂದು ಆಜ್ಞಾಪಿಸಿದರು. [31]ಸರ್ವೇಶ್ವರನ ಅಪ್ಪಣೆಯಂತೆಯೇ ಮೋಶೆ ಮತ್ತು ಮಹಾಯಾಜಕ ಎಲ್ಲಾಜಾರನು ಮಾಡಿದರು.

32 ಸೈನಿಕರು ತಂದ ಸುಲಿಗೆಯಲ್ಲಿ ಹಂಚಿಕೊಳ್ಳಲು ಉಳಿದುದರ ವಿವರ ಇದು: ಆಡುಕುರಿಗಳು 675,000; [33]ದನಕರುಗಳು 72,000; [34]ಕತ್ತೆಗಳು 61,000; [35]ಕನ್ಯೆಯರು 32,000; [36]ಯುದ್ಧಕ್ಕೆ ಹೋಗಿದ್ದ ಸೈನಿಕರಿಗೆ ದೊರಕಿದ ಅರ್ಧಭಾಗ ಆಗಿರುವ 337,500 ಆಡುಕುರಿಗಳಲ್ಲಿ [37]675 ಆಡುಕುರಿಗಳು ಸರ್ವೇಶ್ವರನಿಗೆ ಬಂದ ಕಪ್ಪ. [38]ಹಾಗೆಯೇ ಅವರಿಗೆ ದೊರಕಿದ 36,000 ದನಕರುಗಳಲ್ಲಿ 72 ದನಕರುಗಳು, [39]30,500 ಕತ್ತೆಗಳಲ್ಲಿ 61 ಕತ್ತೆಗಳು, [40]16,000 ಕನ್ಯೆಯರಲ್ಲಿ 32 ಮಂದಿ ಸರ್ವೇಶ್ವರನಿಗೆ ಬಂದ ಕಪ್ಪ. [41]ಸರ್ವೇಶ್ವರನ ಅಪ್ಪಣೆಯ ಮೇರೆಗೆ ಮೋಶೆ ಈ ಕಪ್ಪವನ್ನು ಸರ್ವೇಶ್ವರನಿಗೆ ಪ್ರತ್ಯೇಕಿಸಿ ಮಹಾಯಾಜಕ ಎಲ್ಲಾಜಾರನಿಗೆ ಒಪ್ಪಿಸಿದನು.

42 ಸೈನಿಕರು ತಂದ ಸುಲಿಗೆಯಲ್ಲಿ ಮೋಶೆ ಪ್ರತ್ಯೇಕಿಸಿದ ಮಿಕ್ಕ ಅರ್ಧಭಾಗದ ವಿವರ ಇದು: [43]337,500 ಆಡುಕುರಿಗಳು; [44]36,000 ದನಕರುಗಳು; [45]30,500 ಕತ್ತೆಗಳು; 16,000 ಕನ್ಯೆಯರು, [46]ಇಷ್ಟು ಇಸ್ರಯೇಲ ಸಮಾಜದವರ ಪಾಲಿಗೆ ಬಂದವುಗಳು. [47]ಇವುಗಳಲ್ಲಿ ಮೋಶೆ ಸರ್ವೇಶ್ವರನ ಅಪ್ಪಣೆಯ ಪ್ರಕಾರ ಐವತ್ತರಲ್ಲಿ ಒಂದರ ಮೇರೆಗೆ ತೆಗೆದುಕೊಂಡು ಸರ್ವೇಶ್ವರನ ಗುಡಾರವನ್ನು ನೋಡಿಕೊಳ್ಳುವ ಲೇವಿಯರಿಗೆ ಕೊಟ್ಟನು.

## ಕಾಣಿಕೆಗಳು

48 ಸೈನ್ಯದ ಸಹಸ್ರಾಧಿಪತಿಗಳು ಹಾಗು ಶತಾಧಿಪತಿಗಳು ಮೋಶೆ ಬಳಿಗೆ ಬಂದು, [49]"ನಿಮ್ಮ ದಾಸರಾದ ನಾವು ನಮ್ಮ ಅಧಿಕಾರಕ್ಕೆ ಒಳಪಟ್ಟ ಸೈನಿಕರನ್ನು ಲೆಕ್ಕಿಸಿದಾಗ ಒಬ್ಬನಾದರೂ ಕಡಿಮೆ ಆಗಿಲ್ಲವೆಂದು ಗೊತ್ತಾಯಿತು. [50]ಸರ್ವೇಶ್ವರಸ್ವಾಮಿ ನಮ್ಮ ಪ್ರಾಣಗಳನ್ನು ಕಾಪಾಡಿದ್ದಾರೆ. ಅದಕ್ಕೆ ಈಡಾಗಿ ಅವರಿಗೆ ಕಾಣಿಕೆಯಾಗಿ ನಮ್ಮಲ್ಲಿ ಒಬ್ಬೊಬ್ಬನು ತನಗೆ ಸಿಕ್ಕಿದ ಚಿನ್ನದ ಒಡವೆಗಳನ್ನು, ಅಂದರೆ ತೋಳ್ಬಳೆ, ಕಡಗ,

ಮುದ್ರೆಯುಂಗುರ, ಮುರುವು, ಕಂಠಮಾಲೆ, ಮುಂತಾದುವುಗಳನ್ನು ತಂದಿದ್ದೇವೆ," ಎಂದರು. [51]ಅವರು
ಕೊಟ್ಟ ಆ ಚಿನ್ನದ ಒಡವೆಗಳನ್ನೂ ವಿಚಿತ್ರ ಆಭರಣಗಳನ್ನೂ ಮೋಶೆ ಮತ್ತು ಮಹಾಯಾಜಕ ಎಲ್ಲಾಜಾರನು
ತೆಗೆದುಕೊಂಡರು. [52]ಸಹಸ್ರಾಧಿಪತಿಗಳು ಹಾಗು ಶತಾಧಿಪತಿಗಳು ಸರ್ವೇಶ್ವರನಿಗೆ ಹೀಗೆ ಪ್ರತ್ಯೇಕಿಸಿ
ಸಮರ್ಪಿಸಿದ ಕಾಣಿಕೆಯ ಒಟ್ಟು ತೂಕ 16,750 ಶೆಕೆಲ್‍ಗಳು.

53 ಪ್ರತಿಯೊಬ್ಬ ಸೈನಿಕನೂ ಸ್ವಂತಕ್ಕಾಗಿ ಲೂಟಿಯನ್ನು ಇಟ್ಟುಕೊಂಡಿದ್ದನು. [54]ಆದರೆ
ಸಹಸ್ರಾಧಿಪತಿಗಳು ಮತ್ತು ಶತಾಧಿಪತಿಗಳು ಕೊಟ್ಟ ಚಿನ್ನವನ್ನು ಮೋಶೆ ಮತ್ತು ಮಹಾಯಾಜಕ ಎಲ್ಲಾಜಾರನು
ಸ್ವೀಕರಿಸಿ ಅದನ್ನು ಇಸ್ರಯೇಲರಿಗೋಸ್ಕರ ಸ್ಮರಣಾರ್ಥವಾಗಿ ಸರ್ವೇಶ್ವರನ ಸನ್ನಿಧಿಯಲ್ಲಿ ದೇವದರ್ಶನದ
ಗುಡಾರದೊಳಗಿಟ್ಟರು.

### ಜೋರ್ಡನಿನ ಮೂಡಣದ ಕುಲಗಳು

(ಧರ್ಮೋ. 3.12–22)

**32** ರೂಬೇನ್ ಕುಲದವರಿಗೂ ಗಾದ್ ಕುಲದವರಿಗೂ ಬಹಳ ದನಕುರಿಗಳಾಗಿದ್ದವು. ಯಗ್ಜೇರ್ ಹಾಗು
ಗಿಲ್ಯಾದ್ ಪ್ರದೇಶಗಳು ದನಕುರಿಗಳ ಮೇವಿಗೆ ತಕ್ಕ ಸ್ಥಳ ಎಂದು ಅವರು ನೋಡಿ ತಿಳಿದುಕೊಂಡರು.
[2]ಮೋಶೆ ಮತ್ತು ಮಹಾಯಾಜಕ ಎಲ್ಲಾಜಾರ್ ಇವರ ಬಳಿಗೂ ಸಮಾಜದ ಮುಖಂಡರ ಬಳಿಗೂ ಅವರು
ಬಂದು, [3]"ಸರ್ವೇಶ್ವರಸ್ವಾಮಿ ಇಸ್ರಯೇಲರಿಗೆ ಅಧೀನ ಪಡಿಸಿರುವ ಈ ಪ್ರದೇಶ, ಅಂದರೆ ಅಟಾರೋತ್,
ದೀಬೋನ್, ಯಗ್ಜೇರ್, ನಿಮ್ರಾ, ಹೆಷ್ಬೋನ್, ಎಲೆಯಾಲೆ, ಸೆಬಾಮ್, ನೆಬೋ, ಬಿಯೋನ್ ಎಂಬ
ಪಟ್ಟಣಗಳನ್ನು ಒಳಗೊಂಡ ಈ ಪ್ರದೇಶ ದನಕುರಿಗಳ ಮೇವಿಗೆ ಹುಲುಸಾದ ಪ್ರದೇಶ. [4]ನಿಮ್ಮ ದಾಸರಾದ
ನಮಗೆ ಬಹಳ ದನಕುರಿಗಳಿವೆ. [5]ಆದಕಾರಣ ದಾಸರಾದ ನಮ್ಮ ಮೇಲೆ ದಯವಿಟ್ಟು ನಮ್ಮನ್ನು ಜೋರ್ಡನ್
ನದಿಯ ಆಚೆಗೆ ಬರ ಮಾಡಬೇಡಿ. ಈ ಪ್ರದೇಶವನ್ನೇ ಸೊತ್ತಾಗಿ ಕೊಡಿ," ಎಂದು ಕೇಳಿಕೊಂಡರು.

6 ಅವರಿಗೆ ಮೋಶೆ, "ನಿಮ್ಮ ಬಂಧುಬಳಗದವರು ಯುದ್ಧಕ್ಕೆ ಹೊರಡುವಾಗ ನೀವು ಇಲ್ಲೇ
ಕೂತಿರಬೇಕೆನ್ನುತ್ತೀರೋ? [7]ಸರ್ವೇಶ್ವರ ಇಸ್ರಯೇಲರಿಗೆ ಕೊಟ್ಟ ನಾಡಿಗೆ ಅವರು ಹೋಗದಂತೆ ನೀವೇಕೆ
ಅವರಿಗೆ ಅಧೈರ್ಯವನ್ನು ಹುಟ್ಟಿಸುತ್ತೀರಿ? [8]ಆ ನಾಡನ್ನು ನೋಡಿಕೊಂಡು ಬರುವುದಕ್ಕೆ ನಾನು ಕಾದೇಶ್
ಬರ್ನೇಯದಿಂದ ನಿಮ್ಮ ಪೂರ್ವಜರನ್ನು ಕಳುಹಿಸಿದಾಗ ಅವರೂ ಹಾಗೆಯೇ ಮಾಡಿದರು. [9]ಅವರು
ಎಷ್ಕೋಲ್ ಕಣಿವೆಗೆ ಬಂದು ಆ ನಾಡನ್ನು ನೋಡಿ ಇಸ್ರಯೇಲರಿಗೆ ಅಧೈರ್ಯವನ್ನು ಹುಟ್ಟಿಸಿದರು.
ಆದ್ದರಿಂದ ಇಸ್ರಯೇಲರು ತಮಗೆ ಸರ್ವೇಶ್ವರ ವಾಗ್ದಾನಮಾಡಿದ ನಾಡಿಗೆ ಹೋಗಲೇ ಇಲ್ಲ. [10]ಆಗ
ಸರ್ವೇಶ್ವರ ಕೋಪಗೊಂಡರು. [11]'ಈಜಿಪ್ಟ್ ದೇಶದಿಂದ ಹೊರಬಂದ ಈ ಜನರಲ್ಲಿ ಕೆನಿಜ್ಜೀಯನಾದ
ಯೆಫುನ್ನೆಯ ಮಗ ಕಾಲೇಬನು ಮತ್ತು ನೂನನ ಮಗ ಯೆಹೋಶುವನು ಇವರಿಬ್ಬರೇ ಹೊರತಾಗಿ
ಯಾರೂ ನನ್ನನ್ನು ಪೂರ್ಣಮನಸ್ಸಿನಿಂದ ಅನುಸರಿಸದೆ ಹೋದರು. [12]ಆದ್ದರಿಂದ ಈ ಜನರಲ್ಲಿ ಇಪ್ಪತ್ತು
ವರ್ಷ ಮತ್ತು ಅದಕ್ಕೆ ಮೇಲ್ಪಟ್ಟ ವಯಸ್ಸಿನವರಲ್ಲಿ ಅವರಿಬ್ಬರೇ ಹೊರತಾಗಿ ಬೇರಾರೂ ಅಬ್ರಹಾಮ್, ಇಸಾಕ್
ಮತ್ತು ಯಕೋಬರಿಗೆ ನಾನು ಪ್ರಮಾಣ ಪೂರ್ವಕವಾಗಿ ಕೊಟ್ಟ ನಾಡನ್ನು ನೋಡುವುದೇ ಇಲ್ಲ' ಎಂದು
ಖಂಡಿತವಾಗಿ ಹೇಳಿದರು. [13]ಸರ್ವೇಶ್ವರ ಇಸ್ರಯೇಲರ ಮೇಲೆ ಕೋಪಗೊಂಡು ತಮ್ಮ ದೃಷ್ಟಿಯಲ್ಲಿ ಕೆಟ್ಟ
ನಡತೆಯುಳ್ಳವರಾಗಿದ್ದ ಆ ಪೀಳಿಗೆಯವರೆಲ್ಲರು ನಾಶವಾಗುವ ತನಕ, ಅಂದರೆ ನಾಲ್ವತ್ತು ವರ್ಷ ಕಾಲ,
ಇಸ್ರಯೇಲರನ್ನು ಮರುಭೂಮಿಯಲ್ಲೆ ಅಲೆಯುವಂತೆ ಮಾಡಿದರು. [14]ಈಗ ಆ ದುಷ್ಟ ಪೀಳಿಗೆಗೆ
ಸೇರಿದವರಾದ ನೀವು ನಿಮ್ಮ ಪೂರ್ವಜರಿಗೆ ಬದಲಾಗಿ ಬಂದು ಇಸ್ರಯೇಲರ ಮೇಲಿದ್ದ ಸರ್ವೇಶ್ವರನ
ಕೋಪಾಗ್ನಿಯನ್ನು ಮತ್ತಷ್ಟು ಹೆಚ್ಚಿಸುತ್ತಿದ್ದೀರಿ. [15]ನೀವು ವಿಧೇಯರಾಗಿ ನಡೆಯದೆ ಹೋದರೆ ಸರ್ವೇಶ್ವರ ಈ
ಜನರನ್ನು ಇನ್ನೂ ಮರುಭೂಮಿಯಲ್ಲೇ ಇರಿಸುವರು; ಈ ಸಮಸ್ತ ಜನಾಂಗದ ನಾಶಕ್ಕೆ ನೀವೇ ಕಾರಣರು
ಆಗುವಿರಿ," ಎಂದನು.

16 ಆಗ ಅವರು ಮೋಶೆಯ ಬಳಿಗೆ ಬಂದು, "ಇಲ್ಲಿ ನಮ್ಮ ದನಕುರಿಗಳಿಗೆ ದೊಡ್ಡಿಗಳನ್ನೂ ನಮ್ಮ
ಕುಟುಂಬಗಳಿಗೆ ಊರುಗಳನ್ನೂ ಕಟ್ಟಿಕೊಳ್ಳುತ್ತೇವೆ. [17]ಆದರೆ ನಾವು ಇಸ್ರಯೇಲರನ್ನು ಅವರವರ ಸ್ಥಳಗಳಿಗೆ

ಸೇರಿಸುವ ತನಕ ಯುದ್ಧಕ್ಕೆ ಸನ್ನದ್ಧರಾಗಿ ಅವರ ಮುಂದೆಯೇ ನಡೆಯುತ್ತೇವೆ. ಅಷ್ಟರಲ್ಲಿ ನಮ್ಮ
ಕುಟುಂಬಗಳವರು ಕೋಟೆ ಕಟ್ಟಿದ ಊರುಗಳಲ್ಲಿ ವಾಸಿಸಲಿ. ಏಕೆಂದರೆ ಈ ನಾಡಿನ ನಿವಾಸಿಗಳ ಭಯವಿದೆ.
[18]ಇಸ್ರಯೇಲರು ಎಲ್ಲರು ತಮ್ಮ ತಮ್ಮ ಸೊತ್ತುಗಳನ್ನು ಸ್ವತಂತ್ರಿಸಿಕೊಳ್ಳುವ ಪರ್ಯಂತರ ನಾವು ನಮ್ಮ
ಮನೆಗಳಿಗೆ ಹಿಂದಿರುಗುವುದಿಲ್ಲ. [19]ನಮಗೆ ಜೋರ್ಡನ್ ನದಿಯ ಈಚೆ ಪೂರ್ವ ದಿಕ್ಕಿನಲ್ಲಿ ಸೊತ್ತು
ದೊರಕಿದ್ದುದರಿಂದ ನಾವು ನದಿಯ ಆಚೆ ಎಲ್ಲಿಯೂ ಅವರೊಂದಿಗೆ ಸೊತ್ತನ್ನು ಅಪೇಕ್ಷಿಸುವುದಿಲ್ಲ,"
ಎಂದರು.

20 ಅದಕ್ಕೆ ಮೋಶೆ, "ನೀವು ಈ ಮಾತಿನಂತೆ ನಡೆಯುವುದಾದರೆ ನಿಮ್ಮಲ್ಲಿರುವ ಯೋಧರೆಲ್ಲರು
ಯುದ್ಧಸನ್ನದ್ಧರಾಗಲಿ. [21]ಜೋರ್ಡನ್ ನದಿಯ ಆಚೆಗೆ ಹೋಗಿ ಸರ್ವೇಶ್ವರ ತಮ್ಮ ವೈರಿಗಳನ್ನು
ಹೊರಡಿಸಿಬಿಟ್ಟು ಆ ನಾಡನ್ನು ಸ್ವಾಧೀನಮಾಡಿಕೊಳ್ಳುವ ತನಕ ಅವರ ಮುಂದೆ ಯುದ್ಧಮಾಡಲಿ.
[22]ತರುವಾಯ ನೀವು ಹಿಂದಿರುಗಿ ಬರಬಹುದು. ಆಗ ಸರ್ವೇಶ್ವರನ ಮುಂದೆ, ಇಸ್ರಯೇಲರ ಮುಂದೆ
ನಿರ್ದೋಷಿಗಳಾಗಿರುವಿರಿ, ಮಾತ್ರವಲ್ಲ ಈ ಪ್ರದೇಶ ಸರ್ವೇಶ್ವರನ ಸನ್ನಿಧಿಯಲ್ಲೇ ನಿಮಗೆ ಸೇರಿದ
ಸೊತ್ತಾಗುವುದು. [23]ನೀವು ಹಾಗೇನಾದರೂ ಮಾಡದೆ ಹೋದರೆ ಸರ್ವೇಶ್ವರನಿಗೆ ವಿರುದ್ಧ
ಪಾಪಮಾಡಿದವರಾಗುವಿರಿ. ನಿಮ್ಮನ್ನು ದಂಡಿಸುವ ತನಕ ನಿಮ್ಮ ಪಾಪ ನಿಮ್ಮ ಬೆನ್ನತ್ತಿಬರುವುದೆಂದು ತಿಳಿದಿರಿ.
[24]ನಿಮ್ಮ ಕುಟುಂಬಗಳಿಗಾಗಿ ಊರುಗಳನ್ನೂ ನಿಮ್ಮ ದನಕುರಿಗಳಿಗಾಗಿ ದೊಡ್ಡಿಗಳನ್ನೂ ಕಟ್ಟಿಕೊಂಡು ನಿಮ್ಮ
ಮಾತಿನಂತೆ ನಡೆದುಕೊಳ್ಳಿ," ಎಂದನು.

25 ಅದಕ್ಕೆ ಗಾದ್ಯರು ಹಾಗು ರೂಬೇನ್ಯರು, "ಒಡೆಯಾ, ನಿಮ್ಮ ಅಪ್ಪಣೆಯಂತೆಯೇ ದಾಸರಾದ
ನಾವು ಮಾಡುತ್ತೇವೆ. [26]ನಮ್ಮ ಮಡದಿ ಮಕ್ಕಳೂ ದನಕುರಿಗಳೂ ಇಲ್ಲೇ ಗಿಲ್ಯಾದ್ ನಾಡಿನ ಊರುಗಳಲ್ಲಿರಲಿ.
[27]ನಿಮ್ಮ ದಾಸರಾದ ನಮ್ಮಲ್ಲಿ ಯುದ್ಧ ಸನ್ನದ್ಧರೆಲ್ಲರು ತಮ್ಮ ಅಪ್ಪಣೆಯ ಮೇರೆಗೆ ಸರ್ವೇಶ್ವರನ ಸಮ್ಮುಖದಲ್ಲೇ
ಮುನ್ನಡೆದು, ನದಿಯನ್ನು ದಾಟಿ ಯುದ್ಧಮಾಡುತ್ತೇವೆ," ಎಂದು ಉತ್ತರಕೊಟ್ಟರು.

28 ಮೋಶೆ ಅವರ ಬಗ್ಗೆ ಮಹಾಯಾಜಕ ಎಲ್ಲಾಜಾರನಿಗೂ ನೂನನ ಮಗನಾದ
ಯೆಹೋಶುವನಿಗೂ ಹಾಗು ಇಸ್ರಯೇಲರ ಕುಲನಾಯಕರಿಗೂ ಹೀಗೆಂದು ಆಜ್ಞೆಮಾಡಿದನು: [29]"ಗಾದ್ಯರಲ್ಲೂ
ರೂಬೇನ್ಯರಲ್ಲೂ ಯುದ್ಧಸನ್ನದ್ಧರಾದವರೆಲ್ಲರು ನಿಮ್ಮೊಡನೆ ಜೋರ್ಡನ್ ನದಿಯನ್ನು ದಾಟಿ ಸರ್ವೇಶ್ವರನ
ಸಮ್ಮುಖದಲ್ಲಿ ಯುದ್ಧಮಾಡಿದ್ದೇ ಆದರೆ ಕಾನಾನ್ ನಾಡು ನಿಮ್ಮ ಸ್ವಾಧೀನಕ್ಕೆ ಬಂದಾಗ ನೀವು ಗಿಲ್ಯಾದ್
ಪ್ರದೇಶವನ್ನು ಅವರಿಗೆ ಸೊತ್ತಾಗಿ ಕೊಡಿ. [30]ಆದರೆ ಅವರು ನಿಮ್ಮೊಡನೆ ಯುದ್ಧಕ್ಕೆ ಹೋಗದಿದ್ದರೆ ಕಾನಾನ್
ನಾಡಿನಲ್ಲೇ ಅವರಿಗೆ ಸೊತ್ತು ಸಿಗಲಿ."

31 ಅದಕ್ಕೆ ಗಾದ್ಯರು ಮತ್ತು ರೂಬೇನ್ಯರು ಒಪ್ಪಿಕೊಂಡರು. "ನಿಮ್ಮ ದಾಸರಾದ ನಮಗೆ ಸರ್ವೇಶ್ವರ
ಆಜ್ಞಾಪಿಸಿದಂತೆಯೇ ಮಾಡುತ್ತೇವೆ. [32]ಸರ್ವೇಶ್ವರನ ಸಮ್ಮುಖದಲ್ಲಿ ಯುದ್ಧ ಸನ್ನದ್ಧರಾಗಿ ಕಾನಾನ್ ನಾಡಿಗೆ
ಹೊರಡುತ್ತೇವೆ. ಜೋರ್ಡನ್ ನದಿಯ ಈಚೆಯೇ ನಮಗೆ ಆಸ್ತಿ ದೊರಕಬೇಕು," ಎಂದು ಹೇಳಿದರು.

33 ಹೀಗೆ ಮೋಶೆ ಗಾದ್ಯರಿಗು, ರೂಬೇನ್ಯರಿಗು, ಹಾಗು ಜೋಸೆಫನ ಮಗನಾದ ಮನಸ್ಸೆಯ ಕುಲದ
ಅರ್ಧ ಜನರಿಗು ಅಮೋರಿಯರ ಅರಸನಾದ ಸೀಹೋನನ ರಾಜ್ಯವನ್ನು, ಬಾಷಾನಿನ ಅರಸನಾದ ಓಗನ
ರಾಜ್ಯವನ್ನು, ಅವುಗಳ ಎಲ್ಲ ಊರುಗಳನ್ನು ಮತ್ತು ಆ ಊರುಗಳಿಗೆ ಸೇರಿದ ಎಲ್ಲ ಭೂಮಿಗಳನ್ನು ಕೊಟ್ಟನು.

34 ಗಾದ್ಯರು ದೀಬೋನ್, ಅಟಾರೋತ್, ಅರೋಯೇರ್, [35]ಅಟ್ರೋತ್ಷೋಫಾನ್, ಯಗ್ಜೇರ್,
ಯೊಗ್ಬೆಹಾ, ಬೇತ್ನಿಮ್ರಾ, [36]ಬೇತ್ ಹಾರನ್ ಎಂಬ ಸುತ್ತು ಗೋಡೆಗಳುಳ್ಳ ಊರುಗಳನ್ನು ಹೊಸದಾಗಿ
ಕಟ್ಟಿಕೊಂಡರು. ತಮ್ಮ ಆಡುಕುರಿಗಳಿಗಾಗಿ ದೊಡ್ಡಿಗಳನ್ನು ಕಟ್ಟಿಕೊಂಡರು.

37 ರೂಬೇನ್ಯರು ಹೆಷ್ಬೋನ್, ಎಲೆಯಾಲೆ, ಕಿರ್ಯಾತಯಿಮ್, ಸಿಬ್ಮಾ ಎಂಬ ಊರುಗಳನ್ನು ಹಾಗು
[38]ಬೇರೆ ಹೆಸರಿನಿಂದ ಉಚ್ಚರಿಸತಕ್ಕ ನೆಬೋ, ಬಾಳ್ಮೆಯೋನ್ ಊರುಗಳನ್ನು ಹೊಸದಾಗಿ ಕಟ್ಟಿ ಅವುಗಳಿಗೆ
ಬೇರೆ ಹೆಸರುಗಳನ್ನು ಇಟ್ಟರು.

39 ಮನಸ್ಸೆಯ ಮಗನಾದ ಮಾಕೀರನ ವಂಶದವರು ಗಿಲ್ಯಾದ್‌ಗೆ ಹೋಗಿ ಅದನ್ನು ಸ್ವಾಧೀನ
ಮಾಡಿಕೊಂಡರು. ಅಲ್ಲಿದ್ದ ಅಮೋರಿಯರನ್ನು ಹೊರಡಿಸಿಬಿಟ್ಟರು. [40]ಮೋಶೆ ಗಿಲ್ಯಾದ್ ಪ್ರಾಂತ್ಯವನ್ನು
ಮನಸ್ಸೆಯ ಮಗನಾದ ಮಾಕೀರನ ಸಂತತಿಯವರಿಗೆ ಕೊಟ್ಟನು. ಅವರು ಅಲ್ಲೇ ವಾಸಮಾಡಿಕೊಂಡರು.

41ಮನಸ್ಸೆಯ ವಂಶದವನಾದ ಯಾಯಿರನು ಯುದ್ಧಕ್ಕೆ ಹೊರಟು ಅಮೋರಿಯರ ಗ್ರಾಮಗಳನ್ನು
ಸ್ವಾಧೀನಪಡಿಸಿಕೊಂಡನು. ಅವುಗಳಿಗೆ ಯಾಯಿರನ ಗ್ರಾಮಗಳೆಂದು ಹೆಸರು ಇಟ್ಟನು. 42ನೋಬಹನು
ಯುದ್ಧಮಾಡಿ ಕೆನಾತ್ ಎಂಬ ಪಟ್ಟಣವನ್ನೂ ಅದಕ್ಕೆ ಸೇರಿದ ಊರುಗಳನ್ನೂ ಜಯಿಸಿದನು. ಆ ಪಟ್ಟಣಕ್ಕೆ
ನೋಬಹ ಎಂದು ತನ್ನ ಹೆಸರನ್ನೇ ಕೊಟ್ಟನು.

### ಈಜಿಪ್ಟಿನಿಂದ ಮೋವಾಬಿಗೆ ಪ್ರಯಾಣ

**33** ಮೋಶೆ ಮತ್ತು ಆರೋನರ ಮುಂದಾಳತ್ವದಲ್ಲಿ ಈಜಿಪ್ಟ್ ದೇಶದಿಂದ ಸೈನ್ಯ ಸೈನ್ಯವಾಗಿ ಹೊರಟ
ಇಸ್ರಯೇಲರ ಪಯಣದ ವಿವರ: 2ಇಸ್ರಯೇಲರು ತಮ್ಮ ಪ್ರಯಾಣಗಳಲ್ಲಿ ತಂಗಿದ್ದ ಸ್ಥಳಗಳ ಹೆಸರುಗಳನ್ನು
ಮೋಶೆ ಸರ್ವೇಶ್ವರನ ಅಪ್ಪಣೆಯನ್ನು ಪಡೆದು ಬರೆದಿಟ್ಟನು.

3 ಮೊದಲನೆಯ ತಿಂಗಳಿನ ಹದಿನೈದನೆಯ ದಿನ, ಅಂದರೆ ಪಾಸ್ಕಹಬ್ಬದ ಮರುದಿನ, ಇಸ್ರಯೇಲರು
ಈಜಿಪ್ಟರ ಎದುರಿನಲ್ಲೇ ಅಟ್ಟಹಾಸದಿಂದ ರಮ್ಸೇಸಿನಿಂದ ಹೊರಟರು. 4ಆ ಕಾಲದಲ್ಲಿ ಸರ್ವೇಶ್ವರಸ್ವಾಮಿ
ಈಜಿಪ್ಟರ ದೇವತೆಗಳನ್ನು ದಂಡಿಸಿ ಈಜಿಪ್ಟರ ಚೊಚ್ಚಲು ಮಕ್ಕಳನ್ನು ಸಂಹರಿಸಿದ್ದರು. ಆ ಮಕ್ಕಳ ಶವಗಳನ್ನು
ಸಮಾಧಿ ಮಾಡಲಾಗುತ್ತಿತ್ತು.

5 ಇಸ್ರಯೇಲರು ರಮ್ಸೇಸಿನಿಂದ ಹೊರಟು ಸುಕ್ಕೋತಿನಲ್ಲಿ ಇಳಿದುಕೊಂಡರು. 6ಸುಕ್ಕೋತಿನಿಂದ
ಹೊರಟು ಮರುಭೂಮಿಯ ಅಂಚಿನಲ್ಲಿರುವ ಏತಾಮಿನಲ್ಲಿ ಇಳಿದುಕೊಂಡರು. 7ಏತಾಮಿನಿಂದ ಹೊರಟು
ಬಾಳ್ಚೆಪೋನಿಗೆ ಎದುರಿಗಿರುವ ಪೀಹಹೀರೋತಿಗೆ ತಿರುಗಿಕೊಂಡು ಮಿಗ್ದೋಲಿನ ಮೂಡಲಲ್ಲಿ
ಇಳಿದುಕೊಂಡರು. 8ಅಲ್ಲಿಂದ ಹೊರಟು ಸಮುದ್ರದ ಮಧ್ಯದಲ್ಲೇ ನಡೆದು ಮರುಭೂಮಿಗೆ ಬಂದರು.
ಏತಾಮಿನ ಮರುಭೂಮಿಯಲ್ಲಿ ಮೂರು ದಿನ ಪ್ರಯಾಣ ಮಾಡಿ ಮಾರಾ ಎಂಬ ಸ್ಥಳದಲ್ಲಿ
ಇಳಿದುಕೊಂಡರು. 9ಮಾರಾದಿಂದ ಹೊರಟು ಏಲೀಮಿಗೆ ಬಂದರು. ಅಲ್ಲಿ ಹನ್ನೆರಡು ನೀರಿನ ಒರತೆಗಳೂ
ಎಪ್ಪತ್ತು ಖರ್ಜೂರದ ಮರಗಳೂ ಇದ್ದುದರಿಂದ ಅಲ್ಲಿ ಇಳಿದುಕೊಂಡರು.

10 ಏಲೀಮಿನಿಂದ ಹೊರಟು ಕೆಂಪು ಸಮುದ್ರದ ದಡದಲ್ಲಿ ಇಳಿದುಕೊಂಡರು. 11ಅಲ್ಲಿಂದ ಹೊರಟು
ಸೀನ್ ಮರುಭೂಮಿಯಲ್ಲೂ, 12ಅಲ್ಲಿಂದ ದೊಫ್ಕದಲ್ಲೂ, 13ಅನಂತರ ಅಲೂಷಿನಲ್ಲೂ ಇಳಿದುಕೊಂಡರು.
14ಅಲೂಷಿನಿಂದ ಹೊರಟು ರೆಫೀದೀಮಿನಲ್ಲಿ ಇಳಿದುಕೊಂಡರು. ಅಲ್ಲಿ ಅವರಿಗೆ ಕುಡಿಯುವುದಕ್ಕೆ ನೀರು
ಸಿಕ್ಕಲಿಲ್ಲ.

15 ರೆಫೀದೀಮಿನಿಂದ ಹೊರಟು ಸೀನಾಯಿ ಮರುಭೂಮಿಯಲ್ಲೂ 16ಅಲ್ಲಿಂದ ಹೊರಟು ಕಿಬ್ರೋತ್
ಹತಾವಾದಲ್ಲೂ 17ಕಿಬ್ರೋತ್ ಹತಾವಾದಿಂದ ಹಚೆರೋತಿನಲ್ಲೂ 18ಹಚೆರೋತಿನಿಂದ ರಿತ್ಮದಲ್ಲೂ 19ರಿತ್ಮದಿಂದ
ರಿಮ್ಮೋನ್ ಪೆರೆಚಿನಲ್ಲೂ 20ರಿಮ್ಮೋನ್ ಪೆರೆಚಿನಿಂದ ಲಿಬ್ನದಲ್ಲೂ 21ಲಿಬ್ನದಿಂದ ರಿಸ್ಸದಲ್ಲೂ 22ರಿಸ್ಸದಿಂದ
ಕೆಹೇಲಾತದಲ್ಲೂ 23ಕೆಹೇಲಾತದಿಂದ ಶೆಫೆರ್ ಬೆಟ್ಟದಲ್ಲೂ 24ಅಲ್ಲಿಂದ ಹರಾದದಲ್ಲೂ 25ಹರಾದದಿಂದ
ಹೊರಟು ಮಖೇಲೋತಿನಲ್ಲೂ ಇಳಿದುಕೊಂಡರು.

26 ಮಖೇಲೋತಿನಿಂದ ಹೊರಟು ತಹತಿನಲ್ಲೂ 27ತಹತಿನಿಂದ ತೆರಹದಲ್ಲೂ 28ತೆರಹದಿಂದ
ಮಿತ್ಕದಲ್ಲೂ 29ಮಿತ್ಕದಿಂದ ಹಷ್ಮೋನದಲ್ಲೂ 30ಹಷ್ಮೋನದಿಂದ ಮೋಸೇರೋತಿನಲ್ಲೂ
31ಮೋಸೇರೋತಿನಿಂದ ಬೆನೇಯಾಕಾನಿನಲ್ಲೂ 32ಬೆನೇಯಾಕಾನಿನಿಂದ ಹೊರಟು ಹೋರ್ಹಗಿದ್ಗಾದಿನಲ್ಲೂ
33ಹೋರ್ಹಗಿದ್ಗಾದಿನಿಂದ ಯೋಟ್ಬಾತದಲ್ಲೂ 34ಯೋಟ್ಬಾತದಿಂದ ಅಬ್ರೋನದಲ್ಲೂ 35ಅಬ್ರೋನದಿಂದ
ಎಚ್ಯೋನ್ ಗೆಬೆರಿನಲ್ಲೂ 36ಎಚ್ಯೋನ್ ಗೆಬೆರಿನಿಂದ ಹೊರಟು ಚಿನ್ ಮರುಭೂಮಿಯಲ್ಲಿ ಇಳಿದುಕೊಂಡರು.
ಅದೇ ಕಾದೇಶ್.

37 ಕಾದೇಶಿನಿಂದ ಹೊರಟು ಎದೋಮ್ಯರ ನಾಡಿನ ಅಂಚಿನಲ್ಲಿರುವ ಹೋರ್ ಬೆಟ್ಟದ ಬಳಿಯಲ್ಲಿ
ಇಳಿದುಕೊಂಡರು. 38ಮಹಾಯಾಜಕ ಆರೋನನು ಸರ್ವೇಶ್ವರನಿಂದ ಅಪ್ಪಣೆಯನ್ನು ಪಡೆದು ಆ ಹೋರ್
ಬೆಟ್ಟವನ್ನು ಹತ್ತಿ ಅಲ್ಲೇ ಪ್ರಾಣಬಿಟ್ಟನು. ಇಸ್ರಯೇಲರು ಈಜಿಪ್ಟಿನಿಂದ ಹೊರಟ ನಾಲ್ವತ್ತನೆಯ ವರ್ಷದ

ಐದನೆಯ ತಿಂಗಳಿನ ಮೊದಲನೆಯ ದಿನ ಅದಾಗಿತ್ತು. [39]ಆರೋನನು ಅಲ್ಲಿ ಸತ್ತಾಗ ಅವನಿಗೆ ನೂರಿಪ್ಪತ್ತು ವರ್ಷ ವಯಸ್ಸಾಗಿತ್ತು.

40 ಇಸ್ರಯೇಲರು ಬರುತ್ತಾರೆಂಬ ವಾರ್ತೆ ಕಾನಾನ್ ನಾಡಿನ ದಕ್ಷಿಣಪ್ರಾಂತ್ಯದಲ್ಲಿ ವಾಸ ಆಗಿದ್ದ ಕಾನಾನ್ಯನಾದ ಅರಾದ್ ಪಟ್ಟಣದ ಅರಸನಿಗೆ ಮುಟ್ಟಿತು.

41 ಇಸ್ರಯೇಲರು ಹೋರ್ ಬೆಟ್ಟದಿಂದ ಹೊರಟು ಚೆಲ್ಮೋನದಲ್ಲಿ ಇಳಿದುಕೊಂಡರು.
[42]ಚೆಲ್ಮೋನದಿಂದ ಪೂನೋನಿನಲ್ಲೂ [43]ಪೂನೋನಿನಿಂದ ಓಬೋತಿನಲ್ಲೂ [44]ಓಬೋತಿನಿಂದ ಮೋವಾಬ್ಯರ
ಸರಹದ್ದಿನಲ್ಲಿರುವ ಜೋರ್ಡನ್ ನದಿಯ ಆಚೆಯಿರುವ ಇಯ್ಯೀಮಿನಲ್ಲಿ ಇಳಿದುಕೊಂಡರು.
[45]ಇಯ್ಯೀಮಿನಿಂದ ಹೊರಟು ದೀಬೋನ್ ಗಾದಿನಲ್ಲೂ [46]ದೀಬೋನ್ ಗಾದಿನಿಂದ ಅಲ್ಮೋನ್
ದಿಬ್ಲಾತಯಿಮಿನಲ್ಲೂ [47]ಅಲ್ಲಿಂದ ಹೊರಟು ಅಬಾರೀಮ್ ಬೆಟ್ಟಗಳಲ್ಲಿರುವ ನೇಬೋವಿನ ಮೂಡಣದಲ್ಲಿ
ಇಳಿದುಕೊಂಡರು.

48 ಅಬಾರೀಮ್ ಬೆಟ್ಟಗಳಿಂದ ಹೊರಟು ಜೆರಿಕೋ ಪಟ್ಟಣದ ಹತ್ತಿರ ಜೋರ್ಡನ್ ನದಿಯ
ತೀರದಲ್ಲಿ ಮೋವಾಬ್ಯರ ಮೈದಾನದಲ್ಲಿ ಇಳಿದುಕೊಂಡರು. [49]ಅವರು ಮೋವಾಬ್ಯರ ಮೈದಾನದಲ್ಲಿ
ಬೇತ್‌ಯೆಷೀಮೋತಿನಿಂದ ಆಬೇಲ್‌ಶಿಟ್ಟೀಮಿನವರೆಗೂ ಜೋರ್ಡನ್ ನದಿಯ ತೀರದಲ್ಲಿ ಇಳಿದುಕೊಂಡರು.

### ಕಾನಾನ್ ನಾಡನ್ನು ಹಂಚಿಕೊಳ್ಳುವ ಬಗ್ಗೆ ಆದೇಶ

50 ಜೋರ್ಡನ್ ನದಿಯ ತೀರದಲ್ಲಿ ಜೆರಿಕೋ ಪಟ್ಟಣದ ಹತ್ತಿರವಿರುವ ಮೋವಾಬ್ಯರ
ಮೈದಾನದಲ್ಲಿ ಸರ್ವೇಶ್ವರಸ್ವಾಮಿ ಮೋಶೆಗೆ ಹೇಳಿದ್ದು ಏನೆಂದರೆ: [51]"ಇಸ್ರಯೇಲರಿಗೆ ಹೀಗೆಂದು ಆಜ್ಞಾಪಿಸು
– 'ನೀವು ಜೋರ್ಡನ್ ನದಿಯನ್ನು ದಾಟಿ ಕಾನಾನ್ ನಾಡನ್ನು ಸೇರಿದಾಗ [52]ಆ ನಾಡಿನ ನಿವಾಸಿಗಳನ್ನೆಲ್ಲಾ
ಹೊರಡಿಸಿಬಿಡಿ. ಅವರ ವಿಚಿತ್ರ ಕಲ್ಲುಗಳನ್ನು ಹಾಗು ಲೋಹವಿಗ್ರಹಗಳನ್ನು ನಾಶಮಾಡಿ ಅವರ
ಪೂಜಾಸ್ಥಳಗಳನ್ನು ಹಾಳು ಮಾಡಬೇಕು. [53]ನಾನು ಆ ನಾಡನ್ನು ನಿಮಗೆ ಸ್ವಂತ ನಾಡಾಗಲೆಂದು
ಕೊಟ್ಟಿದ್ದೇನೆ. ಆದ್ದರಿಂದ ಅದನ್ನು ಸ್ವಾಧೀನಮಾಡಿಕೊಂಡು ಅದರಲ್ಲೇ ವಾಸಮಾಡಿ. [54]ಚೀಟು ಹಾಕಿ ಅದನ್ನು
ನಿಮ್ಮ ನಿಮ್ಮ ಕುಟುಂಬಗಳಿಗೆ ಹಂಚಿಕೊಳ್ಳಿ. ಹೆಚ್ಚು ಮಂದಿಯುಳ್ಳ ಕುಟುಂಬಕ್ಕೆ ಹೆಚ್ಚಾಗಿಯೂ ಕಡಿಮೆಯಾದ ಕುಟುಂಬಕ್ಕೆ ಕಡಿಮೆಯಾಗಿಯೂ ಆಸ್ತಿ ದೊರಕಬೇಕು. ಒಂದೊಂದು ಕುಟುಂಬದ ಚೀಟು ಯಾವ ಯಾವ ಸ್ಥಳವನ್ನು ಸೂಚಿಸುವುದೋ ಅಲ್ಲೇ ಆ ಕುಟುಂಬದ ಸೊತ್ತಿರಬೇಕು. ಒಂದೊಂದು ಕುಲಕ್ಕೆ ಸೇರಿದ
ಕುಟುಂಬಗಳು ಒಂದೇ ಪ್ರದೇಶದಲ್ಲಿರಬೇಕು. [55]ನೀವು ಆ ನಾಡಿನ ನಿವಾಸಿಗಳನ್ನು ಹೊರಡಿಸದೆ ಹೋದರೆ
ಅವರಲ್ಲಿ ನೀವು ಉಳಿಸಿದವರು ನಿಮಗೆ ಕಣ್ಣುಚುಚ್ಚುವ ಮುಳ್ಳುಗಳಂತೆ ಆಗುವರು; ಪಕ್ಕೆ ತಿವಿಯುವ
ಶೂಲಗಳಂತೆ ಆಗುವರು; ನೀವು ವಾಸಿಸುವ ನಾಡಿನಲ್ಲಿ ನಿಮಗೆ ಕಂಠಕಪ್ರಾಯರಾಗುವರು. [56]ಅಲ್ಲದೆ, ನಾನು
ಅವರಿಗೆ ಮಾಡಯೋಚಿಸಿದಂತೆ ನಿಮಗೇ ಮಾಡುವೆನು'."

### ಕಾನಾನಿನ ಮೇರೆಗಳು

**34** ಸರ್ವೇಶ್ವರಸ್ವಾಮಿ ಮೋಶೆಗೆ ಹೇಳಿದ್ದು ಏನೆಂದರೆ: [2]"ನೀನು ಇಸ್ರಯೇಲರಿಗೆ ಹೀಗೆಂದು ಆಜ್ಞಾಪಿಸು
– 'ಇಡೀ ಕಾನಾನ್ ನಾಡು ನಿಮಗೆ ಸ್ವಂತ ನಾಡಾಗಿ ದೊರಕುವುದು. [3]ನೀವು ಅಲ್ಲಿ ಸೇರಿದಾಗ ಎದೋಮ್ಯರ
ಸರಹದ್ದಿನ ಬಳಿಯಿರುವ ಚಿನ್ ಮರುಭೂಮಿಯೇ ನಿಮ್ಮ ದಕ್ಷಿಣ ಮೇರೆಯಾಗಿರಬೇಕು. ಆ ಮೇರೆ
ಮೂಡಣ ದಿಕ್ಕಿನಲ್ಲಿ ಲವಣಸಮುದ್ರದ ಕೊನೆಯಿಂದ ತೊಡಗುವುದು. [4]ಅದು ಅಲ್ಲಿಂದ ದಕ್ಷಿಣಕ್ಕೆ
ತಿರುಗಿಕೊಂಡು ಅಕ್ರಬ್ಬೀಮ್ ಎಂಬ ಕಣಿವೆಯ ಮಾರ್ಗವಾಗಿ ಚಿನಿಗೆ ಬರುವುದು. ಅದರ ಮೂಲೆ ಕಾದೇಶ್
ಬರ್ನೆಯದ ದಕ್ಷಿಣ ಕಡೆಯಲ್ಲಿರುವುದು. ಅಲ್ಲಿಂದ ಹಚರದ್ದಾರ್, ಅಚ್ಮೋನ್ ಎಂಬ ಊರುಗಳ ಮೇಲೆ
[5]ಈಜಿಪ್ಟ್ ದೇಶದ ಮುಂದೆ ಇರುವ ಹಳ್ಳಕ್ಕೆ ಬಂದು ಸಮುದ್ರದ ದಡದಲ್ಲಿ ಮುಗಿಯುವುದು.

6 'ಪಶ್ಚಿಮ ದಿಕ್ಕಿನಲ್ಲಿ ಮಹಾಸಮುದ್ರದ ದಡವೇ ನಿಮ್ಮ ನಾಡಿನ ಮೇರೆಯಾಗಿರುವುದು.

7 ‘ಉತ್ತರ ದಿಕ್ಕಿನ ಮೇರೆಗಾಗಿ ನೀವು ಮಹಾಸಮುದ್ರದಿಂದ ಹೋರ್ ಎಂಬ ಪರ್ವತಕ್ಕೂ [8]ಆ
ಪರ್ವತದಿಂದ ಹಮಾತಿನ ದಾರಿಗೂ ಗುರುತುಹಾಕಿಕೊಳ್ಳಬೇಕು. ಅದರ ಮೂಲೆ ಚೆದಾದಿನ ಹತ್ತಿರ
ಇರುವುದು. [9]ಆಮೇಲೆ ಅದು ಜಿಫ್ರೋನಿಗೆ ಹೋಗಿ ಹಚೆರೇನಾನಿನ ಬಳಿಯಲ್ಲಿ ಮುಗಿಯುವುದು.
10 ‘ಪೂರ್ವದಿಕ್ಕಿನ ಮೇರೆಗಾಗಿ ಹಚೆರೇನಾನಿನಿಂದ ಶೆಫಾಮಿಗೆ ಗುರುತು ಹಾಕಬೇಕು. [11]ಅಲ್ಲಿಂದ
ಅದು ಅಯಿನಿನ ಮೂಡಲಲ್ಲಿರುವ ರಿಬ್ಲಕ್ಕೆ ಬರಬೇಕು. ತರುವಾಯ ಅದು ಗಟ್ಟಾ ಇಳಿದು ಕಿನ್ನೆರೆತ್
ಸಮುದ್ರದ ಮೂಡಲಲ್ಲಿರುವ ಬೆಟ್ಟಗಳಿಗೆ ಹೋಗಬೇಕು. [12]ಅದೂ ಅಲ್ಲಿಂದ ಜೋರ್ಡನ್ ನದಿಗೆ ಇಳಿದು,
ಅದನ್ನು ಅನುಸರಿಸುತ್ತಾ ಲವಣ ಸಮುದ್ರದ ಬಳಿಯಲ್ಲಿ ಮುಗಿಯಬೇಕು.’

ಇವೇ ನಿಮ್ಮ ನಾಡಿನ ಮೇರೆಗಳು,” ಎಂದರು.

13 ಅದಕ್ಕನುಸಾರವಾಗಿ ಮೋಶೆ ಇಸ್ರಯೇಲರಿಗೆ, “ನೀವು ಚೀಟುಹಾಕಿ ಹಂಚಿಕೊಳ್ಳಬೇಕೆಂದು
ಸರ್ವೇಶ್ವರ ಆಜ್ಞಾಪಿಸಿದ ನಾಡು ಇದೇ. ಒಂಬತ್ತುವರೆ ಕುಲದವರಿಗೆ ಇದನ್ನು ಹಂಚಿಕೊಡಬೇಕು. [14–15]ಬೇರೆ
ಎರಡುವರೆ ಕುಲಗಳವರು, ಅಂದರೆ ರೂಬೇನ್ಯರ ಕುಟುಂಬಗಳು, ಗಾದ್ಯರ ಕುಟುಂಬಗಳು ಹಾಗು
ಮನಸ್ಸೆಕುಲದವರಲ್ಲಿ ಅರ್ಧಜನರು ಜೋರ್ಡನ್ ನದಿಯ ಈಚೆ ಜೆರಿಕೊ ಪಟ್ಟಣಕ್ಕೆ ಪೂರ್ವದಿಕ್ಕಿನಲ್ಲಿ
ಸೊತ್ತನ್ನು ಹೊಂದಿದ್ದಾರೆ,” ಎಂದು ಅಪ್ಪಣೆಕೊಟ್ಟನು.

### ಕಾನಾನ್ ನಾಡನ್ನು ಹಂಚಲು ನೇಮಿತರಾದ ನಾಯಕರು

16 ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದ್ದು ಏನೆಂದರೆ: [17]“ಮಹಾಯಾಜಕ ಎಲ್ಲಾಜಾರನು, ನೂನನ
ಮಗ ಯೆಹೋಶುವನು [18]ಹಾಗು ಒಂದೊಂದು ಕುಲದಿಂದ ನೇಮಿಸಲ್ಪಟ್ಟ ಒಬ್ಬ ಕುಲನಾಯಕನು ಇವರೇ
ಕಾನಾನ್ ನಾಡಿನಲ್ಲಿ ನಿಮ್ಮ ನಿಮ್ಮ ಸೊತ್ತುಗಳನ್ನು ಹಂಚಿಕೊಡಬೇಕಾದವರು. [19]ಆಯಾ ಕುಲದಿಂದ ನೀವು
ನೇಮಿಸಬೇಕಾದವರು ಇವರು:

ಯೆಹೂದ ಕುಲದಿಂದ ಯೆಫುನ್ನೆಯ ಮಗ ಕಾಲೇಬ್,
20 ಸಿಮೆಯೋನ್ ಕುಲದಿಂದ ಅಮ್ಮಿಹೂದನ ಮಗ ಶೆಮೂವೇಲ್,
21 ಬೆನ್ಯಾಮೀನ್ ಕುಲದಿಂದ ಕಿಸ್ಲೋನನ ಮಗ ಎಲೀದಾದ್,
22 ದಾನ್ ಕುಲದಿಂದ ಯೊಗ್ಲೀಯ ಮಗ ಬುಕ್ಕೀ ನಾಯಕ,
23 ಜೋಸೆಫನ ವಂಶದವರಲ್ಲಿ ಮನಸ್ಸೆ ಕುಲದಿಂದ ಎಫೋದನ ಮಗ ಹನ್ನೀಯೇಲ್ ನಾಯಕ,
24 ಎಫ್ರಯಿಮ್ ಕುಲದಿಂದ ಶಿಫ್ಟಾನನ ಮಗ ಕೆಮೂವೇಲ್ ನಾಯಕ,
25 ಜೆಬುಲೂನ್ ಕುಲದಿಂದ ಪರ್ನಾಕನ ಮಗ ಎಲೀಚಾಫನ್ ನಾಯಕ,
26 ಇಸ್ಸಾಕಾರ್ ಕುಲದಿಂದ ಅಜ್ಜಾನನ ಮಗ ಪಲ್ಟಿಯೇಲ್ ನಾಯಕ,
27 ಆಶೇರ್ ಕುಲದಿಂದ ಶೆಲೋಮಿಯ ಮಗ ಅಹೀಹೂದ್ ನಾಯಕ,
28 ನಫ್ತಾಲಿ ಕುಲದಿಂದ ಅಮ್ಮಿಹೂದನ ಮಗ ಪೆದಹೇಲ್ ನಾಯಕ.”

29 ಕಾನಾನ್ ನಾಡಿನಲ್ಲಿ ಇಸ್ರಯೇಲರಿಗೆ ಸೊತ್ತನ್ನು ಹಂಚಿಕೊಡುವುದಕ್ಕೆ ಸರ್ವೇಶ್ವರ ಇವರೆಲ್ಲರನ್ನು
ನೇಮಿಸಿದರು.

### ಲೇವಿಯರಿಗೆ ಕೊಡಲಾದ ಊರುಗಳು

**35** ಜೋರ್ಡನ್ ನದಿಯ ತೀರದಲ್ಲಿ ಜೆರಿಕೋ ನಗರದ ಹತ್ತಿರವಿರುವ ಮೋವಾಬ್ಯರ ಮೈದಾನದಲ್ಲಿ
ಸರ್ವೇಶ್ವರಸ್ವಾಮಿ ಮೋಶೆಗೆ ಹೇಳಿದ್ದೇನೆಂದರೆ – [2]“ಇಸ್ರಯೇಲರು ತಾವು ಹೊಂದುವ ಸೊತ್ತಿನಲ್ಲಿ ಕೆಲವು
ಊರುಗಳನ್ನು ಹಾಗು ಆ ಊರಿನ ಸುತ್ತಲಿನ ಭೂಮಿಯನ್ನು ಲೇವಿಯರಿಗೆ ನಿವಾಸಕ್ಕಾಗಿ ಕೊಡಬೇಕೆಂದು
ಅವರಿಗೆ ಆಜ್ಞಾಪಿಸು. [3]ಆ ಊರುಗಳು ಲೇವಿಯರ ನಿವಾಸಕ್ಕೆ ಆಗುವುದು; ಅವುಗಳ ಸುತ್ತಲಿನ ಭೂಮಿಗಳು
ಅವರ ದನಕುರಿ, ಪ್ರಾಣಿ ಪಶುಗಳ ಪ್ರಯೋಜನಕ್ಕಾಗುವುದು. [4]ಲೇವಿಯರಿಗೆ ನೀವು ಕೊಡುವ ಊರುಗಳ
ಸುತ್ತಲಿನ ಭೂಮಿ ಊರಿನ ಗೋಡೆಯಿಂದ ನಾಲ್ಕು ಕಡೆಗೂ ಸಾವಿರ ಮೊಳದಷ್ಟು ವಿಸ್ತಾರವಾಗಿರಲಿ.

5 “ಊರಿನ ಹೊರಗಡೆ ನಾಲ್ಕು ದಿಕ್ಕುಗಳಲ್ಲೂ ಎರಡೆರಡು ಸಾವಿರ ಮೊಳಗಳಷ್ಟು ದೂರದಲ್ಲಿ
ಎಲ್ಲೆಗಳನ್ನು ಗೊತ್ತುಮಾಡಬೇಕು. ಆ ಭೂಮಿಯ ನಡುವೆ ಊರಿರಬೇಕು. ಮಿಕ್ಕದ್ದು
ಹುಲ್ಲುಗಾವಲಾಗಿರಬೇಕು. 6ಮನುಷ್ಯಹತ್ಯೆ ಮಾಡಿದವರು ಆಶ್ರಯಕ್ಕಾಗಿ ಓಡಿಹೋಗಲು ನೀವು ನೇಮಿಸುವ
ಆರು ಆಶ್ರಯನಗರಗಳನ್ನೂ ಬೇರೆ ನಾಲ್ವತ್ತೆರಡು ಪಟ್ಟಣಗಳನ್ನೂ, ಹೀಗೆ ನಾಲ್ವತ್ತೆಂಟು ಊರುಗಳನ್ನೂ
7ಇವುಗಳ ಸುತ್ತಲಿನ ಭೂಮಿಯನ್ನೂ ಲೇವಿಯರಿಗೆ ಕೊಡಬೇಕು. 8ಇಸ್ರಯೇಲರ ಸೊತ್ತಿನಲ್ಲಿ ಆಯಾ ಕುಲದ
ಸೊತ್ತಿನ ಅಳತೆಗೆ ತಕ್ಕಹಾಗೆ, ಅಂದರೆ ಹೆಚ್ಚು ಉಳ್ಳವರಿಂದ ಹೆಚ್ಚಾಗಿಯೂ ಕಡಿಮೆ ಉಳ್ಳವರಿಂದ
ಕಡಿಮೆಯಾಗಿಯೂ ಲೇವಿಯರಿಗೆ ಊರುಗಳನ್ನು ಕೊಡಿಸಬೇಕು.”

## ಆಶ್ರಯನಗರಗಳು

(ಧರ್ಮೋ. 19.1–13; ಯೆಹೋ. 20.1–9)

9 ಸರ್ವೇಶ್ವರ ಮೋಶೆಗೆ ಹೇಳಿದ್ದು ಇದು: 10“ನೀನು ಇಸ್ರಯೇಲರಿಗೆ ಹೀಗೆಂದು ಆಜ್ಞಾಪಿಸು –
ನೀವು ಜೋರ್ಡನ್ ನದಿಯನ್ನು ದಾಟಿ ಕಾನಾನ್ ನಾಡನ್ನು ಸೇರಿದನಂತರ 11ಆಶ್ರಯಧಾಮ ಗಳಿಗಾಗಿ
ಪಟ್ಟಣಗಳನ್ನು ನಿಗದಿಮಾಡಿರಿ. ಕೈತಪ್ಪಿ ಮತ್ತೊಬ್ಬನನ್ನು ಕೊಂದವನು ಅವುಗಳಲ್ಲಿ ಒಂದಕ್ಕೆ ಓಡಿಹೋಗಿ
ಸುರಕ್ಷಿತನಾಗಿರಬಹುದು. 12ಅಂಥವನು ಸಭೆಯವರಿಂದ ತೀರ್ಪುಹೊಂದುವುದಕ್ಕಿಂತ ಮೊದಲೇ
ಹತನಾದವನ ಸಮೀಪ ಬಂಧುವಿನಿಂದ ಸಾಯದಂತೆ ಈ ಆಶ್ರಯಧಾಮಗಳು ನಿಮ್ಮಲ್ಲಿ ಇರಬೇಕು. 13ಹೀಗೆ
ಆಶ್ರಯಧಾಮಗಳಾಗಿರಲು ಜೋರ್ಡನ್ ನದಿಯ ಈಚೆಕಡೆ 14ಮೂರು ಕಾನಾನ್ ನಾಡಿನಲ್ಲಿ ಮೂರು ಹೀಗೆ
ಆರು ಪಟ್ಟಣಗಳನ್ನು ನಿಗದಿಮಾಡಬೇಕು. 15ಕೈತಪ್ಪಿ ಮತ್ತೊಬ್ಬನನ್ನು ಕೊಂದವನು ಇಸ್ರಯೇಲನಾಗಿರಲಿ,
ಪರದೇಶದವನಾಗಿರಲಿ ಅಥವಾ ನಿಮ್ಮ ಮಧ್ಯೆ ವಾಸಿಸುವವನಾಗಿರಲಿ, ಆ ಆರು ಪಟ್ಟಣಗಳೊಳಗೆ ಒಂದಕ್ಕೆ
ಓಡಿಹೋಗಿ ಆಶ್ರಯ ಪಡೆಯಲಿ.

16 “ಆದರೆ ಒಬ್ಬನು ಕಬ್ಬಿಣದ ಆಯುಧದಿಂದ ಮತ್ತೊಬ್ಬನನ್ನು ಹೊಡೆದು ಕೊಂದರೆ ಅಂಥವನು
ನರಹತ್ಯ ಮಾಡಿದವನೆಂದು ನೀವು ನಿರ್ಣಯಿಸಬೇಕು. ಅವನಿಗೆ ಮರಣಶಿಕ್ಷೆಯಾಗಬೇಕು. 17ಒಬ್ಬನನ್ನು
ಕೊಲ್ಲುವಷ್ಟು ದೊಡ್ಡ ಕಲ್ಲಿನಿಂದ ಮತ್ತೊಬ್ಬನನ್ನೂ ಹೊಡೆದುಕೊಂದರೆ ಅವನೂ ನರಹತ್ಯಗಾರನೇ;
ಅಂಥವನಿಗೂ ಮರಣ ಶಿಕ್ಷೆಯಾಗಬೇಕು. 18ಒಬ್ಬನನ್ನು ಕೊಲ್ಲುವಷ್ಟು ದೊಡ್ಡ ಮರದ ಆಯುಧದಿಂದ
ಮತ್ತೊಬ್ಬನನ್ನು ಹೊಡೆದುಕೊಂದರೆ ಅವನೂ ನರಹತ್ಯಗಾರನೇ. ಅಂಥವನಿಗೂ ಮರಣಶಿಕ್ಷೆಯಾಗಬೇಕು.
19ನರಹತ್ಯ ಮಾಡಿದವನನ್ನು ಕಂಡೊಡನೆ ಕೊಲ್ಲ ಬೇಕಾದವನು ಹತನಾದವನ ಸಮೀಪ ಬಂಧುವೇ.
20ಒಬ್ಬನು ಮತ್ತೊಬ್ಬನನ್ನು ಹಗೆಮಾಡಿ ನೂಕುವುದರಿಂದಾಗಲಿ, ಸಮಯ ನೋಡಿ ಅವನ ಮೇಲೆ
ಏನನ್ನಾದರು ಎಸೆಯುವುದರಿಂದಾಗಲಿ, 21ದ್ವೇಷದಿಂದ ಕೈಯಾರೆ ಹೊಡೆಯುವುದರಿಂದಾಗಲಿ ಕೊಂದರೆ
ಅವನು ಕೂಡ ನರಹತ್ಯಗಾರನೆ. ಅಂಥವನಿಗೂ ಮರಣಶಿಕ್ಷೆಯಾಗಬೇಕು. ಹತನಾದವನ ಸಮೀಪಬಂಧು
ಅವನನ್ನು ಕಂಡೊಡನೆ ಕೊಲ್ಲಲಿ.

22 “ಒಬ್ಬನು ಯಾವ ದ್ವೇಷವೂ ಇಲ್ಲದೆ, ಅಕಸ್ಮಾತ್ತಾಗಿ ನೂಕುವುದರಿಂದಾಗಲಿ, ಹೊಂಚುಕಾಯದೆ
ಏನನ್ನಾದರು ಎಸೆಯುವುದರಿಂದಾಗಲಿ, 23ಕೊಲ್ಲುವಷ್ಟು ದೊಡ್ಡಕಲ್ಲನ್ನು ತಿಳಿಯದೆ ಬೀಳಿಸುವುದರಿಂದಾಗಲಿ
ಮತ್ತೊಬ್ಬನು ಸತ್ತರೆ ಅವನು ಆ ಮನುಷ್ಯನಿಗೆ ವೈರಿಯಾಗಿದ್ದನೆ? ಹಾನಿಮಾಡಬೇಕೆಂಬ ಅಭಿಪ್ರಾಯ
ಅವನದಾಗಿತ್ತೆ? ಎಂದು ವಿಚಾರಿಸಬೇಕು. 24ಹಾಗಿಲ್ಲದ ಪಕ್ಷದಲ್ಲಿ ಸಭೆಯವರು ಹತ್ಯ ಮಾಡಿದವನಿಗೂ
ಹತವಾದವನ ಸಮೀಪಬಂಧುವಿಗೂ ಈ ವಿಚಾರಗಳಿಗನುಸಾರ ನ್ಯಾಯ ತೀರಿಸಬೇಕು; ಹತ್ಯಮಾಡಿದವನನ್ನು
ಆ ಸಮೀಪಬಂಧುವಿನ ಕೈಯಿಂದ ತಪ್ಪಿಸಬೇಕು. 25ಅವನು ಓಡಿಹೋಗಿದ್ದ ಆಶ್ರಯನಗರಕ್ಕೆ ತಿರುಗಿ
ಸೇರಿಸಬೇಕು. ಪಟ್ಟಾಭಿಷೇಕ ಹೊಂದಿದ ಮಹಾಯಾಜಕನು ಜೀವದಿಂದಿರುವ ತನಕ ಅವನು ಆ ಪಟ್ಟಣದಲ್ಲೇ
ವಾಸಿಸಬೇಕು.

26 “ಆ ಹತ್ಯ ಮಾಡಿದವನು ಎಂದಾದರು ತಾನು ಓಡಿಹೋಗಿದ್ದ ಆಶ್ರಯ ನಗರದ ಮೇರೆಗೆ
ಹೊರಗೆ ಹೋಗಿದ್ದು 27ಹತವಾದವನ ಸಮೀಪ ಬಂಧು ಅವನನ್ನು ಕಂಡು ಕೊಂದು ಹಾಕಿದರೆ
ಕೊಲೆಪಾತಕನಾಗುವುದಿಲ್ಲ. 28ಏಕೆಂದರೆ ಮಹಾಯಾಜಕನು ಜೀವದಿಂದಿರುವ ತನಕ ಅವನು

ಆಶ್ರಯನಗರದೊಳಗೇ ಇರಬೇಕಾಗಿತ್ತು. ಮಹಾಯಾಜಕನು ತೀರಿ ಹೋದನಂತರ ಅವನು ತನ್ನ
ಆಸ್ತಿಪಾಸ್ತಿಯಿರುವ ಸ್ಥಳಕ್ಕೆ ಹೋಗಬಹುದು. [29]ನೀವು ಮತ್ತು ನಿಮ್ಮ ಸಂತತಿಯವರು ಈ ವಿಧಿಗಳಿಗನುಸಾರ
ನಿಮ್ಮ ನಿವಾಸಗಳಲ್ಲೆಲ್ಲ ನ್ಯಾಯ ತೀರಿಸಬೇಕು.

30 "ಒಬ್ಬನು ಮತ್ತೊಬ್ಬನನ್ನು ಕೊಂದಾಗ ನೀವು ಸಾಕ್ಷಿಗಳನ್ನು ವಿಚಾರಿಸಿಕೊಂಡೇ ಅವನಿಗೆ
ಮರಣಶಿಕ್ಷೆ ವಿಧಿಸಬೇಕು. ಒಬ್ಬನೇ ಒಬ್ಬ ಸಾಕ್ಷಿ ಮಾತ್ರ ಇದ್ದರೆ ಮರಣಶಿಕ್ಷೆಯನ್ನು ವಿಧಿಸಕೂಡದು.
[31]ಮರಣಶಿಕ್ಷೆಗೆ ಪಾತ್ರನಾದ ಕೊಲೆಗಡುಕನನ್ನು ಉಳಿಸುವುದಕ್ಕೆ ಈಡನ್ನು ತೆಗೆದುಕೊಳ್ಳಕೂಡದು. ಅವನಿಗೆ
ಮರಣಶಿಕ್ಷೆ ಆಗಲೇಬೇಕು. [32]ಆಶ್ರಯ ನಗರಕ್ಕೆ ಓಡಿಹೋದವನಿಂದ ನೀವು ಹಣವನ್ನು ತೆಗೆದುಕೊಂಡು
ಮಹಾಯಾಜಕನು ಜೀವದಿಂದಿರುವಾಗಲೇ ಸ್ವಂತ ಊರಿಗೆ ಹೋಗಬಿಡಕೂಡದು.

33 "ನೀವು ಈ ಪ್ರಕಾರ ನಡೆದುಕೊಂಡರೆ ನಿಮ್ಮ ನಾಡು ಅಪವಿತ್ರವಾಗುವುದಿಲ್ಲ. ರಕ್ತಪಾತವು
ನಾಡನ್ನು ಅಪವಿತ್ರಗೊಳಿಸುತ್ತದೆ. ಅದಕ್ಕೆ ಕೊಲ್ಲಲ್ಪಟ್ಟವನ ರಕ್ತಕ್ಕಾಗಿ ಕೊಂದವನ ರಕ್ತದಿಂದಲೇ ಹೊರತು ಬೇರೆ
ಪ್ರಾಯಶ್ಚಿತ್ತವಿಲ್ಲ. [34]ನೀವು ವಾಸಮಾಡುವ ನಾಡನ್ನು ಅಪವಿತ್ರ ಮಾಡಬೇಡಿ. ಸರ್ವೇಶ್ವರನೆಂಬ ನಾನೇ
ಇಸ್ರಯೇಲರ ನಡುವೆ ಆ ನಾಡಿನಲ್ಲಿ ವಾಸಿಸುತ್ತೇನೆ."

### ಮದುವೆಯಾದ ಮಹಿಳೆಯರಿಗೆ ಸೊತ್ತಿನ ಹಕ್ಕು

**36** ಜೋಸೆಫನ ವಂಶದವರೊಳಗೆ ಮನಸ್ಸೆಯ ಮೊಮ್ಮಗನೂ ಮಾಕೀರನ ಮಗನೂ ಆಗಿದ್ದ ಗಿಲ್ಯಾದನ
ಸಂತತಿಯವರ ಮುಖಂಡರು ಮೋಶೆಯ ಹಾಗು ಇಸ್ರಯೇಲ್ ಕುಲನಾಯಕರ ಬಳಿಗೆ ಬಂದರು.
[2]"ಚೀಟುಹಾಕಿ ನಾಡನ್ನು ಇಸ್ರಯೇಲರಿಗೆ ಹಂಚಿಕೊಡಬೇಕೆಂದು ಸರ್ವೇಶ್ವರಸ್ವಾಮಿ ಒಡೆಯರಾದ ತಮಗೆ
ಆಜ್ಞಾಪಿಸಿದರು. ತರುವಾಯ ನಮ್ಮ ಸ್ವಕುಲದವನಾದ ಚಲ್ಪಹಾದನಿಗೆ ಬರತಕ್ಕ ಸೊತ್ತನ್ನು ಅವನ ಹೆಣ್ಣು
ಮಕ್ಕಳಿಗೆ ಕೊಡಬೇಕೆಂದು ಅಪ್ಪಣೆ ಮಾಡಿದರು. [3]ಹೀಗಿರಲು ಆ ಹೆಣ್ಣುಮಕ್ಕಳು ಇಸ್ರಯೇಲರ ಬೇರೆ
ಕುಲದವರಿಗೆ ಮದುವೆಯಾದರೆ ಅವರು ಸೇರಿಕೊಳ್ಳುವ ಕುಲಕ್ಕೆ ಹೋಗುತ್ತದೆ. ಇದರಿಂದ ನಮ್ಮ ಸೊತ್ತಿಗೆ
ನಷ್ಟ ಉಂಟಾಗುತ್ತದೆ. [4]ಇಸ್ರಯೇಲರ ಜೂಬಿಲಿ ವರ್ಷವು ಬಂದಾಗ ಅವರ ಸೊತ್ತು ಅವರು ಸೇರಿಕೊಳ್ಳುವ
ಕುಲದ ಸೊತ್ತಿಗೆ ಸೇರಿಕೊಳ್ಳುತ್ತದೆ; ನಮ್ಮ ಕುಲದ ಸೊತ್ತಿನಿಂದ ವರ್ಗಾಯಿಸಲ್ಪಡುತ್ತದೆ," ಎಂದು
ಮೊರೆಯಿಟ್ಟರು.

5 ಆಗ ಮೋಶೆ ಸರ್ವೇಶ್ವರನಿಂದ ಅಪ್ಪಣೆಯನ್ನು ಹೊಂದಿ ಇಸ್ರಯೇಲರಿಗೆ, "ಜೋಸೆಫನ
ಕುಲದವರು ಹೇಳುವ ಮಾತು ನ್ಯಾಯವಾದುದು. [6]ಆದಕಾರಣ ಚಲ್ಪಹಾದನ ಹೆಣ್ಣುಮಕ್ಕಳು ತಮ್ಮ ಕುಲದ
ಕುಟುಂಬಗಳಲ್ಲಿ ಮಾತ್ರವೇ ತಮಗೆ ಇಷ್ಟಬಂದವರನ್ನು ಮದುವೆ ಮಾಡಿಕೊಳ್ಳಬೇಕೆಂದು ಸರ್ವೇಶ್ವರ
ಅಪ್ಪಣೆಮಾಡಿದ್ದಾರೆ. [7]ಇಸ್ರಯೇಲರ ಯಾವ ಸೊತ್ತೂ ಒಂದು ಕುಲದಿಂದ ಬೇರೊಂದು ಕುಲಕ್ಕೆ
ಹೋಗಬಾರದು. ಇಸ್ರಯೇಲರೆಲ್ಲರು ತಮ್ಮ ತಮ್ಮ ಕುಲಗಳ ಸೊತ್ತನ್ನು ತಾವೇ ಹೊಂದಿರಬೇಕು. [8]ಇದಕ್ಕಾಗಿ
ಇಸ್ರಯೇಲರಲ್ಲಿ ಸೊತ್ತನ್ನು ಹೊಂದಿದ ಹೆಣ್ಣು ಮಕ್ಕಳು ಸ್ವಕುಲದಲ್ಲಿ ಮದುವೆಮಾಡಿಕೊಳ್ಳಬೇಕು. [9]ಹೀಗೆ
ಯಾವ ಸೊತ್ತು ಒಂದು ಕುಲದಿಂದ ಬೇರೊಂದು ಕುಲಕ್ಕೆ ಹೋಗದೆ ಇಸ್ರಯೇಲರ ಪ್ರತಿಯೊಂದು ಕುಲವೂ
ತನ್ನ ಸೊತ್ತನ್ನು ಹೊಂದಿರುತ್ತದೆ," ಎಂದು ಆಜ್ಞಾಪಿಸಿದನು.

10–11 ಚಲ್ಪಹಾದನ ಹೆಣ್ಣುಮಕ್ಕಳಾದ ಮಹ್ಲಾ, ತಿರ್ಚಾ, ಹೊಗ್ಲಾ, ಮಿಲ್ಕಾ ಹಾಗು ನೋವಾ
ಎಂಬವರು ಸರ್ವೇಶ್ವರನ ಆಜ್ಞಾನುಸಾರ ತಂದೆಯ ಅಣ್ಣತಮ್ಮಂದಿರ ಮಕ್ಕಳನ್ನು ಮದುವೆ ಮಾಡಿಕೊಂಡರು.
[12]ಅವರು ಜೋಸೆಫನ ಮಗನಾದ ಮನಸ್ಸೆಯ ಕುಲದವರಿಗೇ ಮದುವೆ ಯಾದುದರಿಂದ ಅವರ ಸೊತ್ತು
ತಂದೆಯ ಕುಲದಲ್ಲೇ ಉಳಿಯಿತು.

### ಮುಗಿವು

13 ಜೋರ್ಡನ್ ನದಿಯ ತೀರದಲ್ಲಿ ಜೆರಿಕೋ ಪಟ್ಟಣದ ಹತ್ತಿರವಿರುವ ಮೋವಾಬ್ಯರ ಮೈದಾನದಲ್ಲಿ
ಸರ್ವೇಶ್ವರಸ್ವಾಮಿ ಮೋಶೆಯ ಮುಖಾಂತರ ಇಸ್ರಯೇಲರಿಗೆ ಕೊಟ್ಟ ಆಜ್ಞಾವಿಧಿಗಳು ಇವೇ.